24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 41 | ನವದೆಹಲಿ | ಬೆಲೆ ₹10 | ಆಗಸ್ಟ್ 6 2026 ಗುರುವಾರ

## ಒಳಪುಟಗಳಲ್ಲಿ

ಯುವ ಜನತೆಯ ಸಮಸ್ಯೆ ಆಲಿಸಿ, ಅವರಿಗೆ ಸಲಹೆ, ಮಾರ್ಗದರ್ಶನದ ಅವಶ್ಯಕತೆ ಇದೆ: ಸುಪ್ರೀಂ ಕೋರ್ಟ್ - ಪು.4

ಒಟ್ಟು 5.54 ಕೋಟಿ ಮತದಾರರ ನೋಂದಣಿ: ಅನ್ಬುಕುಮಾರ್ ಮಾಹಿತಿ - ಪು.5

# ಸರ್ಕಾರಿ ನೌಕರರಿಗೆ ಆಸ್ತಿ–ಹೊಣೆಗಾರಿಕೆ ವಿವರ ಸಲ್ಲಿಕೆ ಕಡ್ಡಾಯ

**ಆಡಳಿತ ಸುಧಾರಣೆ, ಪಾರದರ್ಶಕತೆ ಬಲಪಡಿಸಲು ಸರ್ಕಾರ ಆದೇಶ**

**e-PAR Application ಮೂಲಕ ಪ್ರತಿವರ್ಷ ಮಾರ್ಚ್ ಅಂತ್ಯದೊಳಗೆ ವಿವರ ಸಲ್ಲಿಸಲು ನಿರ್ದೇಶನ**

**ಬೆಂಗಳೂರು, ಆ.5: ರಾಜ್ಯ ಸರ್ಕಾರ ಆಡಳಿತ ಸುಧಾರಣೆ ಮತ್ತು ಪಾರದರ್ಶಕತೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆ ಇಟ್ಟಿದೆ. ರಾಜ್ಯದ ಎಲ್ಲಾ ಇಲಾಖೆಗಳ ಅಧಿಕಾರಿ ಮತ್ತು ಸಿಬ್ಬಂದಿಗಳು ತಮ್ಮ ಹಾಗೂ ಕುಟುಂಬದ ಸ್ಥಿರಾಸ್ತಿ ಮತ್ತು ಚರಾಸ್ತಿ ವಿವರಗಳನ್ನು** e-PAR Application Window£À IPR Module **ಮೂಲಕ ಆನ್‌ಲೈನ್‌ನಲ್ಲಿ ದಾಖಲಿಸುವುದು ಕಡ್ಡಾಯವಾಗಿದೆ.**

ಈ ಆದೇಶದ ಪ್ರಕಾರ, 2025–26ನೇ ಸಾಲಿನ ಆಸ್ತಿ ಮತ್ತು ಹೊಣೆಗಾರಿಕೆ ವಿವರಗಳನ್ನು ಆಗಸ್ಟ್ 20ರಿಂದಲೇ e-PAR Application ನಲ್ಲಿ ದಾಖಲಿಸಬೇಕು. ಮುಂದಿನ ವರ್ಷಗಳಿಂದ ಪ್ರತಿ ಮಾರ್ಚ್ ಅಂತ್ಯದೊಳಗೆ ಈ ವಿವರಗಳನ್ನು ಸಲ್ಲಿಸುವುದು ಕಡ್ಡಾಯವಾಗಿದೆ. ಈ ಕ್ರಮವು ಐಎಎಸ್ ಅಧಿಕಾರಿಗಳ ಮಾದರಿಯಂತೆ ರಾಜ್ಯದ ಅಧಿಕಾರಿಗಳಿಗೂ ಅನ್ವಯವಾಗುವಂತೆ ರೂಪಿಸಲಾಗಿದೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಹಾಗೂ ಕಂದಾಯ ಇಲಾಖೆ ಈ ಕ್ರಮಕ್ಕೆ ಅನುಮೋದನೆ ನೀಡಿವೆ.

ಸರ್ಕಾರದ ಅಧೀನ ಕಾರ್ಯದರ್ಶಿ ವಿಮಲಾಕ್ಷಿ ಬಿ. ಅವರ ಸಹಿ ಹೊಂದಿರುವ ಈ ಆದೇಶವು ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು, ಇಲಾಖಾ ಮುಖ್ಯಸ್ಥರು, ಪ್ರಾದೇಶಿಕ ಆಯುಕ್ತರು, ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಿಗೆ ಕಳುಹಿಸಲಾಗಿದೆ. ಇದರ ಮೂಲಕ ಆಸ್ತಿ ಮತ್ತು ಹೊಣೆಗಾರಿಕೆ ವಿವರಗಳ ಪಾರದರ್ಶಕತೆ, ಡಿಜಿಟಲ್ ದಾಖಲೆ ಮತ್ತು ಆಡಳಿತ ಸುಧಾರಣೆ ಸಾಧಿಸುವುದು ಸರ್ಕಾರದ ಉದ್ದೇಶವಾಗಿದೆ.

e-PAR Application ಒಂದು ಆನ್‌ಲೈನ್ ವ್ಯವಸ್ಥೆ ಆಗಿದ್ದು, ಅಧಿಕಾರಿಗಳ ವಾರ್ಷಿಕ ಕಾರ್ಯಕ್ಷಮತೆ ಮೌಲ್ಯಮಾಪನ ವರದಿಗಳನ್ನು ಸಂಪೂರ್ಣವಾಗಿ ಡಿಜಿಟಲ್ ರೂಪದಲ್ಲಿ ತಯಾರಿಸಲು, ಸಲ್ಲಿಸಲು ಮತ್ತು ಪರಿಶೀಲಿಸಲು ಬಳಸಲಾಗುತ್ತದೆ. ಎಲ್ಲಾ ಇಲಾಖೆಗಳ ಅಧಿಕಾರಿ ಮತ್ತು ಸಿಬ್ಬಂದಿಗಳು ತಮ್ಮ ಸ್ಥಿರಾಸ್ತಿ ಮತ್ತು ಚರಾಸ್ತಿ ವಿವರಗಳನ್ನು ಕಡ್ಡಾಯವಾಗಿ IPR Module ಮೂಲಕ ದಾಖಲಿಸಬೇಕಾಗಿದೆ. ಗ್ರೂಪ್ ಎ ಅಧಿಕಾರಿಗಳಿಂದ ಆರಂಭವಾದ ಈ ವ್ಯವಸ್ಥೆ ಈಗ ಗ್ರೂಪ್ ಬಿ ಮತ್ತು ಸಿ ಅಧಿಕಾರಿಗಳಿಗೂ ವಿಸ್ತರಿಸಲಾಗಿದೆ.

ಅಧಿಕಾರಿಗಳು ತಮ್ಮ ಅಧಿಕೃತ ಗುರುತಿನ ಚೀಟಿ ಮತ್ತು ಪಾಸ್‌ವರ್ಡ್ ಬಳಸಿ e-PAR Application ಗೆ ಪ್ರವೇಶಿಸಬೇಕು. ಡ್ಯಾಶ್ ಬೋರ್ಡ್ ನಲ್ಲಿ ಐಪಿಆರ್ ಮಾಡ್ಯುಲ್ ಅನ್ನು ಆಯ್ಕೆಮಾಡಿದರೆ ಆಸ್ತಿ ಮತ್ತು ಹೊಣೆಗಾರಿಕೆ ವಿವರಗಳನ್ನು ನಮೂದಿಸಲು ಅವಕಾಶ ಸಿಗುತ್ತದೆ. ಸ್ಥಿರಾಸ್ತಿ (ಮನೆ, ಜಮೀನು) ಮತ್ತು ಚರಾಸ್ತಿ (ವಾಹನ, ಬ್ಯಾಂಕ್ ಠೇವಣಿ, ಆಭರಣ) ವಿವರಗಳನ್ನು ನಿಗದಿತ ಫಾರ್ಮ್‌ನಲ್ಲಿ ನಮೂದಿಸಲು ಅವಕಾಶ ದೊರೆಯುತ್ತದೆ. ಡಿಜಿಟಲ್ ಸಹಿ ಮೂಲಕ ಅಂತಿಮವಾಗಿ ಆಸ್ತಿ ವಿವರಗಳನ್ನು ದಾಖಲಿಸಬೇಕು. ನಂತರ ಹಂತ, ಹಂತವಾಗಿ ಪರಿಶೀಲನೆ ನಡೆಯಲಿದೆ.

2018–19ರಲ್ಲಿ ಗ್ರೂಪ್ ಎ ಅಧಿಕಾರಿಗಳಿಗೆ ಪ್ರಾರಂಭವಾದ ಈ ವ್ಯವಸ್ಥೆ ಮೂಲಕ 22,889 ಅಧಿಕಾರಿಗಳಲ್ಲಿ 19,044 ಎಪಿಎಆರ್ ಗಳು ಸೃಷ್ಟಿಯಾಗಿವೆ. 2020–21ರಲ್ಲಿ ಗ್ರೂಪ್ ಬಿ ಮತ್ತು ಸಿ ಅಧಿಕಾರಿಗಳಿಗೂ ವಿಸ್ತರಣೆಯಾಯಿತು. 2025–26ರಲ್ಲಿ ಐಪಿಆರ್ ಮಾಡ್ಯುಲ್ ನೊಂದಿಗೆ ಆಸ್ತಿ ವಿವರಗಳ ದಾಖಲಾತಿ ಪ್ರಾರಂಭವಾಗಿದೆ.

ಈ ವ್ಯವಸ್ಥೆಯಿಂದ ಕೈಯಿಂದ ನಡೆಯುವ ಪ್ರಕ್ರಿಯೆಯ ವಿಳಂಬ ಕಡಿಮೆಯಾಗುತ್ತದೆ, ಆಸ್ತಿ ವಿವರಗಳು ಸಾರ್ವಜನಿಕ ಹೊಣೆಗಾರಿಕೆಗೆ ಅನುಗುಣವಾಗಿ ದಾಖಲಾಗುತ್ತವೆ, ಡಿಜಿಟಲ್ ಸಹಿ ಮೂಲಕ ಸಲ್ಲಿಕೆ ಸುರಕ್ಷಿತವಾಗುತ್ತದೆ ಮತ್ತು ಎಲ್ಲಿಂದಲಾದರೂ, ಯಾವಾಗ ಬೇಕಾದರೂ ಆನ್‌ಲೈನ್ ಮೂಲಕ ವಿವರಗಳನ್ನು ದಾಖಲಿಸಲು ಅವಕಾಶ ಸಿಗುತ್ತದೆ.

ಕರ್ನಾಟಕ ಸರ್ಕಾರದ e-PAR Application ಒಂದು ಆನ್‌ಲೈನ್ ವ್ಯವಸ್ಥೆ ಆಗಿದ್ದು, ಅಧಿಕಾರಿಗಳ ವಾರ್ಷಿಕ ಕಾರ್ಯಕ್ಷಮತೆ ಮೌಲ್ಯಮಾಪನ ವರದಿಗಳನ್ನು ಸಂಪೂರ್ಣವಾಗಿ ಡಿಜಿಟಲ್ ರೂಪದಲ್ಲಿ ತಯಾರಿಸಲು, ಸಲ್ಲಿಸಲು ಮತ್ತು ಪರಿಶೀಲಿಸಲು ಬಳಸಲಾಗುತ್ತದೆ. ಇದರ ಉದ್ದೇಶ ಕೈಯಿಂದ ನಡೆಯುತ್ತಿದ್ದ ಪ್ರಕ್ರಿಯೆಯನ್ನು ಸಮಯಕ್ಕೆ ಸರಿಯಾಗಿ, ಸುರಕ್ಷಿತವಾಗಿ ಮತ್ತು ಪಾರದರ್ಶಕವಾಗಿ ನಡೆಸುವುದು.

2026ರಿಂದ ಎಲ್ಲಾ ಇಲಾಖೆಗಳ ಅಧಿಕಾರಿ ಮತ್ತು ಸಿಬ್ಬಂದಿಗಳು ತಮ್ಮ ಸ್ಥಿರಾಸ್ತಿ ಮತ್ತು ಚರಾಸ್ತಿ ವಿವರಗಳನ್ನು ಕಡ್ಡಾಯವಾಗಿ e-PAR Applicationನ IPR Module ಮೂಲಕ ದಾಖಲಿಸಬೇಕಾಗಿದೆ. ಕೇಂದ್ರ ಸರ್ಕಾರದ ಮಾದರಿಯಂತೆ, ರಾಜ್ಯದಲ್ಲಿಯೂ ಆಸ್ತಿ ವಿವರಗಳನ್ನು ಆನ್‌ಲೈನ್‌ನಲ್ಲಿ ದಾಖಲಿಸುವ ಮೂಲಕ ಹೊಣೆಗಾರಿಕೆ ಮತ್ತು ನೈತಿಕತೆ ಬಲಪಡಿಸಲಾಗುತ್ತಿದೆ.

## ಸುಪ್ರೀಂ ಕೋರ್ಟ್ ನ್ಯಾಯಾಧೀಶರ ಸಂಖ್ಯೆ 38ಕ್ಕೆ ಹೆಚ್ಚಳ: ಮಸೂದೆ ಅಂಗೀಕಾರ



**ನವದೆಹಲಿ ಆ.5:** ರಾಜ್ಯಸಭೆಯು ಕಾನೂನನ್ನು ಅಂಗೀಕರಿಸಿದ ನಂತರ ಸಂಸತ್ತು ಬುಧವಾರ ಸುಪ್ರೀಂ ಕೋರ್ಟ್ (ನ್ಯಾಯಾಧೀಶರ ಸಂಖ್ಯೆ) ತಿದ್ದುಪಡಿ ಮಸೂದೆಯನ್ನು ಅಂಗೀಕರಿಸಿದೆ. ಇದು ದೇಶದ ಮುಖ್ಯ ನ್ಯಾಯಮೂರ್ತಿ ಸೇರಿದಂತೆ ಸುಪ್ರೀಂ ಕೋರ್ಟ್‌ನ ಅನುಮೋದಿತ ಬಲವನ್ನು 34 ರಿಂದ 38ಕ್ಕೆ ಹೆಚ್ಚಿಸಲು ದಾರಿ ಮಾಡಿಕೊಟ್ಟಿತು. ಹೆಚ್ಚುತ್ತಿರುವ ಪ್ರಕರಣಗಳ ಬಾಕಿಯನ್ನು ಪರಿಹರಿಸುವುದು ಮತ್ತು ದೇಶದ ಅತ್ಯುನ್ನತ ನ್ಯಾಯಾಲಯದ ದಕ್ಷತೆಯನ್ನು ಸುಧಾರಿಸುವ ಗುರಿಯನ್ನು ಈ ಕ್ರಮ ಹೊಂದಿದೆ ಎಂದು ಸರ್ಕಾರ ಹೇಳಿದೆ. ವಿರೋಧ ಪಕ್ಷದ ಸದಸ್ಯರ ಬಹಿಷ್ಕಾರದ ನಂತರ ಸಂಕ್ಷಿಪ್ತ ಚರ್ಚೆಯ ನಂತರ ಮಸೂದೆಯನ್ನು ರಾಜ್ಯಸಭೆಯಲ್ಲಿ ಅಂಗೀಕರಿಸಲಾಯಿತು. ಲೋಕಸಭೆಯಿಂದ ಈಗಾಗಲೇ ಅನುಮೋದನೆ ಪಡೆದಿರುವ ಈ ಮಸೂದೆ, ರಾಜ್ಯಸಭೆಯ ಅನುಮೋದನೆಯೊಂದಿಗೆ, ಮಸೂದೆಯು ಈಗ ಸಂಸತ್ತಿನ ಪರಿಶೀಲನೆಯ ಎಲ್ಲಾ ಹಂತಗಳನ್ನು ಪೂರ್ಣಗೊಳಿಸಿದೆ ಮತ್ತು ಕಾನೂನಾಗುವ ಮೊದಲು ರಾಷ್ಟ್ರಪತಿಯವರಸ ಒಪ್ಪಿಗೆಗಾಗಿ ಕಾಯುತ್ತಿದೆ.




**ಅಯೋಧ್ಯೆ ರಾಮಮಂದಿರ ದೇಣಿಗೆ ದುರುಪಯೋಗ, ಕಾಂಗ್ರೆಸ್ ಪ್ರತಿಭಟನಾಕಾರರ ಮೇಲಿನ ಪೊಲೀಸ್ ಕಾರ್ಯಾಚರಣೆ ಬಗ್ಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ವಿರುದ್ಧ ಸ್ಪಷ್ಟನೆ ನೀಡುವಂತೆ ಆಗ್ರಹಿಸಿ ಸಂಸದ್ ಭವನದ ಪ್ರೇರಣಾ ಸ್ಥಳದ ಬಳಿಯಿರುವ ಮಹಾತ್ಮಾಗಾಂಧೀ ಪ್ರತಿಮೆ ಬಳಿ ಕಾಂಗ್ರೆಸ್ ವತಿಯಿಂದ ಬುಧವಾರ ಪ್ರತಿಭಟನೆ ನಡೆಸಲಾಯಿತು. ರಾಜ್ಯಸಭೆ ಪ್ರತಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ, ಸಂಸದರಾದ ಸುಪ್ರಿಯಾ ಸುಳೆ, ಪ್ರಿಯಾಂಕಾಗಾಂಧಿ, ಮತ್ತಿತರರು ಭಾಗವಹಿಸಿದ್ದರು.**

## ರಾಜ್ಯದಿಂದ ಕಾಶ್ಮೀರಕ್ಕೆ ರೈಲು ಸೇವೆ ಆರಂಭ: ಶ್ರೀಶೈಲಕ್ಕೆ ರೈಲು ಸೇವೆ ವಿಸ್ತರಿಸುವಂತೆ ಮನವಿ

**ನವದೆಹಲಿ, ಆ.5:** ದಾವಣಗೆರೆ ಲೋಕಸಭಾ ಕ್ಷೇತ್ರದ ಜನರ ಬಹುಕಾಲದ ರೈಲ್ವೆ ಸಂಬಂಧಿತ ಸಮಸ್ಯೆಗಳ ಪರಿಹಾರಕ್ಕಾಗಿ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರನ್ನು ಬುಧವಾರ ನವದೆಹಲಿಯಲ್ಲಿ ಭೇಟಿ ಮಾಡಿ ಪ್ರಮುಖ ನಾಲ್ಕು ಬೇಡಿಕೆಗಳಿಗೆ ಸಂಬಂಧಿಸಿದಂತೆ ಮನವಿ ಸಲ್ಲಿಸಿದರು.



■ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರನ್ನು ಭೇಟಿ ಮಾಡಿ ಚರ್ಚಿಸಿದ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್

ಮಾಯಕೊಂಡ ನಿಲ್ದಾಣದಲ್ಲಿ ಸಿದ್ದಗಂಗಾ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್ ಹಾಗೂ ವಿಶ್ವಮಾನವ ಎಕ್ಸ್‌ಪ್ರೆಸ್ ರೈಲುಗಳಿಗೆ ನಿಲುಗಡೆ ಕಲ್ಪಿಸಬೇಕು, ಹರಿಹರ–ಚಿತ್ರದುರ್ಗ ಪ್ರಯಾಣಿಕ ರೈಲುಸೇವೆಯನ್ನು ಪುನರಾರಂಭಿಸಬೇಕು ಹಾಗೂ ಮಾಯಕೊಂಡ ಹೋಬಳಿಯ ಹನುಮನಹಳ್ಳಿ ಗ್ರಾಮದ ರೈಲ್ವೆ ಗೇಟ್ ನಿಲ್ದಾಣದಲ್ಲಿ ಪ್ಲಾಟ್‌ಫಾರ್ಮ್ ವಿಸ್ತರಣೆ, ಶೌಚಾಲಯ, ಆಸನ ವ್ಯವಸ್ಥೆ ಮತ್ತು ಶುದ್ಧ ಕುಡಿಯುವ ನೀರು ಸೇರಿದಂತೆ ಸೂಕ್ತಸಾರ್ವಜನಿಕ ಮೂಲಸೌಕರ್ಯಗಳನ್ನು ಒದಗಿಸಬೇಕು ಎಂದು ಕೋರಲಾಗಿದೆ.

ಇದಲ್ಲದೆ, ಬೆಂಗಳೂರು – ಹುಬ್ಬಳ್ಳಿ – ಮಿರಜ್ – ಅಮೃತಸರ – ವೈಷ್ಣೋದೇವಿ ಕತ್ರಾ ಮಾರ್ಗವಾಗಿ ಕರ್ನಾಟಕದಿಂದ ಜಮ್ಮು ಮತ್ತು ಕಾಶ್ಮೀರಕ್ಕೆ ಹೊಸ ದೂರ ಪ್ರಯಾಣದ ಎಕ್ಸ್‌ಪ್ರೆಸ್ ರೈಲುಸೇವೆಯನ್ನು ಆರಂಭಿಸುವಂತೆ ಹಾಗೂ ಶ್ರೀಶೈಲ ಮಲ್ಲಿಕಾರ್ಜುನ ಸ್ವಾಮಿ ಜ್ಯೋತಿರ್ಲಿಂಗ ಕ್ಷೇತ್ರಕ್ಕೆ ತೆರಳುವ ದಾವಣಗೆರೆ ಲೋಕಸಭಾ ಕ್ಷೇತ್ರದ ಜನರು ಸೇರಿ ಸಾವಿರಾರು ಭಕ್ತರ ಬಹುಕಾಲದ ಬೇಡಿಕೆಯನ್ನು ಪರಿಗಣಿಸಿ, ಯಶವಂತಪುರ – ಶ್ರೀಶೈಲ ರೈಲುಸೇವೆಯನ್ನು ದಾವಣಗೆರೆ ಮತ್ತು ತುಮಕೂರು ಜಿಲ್ಲೆಗಳ ಮೂಲಕ ವಿಸ್ತರಿಸುವಂತೆ ಸಂಸದರು ಮನವಿ ಮಾಡಿದ್ದಾರೆ. ದಾವಣಗೆರೆ ಲೋಕಸಭಾ ಕ್ಷೇತ್ರದ ಜನರ ಬಹುಕಾಲದ ಬೇಡಿಕೆಗಳಿಗೆ ಸ್ಪಂದಿಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ಕೇಂದ್ರ ಪ್ರಭಾ ಮಲ್ಲಿಕಾರ್ಜುನ್ ಮನವಿ ಸಲ್ಲಿಸಿದ್ದಾರೆ.

## ರೆಪೊ ದರ ಯಥಾಸ್ಥಿತಿ: ಹಣದುಬ್ಬರ ಶೇ.5ಕ್ಕೆ ಇಳಿಕೆ ನಿರೀಕ್ಷೆ

**ನವದೆಹಲಿ, ಆ.5:** ರೆಪೊ ದರವನ್ನು ಯಥಾಸ್ಥಿತಿಯಲ್ಲಿ ಮುಂದುವರಿಸಲು ಬುಧವಾರ ನಡೆದ ಭಾರತೀಯ ರಿಸರ್ವ್ ಬ್ಯಾಂಕ್‌ನ ಹಣಕಾಸು ನೀತಿ ಸಮಿತಿ (ಎಂಪಿಸಿ) ಸಭೆ ನಿರ್ಧರಿಸಿದೆ. ಪ್ರಸ್ತುತ ರೆಪೊ ದರ ಶೇ.5.25ರಷ್ಟಿದ್ದು, ಇದನ್ನೇ ಮುಂದುವರಿಸಲು ನಿರ್ಧರಿಸಲಾಘಿದೆ. ಪರಿಣಾಮವಾಗಿ, ಸ್ಟ್ಯಾಂಡಿಂಗ್ ಠೇವಣಿ ಸೌಲಭ್ಯ (ಎಸ್‌ಡಿಎಫ್) ದರವು ಶೇಕಡಾ 5.00 ರಲ್ಲೇ ಉಳಿದಿದೆ, ಆದರೆ ಮಾರ್ಜಿನಲ್ ಸ್ಟ್ಯಾಂಡಿಂಗ್ ಸೌಲಭ್ಯ (ಎಂಎಸ್‌ಎಫ್) ದರ ಮತ್ತು ಬ್ಯಾಂಕ್ ದರವು ಶೇಕಡಾ 5.50 ರಲ್ಲೇ ಉಳಿದಿದೆ. ಎಂಪಿಸಿ ತಟಸ್ಥ ನಿಲುವನ್ನು ಮುಂದುವರಿಸಲು ನಿರ್ಧರಿಸಿದೆ ಎಂದು ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಹೇಳಿದರು.

ಜಾಗತಿಕ ಏರಿಳಿತಗಳ ಹೊರತಾಗಿಯೂ ದೇಶದ ಆರ್ಥಿಕತೆಯು ಸ್ಥಿತಿಸ್ಥಾಪಕತ್ವವನ್ನು ಕಾಯ್ದುಕೊಂಡಿದೆ. ಒಟ್ಟು ದೇಶೀಯ ಉತ್ಪನ್ನ (ಜಿಡಿಪಿ)ಯ 2026–27ರ ಬೆಳವಣಿಗೆಯನ್ನು ಶೇ.6.7 ಆಗಲಿದೆ ಎಂದು ಅಂದಾಜಿಸಲಾಗಿದೆ, ಮೊದಲ ತ್ರೈಮಾಸಿಕದಲ್ಲಿ ಶೇ.7.0, ಎರಡನೇ ತ್ರೈಮಾಸಿಕದಲ್ಲಿ ಶೇ.6.4, ಮೂರನೇ ತ್ರೈಮಾಸಿಕದಲ್ಲಿ ಶೇ.6.5 ಮತ್ತು ನಾಲ್ಕನೇ ತ್ರೈಮಾಸಿಕದಲ್ಲಿ ಶೇ. 6.8 ಎಂದು ಅಂದಾಜಿಸಲಾಗಿದೆ ಎಂದು ಹೇಳಿದರು. 2027–28ರ ಮೊದಲ ತ್ರೈಮಾಸಿಕದಲ್ಲಿ ನೈಜ ಜಿಡಿಪಿ ಬೆಳವಣಿಗೆಯನ್ನು ಶೇ. 7.3 ಎಂದು ಅಂದಾಜಿಸಲಾಗಿದೆ. 2026–27ರ ಸಿಪಿಐ ಹಣದುಬ್ಬರವನ್ನು ಶೇ. 5.0 ಎಂದು ಅಂದಾಜಿಸಲಾಗಿದೆ, ಎರಡನೇ ತ್ರೈಮಾಸಿಕದಲ್ಲಿ ಶೇ. 4.7, ಮೂರನೇ ತ್ರೈಮಾಸಿಕದಲ್ಲಿ ಶೇ. 5.9 ಮತ್ತು ನಾಲ್ಕನೇ ತ್ರೈಮಾಸಿಕದಲ್ಲಿ ಶೇ. 5.5 ಎಂದು ಅಂದಾಜಿಸಲಾಗಿದೆ. 2027–28ರ ಮೊದಲ ತ್ರೈಮಾಸಿಕದಲ್ಲಿ ಸಿಪಿಐ ಹಣದುಬ್ಬರವನ್ನು ಶೇ. 5.3 ಎಂದು ಅಂದಾಜಿಸಲಾಗಿದೆ, ಅಪಾಯಗಳು ಸಮವಾಗಿ ಸಮತೋಲನದಲ್ಲಿ ಉಳಿದಿವೆ ಎಂದು ಗವರ್ನರ್ ಹೇಳಿದರು.

ದೇಶೀಯ ಬೇಡಿಕೆ, ಉತ್ಪಾದನೆ ಮತ್ತು ಸೇವಾ ಚಟುವಟಿಕೆಗಳಲ್ಲಿ ನಿರಂತರ ವಿಸ್ತರಣೆ ಮತ್ತು ದೃಢವಾದ ರಫ್ತುಗಳಿಂದ ಬೆಳವಣಿಗೆಗೆ ಬೆಂಬಲ ಮುಂದುವರೆದಿದೆ ಎಂದು ಹೇಳಿದರು, ಇದು ವಿಶ್ವದ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಯಾಗಿ ಭಾರತದ ಸ್ಥಾನವನ್ನು ಪುನರುಚ್ಚರಿಸುತ್ತದೆ.

## ಎಸ್‌ಐಆರ್ ಪ್ರಕ್ರಿಯೆ: ಕರ್ನಾಟಕದಲ್ಲಿ ಪತ್ತೆಯಾಗದ 16.3 ಲಕ್ಷ ಮತದಾರರು

**ಬೆಂಗಳೂರು, ಆ.5:** ಕರ್ನಾಟಕದಲ್ಲಿ ಕೈಗೊಂಡಿರುವ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್)ಯಲ್ಲಿ 1.11 ಕೋಟಿಗೂ ಹೆಚ್ಚು ಮತದಾರರನ್ನು ಗೈರುಹಾಜರಿ, ಸ್ಥಳಾಂತರಗೊಂಡವರು, ಮೃತಪಟ್ಟವರು, ನಕಲು/ಈಗಾಗಲೇ ನೋಂದಾಯಿಸಲ್ಪಟ್ಟವರು ಮತ್ತು ಇತರ ವರ್ಗದ ಅಡಿಯಲ್ಲಿ ಗುರುತಿಸಲಾಗಿದೆ. ಈ ಪೈಕಿ 50 ಲಕ್ಷಕ್ಕೂ ಹೆಚ್ಚು ಮಂದಿ ಬೆಂಗಳೂರಿನ ನಾಲ್ಕು ವಲಯಗಳಿಗೆ ಸೇರಿದವರಾಗಿದ್ದಾರೆ. ಈ ಮತದಾರರನ್ನು ಪಟ್ಟಿಯಿಂದ ಹೊರಗಿಡಲಾಘಿಲ್ಲ ಮತ್ತು ಪರಿಶೀಲನೆಗೆ ಒಳಪಟ್ಟಿರುತ್ತದೆ ಎಂದು ಚುನಾವಣಾ ಆಯೋಗ ಹೇಳಿದೆ.



ಈ ಬಗ್ಗೆ ಬುಧವಾರ ದಂದು ಮಾಹಿತಿ ಹಂಚಿಕೊಂಡಿರುವ ರಾಜ್ಯ ಮುಖ್ಯ ಚುನಾವಣಾ ಆಯುಕ್ತ ವಿ. ಅನ್ಬುಕುಮರ್,

ಜೂನ್ 16, 2026 ರ ಹೊತ್ತಿಗೆ, ಮತದಾರರ ಪಟ್ಟಿಯಲ್ಲಿ 5,54,32,314 ಮತದಾರರಿದ್ದಾರೆ. ಗಣತಿ ನಮೂನೆಗಳನ್ನು ಮುದ್ರಿಸಿ ಬಿಎಲ್‌ಒಗಳಿಗೆ ತಲುಪಿಸಲಾಗಿದೆ. ಈಗಾಗಲೇ ಎನ್ಯುಮರೇಷನ್ ಫಾರ್ಮ್‌ಗಳ ವಿತರಣೆ ಶೇ.100ರಷ್ಟು ಪೂರ್ಣಗೊಂಡಿದೆ. ಶೇ.79.93ರಷ್ಟು ಡಿಜಿಟಲೀಕರಣ ಪೂರ್ಣಗೊಂಡಿದೆ. ಆ.5ರ ವೇಳೆಗೆ 22,977 ಫಾರ್ಮ್‌ಗಳು ಬಾಕಿ ಉಳಿದಿವೆ ಎಂದು ತಿಳಿಸಿದ್ದಾರೆ.

### 4.43 ಕೋಟಿ ನಮೂನೆಗಳ ಡಿಜಿಟಲೀಕರಣ

**4.43 ಕೋಟಿ ಎಣಿಕೆ ನಮೂನೆಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ, ಆದರೆ ಎಎಸ್‌ಡಿಡಿಒ ವರ್ಗದ ಅಡಿಯಲ್ಲಿ ಪಟ್ಟಿ ಮಾಡಲಾದ ಮತದಾರರಿಗೆ ಸಂಬಂಧಿಸಿದ ಎಲ್ಲಾ 5.54 ಕೋಟಿ ನಮೂನೆಗಳನ್ನು ಪ್ರಕ್ರಿಯೆಗೊಳಿಸಲಾಗಿದೆ. ಈ ವರ್ಗದಲ್ಲಿ 66,64,943 ಶಾಶ್ವತವಾಗಿ ಸ್ಥಳಾಂತರಗೊಂಡ ಮತದಾರರು, 16,30,012 ಗೈರುಹಾಜರಾದ ಅಥವಾ ಪತ್ತೆಯಾಗದ ಮತದಾರರು, 16,30,872 ಮೃತ ಮತದಾರರು, ಈಗಾಗಲೇ ಬೇರೆಡೆ ದಾಖಲಾಗಿರುವ 6,89,904 ಮತದಾರರು ಮತ್ತು ಇತರ ಕಾರಣಗಳ ಅಡಿಯಲ್ಲಿ ಪಟ್ಟಿ ಮಾಡಲಾದ 4,88,974 ಪ್ರಕರಣಗಳು ಸೇರಿವೆ ಎಂದು ಅನ್ಬುಕುಮಾರ್ ಹೇಳಿದ್ದಾರೆ. ಉಳಿದ ನಮೂನೆಗಳ ಡಿಜಿಟಲೀಕರಣವು ಪ್ರಗತಿಯಲ್ಲಿದೆ ಮತ್ತು ಆಗಸ್ಟ್ 8ರೊಳಗೆ ಪೂರ್ಣಗೊಳ್ಳಲಿದೆ ಎಂದಿದ್ದಾರೆ.**

ಒಟ್ಟು 1.11 ಕೋಟಿ ಮತದಾರರನ್ನು, ಅಂದರೆ ಶೇ. 20.03 ರಷ್ಟು ಮತದಾರರನ್ನು ಗೈರುಹಾಜರಿ, ಸ್ಥಳಾಂತರಗೊಂಡವರು, ಸತ್ತವರು, ನಕಲು/ಈಗಾಗಲೇ ದಾಖಲಾಗಿರುವವರು ಮತ್ತು ಇತರರು ಎಂದು ವರ್ಗೀಕರಿಸಲಾಗಿದೆ, ಉಳಿದಿರುವುದು ಕೇವಲ 22,977 ನಮೂನೆಗಳು ಅಥವಾ ಶೇ. 0.04 ರಷ್ಟು ಮಾತ್ರ ಡಿಜಿಟಲೀಕರಣಕ್ಕೆ ಬಾಕಿ ಉಳಿದಿದೆ ಎಂದು ವಿವರಿಸಿದ್ದಾರೆ.

## ಮೇಕೆದಾಟು ಯೋಜನೆ ತಡೆಯುವ ಅಧಿಕಾರ ತಮಿಳುನಾಡಿಗೆ ಇಲ್ಲ

**ಬೆಂಗಳೂರು, ಆ.5:** ಮೇಕೆದಾಟು ಯೋಜನೆಗೆ ವಿರೋಧ ವ್ಯಕ್ತಪಡಿಸಿ ತಮಿಳುನಾಡು ವಿಧಾನ ಸಭೆಯಲ್ಲಿ ನಿರ್ಣಯ ಅಂಗೀಕರಿಸಿರುವ ಬೆನ್ನಲ್ಲೇ, ಕರ್ನಾಟಕ ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ತೀಕ್ಷ್ಣ ಪ್ರತಿಕ್ರಿಯೆ ನೀಡಿದ್ದು, ಯೋಜನೆಯನ್ನು ತಡೆಯುವ ಅಧಿಕಾರ ತಮಿಳುನಾಡಿಗೆ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.



■ ಆ.15ರೊಳಗೆ ಡಿಪಿಆರ್ ಸಲ್ಲಿಕೆ: ಸಚಿವ ರಾಮಲಿಂಗಾರೆಡ್ಡಿ

ಕರ್ನಾಟಕ ಸರ್ಕಾರ ಯಾವುದೇ ಕಾರಣಕ್ಕೂ ಯೋಜನೆಯನ್ನು ಕೈಬಿಡುವುದಿಲ್ಲ. ಯೋಜನೆ ಕುರಿತು ನೆರೆಯ ರಾಜ್ಯಗಳು ಆಕ್ಷೇಪ ವ್ಯಕ್ತಪಡಿಸಲು ಅವಕಾಶವಿಲ್ಲ ಎಂದು ಕೇಂದ್ರ ಸರ್ಕಾರವೇ ತಿಳಿಸಿದೆ. ಕೇಂದ್ರದ ಸೂಚನೆಯಂತೆ ವಿಸ್ತೃತ ಯೋಜನಾ ವರದಿ (ಡಿಪಿಆರ್) ಸಿದ್ಧಪಡಿಸಲಾಗಿದ್ದು, ಆಗಸ್ಟ್ 15ರೊಳಗೆ ಸಲ್ಲಿಸಲಾಗುತ್ತದೆ ಎಂದರು. ತಮಿಳುನಾಡು ವಿಧಾನಸಭೆಯಲ್ಲಿ ಯಾವುದೇ ನಿರ್ಣಯ ಕೈಗೊಂಡರೂ ಅದರಿಂದ ಯೋಜನೆಗೆ ಯಾವುದೇ ಪರಿಣಾಮವಾಗುವುದಿಲ್ಲ ಎಂದು ಹೇಳಿದ ಅವರು, ಈ ವಿಚಾರದಲ್ಲಿ ತಮಿಳುನಾಡು ಈ ಹಿಂದೆ ಎರಡು ಬಾರಿ ಸುಪ್ರೀಂ ಕೋರ್ಟ್ ಮೊರೆ ಹೋದರೂ ಅರ್ಜಿಗಳು ತಿರಸ್ಕೃತವಾಗಿದ್ದವು ಎಂದು ನೆನಪಿಸಿದರು.

ಮೇಕೆದಾಟು ಯೋಜನೆಯನ್ನು ಜಾರಿಗೆ ತರುವ ಬದ್ಧತೆ ಸರ್ಕಾರಕ್ಕಿದ್ದು, ಮುಂಬರುವ ವಿಧಾನಮಂಡಲ ಅಧಿವೇಶನದಲ್ಲೂ ಈ ವಿಷಯದ ಕುರಿತು ವಿಸ್ತೃತ ಚರ್ಚೆ ನಡೆಯಲಿದೆ ಎಂದು ತಿಳಿಸಿದರು.

# ಕರ್ನಾಟಕದ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ-ಜೆಡಿಎಸ್ ಜಂಟಿ ಹೋರಾಟ

**ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಭೇಟಿ ನಂತರ ವಿಧಾನಸಭೆ ಪ್ರತಿಪಕ್ಷ ನಾಯಕ ಅಶೋಕ್ ಹೇಳಿಕೆ**

**ನವದೆಹಲಿ, ಆ.5:** ಮುಂಬರುವ ರಾಜ್ಯ ವಿಧಾನಮಂಡಲ ಅಧಿವೇಶನದಲ್ಲಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ಹಾಗೂ ಜೆಡಿಎಸ್ ಜಂಟಿಯಾಗಿ ಹೋರಾಟ ನಡೆಸಲಿವೆ ಎಂದು ವಿಧಾನಸಭೆ ಪ್ರತಿಪಕ್ಷದ ನಾಯಕ ಆರ್. ಅಶೋಕ್ ತಿಳಿಸಿದರು.

ನವದೆಹಲಿಯಲ್ಲಿ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರನ್ನು ಬುಧವಾರ ಭೇಟಿಯಾದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿ, ಪ್ರತಿ ಅಧಿವೇಶನದ ಮುನ್ನ ಉಭಯ ಪಕ್ಷಗಳು ಸರ್ಕಾರದ ವೈಫಲ್ಯಗಳ ಕುರಿತು ಚರ್ಚಿಸಿ ಕಾರ್ಯತಂತ್ರ ರೂಪಿಸುತ್ತವೆ. ಈ ಬಾರಿಯೂ ಅದೇ ರೀತಿಯಾಗಿ ಸುದೀರ್ಘ ಚರ್ಚೆ ನಡೆಸಲಾಗಿದ್ದು, ಸರ್ಕಾರದ ವಿರುದ್ಧ ಸದನದ ಒಳಗೂ ಹೊರಗೂ ಹೋರಾಟ ನಡೆಸಲು ನಿರ್ಧರಿಸಲಾಗಿದೆ ಎಂದು ಹೇಳಿದರು.

**ಬಿಡದಿ ಟೌನ್‌ಶಿಪ್ ಯೋಜನೆಗೆ ಆಕ್ಷೇಪ:** ಬಿಡದಿ ಟೌನ್‌ಶಿಪ್ ಯೋಜನೆ ಕುರಿತು ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಅವರು, ಇದೊಂದು ದೊಡ್ಡ ಭೂಹಗರಣವಾಗಿದ್ದು, ರಿಯಲ್ ಎಸ್ಟೇಟ್ ಉದ್ದೇಶದಿಂದ ಯೋಜನೆ ಜಾರಿಗೆ ತರಲಾಗುತ್ತಿದೆ. ರೈತರ ಭೂಮಿ ಹಾಗೂ ಹಳ್ಳಿಗಳನ್ನು ವಶಪಡಿಸಿಕೊಳ್ಳಲು ಯಾವುದೇ ಕಾರಣಕ್ಕೂ ಅವಕಾಶ ನೀಡುವುದಿಲ್ಲ. ಈ ಯೋಜನೆಯ ವಿರುದ್ಧ ಸದನದ ಒಳಗೂ ಹೊರಗೂ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಸರ್ಕಾರದ ವಿರುದ್ಧ ಜಂಟಿ ಹೋರಾಟಕ್ಕೆ ಅಂತಿಮ ರೂಪ ನೀಡುವ ನಿಟ್ಟಿನಲ್ಲಿ ನವದೆಹಲಿಯಲ್ಲಿ ಕುಮಾರಸ್ವಾಮಿ ಅವರೊಂದಿಗೆ ಒಂದೂವರೆ ಗಂಟೆಗಳ ಕಾಲ ಸುದೀರ್ಘ ಚರ್ಚೆ ನಡೆಸಲಾಗಿದೆ ಎಂದು ಅಶೋಕ್ ತಿಳಿಸಿದರು. ಶನಿವಾರ ಕುಮಾರಸ್ವಾಮಿ ಅವರು ಬೆಂಗಳೂರಿಗೆ ಆಗಮಿಸಲಿದ್ದು, ಬಿಜೆಪಿ ಹಾಗೂ ಜೆಡಿಎಸ್ ನಾಯಕರು ಸಭೆ ನಡೆಸಿ ಜಂಟಿ ಹೋರಾಟದ ಅಧಿಕೃತ ರೂಪುರೇಷೆ ಪ್ರಕಟಿಸಲಿದ್ದಾರೆ ಎಂದರು.



**ಸಮನ್ವಯ ಸಮಿತಿ ರಚನೆಗೆ ನಿರ್ಧಾರ:** ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸೇರಿ 12 ಪ್ರಮುಖ ಬಿಜೆಪಿ ನಾಯಕರ ಸಭೆ ಶುಕ್ರವಾರ ನಡೆಯಲಿದ್ದು, ಬಿಜೆಪಿ–ಜೆಡಿಎಸ್ ನಡುವೆ ಸಮನ್ವಯ ಸಮಿತಿ ರಚನೆ ಕುರಿತು ಮಹತ್ವದ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ ಎಂದು ಅಶೋಕ್ ಹೇಳಿದರು. ಅಧಿವೇಶನದ ವೇಳೆ ಸದನದ ಒಳಗೆ ಈಗಾಗಲೇ ಉಭಯ ಪಕ್ಷಗಳು ಜಂಟಿಯಾಗಿ ಹೋರಾಟ ನಡೆಸುತ್ತಿದ್ದು, ಹೊರಗಡೆ ಪಾದಯಾತ್ರೆ ನಡೆಸುವ ಕುರಿತು ಶನಿವಾರ ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

### ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರದ ವಿರುದ್ಧ ಆರೋಪ

**ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಅಶೋಕ್, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಬದಲಿಸಿ ಡಿ.ಕೆ. ಶಿವಕುಮಾರ್ ಅವರನ್ನು ಮುಖ್ಯಮಂತ್ರಿ ಮಾಡಿದರೂ ಸರ್ಕಾರದಲ್ಲಿನ ಭ್ರಷ್ಟಾಚಾರ ಮತ್ತು ಲಂಚದ ವ್ಯವಸ್ಥೆ ನಿಲ್ಲುವುದಿಲ್ಲ ಎಂದು ಆರೋಪಿಸಿದರು. ಹೈಕಮಾಂಡ್‌ಗೆ ಹಣ ನೀಡಿದವರಿಗೆ ಮಾತ್ರ ಸಚಿವ ಸ್ಥಾನ ದೊರೆತಿದೆ ಎಂದು ಕಾಂಗ್ರೆಸ್ ಪಕ್ಷದ ಶಾಸಕರು ಹಾಗೂ ನಾಯಕರೇ ಬಹಿರಂಗವಾಗಿ ಹೇಳುತ್ತಿದ್ದಾರೆ. ದೆಹಲಿ ನಾಯಕರಿಗೆ ಹಣ ನೀಡದ ಕಾರಣ ಸಚಿವ ಸ್ಥಾನ ಸಿಕ್ಕಿಲ್ಲ ಎಂಬ ಆರೋಪಗಳನ್ನು ಕಾಂಗ್ರೆಸ್ ಶಾಸಕರೇ ಮಾಡುತ್ತಿದ್ದಾರೆ. ಮಾಜಿ ಸಚಿವ ಎಂ.ಸಿ. ಸುಧಾಕರ್ ಸೇರಿ ಹಲವು ನಾಯಕರು ಹಣ ಕೊಟ್ಟವರಿಗೆ ಸಚಿವ ಸ್ಥಾನ ಸಿಕ್ಕಿದೆ ಹಾಗೂ ಸಿದ್ದರಾಮಯ್ಯ ಬೆಂಬಲಿಗರಿಗೆ ಅನ್ಯಾಯವಾಗಿದೆ ಎಂದು ಆರೋಪಿಸಿದ್ದಾರೆ. ಕಾಂಗ್ರೆಸ್ ಸರ್ಕಾರವು ಭ್ರಷ್ಟಾಚಾರಿಗಳ ಹಾಗೂ ಹಣ ನೀಡಿ ಹುದ್ದೆ ಪಡೆದ ಸಚಿವರ ಸಂಪುಟವಾಗಿದೆ ಎಂದು ಅಶೋಕ್ ಟೀಕಿಸಿದರು.**

**ನಿತ್ಯ ಪಂಚಾಂಗದ 6.08.2026 ಗುರುವಾರ**

ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ, ಆಷಾಢ-ಶ್ರಾವಣ ಮಾಸ

ಆಷಾಢ ಬಹುಳ, ಅಷ್ಟಮಿ, ಭರಣಿ ನಕ್ಷತ್ರ, ಕಾಲಾಷ್ಟಮಿ, ಹಿರೋಷಿಮಾ ದಿನ, ಗಂಗಾವತಿ ಕಲ್ಮಠ ಅಂ., ಶ್ರೀ ಕೋಟೇಶ್ವರ ಶಿವಯೋಗಿ ಪುಣ್ಯದಿನ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ಅಸಮಾಧಾನ ಶಮನಕ್ಕೆ ಸ್ವತಃ ಅಖಾಡಕ್ಕಿಳಿದ ಸಿಎಂ

**ಹಿರಿಯ ಶಾಸಕರೊಂದಿಗೆ ಚರ್ಚೆ, ಅತೃಪ್ತರ ಮನವೊಲಿಸುವ ಕಾರ್ಯದಲ್ಲಿ ಸಕ್ರಿಯರಾದ ಕೆಲ ಸಚಿವರು**



**ಬೆಂಗಳೂರು, ಆ.5:** ಸಚಿವ ಸಂಪುಟ ವಿಸ್ತರಣೆ ಬಳಿಕ ಕಾಂಗ್ರೆಸ್‌ನಲ್ಲಿ ಉದ್ಭವವಾಗಿರುವ ಅಸಮಾಧಾನವನ್ನು ನಿಯಂತ್ರಿಸಲು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರೇ ಇದೀಗ ಅಖಾಡಕ್ಕಿಳಿದಿದ್ದಾರೆ. ಸಚಿವ ಸ್ಥಾನ ಸಿಗದ ಹಿನ್ನೆಲೆಯಲ್ಲಿ ಬೇಸರಗೊಂಡಿರುವ ಶಾಸಕರೊಂದಿಗೆ ದೂರವಾಣಿ ಹಾಗೂ ವೈಯಕ್ತಿಕ ಮಟ್ಟದಲ್ಲಿ ನಿರಂತರ ಸಂಪರ್ಕ ಸಾಧಿಸಿ, ಪಕ್ಷದೊಳಗಿನ ಬಿಕ್ಕಟ್ಟಿಗೆ ತೆರೆ ಎಳೆಯುವ ಪ್ರಯತ್ನಗಳು ನಡೆಯುತ್ತಿವೆ.

ಮೂಲಗಳ ಪ್ರಕಾರ, ಸಚಿವ ಸ್ಥಾನ ಕೈತಪ್ಪಿರುವ ಹಿರಿಯ ಶಾಸಕ ದಿನೇಶ್ ಗುಂಡೂರಾವ್ ಅವರೊಂದಿಗೆ ಮುಖ್ಯಮಂತ್ರಿ ಈಗಾಗಲೇ ಚರ್ಚೆ ನಡೆಸಿದ್ದಾರೆ. ಪಕ್ಷದ ಹೈಕಮಾಂಡ್ ತೆಗೆದುಕೊಂಡಿರುವ ನಿರ್ಧಾರವನ್ನು ಎಲ್ಲರೂ ಗೌರವಿಸಬೇಕು ಎಂದು ಮನವರಿಕೆ ಮಾಡುವ ಪ್ರಯತ್ನ ಮಾಡಿದ್ದಾರೆ ಎನ್ನಲಾಗಿದೆ. ಇದರ ಜೊತೆಗೆ ಯಶವಂತ ರಾಯಗೌಡ ಅವರಿಗೂ ಮುಖ್ಯಮಂತ್ರಿ ಕರೆಮಾಡಿ ಹತ್ತು ನಿಮಿಷಗಳ ಕಾಲ ಮಾತುಕತೆ ನಡೆಸಿದ್ದಾರೆ. ಶೀಘ್ರದಲ್ಲೇ ನಿಮ್ಮ ನಿವಾಸಕ್ಕೆ ಬಂದು ಮುಖಾಮುಖಿಯಾಗಿ ಚರ್ಚೆ ನಡೆಸುತ್ತೇನೆ ಎಂದು ಭರವಸೆ ನೀಡಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ.

ಅತೃಪ್ತ ಶಾಸಕರನ್ನು ಮನವೊಲಿಸುವ ಕಾರ್ಯದಲ್ಲಿ ಸಚಿವರಾದ ಲಕ್ಷ್ಮಣ ಸವದಿ, ಮಹಾಂತೇಶ ಕೌಜಲಗಿ, ವಿನಯ್ ಕುಲಕರ್ಣಿ ಹಾಗೂ ಬಿ. ಆರ್. ಪಾಟೀಲ್ ಕೂಡ ಸಕ್ರಿಯರಾಗಿದ್ದಾರೆ. ರಾಜೀನಾಮೆ ನಿರ್ಧಾರವನ್ನು ಕೈಬಿಡುವಂತೆ ಲಕ್ಷ್ಮಣ ಸವದಿ ಮನವಿ ಮಾಡಿದ್ದು, ಅಗತ್ಯವಿದ್ದರೆ ತಮ್ಮ ಸಚಿವ ಸ್ಥಾನವನ್ನೇ ಬಿಟ್ಟುಕೊಡಲು ಸಿದ್ಧ ಎಂದು ಹೇಳಿರುವುದಾಗಿ ಮೂಲಗಳು ತಿಳಿಸಿವೆ. ಸಾಗರ ಶಾಸಕ ಬೇಳೂರು ಗೋಪಾಲಕೃಷ್ಣ ಅವರು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರನ್ನು ಭೇಟಿಮಾಡಿ ಸಮಾಲೋಚನೆ ನಡೆಸಿದ್ದು ಕೂಡ ರಾಜಕೀಯ ವಲಯದಲ್ಲಿ ಚರ್ಚೆಗೆ ಕಾರಣವಾಗಿದೆ.

**ಕೋಲಾರದ ಹೊಣೆ ಡಿಸಿಎಂಗೆ**

ಇತ್ತ, ಕೋಲಾರ ಜಿಲ್ಲೆಯ ಕಾಂಗ್ರೆಸ್ ಶಾಸಕರ ಅಸಮಾಧಾನವನ್ನು ಶಮನಗೊಳಿಸುವ ಜವಾಬ್ದಾರಿಯನ್ನು ಉಪಮುಖ್ಯಮಂತ್ರಿ ಡಾ. ಜಿ.ಪರಮೇಶ್ವರ್ ಅವರಿಗೆ ನೀಡುವ ಸಾಧ್ಯತೆ ಇದೆ. ಅವರು ಸದ್ಯ ವಿದೇಶ ಪ್ರವಾಸದಲ್ಲಿದ್ದರೂ, ಈ ಸಂಬಂಧ ಮುಖ್ಯಮಂತ್ರಿ ಈಗಾಗಲೇ ಮಾಹಿತಿ ರವಾನಿಸಿದ್ದಾರೆ ಎಂದು ಹೇಳಲಾಗುತ್ತಿದೆ.

**ಪಕ್ಷಕ್ಕಿಂತ ಯಾರೂ ದೊಡ್ಡವರಲ್ಲ**

ಇದೇ ವೇಳೆ ಕಾಂಗ್ರೆಸ್‌ನಲ್ಲಿನ ಬೆಳವಣಿಗೆಗಳ ಕುರಿತು ಪ್ರತಿಕ್ರಿಯಿಸಿರುವ ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಪಕ್ಷದ ವಿರುದ್ಧ ಸಾರ್ವಜನಿಕವಾಗಿ ಮಾತನಾಡುವುದು ಸರಿಯಾದ ನಡೆ ಅಲ್ಲ ಎಂದು ಹೇಳಿದ್ದಾರೆ. ಯಾರೂ ಪಕ್ಷಕ್ಕಿಂತ ದೊಡ್ಡವರಲ್ಲ. ನಾವು ಇಂದು ಯಾವ ಸ್ಥಾನದಲ್ಲಿದ್ದರೂ ಅದು ಪಕ್ಷ ಕೊಟ್ಟ ಅವಕಾಶದಿಂದ. ಬಿ–ಫಾರಂ ನೀಡಿ ಚುನಾವಣೆಗೆ ಸ್ಪರ್ಧಿಸಲು ಅವಕಾಶ ನೀಡಿದ್ದು ಪಕ್ಷವೇ. ಹೀಗಾಗಿ ಪಕ್ಷದ ವಿರುದ್ಧ ಮಾತನಾಡುವುದು ಅಥವಾ ನಾಯಕತ್ವವನ್ನು ಪ್ರಶ್ನಿಸುವುದು ಸರಿಯಲ್ಲ. 'ನನ್ನಿಂದಲೇ ಪಕ್ಷ' ಎನ್ನುವ ಭಾವನೆ ತಪ್ಪು" ಎಂದು ಹೇಳಿದ್ದಾರೆ.

### ರಾಜೀನಾಮೆ ಹಿಂಪಡೆದ ಯಶವಂತರಾಯಗೌಡ ಪಾಟೀಲ್

ಸಚಿವ ಸ್ಥಾನ ಸಿಗದ ಹಿನ್ನೆಲೆಯಲ್ಲಿ ಅಸಮಾಧಾನಗೊಂಡು ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ್ದ ಯಶವಂತರಾಯಗೌಡ ಪಾಟೀಲ್ ತಮ್ಮ ರಾಜೀನಾಮೆ ಹಿಂಪಡೆದ್ದಾರೆ. ಸಚಿವ ಸ್ಥಾನ ಕೈತಪ್ಪಿದ್ದಕ್ಕೆ ತೀವ್ರವಾಗಿ ಮನನೊಂದಿದ್ದ ಇಂಡಿ ಶಾಸಕ ಯಶವಂತರಾಯಗೌಡ ಪಾಟೀಲ್, ಇದು ನಿಷ್ಠಾವಂತರು, ಪ್ರಾಮಾಣಿಕರಿಗೆ ಕಾಲವಲ್ಲ, ದೊಡ್ಡ ಷಡ್ಯಂತ್ರವೇ ನಡೆಯುತ್ತಿದೆ.ಈ ವ್ಯವಸ್ಥೆಯ ರಾಜಕಾರಣವೇ ಬೇಡ. ಮನಸ್ಸಿಗೆ ಬಹಳ ನೋವಾಗಿದೆ ಎಂದು ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಇದರ ಬೆನ್ನಲ್ಲೇ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸುರ್ಜೇವಾಲ, ಸಿಎಂ ಡಿ.ಕೆ.ಶಿವಕುಮಾರ್, ಶಾಸಕ ವಿನಯ್ ಕುಲಕರ್ಣಿ ಸೇರಿದಂತೆ ಹಲವು ನಾಯಕರು ರಾಜೀನಾಮೆ ಹಿಂಪಡೆಯುವಂತೆ ಯಶವಂತರಾಯಗೌಡಗೆ ಒತ್ತಾಯಿಸಿದ್ದರು. ಆದಾಗ್ಯೂ ಒಪ್ಪದಿದ್ದಾಗ ಅಂತಿಮವಾಗಿ ಹೈಕಮಾಂಡ್ ನಾಯಕರು ಕರೆ ಮಾಡಿ ಮನವೊಲಿಸಿದ್ದಾರೆ ಎನ್ನಲಾಗಿದೆ. ಮನವೊಲಿಕೆ ಬೆನ್ನಲ್ಲೇ ಯಶವಂತರಾಯಗೌಡ ಪಾಟೀಲ್ ತಮ್ಮ ರಾಜೀನಾಮೆ ವಾಪಸ್ ಪಡೆದಿದ್ದಾರೆ. ಅಲ್ಲದೇ ಸ್ಪೀಕರ್ ಅವರಿಗೆ ತಮ್ಮ ರಾಜೀನಾಮೆ ಅಂಗೀಕರಿಸದಂತೆ ಪತ್ರವನ್ನೂ ರವಾನಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಅಸಮಾಧಾನಗೊಂಡಿದ್ದ ಹಿರಿಯ ಶಾಸಕರ ಮನವೊಲಿಕೆ ಮಾಡುವಲ್ಲಿ ಕಾಂಗ್ರೆಸ್ ನಾಯಕರು ಯಶಸ್ವಿಯಾಗಿದ್ದಾರೆ.



ನಟ ರವಿಚಂದ್ರನ್ ಅವರು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಸದಾಶಿವನಗರದ ನಿವಾಸದಲ್ಲಿ ಭೇಟಿಯಾಗಿ ಅಭಿನಂದಿಸಿದರು.

## ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಸ್ಥಾನಕ್ಕೆ ಶಾಸಕ ಬಸನಗೌಡ ದದ್ದಲ್ ರಾಜೀನಾಮೆ

**ರಾಯಚೂರು, ಆ.5:** ಗ್ರಾಮೀಣ ಕ್ಷೇತ್ರದ ಕಾಂಗ್ರೆಸ್ ಶಾಸಕ ಬಸನಗೌಡ ದದ್ದಲ್ ಅವರು ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರಿಗೆ ಬುಧವಾರ ರಾಜೀನಾಮೆ ಪತ್ರ ಸಲ್ಲಿಸಿರುವ ದದ್ದಲ್, ಸ್ವಇಚ್ಛೆಯಿಂದ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡುತ್ತಿರುವುದಾಗಿ ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ದದ್ದಲ್ ಅವರ ಈ ಹಠಾತ್ ನಿರ್ಧಾರ ಕಾಂಗ್ರೆಸ್ ವಲಯದಲ್ಲಿ ಚರ್ಚೆಗೆ ಕಾರಣವಾಗಿದ್ದು, ಅವರ ಮುಂದಿನ ರಾಜಕೀಯ ನಡೆ ಕುರಿತು ಕುತೂಹಲ ಮೂಡಿಸಿದೆ. ರಾಜೀನಾಮೆಗೆ ನಿಖರ ಕಾರಣ ಇನ್ನೂ ಬಹಿರಂಗವಾಗಿಲ್ಲ. ಆದರೆ, ಪಕ್ಷದೊಳಗಿನ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಈ ನಿರ್ಧಾರ ಮಹತ್ವ ಪಡೆದುಕೊಂಡಿದೆ.ಪಕ್ಷದ ಕೆಲ ನಾಯಕರು, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ನಿಗಮ–ಮಂಡಳಿಗಳ ಅಧ್ಯಕ್ಷರಿಗೆ ರಾಜೀನಾಮೆ ನೀಡುವಂತೆ ಸೂಚಿಸಿರುವ ಹಿನ್ನೆಲೆಯಲ್ಲಿ ದದ್ದಲ್ ರಾಜೀನಾಮೆ ಸಲ್ಲಿಸಿದ್ದಾರೆ ಎಂದು ಹೇಳಲಾಗುತ್ತಿದೆ. ಆದರೆ,

## ನಾಗೇಂದ್ರಗೆ ಸಚಿವ ಸ್ಥಾನ ನೀಡಿದ್ದು ದುರ್ದೈವ, ನಿಮ್ಮನ್ನು ಪ್ರಾಮಾಣಿಕವಾಗಿರು ಎಂದು ಹೇಳಿದ್ದು ಯಾರು?

**ಆರ್.ಬಿ.ತಿಮ್ಮಾಪುರ-ಎಸ್.ಜಿ.ನಂಜಯ್ಯನಮಠ ನಡುವಿನ ಆಡಿಯೋ ವೈರಲ್**

**ಬಾಗಲಕೋಟೆ, ಆ.5:** ಶಾಸಕ ಆರ್.ಬಿ.ತಿಮ್ಮಾಪುರ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಸ್.ಜಿ. ನಂಜಯ್ಯನ ಮಠ ಅವರ ನಡುವೆ ನಡೆದಿದೆ ಎನ್ನಲಾದ ಆಡಿಯೊ ಇದೀಗ ವೈರಲ್ ಆಗಿದೆ.

ಮಾತುಕತೆ ವೇಳೆ, ಶೇ.70ರಷ್ಟು ಪೇಮೆಂಟ್ ಆಗಿವೆ ಎಂದು ಜನರು ಮಾತನಾಡಿಕೊಳ್ಳುತ್ತಾರೆ ಎಂದು ನಂಜಯ್ಯನಮಠ ಹೇಳಿದಾಗ, ಇನ್ನೊಬ್ಬರು ಶೇ.80ರಷ್ಟು ಅನ್ನುತ್ತಾರೆ. ಕೇಸ್ ಇನ್ನೂ ಕೋರ್ಟ್‌ನಲ್ಲಿದೆ. ಜಾಮೀನು ಸಿಕ್ಕಿದೆ. ನಾಗೇಂದ್ರ ಅವರಿಗೆ ಸಚಿವ ಸ್ಥಾನ ನೀಡಿರುವುದು ದುರ್ದೈವ. ಅದನ್ನು ಹೇಗೆ ಸಮರ್ಥಿಸಿಕೊಳ್ಳುವುದು ಎಂದು ಎಸ್.ಜಿ. ನಂಜಯ್ಯನಮಠ ಕೇಳುತ್ತಾರೆ. ಅದು ಬಿಡಿ ಎಚ್.ಕೆ.ಪಾಟೀಲ್ ಅವರಿಗೆ ನೀಡಿಲ್ಲ ಎಂದು ಶಾಸಕ ತಿಮ್ಮಾಪುರ ಹೇಳುತ್ತಾರೆ. ಮೇಲೆ ಒಂದು ನಮೂನೆ ಹುಚ್ಚಿವೆ. ಎಚ್.ಕೆ. ಪಾಟೀಲ್ ಪರ ಮಾತನಾಡಲು ಒಮ್ಮೆ ಕೆ.ಸಿ. ವೇಣುಗೋಪಾಲ್ ಅವರ ಬಳಿ ಹೋಗಿದ್ದೆವು. ಎಚ್.ಕೆ. ಅವರು ಬಹಳ ಪ್ರಾಮಾಣಿಕರು ಎಂದರೆ, ಪ್ರಾಮಾಣಿಕರಾಗಿ ಇರು ಎಂದು ಯಾರು ಹೇಳಿದ್ದರು ಎಂದು ಕೇಳಿದರು. ಅದಕ್ಕೆ ಏನು ಉತ್ತರ ಕೊಡುವುದು ಎಂದು ಪ್ರಶ್ನಿಸುತ್ತಾರೆ.

ಮಾತು ಮುಂದುವರಿಸುವ ಅವರು, ನಿಮ್ಮದೊಂದು, ಅವರದೊಂದು ಆಗಬೇಕಿತ್ತು ಉತ್ತರ ಕರ್ನಾಟಕದಾಗ ಮಾದರ ಪೈಕಿ ಯಾರೂ ಇಲ್ಲ. ಪಕ್ಷಸಂಘಟನೆ ಮಾಡಿರಿ. ನಿಮಗೆ ಕೊಡಿ ಅಂದಿದ್ದೆವು ಎನ್ನುತ್ತಾರೆ. ಜಿಲ್ಲಾ ಉಸ್ತುವಾರಿ ಸಚಿವರನ್ನಾಗಿ ಲಕ್ಷ್ಮಣ ಸವದಿ ಅವರನ್ನು ಮಾಡುವಂತೆ ಹೇಳಿದ್ದೇವೆ ಎಂದು ತಿಮ್ಮಾಪುರ ಹೇಳುತ್ತಾರೆ. ಎಸ್.ಜಿ. ನಂಜಯ್ಯನಮಠ ಜನರು ಆಡುವ ಮಾತಿನ ಬಗ್ಗೆ ಮಾತನಾಡಿದ್ದೇವೆ. ಸಚಿವ ಕಾಶಪ್ಪನವರ ಬಗ್ಗೆ ಯಾವುದೇ ತಪ್ಪು ಮಾತನಾಡಿಲ್ಲ. ಅಪಾರ್ಥ ಆಗುತ್ತಿದೆ. ಇದೀಗ ಈ ಆಡಿಯೋ ವೈರಲ್ ಆಗಿದೆ.

## ನಾಗೇಂದ್ರಗೆ ಸಚಿವ ಸ್ಥಾನ ಹೈಕಮಾಂಡ್ ನಿರ್ಧಾರ: ಸತೀಶ್ ಜಾರಕಿಹೊಳಿ

**ಬೆಂಗಳೂರು, ಆ.5:** ವಾಲ್ಮೀಕಿ ನಿಗಮದ ಹಗರಣದ ಆರೋಪ ಹೊತ್ತಿರುವ ಬಿ.ನಾಗೇಂದ್ರಗೆ ಮತ್ತೆ ಸಚಿವ ಸ್ಥಾನ ನೀಡಿರುವುದನ್ನು ವಿರೋಧಿಸಿ ರಾಜೀನಾಮೆಗೆ ಆಗ್ರಹಿಸಿರುವ ಬಿಜೆಪಿ ನಾಯಕರ ಹೇಳಿಕೆಗೆ ಪ್ರತಿಕ್ರಿಯಿಸಿರುವ ಸಚಿವ ಸತೀಶ್ ಜಾರಕಿಹೊಳಿ, ಜಾಮೀನಿನ ಮೇಲೆ ಇರುವ ನಾಗೇಂದ್ರ ಅವರಿಗೆ ಸಚಿವ ಸ್ಥಾನ ನೀಡಿರುವ ಕುರಿತು ಇದು ಹೈಕಮಾಂಡ್ ತೀರ್ಮಾನ. ಹೈಕಮಾಂಡ್ ಈ ನಿರ್ಧಾರ ಕೈಗೊಂಡಿದೆ. ಎಲ್ಲ ಹಿರಿಯರು ಚರ್ಚಿಸಿ ಇದನ್ನು ಮಾಡಿದ್ದಾರೆ ಎಂದರು.

ಹೆಚ್ಚುವರಿ ಉಪಮುಖ್ಯಮಂತ್ರಿ ಹುದ್ದೆ ವಿಚಾರವಾಗಿ ಪಕ್ಷದಲ್ಲಿ ಇದರ ಬಗ್ಗೆ ಇನ್ನೂ ಚರ್ಚೆ ಆಗಿಲ್ಲ. ಖಾತೆ ಹಂಚಿಕೆ ಮುಗಿದ ನಂತರ ಈ ಬಗ್ಗೆ ಚರ್ಚಿಸಲಾಗುವುದು. ಇದನ್ನು ಯಾವುದೇ ಸಮಯದಲ್ಲಿ ಮಾಡಬಹುದು ಎಂದು ತಿಳಿಸಿದರು.

ಮಹಿಳಾ ಮಂತ್ರಿಗಳ ಕೊರತೆಯ ಬಗ್ಗೆ ಪ್ರತಿಕ್ರಿಯಿಸಿದ ಜಾರಕಿಹೊಳಿ, ಮಹಿಳೆಯರಿಗಾಗಿ ಒಂದು ಸ್ಥಾನ ಖಾಲಿ ಇದೆ. ಮಹಿಳಾ ಪ್ರಾತಿನಿಧ್ಯ ಇಲ್ಲದೆ ಮಂತ್ರಿಮಂಡಲ ಆಗುವುದಿಲ್ಲ. ಹೈಕಮಾಂಡ್ ಶೀಘ್ರದಲ್ಲೇ ಈ ಬಗ್ಗೆ ತೀರ್ಮಾನ ಕೈಗೊಳ್ಳಲಿದೆ ಎಂದು ಭರವಸೆ ನೀಡಿದರು.ಇನ್ನು, ಸಚಿವ ಸ್ಥಾನ ಹರಾಜಾಗಿದೆ, ಹಣ ನೀಡಲಾಗಿದೆ ಎಂಬ ಬಿಜೆಪಿ ಆರೋಪಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿದ ಸತೀಶ್ ಜಾರಕಿಹೊಳಿ, ಇದು ಕೇವಲ ಊಹಾಪೋಹ. ಯಾರಿಗೆ ಹಣ ನೀಡಿದ್ದಾರೆಂದು ಅವರು ಹೇಳಲಿ ಎಂದರು.

# ಪೇಮೆಂಟ್-ಮ್ಯಾನೇಜ್‌ಮೆಂಟ್ ಕೋಟಾದಡಿ ಸಚಿವ ಸ್ಥಾನ

**ರಾಜ್ಯದ ಹಿತಕ್ಕಾಗಿ ಸಂಪುಟ ವಿಸ್ತರಣೆಯಾಗಿಲ್ಲ: ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪ**




**ಬೆಂಗಳೂರು, ಆ.5:** ಈ ಸಚಿವ ಸಂಪುಟ ವಿಸ್ತರಣೆ ರಾಜ್ಯದ ಹಿತದೃಷ್ಟಿಯಿಂದ ನಡೆದಿಲ್ಲ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಡುವಿನ ಅಧಿಕಾರದ ಪೈಪೋಟಿ ಮತ್ತು ಹೈಕಮಾಂಡ್‌ನ ರಾಜಕೀಯ ಸಮೀಕರಣಗಳೇ ಸಚಿವ ಸಂಪುಟ ವಿಸ್ತರಣೆಯ ಹಿಂದಿನ ಪ್ರಮುಖ ಕಾರಣಗಳಾಗಿವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಕಾಂಗ್ರೆಸ್ ಹೈಕಮಾಂಡ್ ಅಳೆದು ತೂಗಿ ಎರಡು ತಿಂಗಳ ನಂತರದಲ್ಲಿ ಸಚಿವಸಂಪುಟ ವಿಸ್ತರಣೆ ಮಾಡಿದ್ದಾರೆ. ರೇಟ್ ಫಿಕ್ಸ್ ಆಗದೇ ಡೇಟ್ ಫಿಕ್ಸ್ ಆಗುತ್ತಿಲ್ಲ ಎಂದು ನಾನು ಹಲವಾರು ಬಾರಿ ಈ ಹಿಂದೆ ಹೇಳಿದ್ದೇನೆ. ಒಂದೋ ಪೇಮೆಂಟ್ ಕೋಟದಲ್ಲಿ ಅಥವಾ ಮ್ಯಾನೇಜ್‌ಮೆಂಟ್ ಕೋಟದಡಿ ಸಚಿವಸಂಪುಟಕ್ಕೆ ಸೇರಬೇಕಿತ್ತು. ಎರಡು ಬಿಟ್ಟರೆ ಮೂರನೇ ಕೋಟಾ ಇರಲಿಲ್ಲ. ಕೆಲವರು ಪೇಮೆಂಟ್ ಕೋಟದಲ್ಲಿ ಹಾಗೂ ಇನ್ನೂ ಕೆಲವರು ಮ್ಯಾನೇಜ್‌ಮೆಂಟ್ ಕೋಟದಡಿ ಸಚಿವಸಂಪುಟಕ್ಕೆ ಸೇರಿದ್ದಾರೆ ಎಂದು ವಿಶ್ಲೇಷಿಸಿದರು.

ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣದಲ್ಲಿ ಚಾರ್ಜ್‌ಶೀಟ್ ಸಲ್ಲಿಕೆಯಾಗಿರುವ ಹಾಗೂ ನ್ಯಾಯಾಂಗ ಪ್ರಕ್ರಿಯೆ ಎದುರಿಸುತ್ತಿರುವ ಬಿ. ನಾಗೇಂದ್ರ ಅವರನ್ನು ಮತ್ತೆ ಸಚಿವ ಸಂಪುಟಕ್ಕೆ ಸೇರಿಸಿರುವುದನ್ನು ವಿಜಯೇಂದ್ರ ಪ್ರಶ್ನಿಸಿದರು. ಭ್ರಷ್ಟಾಚಾರ ರಹಿತ ಆಡಳಿತದ ಬಗ್ಗೆ ಮಾತನಾಡುವ ಕಾಂಗ್ರೆಸ್ ತನ್ನದೇ ನೈತಿಕತೆಯನ್ನು ಉಲ್ಲಂಘಿಸಿದೆ ಎಂದು ಆರೋಪಿಸಿದರು.

ಸಚಿವ ಸ್ಥಾನ ನೀಡದಿದ್ದರೆ ಕಾಂಗ್ರೆಸ್ ಹೈಕಮಾಂಡ್‌ಗೆ ಸಂಬಂಧಿಸಿದ ಮಾಹಿತಿ ಬಹಿರಂಗಪಡಿಸುವುದಾಗಿ ಬೆದರಿಕೆ ಹಾಕಿದ ಬಳಿಕವೇ ಅವರನ್ನು ಮತ್ತೆ ಸಚಿವ ಸಂಪುಟಕ್ಕೆ ಸೇರಿಸಲಾಗಿದೆ ಎಂಬ ಗಂಭೀರ ಆರೋಪಗಳು ಕೇಳಿಬಂದಿವೆ. ಈ ಕುರಿತು ಕಾಂಗ್ರೆಸ್ ನಾಯಕರು ಸಾರ್ವಜನಿಕರಿಗೆ ಸ್ಪಷ್ಟನೆ ನೀಡಬೇಕು ಎಂದು ಒತ್ತಾಯಿಸಿದರು.

ಸಚಿವಸಂಪುಟ ವಿಸ್ತರಣೆ ಬಳಿಕ ಮಾಜಿ ಸಚಿವರು, ಕಾಂಗ್ರೆಸ್ ಪಕ್ಷದ ಹಿರಿಯ ಶಾಸಕರ ಹೇಳಿಕೆಯನ್ನು ತಾವು ಮತ್ತೊಮ್ಮೆ ಗಮನಿಸಬೇಕಾಗುತ್ತದೆ. ಹಿರಿಯ ಶಾಸಕ ತನ್ವೀರ್ ಸೇಠ್ ಅವರು ಪಕ್ಷ ವಿರೋಧಿ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡವರಿಗೂ ಸಚಿವ ಸ್ಥಾನ ಸಿಕ್ಕಿದೆ ಎಂದಿದ್ದಾರೆ. ಮತ್ತೊಬ್ಬ ಹಿರಿಯ ಶಾಸಕ ಟಿ.ಬಿ.ಜಯಚಂದ್ರ ಅವರು ನಾನು ಕಾಂಗ್ರೆಸ್ಸಿಗ ಎನ್ನಲೂ ನಾಚಿಕೆ ಆಗುತ್ತದೆ ಎಂದರೆ, ಶಾಸಕ ಎಸ್.ಆರ್.ಶ್ರೀನಿವಾಸ್ ಅವರು, ನಾನೊಬ್ಬ ಸಾಮಾನ್ಯ ರೈತನ ಮಗ. ಯಾರ ತಲೆ ಒಡೆದೂ ಸಂಪಾದನೆ ಮಾಡಿಲ್ಲ. ಪೇಮೆಂಟ್ ಕೊಡಲಾಗದ ಕಾರಣ ಸಚಿವ ಸ್ಥಾನ ಸಿಕ್ಕಿಲ್ಲ ಎಂದು ತಿಳಿಸಿದ್ದಾಗಿ ಗಮನ ಸೆಳೆದರು.

ಕಾಂಗ್ರೆಸ್ ಸರ್ಕಾರದ ಸಚಿವ ಸಂಪುಟ ವಿಸ್ತರಣೆಯು ರಾಜ್ಯದ ಅಭಿವೃದ್ಧಿ, ಜನಹಿತ ಅಥವಾ ಉತ್ತಮ ಆಡಳಿತದ ಉದ್ದೇಶದಿಂದ ನಡೆದಿಲ್ಲ. ಅಧಿಕಾರದ ಹಂಚಿಕೆ, ಹಣಬಲ, ಗುಂಪುಗಾರಿಕೆ ಹಾಗೂ ಹೈಕಮಾಂಡ್ ರಾಜಕಾರಣದ ಫಲವಾಗಿ ಸಚಿವ ಸಂಪುಟ ವಿಸ್ತರಣೆ ನಡೆದಿದೆ ಆರೋಪಿಸಿದರು.

ಸಚಿವ ಸಂಪುಟ ವಿಸ್ತರಣೆ ಕುರಿತು ತಾವು ಆರಂಭದಿಂದಲೂ "ರೇಟ್ ಫಿಕ್ಸ್ ಆಗದೆ ಡೇಟ್ ಫಿಕ್ಸ್ ಆಗಲಿಲ್ಲ" ಎಂದು ಹೇಳಿದ್ದೆ. ಇಂದು ಕಾಂಗ್ರೆಸ್‌ನ ಹಿರಿಯ ನಾಯಕರು, ಮಾಜಿ ಸಚಿವರು ಮತ್ತು ಶಾಸಕರು ನೀಡಿರುವ ಬಹಿರಂಗ ಹೇಳಿಕೆಗಳೇ ತಮ್ಮ ಆರೋಪಕ್ಕೆ ಪುಷ್ಟಿ ನೀಡಿವೆ. ಕಾಂಗ್ರೆಸ್ ಪಕ್ಷದೊಳಗಿನ ಅಸಮಾಧಾನವೇ ಸಚಿವ ಸಂಪುಟ ರಚನೆಯ ಹಿಂದಿನ ವಾಸ್ತವವನ್ನು ಬಯಲಿಗೆಳೆಯುತ್ತಿದೆ ಎಂದರು. ಮಾಜಿ ಸಚಿವ ತಿಮ್ಮಾಪುರ್ ಅವರು ಕಾಂಗ್ರೆಸ್ ಹೈಕಮಾಂಡ್‌ಗೆ ಹಣ ನೀಡಿದವರಿಗೆ ಹಾಗೂ ಪ್ರಭಾವ ಹೊಂದಿದವರಿಗೆ ಮಾತ್ರ ಸಚಿವ ಸ್ಥಾನ ನೀಡಲಾಗಿದೆ ಎಂದು ಬಹಿರಂಗವಾಗಿ ಆರೋಪಿಸಿದ್ದಾರೆ. ಇಂತಹ ಗಂಭೀರ ಆರೋಪದ ಕುರಿತು ಕಾಂಗ್ರೆಸ್ ನಾಯಕರು ರಾಜ್ಯದ ಜನತೆಗೆ ಸ್ಪಷ್ಟನೆ ನೀಡಬೇಕು ಎಂದು ವಿಜಯೇಂದ್ರ ಆಗ್ರಹಿಸಿದರು.

ಮಹಿಳಾ ಸಬಲೀಕರಣದ ಬಗ್ಗೆ ಮಾತನಾಡುವ ಕಾಂಗ್ರೆಸ್ ಸರ್ಕಾರ, ಸಚಿವ ಸಂಪುಟದಲ್ಲಿ ಒಬ್ಬ ಮಹಿಳೆಗೂ ಅವಕಾಶ ನೀಡಿಲ್ಲ. ಕೊನೆಯ ಕ್ಷಣದಲ್ಲಿ ಗಾಯತ್ರಿ ಶಾಂತೇಗೌಡ ಅವರ ಹೆಸರನ್ನು ಕೈಬಿಡುವ ಮೂಲಕ ಮಹಿಳೆಯರ ಬಗ್ಗೆ ತನ್ನ ನಿಜವಾದ ಮನೋಭಾವವನ್ನು ಕಾಂಗ್ರೆಸ್ ಪ್ರದರ್ಶಿಸಿದೆ ಎಂದು ಟೀಕಿಸಿದರು.

ಸಚಿವರ ಆಯ್ಕೆ ಮಾತ್ರವಲ್ಲ, ಯಾರಿಗೆ ಯಾವ ಖಾತೆ ನೀಡಬೇಕು ಎಂಬುದನ್ನೂ ದೆಹಲಿಯ ಕಾಂಗ್ರೆಸ್ ಹೈಕಮಾಂಡ್ ನಿರ್ಧರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಮುಖ್ಯಮಂತ್ರಿಗಳು ಮತ್ತೆ ಮತ್ತೆ ದೆಹಲಿಗೆ ತೆರಳಿ ಅನುಮೋದನೆ ಪಡೆಯಬೇಕಾದ ಪರಿಸ್ಥಿತಿ ರಾಜ್ಯದ ರಾಜಕೀಯ ಇತಿಹಾಸದಲ್ಲೇ ಅಪರೂಪವಾಗಿದೆ ಎಂದು ಹೇಳಿದರು.

ವಿಧಾನಸಭೆಯ ಸ್ಪೀಕರ್, ಉಪಸಭಾಧ್ಯಕ್ಷರು, ವಿಧಾನ ಪರಿಷತ್ತಿನ ಸಭಾಪತಿ ಹಾಗೂ ಉಪಸಭಾಪತಿ ಹುದ್ದೆಗಳ ಕುರಿತು ಎಐಸಿಸಿ ಲೆಟರ್‌ಹೆಡ್‌ನಲ್ಲಿ ನಿರ್ದೇಶನ ನೀಡಿರುವುದು ಸಂವಿಧಾನದ ಆಶಯಕ್ಕೆ ವಿರುದ್ಧವಾಗಿದೆ. ಇಂತಹ ನಡೆ ವಿಧಾನಮಂಡಲದ ಸ್ವಾಯತ್ತತೆ ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ಧಕ್ಕೆ ತರುವಂತದ್ದು ಎಂದು ವಿಜಯೇಂದ್ರ ತಿಳಿಸಿದರು. ಎಸ್. ಟಿ. ಮೋರ್ಚಾ ರಾಜ್ಯ ಅಧ್ಯಕ್ಷ ಬಂಗಾರು ಹನುಮಂತು ಮತ್ತು ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್. ಹರೀಶ್ ಅವರು ಉಪಸ್ಥಿತರಿದ್ದರು.

# ಶಿಶಿಲ-ಬೈರಾಪುರ ರಸ್ತೆ ನಿರ್ಮಾಣಕ್ಕೆ ಬೇಡಿಕೆ: ಜಂಟಿ ಸ್ಥಳ ಪರಿಶೀಲನೆ ನಡೆಸಿ ವರದಿ ನೀಡಲು ಚಿಕ್ಕಮಗಳೂರು ಯೋಜನಾ ವಿಭಾಗದ ಕಾರ್ಯಪಾಲಕ ಎಂಜಿನಿಯರ್‌ಗೆ ನಿರ್ದೇಶನ



**ನವದೆಹಲಿ, ಆ.5:** ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲೂಕಿನ ಶಿಶಿಲದಿಂದ ಚಿಕ್ಕಮಗಳೂರು ಜಿಲ್ಲೆಯ ಭೈರಾಪುರ ನಡುವೆ ರಸ್ತೆ ಕಾಮಗಾರಿ ನಡೆಸಬೇಕೆಂಬ ಬೇಡಿಕೆಗೆ ಸಂಬಂಧಿಸಿ ಚಿಕ್ಕಮಗಳೂರು ಯೋಜನಾ ವಿಭಾಗದ ಕಾರ್ಯಪಾಲಕ ಎಂಜಿನಿಯರ್ ಹಾಗೂ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಅವರು ಜಂಟಿ ಪರಿಶೀಲನೆ ನಡೆಸಿ, ವಿವರವಾದ ವರದಿಯನ್ನು ತಕ್ಷಣವೇ ಸಲ್ಲಿಸಬೇಕು ಎಂದು ರಾಜ್ಯ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ ಮುಖ್ಯ ಕಾರ್ಯಾಚರಣೆ ಅಧಿಕಾರಿ ನಿರ್ದೇಶನ ನೀಡಿದ್ದಾರೆ. ಉಡುಪಿ–ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಸಂಸದ ಕೋಟ ಶ್ರೀನಿವಾಸ ಪೂಜಾರಿ ಇಲ್ಲಿ ರಸ್ತೆ ನಿರ್ಮಾಣ ಮಾಡುವ ಅಗತ್ಯದ ಬಗ್ಗೆ ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಮೇ 18ರಂದು ಪತ್ರ ಬರೆದಿದ್ದರು.

ಪಿಎಂಜಿಎಸ್‌ವೈ–III/ಪಿಎಂ ಜನ್‌ಮನ್ ಯೋಜನೆ ಅಡಿಯಲ್ಲಿ ರಸ್ತೆ ನಿರ್ಮಾಣಕ್ಕೆ ಅನುಮತಿ ನೀಡಬೇಕು ಎಂದು ಅವರು ಕೋರಿದ್ದರು. ಈ ರಸ್ತೆ ನಿರ್ಮಾಣದಿಂದ ದಕ್ಷಿಣ ಕನ್ನಡ ಹಾಗೂ ಚಿಕ್ಕಮಗಳೂರು ಜಿಲ್ಲೆಗಳ ಸಂಪರ್ಕ ಸುಧಾರಿಸಲಿದ್ದು, ಎರಡೂ ಜಿಲ್ಲೆಗಳ ನಡುವಿನ ಅಂತರವನ್ನು ಮತ್ತಷ್ಟು ಕಡಿಮೆಗೊಳಿಸಲಿದೆ. ಶಿಶಿಲ ಮಾರ್ಗವಾಗಿ ದಕ್ಷಿಣ ಕನ್ನಡದ ಧಾರ್ಮಿಕ ತಾಣಗಳಿಗೆ ಅತಿಶೀಘ್ರದಲ್ಲಿ ತಲುಪಬಹುದಾಗಿದ್ದು, ಲಕ್ಷಾಂತರ ಮಂದಿಗೆ ಇದರಿಂದ ಅನುಕೂಲವಾಗಲಿದೆ ಎಂದು ವಿವರಿಸಿದ್ದರು. ಈ ಪತ್ರಕ್ಕೆ ಉತ್ತರವಾಗಿ ಕೇಂದ್ರ ಗ್ರಾಮೀಣಾಭಿವೃದ್ಧಿ ಇಲಾಖೆಯ ಉಪ ಕಾರ್ಯದರ್ಶಿ ಜೇಕಬ್ ಎಲ್. ಅವರು ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಾರ್ಯದರ್ಶಿಗಳಿಗೆ ಪತ್ರ ಬರೆದು, ಪಿಎಂಜಿಎಸ್‌ವೈ–III ಯೋಜನೆಯಡಿ ನೂತನ ಯೋಜನೆಗಳಿಗೆ ಅನುಮೋದನೆ ನೀಡಲು ಅವಕಾಶವಿಲ್ಲದೇ ಮಾರ್ಚ್ 2028ರವರೆಗೆ ಅವಧಿ ವಿಸ್ತರಿಸಲಾಗಿದೆ. ಪಿಎಂ–ಜನ್‌ಮನ್ ಯೋಜನೆಯಡಿ ಈಗಾಗಲೇ 7,984 ಕಿ.ಮೀ ರಸ್ತೆ ಮಂಜೂರಾಗಿದ್ದು, ಯಾವುದೇ ಹೊಸ ಪ್ರಸ್ತಾವನೆಯಿದ್ದರೆ ಆದಿವಾಸಿ ಕಲ್ಯಾಣ ಸಚಿವಾಲಯದ ಮೂಲಕವೇ ಸಲ್ಲಿಸಬೇಕಾಗುತ್ತದೆ. ಆದ್ದರಿಂದ, ಈ ಯೋಜನೆಯನ್ನು ಪಿಎಂಜಿಎಸ್‌ವೈ–IV ಯೋಜನೆಯಡಿ ಅಥವಾ ರಾಜ್ಯ ಸರ್ಕಾರದ ಯಾವುದಾದರೂ ಯೋಜನೆಯಡಿ ಅನುಷ್ಠಾನಗೊಳಿಸಲು ಪರಿಶೀಲಿಸುವಂತೆ ತಿಳಿಸಿದ್ದಾರೆ.

ಕೇಂದ್ರ ಸರ್ಕಾರದ ಈ ಪತ್ರದ ಬೆನ್ನಲ್ಲೇ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಯ ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು ಚಿಕ್ಕಮಗಳೂರಿನ ಯೋಜನಾ ವಿಭಾಗದ ಕಾರ್ಯಪಾಲಕ ಎಂಜಿನಿಯರ್‌ಗೆ ಜಂಟಿ ಸ್ಥಳ ಪರಿಶೀಲನೆ ನಡೆಸಿ ವರದಿ ಸಲ್ಲಿಸುವಂತೆ ಸೂಚನೆ ನೀಡಿದ್ದಾರೆ.

### ಸಂಸದರ ಪತ್ರದಲ್ಲೇನಿದೆ..?

ಧರ್ಮಸ್ಥಳ ಲಕ್ಷದೀಪೋತ್ಸವ ಮತ್ತು ಪ್ರಮುಖ ಹಬ್ಬಗಳ ಸಮಯದಲ್ಲಿ ಲಕ್ಷಾಂತರ ಭಕ್ತರು ಬರಿಗಾಲಿನಲ್ಲಿ ದ.ಕ. ಜಿಲ್ಲೆಯ ಧಾರ್ಮಿಕ ಸ್ಥಳಗಳಿಗೆ ಪಾದಯಾತ್ರೆ ಮಾಡುತ್ತಾರೆ. ಪ್ರಸ್ತುತ ಇರುವ ಕಚ್ಚಾ ರಸ್ತೆ ಮಳೆಗಾಲದಲ್ಲಿ ಸಂಚಾರಕ್ಕೆ ಅಸುರಕ್ಷಿತವಾಗುವುದರಿಂದ ಇಲ್ಲಿ ಸರ್ವಋತು ರಸ್ತೆ ನಿರ್ಮಾಣ ಅಗತ್ಯವಾಗಿದೆ. ಈ ಪ್ರದೇಶದಲ್ಲಿ ವಿಶೇಷ ಹಿಂದುಳಿದ ಬುಡಕಟ್ಟು ಸಮುದಾಯವಾದ ಮಲೆಕುಡಿಯ ಜನವಸತಿಗಳಿದ್ದು, ಸೂಕ್ತ ರಸ್ತೆ ಸಂಪರ್ಕವಿಲ್ಲದೆ ಆರೋಗ್ಯ, ಶಿಕ್ಷಣ ಮತ್ತು ಆರ್ಥಿಕ ಅವಕಾಶಗಳಿಂದ ವಂಚಿತರಾಗಿದ್ದಾರೆ. ಪಿಎಂ–ಜನ್‌ಮನ್ ಯೋಜನೆಯಡಿ ಇದಕ್ಕೆ 100% ಕೇಂದ್ರ ಸರ್ಕಾರದ ನೆರವು ದೊರೆಯುತ್ತದೆ. ಈ ರಸ್ತೆಯ ಸಾಧ್ಯತಾ ವರದಿ ಮುಂಚೆಯೇ ತಯಾರಾಗಿದ್ದು, ಬಜೆಟ್ ಕೊರತೆಯಿಂದ ಬಾಕಿಯಿತ್ತು. ಅದನ್ನು ತಕ್ಷಣ ನವೀಕರಿಸಿ ಡಿಪಿಆರ್ ಸಿದ್ಧಪಡಿಸಬಹುದು. ಚಿಕ್ಕಮಗಳೂರಿನ ತೋಟಗಾರಿಕಾ ಬೆಳೆಗಳನ್ನು ದಕ್ಷಿಣ ಕನ್ನಡದ ಮಾರುಕಟ್ಟೆಗೆ ಸಾಗಿಸಲು ಹಾಗೂ ಗಡಿಭಾಗದ ಜನರಿಗೆ ತುರ್ತು ಆರೋಗ್ಯ ಸೇವೆಗಳಿಗೆ ಈ ರಸ್ತೆ ನೆರವಾಗಲಿದೆ ಎಂದು ಉಡುಪಿ–ಚಿಕ್ಕಮಗಳೂರು ಸಂಸದ ಕೋಟ ಶ್ರೀನಿವಾಸ ಪೂಜಾರಿ ಅವರು ಮೇ 18ರಂದು ಕೇಂದ್ರ ಸಚಿವರಿಗೆ ಬರೆದ ಪತ್ರದಲ್ಲಿ ವಿವರಿಸಿದ್ದರು.

## ನಾಗೇಂದ್ರ ರಾಜೀನಾಮೆ ಕೊಡದಿದ್ದರೆ ಸದನ ನಡೆಯಲು ಬಿಡಲ್ಲ: ರಾಜ್ಯ ಸರ್ಕಾರಕ್ಕೆ ಛಲವಾದಿ ಎಚ್ಚರಿಕೆ




**ಬೆಂಗಳೂರು, ಆ.5:** ನಾಗೇಂದ್ರ ಅವರ ಮೇಲೆ ನ್ಯಾಯಾಲಯದಲ್ಲಿ ಈಗಲೂ ದಾವೆ ಇದೆ. ಅವರು ದೆಹಲಿಗೂ ಹೋಗುವಂತಿಲ್ಲ. ಇಂಥ ಕಳಂಕಿತರು ಮಂತ್ರಿಮಂಡಲದಲ್ಲಿ ಇರಲು ಸಾಧ್ಯವಿಲ್ಲ. ಅವರು ರಾಜೀನಾಮೆ ಕೊಡುವವರೆಗೆ ನಾವು ವಿರಮಿಸುವುದಿಲ್ಲ ಎಂದು ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಎಚ್ಚರಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಮ್ಮ ಪಕ್ಷದ ಕಾರ್ಯಕರ್ತರು, ಮುಖಂಡರು ನಮ್ಮ ಹೋರಾಟವನ್ನು ರಾಜ್ಯಾದ್ಯಂತ ಹೋರಾಟ ಮಾಡಲಿದ್ದೇವೆ. 13ರಿಂದ ಸದನ ಪ್ರಾರಂಭವಾಗಲಿದೆ. ಅವರ ರಾಜೀನಾಮೆ ಇಲ್ಲದೇ ನಾವು ಸದನ ನಡೆಸಲು ಬಿಡುವುದಿಲ್ಲ ಎಂದು ಹೇಳಿದರು. ಅವರು ಇವತ್ತೇ ರಾಜೀನಾಮೆ ಪಡೆಯಲಿ. ಇಲ್ಲವಾದರೆ ನಮ್ಮ ಹೋರಾಟ ಮುಂದುವರೆಯಲಿದೆ ಎಂದರು.

ಮೊನ್ನೆಯಷ್ಟೇ ರಾಜ್ಯ ಸರಕಾರದ ಸಂಪುಟ ವಿಸ್ತರಣೆ ಆಗಿದೆ. ಕಾಂಗ್ರೆಸ್ ಪಕ್ಷವು ಮಂತ್ರಿಮಂಡಲದ ಸದಸ್ಯತ್ವವನ್ನು ಹರಾಜಿಗೆ ಇಟ್ಟಿತ್ತು ಎಂದು ಮತ್ತೊಮ್ಮೆ ಆರೋಪಿಸಿದರು. ಹರಾಜಿನಲ್ಲಿ ಸಚಿವ ಸ್ಥಾನವನ್ನು ಶಕ್ತ್ಯಾನುಸಾರ ಪಡೆದಿದ್ದಾರೆ ಎಂದ ಅವರು, ಇದಕ್ಕೆ ಪುರಾವೆ ಎಂಬಂತೆ ವಿಡಿಯೋಗಳು ಓಡಾಡುತ್ತಿವೆ. ಭ್ರಷ್ಟಾಚಾರ ಆರೋಪದಲ್ಲಿ ವಾಲ್ಮೀಕಿ ನಿಗಮದಲ್ಲಿ 187 ಕೋಟಿ ಹಣ ದುರುಪಯೋಗ ಪಡಿಸಿಕೊಂಡ ನಾಗೇಂದ್ರ ಅವರು ಬಿಜೆಪಿ ಮುಖಂಡರು, ಶಾಸಕರ ಬಹುದೊಡ್ಡ ಹೋರಾಟದ ಫಲವಾಗಿ ರಾಜೀನಾಮೆ ನೀಡಿದ್ದರು. ಜೈಲಿಗೆ ಹೋಗಿದ್ದರು. ಇವತ್ತಿಗೂ ಜಾಮೀನಿನಲ್ಲಿ ಇದ್ದಾರೆ. ಜಾಮೀನಿನಲ್ಲಿ ಇದ್ದರೂ, ಭ್ರಷ್ಟಾಚಾರ ದಲ್ಲಿದ್ದರೂ ಕಾಂಗ್ರೆಸ್ ಅವರಿಗೆ ಉಡುಗೊರೆಯಾಗಿ ಮಂತ್ರಿ ಸ್ಥಾನವನ್ನು ನೀಡಿದೆ ಎಂದು ಆಕ್ಷೇಪಿಸಿದರು. ಇದಕ್ಕೆ ಸಂಬಂಧಿಸಿದ ವಿಡಿಯೋ ಒಂದನ್ನು ಪ್ರದರ್ಶಿಸಿದರು. ನಾಗೇಂದ್ರ ಅವರು ಮತ್ತೆ ಎಲ್ಲರ ಹೆಸರು ಹೇಳುವುದಾಗಿ ತಿಳಿಸಿದ್ದು, ಅವರಿಗೆ ಹೆದರಿ ಸಚಿವ ಸ್ಥಾನ ನೀಡಿರಬೇಕು ಎಂದು ತಿಳಿಸಿದರು.

ಮಾಜಿ ಸಚಿವ ತಿಮ್ಮಾಪುರ ಮತ್ತು ಮಾಜಿ ಶಾಸಕ ನಂಜಯ್ಯನಮಠ ಕಾರಿನಲ್ಲಿ ಮಾತನಾಡಿದ ವಿಡಿಯೋ ಇದಾಗಿದೆ. ಇವರ ಬಳಿ ಹಣ ಇಲ್ಲ; ಪ್ರಾಮಾಣಿಕರಿದ್ದಾರೆ ಎಂದು ವೇಣುಗೋಪಾಲರಿಗೆ ತಿಳಿಸಿದಾಗ, ಹಣ ಮಾಡದೇ ಪ್ರಾಮಾಣಿಕರಾಗಿ ಇರಿ ಎಂದು ನಿಮಗೆ ಯಾರು ಹೇಳಿದ್ದಾರೆ ಎಂದು ಪ್ರಶ್ನಿಸಿದ ಕುರಿತು ಮಾತನಾಡಿದ್ದಾರೆ. ಕಾಂಗ್ರೆಸ್ ನಾಯಕರೇ ಭ್ರಷ್ಟಾಚಾರಿಗಳನ್ನು ಉತ್ಪತ್ತಿ ಮಾಡುವವರು ಎಂಬುದು ಇದರಿಂದ ಸಾಬೀತಾಗಿದೆ ಎಂದು ದೂರಿದರು. ಇವರು ದೇಶ ಉದ್ಧಾರ ಮಾಡಲು ಬಂದವರಲ್ಲ; ಇವರು ದೇಶ

### ಸಭಾಪತಿ ರಾಜೀನಾಮೆ ಕೇಳಿದ್ದು ಸರಿಯಲ್ಲ

ಸಲೀಂ ಅಹ್ಮದ್ ಅವರು ಸಭಾಪತಿಗಳನ್ನು ಭೇಟಿ ಮಾಡಿ ರಾಜೀನಾಮೆ ಕೇಳಿದ್ದಾರೆ. ರಾಜೀನಾಮೆ ಕೇಳಲು ಅವರು ಯಾರು ಎಂದು ಪ್ರಶ್ನಿಸಿದರು. ಅಸೆಂಬ್ಲಿ ಅವಧಿ 5 ವರ್ಷ. ವಿಧಾನ ಪರಿಷತ್ ಯಾವತ್ತೂ ವಿಸರ್ಜನೆ ಆಗುವುದಿಲ್ಲ. ಅವರಾಗಿಯೇ ಸಭಾಪತಿ ರಾಜೀನಾಮೆ ಕೊಟ್ಟರೆ ಆ ಸ್ಥಾನ ಖಾಲಿ ಆಗುತ್ತದೆ. ಸಭಾಪತಿಗಳು ಪಕ್ಷದ ಆಸ್ತಿಯೇ, ಕಾಂಗ್ರೆಸ್ಸಿಗೆ ನೀತಿ, ತತ್ವ ಇಲ್ಲವೇ, ಲೆಟರ್‌ಹೆಡ್‌ನಲ್ಲಿ ಹೆಸರು ಕಳಿಸಿದ್ದು ಸರಿಯೇ ಎಂದು ಕೇಳಿದರು. ಸಭಾಪತಿಗಳು ಯಾವ ಒತ್ತಡಕ್ಕೂ ಮಣಿಯಬೇಕಾಗಿಲ್ಲ. ಹೊರಟ್ಟಿ ಅವರ ಬಗ್ಗೆ 2 ದಿನಗಳ ಕಾಲ ಗುಣಗಾನ ಮಾಡಿ ಒಂದು ವರ್ಷವೂ ಆಗಿಲ್ಲ. ಅವರ ಮೇಲೆ ಒತ್ತಡ ಹಾಕುವುದು ಕಾನೂನುಬಾಹಿರ ಮತ್ತು ಸಂವಿಧಾನವಿರೋಧಿ ಎಂದು ಎಚ್ಚರಿಸಿದರು. ಅವಿಶ್ವಾಸ ಮಂಡಿಸಿದರೆ ಚರ್ಚೆಗೆ ಸಿದ್ಧರಿದ್ದೇವೆ ಎಂದು ಹೇಳಿದರು. ಇವರು ರಬ್ಬರ್ ಸ್ಟಾಂಪ್ ಸಿಎಂ ಎಂದುಕೊಂಡಿದ್ದಾರೆ. ವೇಣುಗೋಪಾಲ್‌ಗೆ ತಲೆಯಲ್ಲಿ ಬುದ್ಧಿ ಇದೆಯೇ ಎಂದು ಛಲವಾದಿ ನಾರಾಯಣ ಸ್ವಾಮಿ ಹೇಳಿದರು.

## ಶಾಸಕ ಸ್ಥಾನಕ್ಕೆ ರಾಜೀನಾಮೆ ಸಂಪೂರ್ಣ ಸುಳ್ಳು: ಬಿ.ಆರ್. ಪಾಟೀಲ್ ಸ್ಪಷ್ಟನೆ

**ಕಲಬುರಗಿ, ಆ.5:** ಇತ್ತೀಚಿನ ರಾಜಕೀಯ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡುತ್ತಿದ್ದೇನೆ ಎಂಬ ಸುದ್ದಿ ಸಂಪೂರ್ಣ ಸುಳ್ಳು ಎಂದು ಆಳಂದ ಶಾಸಕ ಬಿ.ಆರ್.ಪಾಟೀಲ್ ಸ್ಪಷ್ಟಪಡಿಸಿದ್ದಾರೆ.

ಈ ಕುರಿತ ಸುದ್ದಿ ಸಾಮಾಜಿಕ ಜಾಲತಾಣಗಳು ಹಾಗೂ ಕೆಲ ಮಾಧ್ಯಮಗಳಲ್ಲಿ ಪ್ರಸಾರವಾದ ಬಗೆಗೆ ಗಮನಕ್ಕೆ ಬಂದಿದೆ. ಅದು ಸುಳ್ಳು ಹಾಗೂ ದಾರಿತಪ್ಪಿಸುವ ಸುದ್ದಿ. ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಸ್ಥಾನಕ್ಕೆ ಮಾತ್ರವೇ ನಾನು ಜೂನ್ 5ರಂದು ರಾಜೀನಾಮೆ ನೀಡಿದ್ದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಶಾಸಕ ಬಿ.ಆರ್.ಪಾಟೀಲ ಬರೆದುಕೊಂಡಿದ್ದಾರೆ. ಕ್ಷೇತ್ರದ ಜನರ ಪ್ರೀತಿ, ವಿಶ್ವಾಸ ಮತ್ತು ಆಶೀರ್ವಾದದಿಂದ ನಾನು ಶಾಸಕನಾಗಿ ಆಯ್ಕೆಯಾಗಿದ್ದೇನೆ. ಶಾಸಕ ಸ್ಥಾನವು ನನಗೆ ದೊರೆತಿರುವ ಹುದ್ದೆಯಲ್ಲ; ಅದು ಜನತೆ ನನ್ನ ಮೇಲೆ ಇಟ್ಟಿರುವ ನಂಬಿಕೆ ಮತ್ತು ಜವಾಬ್ದಾರಿಯ ಸಂಕೇತ. ಆ ಜನಾದೇಶಕ್ಕೆ ದ್ರೋಹ ಮಾಡುವ ಪ್ರಶ್ನೆಯೇ ಇಲ್ಲ. ನನ್ನನ್ನು ಗೆಲ್ಲಿಸಿದ ಜನರ ಆಶಯಗಳನ್ನು ಈಡೇರಿಸುವುದು ನನ್ನ ಮೊದಲ ಆದ್ಯತೆ. ಸಚಿವ ಸ್ಥಾನ ಇರಲಿ, ಇಲ್ಲದಿರಲಿ, ನಾನು ನನ್ನ ಕ್ಷೇತ್ರದ ಜನರ ಸೇವೆಗೆ ಸದಾ ಬದ್ಧನಾಗಿದ್ದೇನೆ ಎಂದು ಸ್ಪಷ್ಟಪಡಿಸಿದ್ದಾರೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಸಚಿವ ರಾಮಲಿಂಗಾರೆಡ್ಡಿಗೆ ಅರ್ಚಕರ ಕಣ್ಮಣಿ ಬಿರುದು ಪ್ರದಾನ



## ಮುಜರಾಯಿ ಖಾತೆ ನೀಡುವಂತೆ ಅರ್ಚಕರ ಸಮುದಾಯದಿಂದ ಸಿಎಂಗೆ ಮನವಿ

**ಬೆಂಗಳೂರು, ಆ.5:** ರಾಜ್ಯ ಮುಜರಾಯಿ ದೇಗುಲಗಳ ಅರ್ಚಕರು, ಆಗಮಿಕರು ಹಾಗೂ ಮುಜರಾಯಿ ಇಲಾಖೆ ನೌಕರರ ಸಂಘದ ಆಶ್ರಯದಲ್ಲಿ ಬೆಂಗಳೂರಿನ ವಸಂತನಗರದ ಅಂಬೇಡ್ಕರ್ ಭವನದಲ್ಲಿ ಬುಧವಾರ ನಡೆದ ರಾಜ್ಯ ಮುಜರಾಯಿ ದೇಗುಲಗಳ ಅರ್ಚಕರ ಬೃಹತ್ ಸಮಾವೇಶದಲ್ಲಿ ಸಚಿವ ರಾಮಲಿಂಗಾರೆಡ್ಡಿ ಅವರಿಗೆ "ಅರ್ಚಕರ ಕಣ್ಮಣಿ" ಎಂಬ ಬಿರುದು ನೀಡಿ ಸನ್ಮಾನಿಸಲಾಯಿತು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿ ಹಲವು ಗಣ್ಯರು ಹಾಗೂ ಸಾವಿರಾರು ಅರ್ಚಕರು ಈ ಸಮ್ಮೇಳನದಲ್ಲಿ ಪಾಲ್ಗೊಂಡಿದ್ದರು.

ಸಮಾವೇಶದಲ್ಲಿ ಮಾತನಾಡಿದ ರಾಜಗುರು ದ್ವಾರಕಾನಾಥ್ ಅವರು, ರಾಮಲಿಂಗಾರೆಡ್ಡಿ ಅವರು ಮುಜರಾಯಿ ಇಲಾಖೆಗೆ ಸಂಜೀವಿನಿಯಂತೆ ಕೆಲಸ ಮಾಡಿದ್ದಾರೆ. ಬಡ ಅರ್ಚಕರ ಸುದೀರ್ಘ ಸಮಸ್ಯೆಗೆ ಸ್ಪಂದಿಸಿದ್ದಾರೆ. ಡಿ.ಕೆ. ಶಿವಕುಮಾರ್ ಅವರು ಪ್ರಸ್ತುತ ಅವಧಿ ಸೇರಿದಂತೆ ಮುಂದಿನ 5 ವರ್ಷಗಳ ಕಾಲ ರಾಜ್ಯದ ಸಿಎಂ ಆಗಿ ಆಡಳಿತ ನಡೆಸಲಿ ಎಂದು ಆಶೀರ್ವದಿಸಿದರು.

ರಾಜ್ಯದಲ್ಲಿ ಮಳೆ-ಬೆಳೆ ಚೆನ್ನಾಗಿ ಆಗಲು ಮೈಸೂರು ಮಹಾರಾಜರ ಕಾಲದ ಪದ್ಧತಿಯಂತೆ ರಾಜ್ಯದ 36,000 ಮುಜರಾಯಿ ದೇವಾಲಯಗಳಲ್ಲಿ ಅರ್ಚಕರಿಂದ ರುದ್ರಜಪ ಮಾಡಿಸಲು ಸರ್ಕಾರ ಸುತ್ತೋಲೆ ಹೊರಡಿಸಬೇಕು ಮತ್ತು ಉಸ್ತುವಾರಿಗೆ ಅಧಿಕಾರಿಗಳನ್ನು ನೇಮಿಸಬೇಕು ಎಂದು ರಾಜಗುರು ದ್ವಾರಕನಾಥ್ ಸರ್ಕಾರವನ್ನು ಒತ್ತಾಯಿಸಿದರು.

ಬಡ ಅರ್ಚಕರು ಹಾಗೂ ಉತ್ತರ ಕರ್ನಾಟಕ ಭಾಗದಲ್ಲಿ ಮನೆಗಳಿಲ್ಲದೆ ಕಷ್ಟಪಡುತ್ತಿರುವ ಜನರಿಗೆ ಸರ್ಕಾರ ಮನೆಗಳನ್ನು ಕಟ್ಟಿಸಿಕೊಡಬೇಕೆಂದು ವೇದಿಕೆಯಲ್ಲಿ ಮನವಿ ಮಾಡಲಾಯಿತು.

ಸಮಾವೇಶವನ್ನು ಉದ್ದೇಶಿಸಿ ಮಾತನಾಡಿದ ಮುಜರಾಯಿ ದೇವಾಲಯಗಳ ಅರ್ಚಕರ ಸಂಘದ ರಾಜ್ಯಾಧ್ಯಕ್ಷ ಶ್ರೀವತ್ಸ ಅವರು, ಸಚಿವ ರಾಮಲಿಂಗಾರೆಡ್ಡಿ ಅವರಿಗೆ ಮತ್ತೆ ಮುಜರಾಯಿ ಖಾತೆಯನ್ನು ವಹಿಸುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಬಹಿರಂಗವಾಗಿ ಮನವಿ ಸಲ್ಲಿಸಿದರು.

ಸಾಲು ಸಾಲು ಬೇಡಿಕೆಗಳ ಮನವಿ ಪತ್ರ ಸಲ್ಲಿಸಿದ ಅವರು, ನಮ್ಮ ಅರ್ಚಕರ ಸಂಘದ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಿದರೆ ಮುಂದಿನ 10 ವರ್ಷಗಳ ಕಾಲ ನೀವೇ ರಾಜ್ಯದ ಮುಖ್ಯಮಂತ್ರಿಯಾಗಿ ಇರುತ್ತೀರಿ ಎಂದು ಸಿಎಂ ಅವರಿಗೆ ಶುಭ ಹಾರೈಸಿದರು. ಈ ವೇಳೆ ನೆರೆದಿದ್ದ ಅರ್ಚಕರು ರಾಮಲಿಂಗಾರೆಡ್ಡಿ ಅವರಿಗೆ ಮುಜರಾಯಿ ಖಾತೆ ನೀಡುವಂತೆ ಘೋಷಣೆಗಳನ್ನು ಕೂಗಿದರು.

## ಧರ್ಮವನ್ನು ಗುತ್ತಿಗೆ ಪಡೆದಿರುವವರು ನಿಮ್ಮ ಬದುಕಿನಲ್ಲಿ ಬದಲಾವಣೆ ತಂದಿದ್ದಾರಾ?

■ ನಿಮ್ಮ ಮನೆ, ದೇವಾಲಯ ಕಾಪಾಡಿಕೊಂಡಂತೆ ಸರ್ಕಾರವನ್ನು ಕಾಪಾಡಿಕೊಳ್ಳಿ: ಅರ್ಚಕರಿಗೆ ಸಿಎಂ ಡಿ.ಕೆ. ಶಿವಕುಮಾರ್ ಕರೆ

**ಬೆಂಗಳೂರು, ಆ.5:** ರಾಮಲಿಂಗಾರೆಡ್ಡಿ ಅವರನ್ನು ದೇವರ ಬಳಿ ಕರೆದೊಯ್ದು ಈ ಸರ್ಕಾರ ಇನ್ನು ಹತ್ತು ವರ್ಷ ಅಧಿಕಾರದಲ್ಲಿ ಇರಬೇಕು ಎಂದು ಪ್ರಾರ್ಥನೆ ಮಾಡಿ, ಸಂಕಲ್ಪ ಮಾಡಿದ್ದು ನನಗೆ ಬಹಳ ಸಂತೋಷ ತಂದಿದೆ. ಈ ಧರ್ಮವನ್ನು ಕೆಲವು ಪಕ್ಷದವರು ಗುತ್ತಿಗೆಗೆ ಪಡೆದಿದ್ದಾರೆ. ಆದರೆ ಅವರು ಮಾಡೋದು, ಖಾಲಿ ಬುಟ್ಟಿ, ಬೇವಿನಸೊಪ್ಪು ನಂದೇ ಬೆಳಗೋ ಪೂಜಾರಿ ಎಂಬಂತೆ ಖಾಲಿ ಟ್ರಂಕು. ಶಾಲು ಹಾಕಿಕೊಂಡು ದೇವರು, ಧರ್ಮ ಎಲ್ಲವೂ ನಮ್ಮದೇ ಎನ್ನುತ್ತಾರೆ. ನಾನು, ರಾಮಲಿಂಗಾರೆಡ್ಡಿ ಹಿಂದೂಗಳಲ್ಲವೇ, ಸಿದ್ದರಾಮಯ್ಯ, ಮಲ್ಲಿಕಾರ್ಜುನ ಖರ್ಗೆ ಅವರು ಹಿಂದೂ ಅಲ್ಲವೇ ಎಂದು ಸಿಎಂ ಡಿ.ಕೆ.ಶಿವಕುಮಾರ್ ಪ್ರಶ್ನಿಸಿದರು.

ಕರ್ನಾಟಕ ರಾಜ್ಯ ಮುಜರಾಯಿ ದೇವಾಲಯಗಳ ಅರ್ಚಕರ ಆಗಮಿಕರ ಮತ್ತು ನೌಕರರ ಸಂಘದ ಸಮಾವೇಶ ಹಾಗೂ ಸಚಿವ ರಾಮಲಿಂಗಾರೆಡ್ಡಿ ಅವರ ಅಭಿನಂದನಾ ಸಮಾರಂಭ ಉದ್ಘಾಟಿಸಿ ಮಾತನಾಡಿ, ಬೇರೆ ಸರ್ಕಾರಗಳ ಅವಧಿಯಲ್ಲಿ ನಿಮ್ಮ ಬದುಕಿನಲ್ಲಿ ಬದಲಾವಣೆ ತಂದಿದ್ದರೆ ನಾವು ಪ್ರಶ್ನೆ ಮಾಡುತ್ತಿರಲಿಲ್ಲ. ನಾವು ನಮ್ಮ ಕೆಲಸಕ್ಕೆ ಕೂಲಿ ಕೇಳುತ್ತೇವೆ. ಅವರು ಶಾಲು ಹಾಕಿಕೊಂಡು ರಾಮ ರಾಮ ಎಂದಾಕ್ಷಣ ಧರ್ಮರಕ್ಷಕರೇ? ರಾಮಮಂದಿರಕ್ಕೆ ನಾವು ನೀವೆಲ್ಲರೂ ಇಟ್ಟಿಗೆ ಕಾಸು ದೇಣಿಗೆ ನೀಡಿದೆವು. ಅದೆಲ್ಲವೂ ಏನಾದವು? ಈಗ ಮರ್ಯಾದೆ ಹೋಗಿಲ್ಲವೇ? ನಿಮಗೆ ಯಾವುದೇ ಕಾರಣಕ್ಕೂ ಅವಮಾನ ವಾಗಬಾರದು ಎಂದು ನಾವು ತೀರ್ಮಾನಿಸಿ ದೊಡ್ಡ ದೇವಾಲಯಗಳ ಹುಂಡಿ ಬಳಿ ಹಾಗೂ ಅದರ ಹಣ ತೆಗೆಯುವಾಗ ಸಿಸಿಟಿವಿ ಕ್ಯಾಮೆರಾ ಅಳವಡಿಸಲು ಮುಂದಾಗಿದ್ದೇವೆ. ನಿಮಗೆ ದೇವರ ದುಡ್ಡು ತಿನ್ನುವ ಆಸೆ ಇಲ್ಲ ಎಂದು ಗೊತ್ತಿದೆ ಎಂದು ತಿಳಿಸಿದರು.

### ರಾಮಲಿಂಗಾರೆಡ್ಡಿಗೆ ಮುಜರಾಯಿ ಖಾತೆ ನೀಡಲು ಸಿದ್ಧ

ನೀವು ರಾಮಲಿಂಗಾ ರೆಡ್ಡಿ ಅವರಿಗೆ ಮುಜರಾಯಿ ಇಲಾಖೆ ಜವಾಬ್ದಾರಿ ನೀಡಬೇಕು ಎಂದು ಬೇಡಿಕೆ ಇಟ್ಟಿದ್ದೀರಿ. ಅದರಂತೆ ಅವರಿಗೆ ಮುಜರಾಯಿ ಇಲಾಖೆ ನೀಡಲು ಸಿದ್ಧ. ನೀವೂ ಅವರೊಂದಿಗೆ ಚರ್ಚೆ ಮಾಡಿ. ನಿಮ್ಮ ಬೇಡಿಕೆ ವಿಚಾರ, ಅವರೊಂದಿಗೆ ನಾನೂ ಚರ್ಚೆ ಮಾಡುವೆ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.

### ಗ್ರಾಮೀಣ ದೇವಾಲಯಗಳ ಅರ್ಚಕರಿಗೆ ತರಬೇತಿಗೆ ಸಹಕಾರ

ಅರ್ಚಕರ ಸಂಘದವರು ಹಾಗೂ ಮಠಗಳು ಕೂತು ಚರ್ಚೆ ಮಾಡಿ ಹಳ್ಳಿಗಳಲ್ಲಿ ಇರುವ 34 ಸಾವಿರ ದೇವಾಲಯಗಳಲ್ಲಿ ಪೂಜೆ ಮಾಡುವವರಿಗೆ ಸಂಸ್ಕಾರ ಕಲಿಸಿ. ನೀವು ಅವರಿಗೆ 3 ತಿಂಗಳು ತರಬೇತಿ ನೀಡಿ, ಅದಕ್ಕೆ ಬೇಕಾದ ಸಹಕಾರ ಸರ್ಕಾರ ನೀಡಲಿದೆ. ವಿದ್ಯೆ ಯಾರೊಬ್ಬರ ಮನೆ ಆಸ್ತಿಯೇ, ನೀವು ನಿಮ್ಮ ವಿದ್ಯೆ ದಾನ ಮಾಡಬಹುದಲ್ಲವೇ, ನಾನು ನನ್ನ ಕ್ಷೇತ್ರದಲ್ಲಿ 300 ದೇವಾಲಯಗಳ ನಿರ್ಮಾಣ, ಜೀರ್ಣೋದ್ಧಾರ ಮಾಡಿದ್ದೇವೆ. ಯಾರು ಭಕ್ತಿಯಿಂದ ಪ್ರಾರ್ಥನೆ ಮಾಡುತ್ತಾರೋ ಅವರಿಗೆ ನೆಮ್ಮದಿ ಸಿಗುತ್ತದೆ. ಬಂಗಾರಪ್ಪ ಅವರ ಕಾಲದಲ್ಲಿ ಆರಾಧನಾ ಯೋಜನೆ ಮಾಡಿ ಸಣ್ಣ ದೇವಾಲಯಗಳ ಅಭಿವೃದ್ಧಿಗೆ ಮುಂದಾಗಿದ್ದರು ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

# 370ನೇ ವಿಧಿ ರದ್ದತಿಯಿಂದ ಜಮ್ಮು-ಕಾಶ್ಮೀರ ಲಡಾಖ್‌ನಲ್ಲಿ ಅಭಿವೃದ್ಧಿಯ ನವ ಮನ್ವಂತರ: ಮೋದಿ



**ನವದೆಹಲಿ, ಆ.5:** ಏಳು ವರ್ಷಗಳ ಹಿಂದೆ 370 ಮತ್ತು 35 (ಎ) ವಿಧಿಗಳನ್ನು ರದ್ದು ಪಡಿಸುವುದರಿಂದ ಜಮ್ಮು ಮತ್ತು ಕಾಶ್ಮೀರ ಮತ್ತು ಲಡಾಖ್‌ನಲ್ಲಿ ನಿರ್ಣಾಯಕ ಹೊಸ ಅಧ್ಯಾಯ ಆರಂಭವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಬುಧವಾರ ಹೇಳಿದ್ದಾರೆ,

ಆಗಸ್ಟ್ 5, 2019ರ ಐತಿಹಾಸಿಕ ನಿರ್ಧಾರದಿಂದ ಎರಡು ಕೇಂದ್ರಾಡಳಿತ ಪ್ರದೇಶಗಳು ಗಮನಾರ್ಹ ಅಭಿವೃದ್ಧಿ, ಹೆಚ್ಚಿನ ಅವಕಾಶಗಳು ಮತ್ತು ಸಾಂವಿಧಾನಿಕ ಸಬಲೀಕರಣಕ್ಕೆ ಸಾಕ್ಷಿಯಾಗಿವೆ ಎಂದು ಪ್ರತಿಪಾದಿಸಿದರು.

ವಿಶೇಷ ಸ್ಥಾನಮಾನದ ನಿಬಂಧನೆಗಳನ್ನು ರದ್ದುಪಡಿಸುವುದು ಭಾರತದ ಸಂವಿಧಾನದ ಸಂಪೂರ್ಣ ಅನ್ವಯವನ್ನು ಖಚಿತಪಡಿಸಿಕೊಳ್ಳುವ ಮೂಲಕ ಮತ್ತು ಬಹು ವಲಯಗಳಲ್ಲಿ ಅವಕಾಶಗಳನ್ನು ವಿಸ್ತರಿಸುವ ಮೂಲಕ ಜನರ ಜೀವನವನ್ನು ಪರಿವರ್ತಿಸಿದೆ ಎಂದು ಪ್ರಧಾನಿ ಹೇಳಿದರು. "ಏಳು ವರ್ಷಗಳ ಹಿಂದೆ, ಈ ದಿನ, 370 ಮತ್ತು 35 (ಎ) ವಿಧಿಗಳು ಇತಿಹಾಸವಾಯಿತು, ಇದು ಜಮ್ಮು ಮತ್ತು ಕಾಶ್ಮೀರ ಹಾಗೂ ಲಡಾಖ್ನ ಪ್ರಯಾಣದಲ್ಲಿ ನಿರ್ಣಾಯಕ ಹೊಸ ಅಧ್ಯಾಯವನ್ನು ಗುರುತಿಸುತ್ತದೆ" ಎಂದು ಮೋದಿ ಹೇಳಿದರು. "ಅಂದಿನಿಂದ, ಜಮ್ಮು ಮತ್ತು ಕಾಶ್ಮೀರ ಮತ್ತು ಲಡಾಖ್ ಜನರ ಜೀವನವು ವ್ಯಾಪಕ ಪರಿವರ್ತನೆಗೆ ಸಾಕ್ಷಿಯಾಗಿದೆ. ಮೂಲಸೌಕರ್ಯ ವಿಸ್ತರಿಸಿದೆ, ಶಿಕ್ಷಣ, ಆರೋಗ್ಯ ರಕ್ಷಣೆ, ಉದ್ಯಮಶೀಲತೆ ಮತ್ತು ಕ್ರೀಡೆಯಂತಹ ಕ್ಷೇತ್ರಗಳಲ್ಲಿ ಅವಕಾಶಗಳು ಬೆಳೆದಿವೆ" ಎಂದು ಅವರು ಹೇಳಿದರು.

ನಮ್ಮ ರಾಷ್ಟ್ರವು ಡಾ. ಶ್ಯಾಮಪ್ರಸಾದ್ ಮುಖರ್ಜಿಯವರ 125 ನೇ ಜನ್ಮ ದಿನಾಚರಣೆಯನ್ನು ಆಚರಿಸುವ ವರ್ಷವಾಗಿರುವುದರಿಂದ ಈ ವರ್ಷ ಆಗಸ್ಟ್ 5 ಇನ್ನೂ ಹೆಚ್ಚಿನ ಮಹತ್ವವನ್ನು ಪಡೆದುಕೊಂಡಿದೆ. ರಾಷ್ಟ್ರೀಯ ಏಕತೆಗೆ ಅವರ ಜೀವಮಾನದ ಬದ್ಧತೆಯು ಪೀಳಿಗೆಗೆ ಸ್ಫೂರ್ತಿ ನೀಡುತ್ತಲೇ ಇದೆ. ದಶಕಗಳ ಹಿಂದೆ ಅವರು ಕಲ್ಪಿಸಿಕೊಂಡಿದ್ದನ್ನು ಆಗಸ್ಟ್ 5, 2019 ರಂದು ಐತಿಹಾಸಿಕವಾಗಿ ಸಾಧಿಸಲಾಯಿತು" ಎಂದು ಮೋದಿ ಹೇಳಿದರು.

# ದರ್ಶನ್ ಅಭಿಮಾನಿಗಳ ಅಬ್ಬರ: ಅರ್ಧಕ್ಕೇ ಭಾಷಣ ನಿಲ್ಲಿಸಿದ ಸಿಎಂ ಡಿಕೆಶಿ



**ರಾಮನಗರ, ಆ.5:** ನಗರದ ಚಾಮುಂಡೇಶ್ವರಿ ಕರಗ ಮಹೋತ್ಸವದ ವೇದಿಕೆಯಲ್ಲಿ ನಟ ದರ್ಶನ್ ಅಭಿಮಾನಿಗಳು ಹಬ್ಬಿಸಿದ 'ಡಿ ಬಾಸ್' ಘೋಷಣೆಗಳ ಅಬ್ಬರಕ್ಕೆ ಸಿಎಂ ಡಿ.ಕೆ. ಶಿವಕುಮಾರ್ ಅವರು ಭಾಷಣವನ್ನು ಅರ್ಧಕ್ಕೇ ಮೊಟಕುಗೊಳಿಸಿ ಕುಳಿತ ಘಟನೆ ತಡರಾತ್ರಿ ನಡೆದಿದೆ.

ಕರಗ ಉತ್ಸವದಲ್ಲಿ ಭಾಗವಹಿಸಲು ತಡರಾತ್ರಿ ಆಗಮಿಸಿದ್ದ ಮುಖ್ಯಮಂತ್ರಿಗಳು ವೇದಿಕೆ ಏರಿ ಭಾಷಣ ಆರಂಭಿಸುತ್ತಿದ್ದಂತೆಯೇ, ನೆರೆದಿದ್ದ ದರ್ಶನ್ ಬೆಂಬಲಿಗರು ನಿರಂತರವಾಗಿ 'ಡಿ ಬಾಸ್, ಡಿ ಬಾಸ್' ಎಂದು ಕೂಗಲಾರಂಭಿಸಿದರು. ಅಭಿಮಾನಿಗಳನ್ನು ಸಮಾಧಾನಪಡಿಸಲು ಎಷ್ಟೇ ಪ್ರಯತ್ನಿಸಿದರೂ ಪರಿಸ್ಥಿತಿ ಸಹಜ ಸ್ಥಿತಿಗೆ ಬಾರದಿದ್ದಾಗ, ಸಿಎಂ ಕೆಲಕಾಲ ಮೈಕ್ ಪಕ್ಕಕ್ಕಿಟ್ಟು ಸುಮ್ಮನಾದರು. ಘೋಷಣೆಗಳು ತಣಿಯದಿದ್ದಾಗ ಮತ್ತೆ ಮೈಕ್ ಕೈಗೆತ್ತಿಕೊಂಡ ಶಿವಕುಮಾರ್, "ನಿಮ್ಮ ಭಾವನೆಗಳು ನನಗೆ ಅರ್ಥವಾಗುತ್ತವೆ, ನೀವು ದರ್ಶನ್ ಬಗ್ಗೆ ಮಾತನಾಡುತ್ತಿದ್ದೀರಿ. ಆದರೆ ನಾವು ಎಲ್ಲಿದ್ದೇವೆ, ಇದು ಎಂತಹ ಪವಿತ್ರವಾದ ಜಾಗ, ಈ ಧಾರ್ಮಿಕ ವೇದಿಕೆಯಲ್ಲಿ ಏನು ಮಾತನಾಡಬೇಕು ಎಂಬ ವಿವೇಚನೆ ನನಗಿದೆ. ಎಲ್ಲರೂ ಸ್ವಲ್ಪ ತಾಳ್ಮೆಯಿಂದಿರಿ ಎಂದು ಮನವಿ ಮಾಡಿದರು. ಮುಂದುವರಿದು ಮಾತನಾಡಿದ ಅವರು, "ನಾನು ಈ ರಾಜ್ಯಕ್ಕೆ ಮುಖ್ಯಮಂತ್ರಿಯಾಗಿರಬಹುದು, ಆದರೆ ಮೂಲತಃ ಈ ರಾಮನಗರದ ಮಣ್ಣಿನ ಮಗ. ನಿಮ್ಮ ಮನೆ ಮಗನ ಬಳಿ ಯಾವ ಸಮಯದಲ್ಲಿ ಏನನ್ನು ಮನವಿ ಮಾಡಬೇಕು ಎಂಬ ಕನಿಷ್ಠ ಜ್ಞಾನ ಬೇಡವೇ. ದರ್ಶನ್ ವಿಚಾರ ಕಾನೂನಿಗೆ ಸಂಬಂಧಿಸಿದ್ದು, ಅದರ ಮೇಲೆ ನನ್ನ ಮೇಲೆ ಒತ್ತಡ ಹೇರುವುದು ಸರಿಯಲ್ಲ. ನಾವಿಲ್ಲಿ ಮಾಡಬಹುದಾದದ್ದು ದೇವರಿಗೆ ಪ್ರಾರ್ಥನೆ ಮಾತ್ರ. ಪ್ರಯತ್ನಗಳು ವಿಫಲವಾಗಬಹುದು, ಆದರೆ ಪ್ರಾರ್ಥನೆ ಎಂದಿಗೂ ವಿಫಲವಾಗುವುದಿಲ್ಲ ಎಂದು ಮಾರ್ಮಿಕವಾಗಿ ಹೇಳಿದರು.

ಜನರ ಗದ್ದಲದಿಂದಾಗಿ ಹಲವು ಬಾರಿ ಭಾಷಣ ಮುಂದುವರಿಸಲು ಯತ್ನಿಸಿ ವಿಫಲರಾದ ಸಿಎಂ, ಕೊನೆಗೆ ಬೇಸರದಿಂದಲೇ ಮಾತು ಮುಗಿಸಿ ಆಸನಕ್ಕೆ ಮರಳಿದರು.

# ಉದ್ಯೋಗ ಖಾತ್ರಿ: ಗ್ರಾಪಂಗೆ ಎಸ್‌ಓಪಿ, ಮಾರ್ಗಸೂಚಿ ಕಳಿಸಿ: ಸಚಿವ ಈಶ್ವರ ಖಂಡ್ರೆ



**ಬೆಂಗಳೂರು, ಆ.5:** ಮಳೆ ಕೊರತೆಯ ಪ್ರಸಕ್ತ ಸನ್ನಿವೇಶದಲ್ಲಿ ಎಲ್ಲ ಅರ್ಹ ಗ್ರಾಮೀಣರಿಗೆ ಉದ್ಯೋಗ ಖಾತ್ರಿಪಡಿಸಲು ಮತ್ತು ನಿತ್ಯ 5 ಲಕ್ಷ ಮಾನವ ದಿನ ಸೃಜನೆಗಾಗಿ ಗರಿಷ್ಠ ಉದ್ಯೋಗ ನೀಡುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಸೂಚಿಸಿದ್ದಾರೆ.

ಈ ಸಂಬಂಧ ಇಲಾಖೆಯ ಕಾರ್ಯದರ್ಶಿಯವರಿಗೆ ಲಿಖಿತ ಸೂಚನೆ ನೀಡಿರುವ ಅವರು, ಮನ್ರೇಗಾದ ಬದಲಾದ ರೂಪ ವಿಬಿಜಿ ರಾಮ್ ಜಿಯನ್ನು ಆರ್ಥಿಕ ಹೊರೆಯ ನಡುವೆಯೂ ರಾಜ್ಯ ಸರ್ಕಾರ ಬಡವರ, ವಂಚಿತರ ಹಿತದೃಷ್ಟಿಯಿಂದ ಜಾರಿಗೆ ತಂದಿದ್ದು, ಪ್ರಮಾಣಿತ ಕಾರ್ಯಾಚರಣೆ ಮಾನದಂಡ, ಆಡಳಿತಾತ್ಮಕ, ತಾಂತ್ರಿಕ ಮಾರ್ಗಸೂಚಿಗಳನ್ನು ಎಲ್ಲ ಗ್ರಾ.ಪಂ.ಗಳಿಗೆ ಕಳುಹಿಸಿ ಗರಿಷ್ಠ ಪ್ರಮಾಣದಲ್ಲಿ ಉದ್ಯೋಗ ನೀಡಿ, ಶಾಶ್ವತ ಮತ್ತು ಗುಣಮಟ್ಟದ ಆಸ್ತಿ ಸೃಷ್ಟಿಸುವಂತೆ ಆದೇಶಿಸಿದ್ದಾರೆ.

ಕೆಲವು ಪಿಡಿಓಗಳು ವಿಬಿಜಿ ರಾಮ್‌ಜಿ ಸ್ಪಷ್ಟ ಮಾರ್ಗಸೂಚಿ ಇಲ್ಲದ ಕಾರಣ ಅನುಷ್ಠಾನಕ್ಕೆ ತೊಡಕಾಗಿದೆ ಎಂದು ತಿಳಿಸಿದ್ದು, ವಿ ಬಿಜಿ ರಾಮ್ ಜಿಗೆ ಸಂಬಂಧಿಸಿದ ಪ್ರಮಾಣಿತ ಕಾರ್ಯಾಚರಣೆ ವಿಧಾನ (ಎಸ್.ಒ.ಪಿ.), ತಾಂತ್ರಿಕ ಮತ್ತು ಆಡಳಿತಾತ್ಮಕ ಮಾರ್ಗಸೂಚಿ, ಮಾದರಿ, ಅಂದಾಜು, ಕಾಮಗಾರಿ, ವೆಚ್ಚದ ಮಿತಿ, 60:40 ಕೂಲಿ-ಸಾಮಗ್ರಿ ಅನುಪಾತ, ಯುಕ್ತಧಾರಾ ಪೋರ್ಟಲ್ ಕಾರ್ಯವಿಧಾನ ಹಾಗೂ ಹೊಣೆಗಾರಿಕೆ ನಕ್ಷೆ, ಕ್ರಿಯಾ ಯೋಜನೆ ಸ್ವರೂಪ ಕುರಿತಂತೆ ಸ್ಪಷ್ಟ ಮಾಹಿತಿ ನೀಡಲು ಸೂಚನೆ ನೀಡಿದ್ದಾರೆ.

ಮುಖ್ಯಕಾರ್ಯದರ್ಶಿಗಳ ಸಮ್ಮುಖದಲ್ಲಿ ರಾಜ್ಯದ ಎಲ್ಲ ಜಿಪಂ ಸಿಇಓಗಳ ಜತೆಸಭೆ ನಡೆಸಿದ ಸಂದರ್ಭದಲ್ಲಿ ಯಾವುದೇ ಸಿಇಓ ವಿಬಿಜಿ ರಾಮ್ ಜಿ ಅನುಷ್ಠಾನದಲ್ಲಿ ಸಮಸ್ಯೆ ಬಗ್ಗೆ ಪ್ರಸ್ತಾಪಿಸಿಲ್ಲವಾದರೂ, ಕೆಲವೆಡೆ ಗೊಂದಲ ಇದ್ದು, ಇದನ್ನು ನಿವಾರಿಸಿ ಎಂದು ತಿಳಿಸಿದ್ದಾರೆ. ಮಳೆ ಕೊರತೆಯಿಂದ ರೈತರು, ಗ್ರಾಮೀಣರು ಸಂಕಷ್ಟದಲ್ಲಿರುವ ಪ್ರಸಕ್ತ ಸನ್ನಿವೇಶದಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಗ್ರಾಮೀಣ ಬಡವರಿಗೆ, ವಂಚಿತರಿಗೆ, ಶೋಷಿತರಿಗೆ, ವಿಶೇಷ ಚೇತನರಿಗೆ, ಮಹಿಳೆಯರಿಗೆ, ದಲಿತರಿಗೆ ಉದ್ಯೋಗ ದೊರಕದಿದ್ದರೆ ಯೋಜನೆಯ ಉದ್ದೇಶವೇ ಅರ್ಥ ಕಳೆದುಕೊಳ್ಳುತ್ತದೆ ಎಂದಿದ್ದಾರೆ.

**ಮನೆ ಮನೆ ಪ್ರಚಾರ ಮಾಡಿ:** ವಿಬಿಜಿ ರಾಮ್ ಜಿ ಅಡಿಯಲ್ಲಿ ಅನುಮೋದಿಸಲಾಗಿರುವ 318 ಕಾಮಗಾರಿಗಳ ವಿವರ, ಮಾದರಿ, ವಿನ್ಯಾಸ, ಬಿಓಸಿ ದರಪಟ್ಟಿ, ಪ್ರಮಾಣಿತ ಮಾನದಂಡ, ತಾಂತ್ರಿಕ ಟಿಪ್ಪಣಿ ಇತ್ಯಾದಿ ಸ್ಪಷ್ಟ ಮಾರ್ಗಸೂಚಿಯನ್ನು ಈ ವಾರಾಂತ್ಯದೊಳಗೆ ವಿಬಿಜಿ ರಾಮ್ ಜಿ ಯ ಎಲ್ಲ ಅನುಷ್ಠಾನಾಧಿಕಾರಿಗಳಿಗೆ ರವಾನಿಸಿ, ಕಟ್ಟುನಿಟ್ಟಾಗಿ ಯೋಜನೆಯನ್ನು ಜಾರಿ ಮಾಡಲು ಸೂಚನೆ ನೀಡಿದ್ದಾರೆ. ಐಪಿಸಿ ಅಂದರೆ ಅಂತರ ವ್ಯಕ್ತಿ ಸಂವಹನಕ್ಕೆ ಹೆಚ್ಚಿನ ಒತ್ತು ನೀಡಿ ಮನೆ ಮನೆ ಪ್ರಚಾರ ಮಾಡಿ ಗ್ರಾಮೀಣ ಜನರಿಗೆ ಹೊಸ ಯೋಜನೆ ಅಡಿಯಲ್ಲಿ ನೀಡುವ ವೈಯಕ್ತಿಕ ಮತ್ತು ಸಮುದಾಯ ಕಾಮಗಾರಿಗಳ ಬಗ್ಗೆ ಮಾಹಿತಿ ನೀಡಿ, ರಾಜ್ಯದಲ್ಲಿ ಪ್ರತಿ ನಿತ್ಯ ಕನಿಷ್ಠ 5 ಲಕ್ಷ ಜನರಿಗೆ ಉದ್ಯೋಗದ ಖಾತ್ರಿ ಒದಗಿಸಲು ಮತ್ತು ಪ್ರತಿ ತಿಂಗಳು ಕನಿಷ್ಠ 1.5 ಕೋಟಿ ಮಾನವ ದಿನ ಹಾಗೂ ಶಾಶ್ವತವಾದ ಗುಣಮಟ್ಟದ ಗ್ರಾಮೀಣ ಆಸ್ತಿ ಸೃಜನೆಗೆ ಕ್ರಮ ವಹಿಸಲು ಈಶ್ವರ ಖಂಡ್ರೆ ಸೂಚಿಸಿದ್ದಾರೆ.

# ಪ್ರಾಮಾಣಿಕ ಚುನಾವಣೆ ನಡೆಸಿದರೆ ಬಿಜೆಪಿಯವರು ಸೋಲುತ್ತಾರೆ



■ ಜೆನ್‌ಜೀಯಿಂದ ದೇಶದಲ್ಲಿ ಹೊಸ ಬದಲಾವಣೆ: ಸಚಿವ ಸಂತೋಷ್ ಲಾಡ್

**ಹುಬ್ಬಳ್ಳಿ, ಆ.5:** ದೇಶದಲ್ಲಿ ಬದಲಾವಣೆ ಗಾಳಿ ಬೀಸುತ್ತಿದೆ. ಜೆನ್ ಝೀಯಿಂದ ಹೊಸ ಬದಲಾವಣೆಗಳು ಆಗುತ್ತಿದೆ. ಬಿಜೆಪಿ ಯವರು ಪ್ರಾಮಾಣಿಕ ಚುನಾವಣೆ ಮಾಡಿದರೆ ಖಂಡಿತಾ ಸೋಲುತ್ತಾರೆ. ಹೀಗಾಗಿ ನ್ಯಾಯಯುತ ಚುನಾವಣೆ ಮಾಡಲು ಅವರು ಬಿಡುವುದಿಲ್ಲ ಎಂದು ಸಚಿವ ಸಂತೋಷ್ ಲಾಡ್ ಹೇಳಿದ್ದಾರೆ.

ನಗರದಲ್ಲಿ ಮಾತನಾಡಿದ ಅವರು, ಬಿಜೆಪಿಯವರು ಜನರ ಪ್ರಶ್ನೆಗಳಿಗೆ ಉತ್ತರಿಸುವುದಿಲ್ಲ. ಬದಲಾಗಿ ಧರ್ಮ, ದೇವರ ಹೆಸರಲ್ಲಿ ಮಾತ್ರ ಮಾತನಾಡುತ್ತಾರೆ. ಬಿಜೆಪಿಯವರು ಬರ ಅಧ್ಯಯನ ಮಾಡುತ್ತಿರುವುದು ಒಳ್ಳೆಯದು. ಅಧ್ಯಯನ ಮಾಡಿ ವರದಿಯನ್ನು ಕೇಂದ್ರ ಸರಕಾರಕ್ಕೆ ನೀಡಲಿ. ಕೇಂದ್ರದಿಂದ ರಾಜ್ಯಕ್ಕೆ ಬೆಳೆ ಪರಿಹಾರವಾದರೂ ಬರಲಿ ಎಂದಿದ್ದಾರೆ.

ಕೇಂದ್ರದಿಂದ ನಮಗೆ ಸಹಕಾರ ಸಿಗುತ್ತಿಲ್ಲ. ಕಾಂಗ್ರೆಸ್ ಆಡಳಿತವಿರುವ ರಾಜ್ಯಗಳಿಗೆ ಮಲತಾಯಿ ಧೋರಣೆ ಆಗುತ್ತಿದೆ. ಕೇಂದ್ರ ಸರ್ಕಾರದಿಂದ ಬೆಳೆ ಪರಿಹಾರ ದುಡ್ಡು ಬಂದಿಲ್ಲ. ಬಿಜೆಪಿ ರಾಜ್ಯಗಳಿಗೆ ನೀಡಿದಷ್ಟು ಅನುದಾನ ನಮಗೆ ಬಂದಿಲ್ಲ. ಬೆಳೆ ವಿಮೆಗೆ ಇರುವ ನಿಯಮಗಳು ಬದಲಾಗಬೇಕು. ಬಿಜೆಪಿಯವರು ಬರ ಅಧ್ಯಯನ ಮಾಡಿ ಕೇಂದ್ರ ಸರಕಾರಕ್ಕೆ ಸಲ್ಲಿಸಲಿ" ಎಂದರು.ರೈತರು ಮಧ್ಯಂತರ ಪರಿಹಾರ ಕೇಳುತ್ತಿರುವುದು ಸರಿಯಿದೆ. ಮುಖ್ಯಮಂತ್ರಿಗಳು ಬರ ವೀಕ್ಷಣೆ ಮಾಡುವಂತೆ ತಾಕೀತು ಮಾಡಿದ್ದಾರೆ. ಎಲ್ಲಾ ತಾಲೂಕಿಗೆ ಹೋಗಿ ಬರ ಅಧ್ಯಯನ ಮಾಡಿ ವರದಿ ನೀಡುತ್ತೇವೆ" ಎಂದರು.



ಲಾಲ್‌ಬಾಗ್‌ನಲ್ಲಿ ಗುರುವಾರ ಆರಂಭವಾಗಲಿರುವ ಸ್ವಾತಂತ್ರ್ಯೋತ್ಸವ ಫಲಪುಷ್ಪ ಪ್ರದರ್ಶನಕ್ಕೆ ಸಿದ್ಧತೆ ಭರದಿಂದ ಸಾಗಿದೆ.

# ಕೆಲ ಸಚಿವರ ಖಾತೆಯಲ್ಲಿ ಬದಲಾವಣೆ ಸಾಧ್ಯತೆ?

**ಬೆಂಗಳೂರು, ಆ.5:** ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಸಚಿವ ಸಂಪುಟದ ಸಚಿವರಿಗೆ ಖಾತೆ ಹಂಚಿಕೆ ಬಹುತೇಕ ಪೂರ್ಣ ಹಂತಕ್ಕೆ ಬಂದಿದ್ದು, ಯಾವುದೇ ಸಂದರ್ಭದಲ್ಲಿ ಪ್ರಕಟಗೊಳ್ಳುವ ಸಾಧ್ಯತೆಯಿದೆ.

ನೂತನ ಹಾಗೂ ಹಾಲಿ ಸಚಿವರ ಖಾತೆ ಹಂಚಿಕೆ ವೇಳೆ ಹಿರಿಯರಿಗೆ ಪ್ರಮುಖ ಖಾತೆಗಳು ನೀಡಲಾಗುತ್ತಿದೆ. ಪ್ರಮುಖವಾಗಿ ಜಲ ಸಂಪನ್ಮೂಲ ಖಾತೆ ಬೇಡ ಎಂದು ಈಗಾಗಲೇ ಹೇಳಿರುವ ರಾಮಲಿಂಗಾರೆಡ್ಡಿ ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆಎಚ್ ಮುನಿಯಪ್ಪ ಅವರ ಖಾತೆಗಳು ಬಹುತೇಕ ಬದಲಾವಣೆ ನಿಶ್ಚಿತವಾಗಿದೆ.

ಆಹಾರ ಸಚಿವರಾಗಿರುವ ಕೆಎಚ್ ಮುನಿಯಪ್ಪ ಅವರಿಗೆ ಸಮಾಜ ಕಲ್ಯಾಣ ಖಾತೆ ರಾಮಲಿಂಗಾರೆಡ್ಡಿ ಅವರಿಗೆ ಮುಜರಾಯಿ ಹಾಗೂ ಪೌರಾಡಳಿತ ಖಾತೆ ನೀಡುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ.

ಈ ಹಿಂದೆಯೇ ಇಬ್ಬರು ನಾಯಕರು ತಮಗೆ ಬೇರೆ ಖಾತೆಯ ಜವಾಬ್ದಾರಿ ನೀಡುವಂತೆ ಮನವಿ ಮಾಡಿದ್ದರು. ಆದರೆ ಪೂರ್ಣ ಪ್ರಮಾಣದ ಸಚಿವ ಸಂಪುಟ ಬಂದಾಗ ಖಾತೆಗಳ ಬದಲಾವಣೆ ಮಾಡುವ ಬಗ್ಗೆ ವರಿಷ್ಠರು ಭರವಸೆ ನೀಡಿದ್ದರು.

ಈಗಾಗಲೇ ಕೆಎಚ್ ಮುನಿಯಪ್ಪ ಅವರಿಗೆ ಸಮಾಜ ಕಲ್ಯಾಣ ಖಾತೆ ನೀಡುವ ಮೂಲಕ ಅವರ ಕೇಂದ್ರ ಹಾಗೂ ರಾಜ್ಯದ ಆಡಳಿತದಲ್ಲಿ ಅನುಭವ ಸದುಪಯೋಗಪಡಿಸಿಕೊಂಡು ಹೊಸ ಯೋಜನೆಯ ಮೂಲಕ ಜನಮನ ಸೆಳೆಯಲು ನಿರ್ಧರಿಸಲಾಗಿದೆ. ಸವಾಲಿನ ನಡುವೆಯೇ ಈಗಾಗಲೇ ಆಹಾರ ಇಲಾಖೆಯನ್ನು ಸಮರ್ಥವಾಗಿ ನಿಭಾಯಿಸಿ ಮುನಿಯಪ್ಪ ಅವರಿಗೆ ಸಮಾಜ ಕಲ್ಯಾಣ ಖಾತೆಯ ಮೂಲಕ ಪರಿಶಿಷ್ಟ ಜಾತಿ, ಪಂಗಡದ ಬಲ ಹೆಚ್ಚಿಸಿಕೊಳ್ಳಲು ಕೂಡ ವರಿಷ್ಠರು ನಿರ್ಧರಿಸಿದ್ದಾರೆ.

ಇದೇ ರೀತಿ ಮುನಿಯಪ್ಪ ಅವರು ಕೂಡ ಈ ಖಾತೆಗಾಗಿ ಮುಖ್ಯಮಂತ್ರಿಯವರಿಗೆ ಮನವಿ ಮಾಡಿದ್ದು, ಸಕಾರಾತಕವಾಗಿ ಪ್ರತಿಕ್ರಿಯೆ ವ್ಯಕ್ತವಾಗಿದೆಯೆಂದು ಮೂಲಗಳು ತಿಳಿಸಿವೆ.

ದಲಿತ ಎಡಗೈ ಸಮುದಾಯದ ಪ್ರಬಲ ಸಚಿವರು ಹಾಗೂ ಸಂಪುಟದ ಅತ್ಯಂತ ಹಿರಿಯ ಸಚಿವರು ಏಳು ಬಾರಿ ಸಂಸದರಾಗಿ ಕೇಂದ್ರದಲ್ಲಿ ಮೂರು ಬಾರಿ ಸಚಿವರಾಗಿ ಕಾರ್ಯನಿರ್ವಹಿಸಿರುವ ಮುನಿಯಪ್ಪ ಅವರಿಗೆ ಸಮಾಜ ಕಲ್ಯಾಣ ಖಾತೆ ನೀಡುವುದು ಬಹುತೇಕ ನಿಶ್ಚಿತವಾಗಿದೆ. ಇದೇ ರೀತಿ ಇನ್ನು ಹಲವರು ಸಚಿವರ ಖಾತೆಗಳು ಬದಲಾವಣೆ ಆಗುವುದು ಬಹುತೇಕ ನಿಶ್ಚಿತವಾಗಿದೆ.

# ಸುಸ್ಥಿರ ಅಭಿವೃದ್ಧಿಗೆ ಕೃತಕ ಬುದ್ಧಿಮತ್ತೆ ಶಕ್ತಿವರ್ಧಕವಾಗಲಿ: ಸಚಿವ ಪ್ರಿಯಾಂಕ್ ಖರ್ಗೆ

### ತಂತ್ರಜ್ಞಾನ ಆಧಾರಿತ ಹಾಗೂ ಪಾರದರ್ಶಕ ಆಡಳಿತಕ್ಕೆ ಸರ್ಕಾರ ಬದ್ಧ

ಅತ್ಯಾಧುನಿಕ ಧ್ವನಿ ತಂತ್ರಜ್ಞಾನಗಳನ್ನು ಅಭಿವೃದ್ಧಿಪಡಿಸುತ್ತಿರುವ ಜಾಗತಿಕ ಕೃತಕ ಬುದ್ಧಿಮತ್ತೆ ಸಂಸ್ಥೆ ಇಲೆವನ್ ಲ್ಯಾಬ್ಸ್ ತಂಡದೊಂದಿಗೆ ಗೃಹ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ-ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ಅವರು ಬುಧವಾರ ಸಭೆ ನಡೆಸಿದರು. ಕರ್ನಾಟಕ ಸರ್ಕಾರ ನಾಗರಿಕ ಕೇಂದ್ರಿತ, ತಂತ್ರಜ್ಞಾನ ಆಧಾರಿತ ಹಾಗೂ ಪಾರದರ್ಶಕ ಆಡಳಿತ ವ್ಯವಸ್ಥೆಯನ್ನು ನಿರ್ಮಿಸಲು ಬದ್ಧವಾಗಿದೆ. ಕೃತಕ ಬುದ್ಧಿಮತ್ತೆ ಆಧಾರಿತ ಧ್ವನಿ ತಂತ್ರಜ್ಞಾನಗಳು ಸರ್ಕಾರಿ ಸೇವೆಗಳನ್ನು ಜನಸ್ನೇಹಿಯಾಗಿಸುವುದರ ಜೊತೆಗೆ, ವಿವಿಧ ಭಾಷೆಗಳನ್ನು ಮಾತನಾಡುವ ನಾಗರಿಕರಿಗೂ ಸೇವೆಗಳನ್ನು ಸುಲಭವಾಗಿ ತಲುಪಿಸುವ ಸಾಮರ್ಥ್ಯವನ್ನು ಹೊಂದಿವೆ. ಈ ನಿಟ್ಟಿನಲ್ಲಿ ಇಂತಹ ನವೋದ್ಯಮಗಳನ್ನು ಆಡಳಿತ ವ್ಯವಸ್ಥೆಯಲ್ಲಿ ಅಳವಡಿಸಿಕೊಳ್ಳುವ ಅವಕಾಶಗಳನ್ನು ನಾವು ಪರಿಶೀಲಿಸುತ್ತಿದ್ದೇವೆ ಎಂದು ಹೇಳಿದರು. ಇಲೆವನ್ ಲ್ಯಾಬ್ಸ್‌ನಂತಹ ಜಾಗತಿಕ ತಂತ್ರಜ್ಞಾನ ಸಂಸ್ಥೆಗಳೊಂದಿಗೆ ನಿರಂತರ ಸಹಯೋಗದ ಮೂಲಕ ಸಾರ್ವಜನಿಕ ಸೇವೆಗಳ ಗುಣಮಟ್ಟವನ್ನು ಇನ್ನಷ್ಟು ಉತ್ತಮಗೊಳಿಸಿ, ತಂತ್ರಜ್ಞಾನವನ್ನು ಜನೋಪಯೋಗಿ ಸಾಧನವನ್ನಾಗಿ ರೂಪಿಸುವ ನಮ್ಮ ಪ್ರಯತ್ನ ಮುಂದುವರಿಯಲಿದೆ. ಕರ್ನಾಟಕದ ಜನರಿಗೆ ಅರ್ಥಪೂರ್ಣ, ಸುಲಭ ಮತ್ತು ಪರಿಣಾಮಕಾರಿ ಸೇವೆಗಳನ್ನು ತಲುಪಿಸಲು ಇಂತಹ ಸಹಭಾಗಿತ್ವಗಳು ಮಹತ್ವದ ಪಾತ್ರ ವಹಿಸಲಿವೆ ಎಂದು ಸಚಿವರು ತಿಳಿಸಿದರು.

**ಬೆಂಗಳೂರು, ಆ.5:** ಸುಸ್ಥಿರ ಅಭಿವೃದ್ಧಿ ಗುರಿಗಳ ಸಾಧನೆಗೆ ಕೃತಕ ಬುದ್ಧಿಮತ್ತೆ ಶಕ್ತಿವರ್ಧಕವಾಗಿ ಕಾರ್ಯನಿರ್ವಹಿಸಬೇಕು ಎಂದು ಗೃಹ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ-ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು. ಬೆಂಗಳೂರಿನ ವೋಲ್ವರ್‌ಹ್ಯಾಂಪ್ಟನ್ - ಬೆಂಗಳೂರು ಸೆಂಟರ್ ಫಾರ್ ರಿಸರ್ಚ್ ಅಂಡ್ ಇನೋವೇಷನ್ ಆಯೋಜಿಸಿದ್ದ ಸುಸ್ಥಿರ ಅಭಿವೃದ್ಧಿ ಗುರಿಗಳ ಸಾಧನೆಗೆ ಕೃತಕ ಬುದ್ಧಿಮತ್ತೆಯ ಪರಿಣಾಮಕಾರಿ ಬಳಕೆ" ಕುರಿತ ಅಂತರರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು, ಕೃತಕ ಬುದ್ಧಿಮತ್ತೆಯನ್ನು ಜವಾಬ್ದಾರಿಯುತವಾಗಿ ಬಳಸುವ ಮೂಲಕ ಸಮಾಜಮುಖಿ ಅಭಿವೃದ್ಧಿಗೆ ವೇಗ ನೀಡಬೇಕು ಹಾಗೂ ಮುಂದಿನ ತಲೆಮಾರಿನ ನವೋದ್ಯಮಿಗಳನ್ನು ರೂಪಿಸಬೇಕೆಂದು ಕರೆ ನೀಡಿದರು. ಸಂಯುಕ್ತ ರಾಷ್ಟ್ರಗಳ ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಉಲ್ಲೇಖಿಸಿದ ಅವರು, ಬಡತನ ನಿರ್ಮೂಲನೆ, ಉತ್ತಮ ಆರೋಗ್ಯ ಸೇವೆ, ಗುಣಮಟ್ಟದ ಶಿಕ್ಷಣ, ಅಸಮಾನತೆ ನಿವಾರಣೆ ಹಾಗೂ ಹವಾಮಾನ ಬದಲಾವಣೆಯಂತಹ ಜಾಗತಿಕ ಸವಾಲುಗಳನ್ನು ಎದುರಿಸುವಲ್ಲಿ ಇನ್ನೂ ಸಾಕಷ್ಟು ಅಂತರವಿದೆ. ಈ ಅಂತರವನ್ನು ಕಡಿಮೆ ಮಾಡುವಲ್ಲಿ ಕೃತಕ ಬುದ್ಧಿಮತ್ತೆ ಅಪೂರ್ವ ಅವಕಾಶವನ್ನು ಒದಗಿಸುತ್ತಿದ್ದು, ಅದನ್ನು ಮಾನವ ಕಲ್ಯಾಣದ ದೃಷ್ಟಿಯಿಂದ ಜವಾಬ್ದಾರಿಯುತವಾಗಿ ಬಳಸಬೇಕಾಗಿದೆ ಎಂದು ಹೇಳಿದರು. ಸುಸ್ಥಿರ ಅಭಿವೃದ್ಧಿ ಗುರಿಗಳ ಸಾಧನೆಗೆ ಕೃತಕ ಬುದ್ಧಿಮತ್ತೆ (ಎಐ) ಶಕ್ತಿವರ್ಧಕವಾಗಿ ಕಾರ್ಯನಿರ್ವಹಿಸಬೇಕಿದ್ದು, ವಿದ್ಯಾರ್ಥಿಗಳು ಎಐ ಕೌಶಲ್ಯಗಳ ಜೊತೆಗೆ ಮೂಲಭೂತ ಜ್ಞಾನ, ವೈಜ್ಞಾನಿಕ ಮನೋಭಾವ ಹಾಗೂ ವಿಮರ್ಶಾತ್ಮಕ ಚಿಂತನಾ ಸಾಮರ್ಥ್ಯವನ್ನು ಬೆಳೆಸಿಕೊಳ್ಳಬೇಕು ಹೇಳಿದರು. ಕರ್ನಾಟಕ ಸರ್ಕಾರ ಡೀಪ್-ಟೆಕ್, ಸ್ಟಾರ್ಟ್‌ಅಪ್ ಬೆಂಬಲ, ಕೌಶಲ್ಯಾಭಿವೃದ್ಧಿ ಹಾಗೂ ಜಾಗತಿಕ ಸಹಭಾಗಿತ್ವಗಳ ಮೂಲಕ ಎಐ ಪರಿಸರ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುತ್ತಿದ್ದು, ಬೆಂಗಳೂರು ವಿಶ್ವದ ನಾಲ್ಕನೇ ಅತಿದೊಡ್ಡ ತಂತ್ರಜ್ಞಾನ ಕೇಂದ್ರ ಹಾಗೂ ಎಐ ಕೌಶಲ್ಯ ಹೊಂದಿದ ಮಾನವ ಸಂಪನ್ಮೂಲದಲ್ಲಿ ಜಾಗತಿಕವಾಗಿ ಮೂರನೇ ಸ್ಥಾನದಲ್ಲಿರುವುದು ರಾಜ್ಯದ ತಾಂತ್ರಿಕ ನಾಯಕತ್ವವನ್ನು ಪ್ರತಿಬಿಂಬಿಸುತ್ತದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದರು.

### ವೋಲ್ವರ್ಹ್ಯಾಂಪ್ಟನ್ - ಬೆಂಗಳೂರು ಸೆಂಟರ್ ಫಾರ್ ರಿಸರ್ಚ್ ಅಂಡ್ ಇನೋವೇಷನ್ ಆಯೋಜಿಸಿದ್ದ ಅಂತಾರಾಷ್ಟ್ರೀಯ ಸಮ್ಮೇಳನ



# ಯುವ ಜನತೆಯ ಸಮಸ್ಯೆ ಆಲಿಸಿ, ಅವರಿಗೆ ಸಲಹೆ, ಮಾರ್ಗದರ್ಶನದ ಅವಶ್ಯಕತೆ ಇದೆ: ಸುಪ್ರೀಂ ಕೋರ್ಟ್

**ನವದೆಹಲಿ, ಆ.5:** ಯುವಜನತೆಗೆ ಸೂಕ್ತ ಸಮಾಲೋಚನೆ, ಅಹವಾಲು ಆಲಿಕೆ, ಸೂಕ್ತ ಮಾರ್ಗದರ್ಶನದ ಅಗತ್ಯವಿದೆ. ಅವರ ಮೇಲೆ ಬಲ ಪ್ರಯೋಗ ಪರಿಹಾರವಲ್ಲ ಎಂದು ಸುಪ್ರೀಂ ಕೋರ್ಟ್ ಅಭಿಪ್ರಾಯಪಟ್ಟಿದೆ. ದೆಹಲಿಯಲ್ಲಿ ಇತ್ತೀಚಿನ ವಿದ್ಯಾರ್ಥಿ ಪ್ರತಿಭಟನೆಗಳಲ್ಲಿ ಉಂಟಾದ ಗಲಭೆ ಕೇಸುಗಳನ್ನು ಹಿಂಪಡೆಯುವುದನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿ ವಿಚಾರಣೆಯ ವೇಳೆ ಇಂದು ಕೋರ್ಟ್ ಹೀಗೆ ಹೇಳಿತು.

ಸಿಜೆಐ ಸೂರ್ಯಕಾಂತ್, ನ್ಯಾಯಮೂರ್ತಿ ಜೋಯ್ಮಾಲ್ಯ ಬಾಗ್ಚಿ ಮತ್ತು ನ್ಯಾ.ವಿ.ಮೋಹನಾ ಅವರ ಪೀಠದಲ್ಲಿ ಪ್ರಕರಣದ ಅರ್ಜಿ ವಿಚಾರಣೆ ನಡೆಯಿತು. ಅರ್ಜಿದಾರ ಮಾಜಿ ಭಾರತೀಯ ವಾಯು ಸೇನಾಧಿಕಾರಿ ಮನೀಶ್ ಕುಮಾರ್ ಸೋಳಂಕಿ ಅವರ ಪರ ವಕೀಲ ರಿಜ್ವಾನ್ ಅಹ್ಮದ್ ಹಾಜರಾಗಿದ್ದರು. ವಿಚಾರಣೆಯ ವೇಳೆ, ಪರಿಸ್ಥಿತಿ ನಿಯಂತ್ರಣ ಕಳೆದುಕೊಳ್ಳದಂತೆ ನೋಡಿಕೊಳ್ಳುವಾಗ ಭದ್ರತಾ ಸಿಬ್ಬಂದಿ ಸಾಕಷ್ಟು ಸಂಯಮವಹಿಸಬೇಕು ಎಂದು ಗಮನಿಸಿದ ಸಿಜೆಐ, ಅಹಿಂಸೆಗೆ ಪ್ರಾಮುಖ್ಯತೆ ನೀಡಬೇಕು ಎಂದು ಒತ್ತಿ ಹೇಳಿದರು. ಯುವಜನರನ್ನು ಸಮಾಧಾನಪಡಿಸಬೇಕು, ಅವರ ಮಾತುಗಳನ್ನು ಆಲಿಸುವುದೇ ಅತ್ಯಂತ ಪ್ರಬಲ ಮಾರ್ಗ. ಇಂತಹ ಸಮಯದಲ್ಲಿ ಪರಿಸ್ಥಿತಿ ನಿಯಂತ್ರಣವನ್ನು ಕಾನೂನು ಜಾರಿ ಸಂಸ್ಥೆಗಳಿಗೆ ಬಿಡಬೇಕು ಎಂದು ತಿಳಿಸಿದರು. ಪ್ರತಿಭಟನೆಗಳು ಉದ್ವಿಗ್ನ ಸ್ವರೂಪ ಪಡೆದುಕೊಂಡಾಗಲೆಲ್ಲ ಪೊಲೀಸರು ಅತ್ಯಂತ ಎಚ್ಚರಿಕೆಯಿಂದ ವರ್ತಿಸಬೇಕು ಎಂದೂ ಪೀಠ ಕಿವಿಮಾತು ಹೇಳಿತು. ಇದಕ್ಕೂ ಮುನ್ನ, ವಕೀಲ ಅಹ್ಮದ್ ಅವರು ಪ್ರತಿಭಟನೆಯ ಆಯೋಜಕರನ್ನು 'ನೋಂದಣಿಯಾಗದ ಸಂಘಟನೆಯೊಂದರ ಸ್ವಯಂಘೋಷಿತ ಆಯೋಜಕರು' ಎಂದು ಕರೆದರು. ಅಲ್ಲದೇ, ಅವರು ವಿವಿಧ ಸುದ್ದಿ ವಾಹಿನಿಗಳಿಗೆ ತೆರೆ ಪ್ರಚೋದನಕಾರಿ ಹೇಳಿಕೆಗಳನ್ನು ನೀಡುವ ಮೂಲಕ ಉದ್ವಿಗ್ನತೆಯನ್ನು ಶಮನಗೊಳಿಸುತ್ತಿಲ್ಲ ಎಂದು ಆರೋಪಿಸಿದರು. ಅಲ್ಲದೇ, ಧಾರ್ಮಿಕ ಸಮಾವೇಶದಲ್ಲಿ ಬೆಂಕಿ ಅವಘಡ ಸಂಭವಿಸಿದಾಗ ಅಂತಹ ಘಟನೆ ನಿರ್ಲಕ್ಷ್ಯದಿಂದಾಗಿರಲಿ ಅಥವಾ ದೈವಿಕ ಕಾರಣದಿಂದಾಗಿ ನಡೆದರೂ ಅದಕ್ಕೆ ಹೊಣೆಗಾರರನ್ನಾಗಿ ಆಯೋಜಕರನ್ನೇ ಮಾಡಲಾಗುತ್ತದೆ ಎಂದು ಉಲ್ಲೇಖಿಸಿದರು. ಕಲ್ಲು ತೂರಾಟದಂತಹ ಗಂಭೀರ ಕೃತ್ಯಗಳಲ್ಲಿ ಭಾಗಿಯಾದವರು ಕಾನೂನು ಕ್ರಮದಿಂದ ತಪ್ಪಿಸಿಕೊಳ್ಳಬಾರದು ಎಂದು ಮನವಿ ಮಾಡಿದರು.

ಈ ವೇಳೆ ಪೀಠ, ಈಗಾಗಲೇ ಮತ್ತೊಂದು ಗುಂಪಿನ ಅರ್ಜಿಗಳ ವಿಚಾರಣೆ ನಡೆಸುತ್ತಿದ್ದು, ಎಲ್ಲಾ ಸಂಗತಿಗಳು, ದೃಷ್ಟಿಕೋನಗಳು ಮತ್ತು ಭಿನ್ನಾಭಿಪ್ರಾಯಗಳಿಗೆ ನ್ಯಾಯಾಲಯ ಮುಕ್ತವಾಗಿದೆ. ದಾರಿತಪ್ಪಿದ ಕೆಲವರು ಕಲ್ಲು ತೂರಾಟದಂತಹ ಕೃತ್ಯಗಳಲ್ಲಿ ತೊಡಗಿಸಿಕೊಂಡರೂ, ಯುವಜನರನ್ನು ಸಮಾಧಾನ ಮಾಡುವ ಮತ್ತು ಸಮಾಲೋಚನೆಯ ಅಗತ್ಯವಿರುತ್ತದೆ. ಅವರಿಗೆ ಹೆಚ್ಚಿನ ಮಾರ್ಗದರ್ಶನ ಹಾಗೂ ಸಮಾಲೋಚನೆಯ ಅವಶ್ಯಕತೆ ಇದೆ ಎಂದು ಸಿಜೆಐ ಅಭಿಪ್ರಾಯಪಟ್ಟರು.



ಶಿವಮೊಗ್ಗ ಜಿಲ್ಲೆ, ವಾಣಿಜ್ಯ ಮತ್ತು ಕೈಗಾರಿಕಾ ಮಂಡಳಿಯ ನಿಯೋಗವು ಎಂಎಲ್‌ಸಿ ಡಿ.ಎಸ್. ಅರುಣ್ ಅವರ ನೇತೃತ್ವದಲ್ಲಿ ನವದೆಹಲಿಯ ಕರ್ನಾಟಕ ಭವನದಲ್ಲಿ ಶಿವಮೊಗ್ಗದ ಅಭಿವೃದ್ಧಿಗಾಗಿ ವಿ.ಸೋಮಣ್ಣ ಸೇರಿದಂತೆ ವಿವಿಧ ಕೇಂದ್ರ ಸಚಿವರನ್ನು ಭೇಟಿ ಮಾಡಿತ್ತು. ಶಿವಮೊಗ್ಗ ವಾಣಿಜ್ಯ ಮತ್ತು ಕೈಗಾರಿಕಾ ಮಂಡಳಿಯ ಅಧ್ಯಕ್ಷ ಗೋಪಿನಾಥ್ ಬಿ, ಉಪಾಧ್ಯಕ್ಷ ಜಿ.ವಿಜಯ್‌ಕುಮಾರ್, ಕಾರ್ಯದರ್ಶಿ ಎ.ಎಂ. ಸುರೇಶ್ ಈ ನಿಯೋಗದಲ್ಲಿ ಭಾಗವಹಿಸಿದ್ದರು.

### ಚೆಢಾನಗರ್‌ನ ಶ್ರೀ ಸುಬ್ರಹ್ಮಣ್ಯ ಮಠದಲ್ಲಿ ಶ್ರೀ ಸುಬ್ರಹ್ಮಣ್ಯ ಸೇವಾಸಂಘದ ವಾರ್ಷಿಕ ಸಭೆ

## ಸಮುದಾಯದ ಹಿತಕ್ಕಾಗಿ ನಿರಂತರ ಸೇವೆ ಅವಶ್ಯ: ಕೆ.ಸುಬ್ಬಣ್ಣರಾವ್




**ಮುಂಬಯಿ, ಆ.05:** ಕಳೆದ ಎಂಟೂವರೆ ದಶಕಗಳಿಂದ ಸಮಾಜ ಸೇವೆ ಹಾಗೂ ಸ್ವಸಮುದಾಯದ ಹಿತಕ್ಕಾಗಿ ನೀಡುತ್ತಿರುವ ಸಂಘದ ನಿರಂತರ ಸೇವೆ ಅತ್ಯಂತ ಶ್ಲಾಘನೀಯ. ನಿಮ್ಮ ನಿಸ್ವಾರ್ಥ ಸೇವೆ, ದೂರದೃಷ್ಟಿ ಮತ್ತು ಸಮುದಾಯದ ಏಳಿಗೆಗಾಗಿ ತೋರಿದ ಬದ್ಧತೆ, ಕೊಡುಗೆ ಮತ್ತು ಮಾರ್ಗದರ್ಶನ ಸಂಘಕ್ಕೆ ಸದಾ ಸ್ಫೂರ್ತಿದಾಯಕವಾಗಿದೆ. ಮುಂಬರುವ ದಿನಗಳಲ್ಲೂ ನಿಮ್ಮ ಈ ಸೇವಾನಿಷ್ಠೆ ಹೀಗೆಯೇ ಮುಂದುವರಿದು, ಸಮುದಾಯವನ್ನು ಮತ್ತಷ್ಟು ಉನ್ನತ ಎತ್ತರಕ್ಕೆ ಕೊಂಡೊಯ್ಯಲಿ ಎಂದು ಹಾರೈಸುತ್ತೇವೆ ಎಂದು ಶ್ರೀಸುಬ್ರಹ್ಮಣ್ಯ ಸೇವಾ ಸಂಘದ ಅಧ್ಯಕ್ಷ ಕೆ.ಸುಬ್ಬಣ್ಣರಾವ್ ತಿಳಿಸಿದರು.

ಬೃಹನ್ಮುಂಬಯಿಯಲ್ಲಿನ ಪ್ರತಿಷ್ಠಿತ ಸೇವಾ ಸಂಸ್ಥೆ ಶ್ರೀ ಸುಬ್ರಹ್ಮಣ್ಯ ಸೇವಾ ಸಂಘದ 87ನೇ ವಾರ್ಷಿಕ ಸರ್ವಸದಸ್ಯರ ಸಭೆಯು ಕಳೆದ ಗುರುವಾರ ಚೆಂಬೂರು ಚೆಢಾನಗರ್‌ನಲ್ಲಿರುವ ಶ್ರೀ ಸುಬ್ರಹ್ಮಣ್ಯ ಮಠದಲ್ಲಿ ನೆರವೇರಿಸಿದ್ದು, ಕೆ.ಸುಬ್ಬಣ್ಣ ರಾವ್ ಸಭಾಧ್ಯಕ್ಷತೆ ವಹಿಸಿ ಮಾತನಾಡಿ ಶ್ರೀ ಪ್ರಭವ ನಾಮ ಸಂವತ್ಸರದ ಶುಭಾಶಯವನ್ನು ಕೋರಿ ಸಂಘದ ಗತ ವರ್ಷದ ಚಟುವಟಿಕೆಗಳ ವಿವರಣೆಗಳನ್ನಿತ್ತರು.

ಸಂಘದ ಸದಸ್ಯರ ಮಕ್ಕಳ ವಿದ್ಯಾಭ್ಯಾಸ ಸಂಘದ ಮೂಲ ಉದ್ದೇಶವಾಗಿದ್ದು 2025–26ನೇ ಸಾಲಿಗೆ ಸಂಘವು ರೂ.4,29,000/– ವಿದ್ಯಾರ್ಥಿವೇತನ, ರೂ.40,000/– ಪ್ರತಿಭಾವಂತ ಮಕ್ಕಳ ಪುರಸ್ಕಾರ, ರೂ.6,00,000/– ಸಾಲ ರೂಪದ ವಿದ್ಯಾರ್ಥಿ ವೇತನ, ರೂ.1,45,000/– ವೈದ್ಯಕೀಯ ಸಹಾಯ ಧನ ವಿತರಿಸಿರುವ ಬಗ್ಗೆ ತಿಳಿಸಿದರು. ಸಭೆಯಲ್ಲಿ ಸಂಘದ ಸದಸ್ಯರ 15 ಮಂದಿ ಪ್ರತಿಭಾವಂತ ಮಕ್ಕಳಿಗೆ ಒಟ್ಟು 74,000 ರೂ. ಬಹುಮಾನವಾಗಿಸಿ ಚೆಕ್‌ಗಳನ್ನು ಅಧ್ಯಕ್ಷರು ವಿತರಿಸಿದರು. ಪ್ರತಿವರ್ಷದಂತೆ ಈ ವರ್ಷವೂ 12 ಮಂದಿ ಜ್ಯೇಷ್ಠ ನಾಗರಿಕರಿಗೆ ಶಾಲು ಹೊದಿಸಿ, ಫಲಪುಷ್ಪ, ಸನ್ಮಾನಪತ್ರ ಪ್ರದಾನಿಸಿ ಗೌರವಿಸಲಾಯಿತು.

ಮಹಾನಗರದ ಸಯನ್–ಕೋಳಿವಾಡದಲ್ಲಿ ತನ್ನ ಪ್ರಧಾನ ಕಚೇರಿಯನ್ನು ಹೊಂದಿರುವ ಈ ಸಂಸ್ಥೆಯು 1100 ಸದಸ್ಯರನ್ನು ಹೊಂದಿದ್ದು ಕಳೆದ ಸುಮಾರು ಎಂಟುವರೆ ದಶಕಗಳಿಂದ (86 ವರ್ಷಗಳು) ಆರ್ಥಿಕವಾಗಿ ಹಿಂದುಳಿದ ಬಡ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣಕ್ಕಾಗಿ ಸಹಾಯಧನ, ಆರ್ಥಿಕ ಪುರಸ್ಕಾರ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ, ಬಡ ಕುಟುಂಬಗಳಿಗೆ ವೈದ್ಯಕೀಯ ಸಹಾಯಧನ, ಜ್ಯೇಷ್ಠ ಸಮಾಜ ಬಾಂಧವರಿಗೆ ಸನ್ಮಾನ, ಸಾಂಸ್ಕೃತಿಕ ಕಾರ್ಯಕ್ರಮ, ಧಾರ್ಮಿಕ ಕಾರ್ಯಕ್ರಮ, ಸಮಾಜ ಬಾಂಧವರ ಒಗ್ಗೂಡುವಿಕೆ ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಜತೆಗೆ ಅಖಿಲ ಭಾರತ ಸ್ಥಾನಿಕ ಬ್ರಾಹ್ಮಣ ಮಹಾಮಂಡಲದ ಸದಸ್ಯ ಸಂಸ್ಥೆಗಳಲ್ಲಿ ಒಂದಾಗಿರುತ್ತದೆ ಎಂದು ಕೆ.ಸುಬ್ಬಣ್ಣ ರಾವ್ ತಿಳಿಸಿದರು.

## 2,000 ರೂ.ಗಿಂತ ಹೆಚ್ಚಿನ ಯುಪಿಐ ಪಾವತಿ ಮೇಲೆ ಶುಲ್ಕ?




**ನವದೆಹಲಿ, ಆ.5:** 2,000 ರೂ.ಗಿಂತ ಹೆಚ್ಚಿನ ಮೊತ್ತದ ಯುಪಿಐ ಪಾವತಿಗೆ ಶುಲ್ಕ ವಿಧಿಸಲು ಕೇಂದ್ರ ಸರ್ಕಾರ ಮುಂದಾಗಿದೆ. ಒಬ್ಬ ವ್ಯಕ್ತಿಯಿಂದ ಇನ್ನೊಬ್ಬರಿಗೆ ಮಾಡಿದ ಪಾವತಿಗಳನ್ನು ವ್ಯಾಪ್ತಿಯಿಂದ ಹೊರಗೆ ಇರಿಸುವಾಗ, ವ್ಯಾಪಾರಿ ರಿಯಾಯಿತಿ ದರ ಅಥವಾ ವ್ಯವಹಾರಗಳಿಗೆ 2,000 ರೂ.ಗಿಂತ ಹೆಚ್ಚಿನ UPI ಪಾವತಿಗಳ ಮೇಲೆ 0.25% ರಿಂದ 0.4% ವರೆಗೆ ಶುಲ್ಕ ವಿಧಿಸಲು ಸರ್ಕಾರ ಅನುಮತಿಸುವ ಸಾಧ್ಯತೆಯಿದೆ.

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಮಂಗಳವಾರ ಮಂಡಿಸಿದ ತೆರಿಗೆ ಮತ್ತು ಇತರ ಕಾನೂನುಗಳು (ತಿದ್ದುಪಡಿ) ಮಸೂದೆಯು, ಬ್ಯಾಂಕುಗಳು ಮತ್ತು ಪಾವತಿ ಸೇವಾ ಪೂರೈಕೆದಾರರ ಅಧಿಸೂಚಿತ ಎಲೆಕ್ಟ್ರಾನಿಕ್ ಪಾವತಿ ವಿಧಾನಗಳ ಮೇಲೆ ಎಂಡಿಆರ್ ವಿಧಿಸುವ ನಿರ್ಬಂಧವನ್ನು ತೆಗೆದುಹಾಕಲು ಪ್ರಯತ್ನಿಸಿದೆ. ಈ ಪ್ರಸ್ತಾಪವನ್ನು ಯಾವಾಗ ಜಾರಿಗೆ ತರಲಾಗುತ್ತದೆ ಎಂಬುದರ ಕುರಿತು ಯಾವುದೇ ನಿರ್ಧಾರ ಕೈಗೊಂಡಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ. 2,000 ರೂಪಾಯಿಗಳ ಮೊತ್ತವು ಎಲ್ಲಾ ಯುಪಿಐ ವ್ಯವಹಾರಗಳಲ್ಲಿ 5% ರಷ್ಟನ್ನು ಒಳಗೊಂಡಿರುತ್ತದೆ. ಆದರೆ, ಆ ವಹಿವಾಟುಗಳು ಒಟ್ಟು ವಹಿವಾಟು ಮೌಲ್ಯದ 65% ರಷ್ಟಿದೆ. ಶುಲ್ಕದ ಕ್ರಮವು ಹಾಲು, ತರಕಾರಿಗಳು ಮತ್ತು ದಿನಸಿಗಳಂತಹ ದೈನಂದಿನ ಖರೀದಿಗಳು ಅಥವಾ ಆಟೋ ಅಥವಾ ಟ್ಯಾಕ್ಸಿ ಬಳಕೆಗಾಗಿ ಪಾವತಿಗಳ ಮೇಲೆ ಪರಿಣಾಮ ಬೀರುವ ಸಾಧ್ಯತೆಯಿಲ್ಲ. ಜುಲೈನಲ್ಲಿ, 23.7 ಶತಕೋಟಿ (2,370 ಕೋಟಿ) ವ್ಯವಹಾರಗಳು ನಡೆದಿದ್ದು, ಅವುಗಳ ಒಟ್ಟು ಮೌಲ್ಯವನ್ನು 29.9 ಲಕ್ಷ ಕೋಟಿ ರೂ. ಎಂದು ಅಂದಾಜಿಸಲಾಗಿದೆ. ಒಂದು ವೇಳೆ ಇದನ್ನು ಜಾರಿಗೆ ತಂದರೂ, ಶೇ. 95 ರಷ್ಟು ವ್ಯವಹಾರಗಳು ವ್ಯಾಪಾರಿ ರಿಯಾಯಿತಿ ದರವನ್ನು ಎದುರಿಸುವುದಿಲ್ಲ. ಇದಲ್ಲದೆ, ಎಲ್ಲಾ ವ್ಯವಹಾರಗಳು ಶುಲ್ಕವನ್ನು ವರ್ಗಾಯಿಸುವುದಿಲ್ಲ. ಅದು ಸಣ್ಣ ಮೊತ್ತವಾಗಿರುತ್ತದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

## ವಿಮೆ ಇಲ್ಲದ ವಾಹನಗಳಿಗೆ ಇನ್ಮುಂದೆ ಪೆಟ್ರೋಲ್ ಸಿಗಲ್ಲ?



**ನವದೆಹಲಿ, ಆ.5:** ದೇಶದಲ್ಲಿ ವಿಮೆ ಇಲ್ಲದೆಯೇ ಹೆಚ್ಚಿನ ಸಂಖ್ಯೆಯ ವಾಹನಗಳು ಸಂಚರಿಸುತ್ತಿವೆ. ಇದನ್ನು ಗಂಭೀರವಾಗಿ ಪರಿಗಣಿಸಿರುವ ಸುಪ್ರೀಂ ಕೋರ್ಟ್, ವಿಮೆ ಇಲ್ಲದೇ ಓಡಾಡುವ ವಾಹನಗಳಿಗೆ ಪೆಟ್ರೋಲ್ ಬಂಕ್‌ಗಳಲ್ಲಿ ಇಂಧನ ನಿರಾಕರಿಸುವ ಪ್ರಯೋಗಿಕ ಯೋಜನೆ ಸಿದ್ಧಪಡಿಸುವಂತೆ ಕೇಂದ್ರ ಸರ್ಕಾರಕ್ಕೆ ನಿರ್ದೇಶ ನೀಡಿದೆ.

ವಿಮೆ ಇಲ್ಲದೆ ವಾಹನಗಳನ್ನು ಓಡಿಸುವುದರ ಮೇಲೆ ಪ್ರಮುಖ ಕ್ರಮ ಕೈಗೊಳ್ಳಲು ಸುಪ್ರೀಂ ಕೋರ್ಟ್ ಪ್ರಸ್ತಾಪಿಸಿದೆ. ಪೆಟ್ರೋಲ್ ಬಂಕ್‌ಗಳು ಇಂಧನವನ್ನು ಪೂರೈಸುವ ಮೊದಲು ವಾಹನದ ವಿಮೆಯನ್ನು ಪರಿಶೀಲಿಸುವಂತಹ ಪ್ರಾಯೋಗಿಕ ಯೋಜನೆಯನ್ನು ಸಿದ್ಧಪಡಿಸುವಂತೆ ಭಾರತೀಯ ವಿಮಾ ನಿಯಂತ್ರಣ ಮತ್ತು ಅಭಿವೃದ್ಧಿ ಪ್ರಾಧಿಕಾರ ಮತ್ತು ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯಕ್ಕೆ ಸರ್ವೋಚ್ಚ ನ್ಯಾಯಾಲಯ ತಿಳಿಸಿದೆ. ಪ್ರಸ್ತಾವಿತ ವ್ಯವಸ್ಥೆಯಡಿಯಲ್ಲಿ, ಮಾನ್ಯ ವಿಮೆ ಇಲ್ಲದ ವಾಹನಗಳಿಗೆ ಅಗತ್ಯವಿರುವ ವಿಮೆ ಸಿಗುವವರೆಗೆ ಪೆಟ್ರೋಲ್ ಅಥವಾ ಡೀಸೆಲ್ ನಿರಾಕರಿಸಬಹುದು. ಈ ಕ್ರಮವು ನ್ಯಾಯಾಲಯವು ಪ್ರಸ್ತಾಪಿಸಿರುವ ರಸ್ತೆ ಸುರಕ್ಷತಾ ಕ್ರಮಗಳ ಭಾಗವಾಗಿದೆ. ಇದರಲ್ಲಿ ಸ್ವಯಂಚಾಲಿತ ನಂಬರ್ ಪ್ಲೇಟ್ ಗುರುತಿಸುವಿಕೆ ಕ್ಯಾಮೆರಾಗಳನ್ನು ವಾಹನ ಮತ್ತು ವಿಮಾ ಡೇಟಾಬೇಸ್‌ಗಳೊಂದಿಗೆ ಸಂಪರ್ಕಿಸುವುದು, ಸಂಚಾರ ಪೊಲೀಸರಿಗೆ ವಿಮೆಯನ್ನು ತಕ್ಷಣವೇ ಪರಿಶೀಲಿಸಲು ಮೊಬೈಲ್ ಪರಿಕರಗಳನ್ನು ನೀಡುವುದು ಮತ್ತು ಹೊಸದಾಗಿ ಖರೀದಿಸಿದ ವಾಹನಗಳಿಗೆ ಕಡ್ಡಾಯವಾದ ಮೂರನೇ ವ್ಯಕ್ತಿಯ ವಿಮಾ ಅವಧಿಯನ್ನು ವಿಸ್ತರಿಸುವುದು ಸೇರಿವೆ. ಪೆಟ್ರೋಲ್ ಪಂಪ್‌ಗಳು ಇಂಧನವನ್ನು ವಿತರಿಸುವ ಮೊದಲು ವಾಹನಕ್ಕೆ ಮಾನ್ಯ ವಿಮೆ ಇದೆಯೇ ಎಂದು ಪರಿಶೀಲಿಸಲು ಅನುವು ಮಾಡಿಕೊಡುವ ಪೈಲಟ್ ಯೋಜನೆಯಲ್ಲಿ ಕೆಲಸ ಮಾಡುವಂತೆ ನ್ಯಾಯಾಲಯ ಐಆರ್‌ಡಿಎಐ ಮತ್ತು ರಸ್ತೆ ಸಾರಿಗೆ ಸಚಿವಾಲಯಕ್ಕೆ ನಿರ್ದೇಶನ ನೀಡಿದೆ.

ಕಡ್ಡಾಯ ಮೋಟಾರು ವಿಮಾ ನಿಯಮಗಳ ಅನುಸರಣೆಯನ್ನು ಹೆಚ್ಚಿಸುವುದು ಮತ್ತು ವಿಮೆ ಮಾಡದ ವಾಹನಗಳು ರಸ್ತೆಗಳಲ್ಲಿ ಸಂಚರಿಸುವುದನ್ನು ತಪ್ಪಿಸಲು ಈ ಕ್ರಮಕ್ಕೆ ಸಲಹೆ ನೀಡಲಾಗಿದೆ.

## ಬಾಂಗ್ಲಾ ದಂಗೆ ವೇಳೆ ವಿದ್ಯಾರ್ಥಿಗಳ ದುರ್ಬಳಕೆ: ಹಸೀನಾ

**ನವದೆಹಲಿ, ಆ.5:** ಬಾಂಗ್ಲಾದೇಶದಲ್ಲಿ ನಡೆದ ಭಾರಿ ಜನಾಕ್ರೋಶ ಹಾಗೂ ಹಿಂಸಾತ್ಮಕ ಪ್ರತಿಭಟನೆಯಿಂದಾಗಿ ಅಧಿಕಾರ ಕಳೆದುಕೊಂಡು ಭಾರತದಲ್ಲಿ ಆಶ್ರಯ ಪಡೆದಿರುವ ಮಾಜಿ ಪ್ರಧಾನಿ ಶೇಖ್ ಹಸೀನಾ, ತಮ್ಮ ಆಡಳಿತದ ಪತನಕ್ಕೆ ಕಾರಣವಾದ ಪ್ರತಿಭಟನೆಯ ಕುರಿತು ಮೌನ ಮುರಿದಿದ್ದಾರೆ. ವಿದ್ಯಾರ್ಥಿಗಳನ್ನು ಭಾವನಾತ್ಮಕವಾಗಿ ದುರ್ಬಳಕೆ ಮಾಡಿಕೊಳ್ಳಲಾಗಿತ್ತು ಎಂದು ಗಂಭೀರ ಆರೋಪ ಮಾಡಿದ್ದಾರೆ. ನವದೆಹಲಿಯ ಫಾರಿನ್ ಕರೆಸ್ಪಾಂಡೆಂಟ್ಸ್ ಕ್ಲಬ್ ಆಫ್ ಸೌತ್ ಏಷ್ಯಾ ಆಯೋಜಿಸಿದ್ದ ವರ್ಚುವಲ್ ಮಾಧ್ಯಮ ಸಂವಾದವನ್ನು ಉದ್ದೇಶಿಸಿ ಮಾತನಾಡಿದ ಶೇಖ್ ಹಸೀನಾ ಅವರು, 2024ರ ಜುಲೈ–ಆಗಸ್ಟ್‌ನಲ್ಲಿ ನಡೆದ ಅಶಾಂತಿ ಶಾಂತಿಯುತ ವಿದ್ಯಾರ್ಥಿ ಚಳವಳಿಯಾಗಿರಲಿಲ್ಲ, ಬದಲಿಗೆ ಯೋಜಿತ ರಾಜಕೀಯ ಗಲಭೆಯಾಗಿತ್ತು ಎಂದು ಹೇಳಿದ್ದಾರೆ.

## ದೇಶದ ಸೈನಿಕ ಶಾಲೆಗಳಲ್ಲಿ ಆರೆಸ್ಸೆಸ್ ಹಿಡಿತ: ರಾಹುಲ್ ಗಾಂಧಿ ಆರೋಪ

**ನವದೆಹಲಿ, ಆ. 5:** ದೇಶದ ಪ್ರತಿಷ್ಠಿತ ಸೈನಿಕ ಶಾಲೆಗಳನ್ನು ಖಾಸಗಿ ಸಹಭಾಗಿತ್ವದಲ್ಲಿ (ಪಿಪಿಪಿ ಮಾದರಿ) ನಡೆಸುವ ಕೇಂದ್ರ ಸರ್ಕಾರದ ನೀತಿಯಿಂದಾಗಿ, ಈ ಶಾಲೆಗಳ ನಿರ್ವಹಣೆ ಹಾಗೂ ಹಿಡಿತ ರಾಷ್ಟ್ರೀಯ ಸ್ವಯಂಸೇವಕ ಸಂಘದ (ಆರ್‌ಎಸ್‌ಎಸ್) ಅಂಗಸಂಸ್ಥೆಗಳು ಮತ್ತು ಆಡಳಿತಾರೂಢ ಬಿಜೆಪಿಗೆ ನಿಕಟವಾಗಿರುವ ಟ್ರಸ್ಟ್‌ಗಳ ಪಾಲಾಗುತ್ತಿದೆ ಎಂದು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ.

ರಕ್ಷಣಾ ಸಚಿವಾಲಯಕ್ಕೆ ಸಂಬಂಧಿಸಿದ ಸಂಸದೀಯ ಸಲಹಾ ಸಮಿತಿಯ ಸಭೆಯಲ್ಲಿ ವಿಷಯ ಪ್ರಸ್ತಾಪಿಸಿದ ರಾಹುಲ್ ಗಾಂಧಿ, ಸಶಸ್ತ್ರ ಪಡೆಗಳಿಗೆ ಯುವಕರನ್ನು ತರಬೇತುಗೊಳಿಸುವ ಪ್ರಮುಖ ಸಂಸ್ಥೆಗಳ ಸೈದ್ಧಾಂತಿಕ ಸ್ವರೂಪ ಮತ್ತು ಜಾತ್ಯತೀತ ಪರಂಪರೆಗೆ ಇದರಿಂದ ಧಕ್ಕೆಯಾಗುತ್ತಿದೆ ಎಂದು ಆರೋಪಿಸಿದರು.

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರ ಅಧ್ಯಕ್ಷತೆಯಲ್ಲಿ ನಡೆದ ಈ ಸಭೆಯಲ್ಲಿ, ನೂತನವಾಗಿ ಆರಂಭಿಸಲಾದ ಪಿಪಿಪಿ ಮಾದರಿಯ ಸೈನಿಕ ಶಾಲೆಗಳ ಹಂಚಿಕೆ ಪ್ರಕ್ರಿಯೆಯನ್ನು ರಾಹುಲ್ ಗಾಂಧಿ ಪ್ರಶ್ನಿಸಿದರು. ಕೇಂದ್ರ ಸರ್ಕಾರ ಇತ್ತೀಚೆಗೆ ಮಂಜೂರು ಮಾಡಿರುವ 60ಕ್ಕೂ ಹೆಚ್ಚು ನೂತನ ಸೈನಿಕ ಶಾಲೆಗಳ ಪೈಕಿ ಗಮನಾರ್ಹ ಸಂಖ್ಯೆಯ ಶಾಲೆಗಳು ಆರ್‌ಎಸ್‌ಎಸ್, ಆರ್‌ಎಸ್‌ಎಸ್ ಬೆಂಬಲಿತ ಸಂಸ್ಥೆಗಳು, ಬಿಜೆಪಿ ನಾಯಕರು ಹಾಗೂ ಮೈತ್ರಿಕೂಟದ ಪಾಲುದಾರರಿಗೆ ಸೇರಿದ ಟ್ರಸ್ಟ್‌ಗಳಿಗೆ ಲಭಿಸಿವೆ ಎಂದು ಮಾಧ್ಯಮ ವರದಿಗಳು ಹಾಗೂ ವಿಪಕ್ಷಗಳ ಕಳವಳವನ್ನು ಸಭೆಯ ಗಮನಕ್ಕೆ ತಂದರು.

ಸೈನಿಕ ಶಾಲೆಗಳು ದೇಶದ ಸಶಸ್ತ್ರ ಪಡೆಗಳಿಗೆ ಶಿಸ್ತುಬದ್ಧ ಹಾಗೂ ತಟಸ್ಥ ಹಿನ್ನೆಲೆಯ ಅಧಿಕಾರಿಗಳನ್ನು ಒದಗಿಸುವ ಶಕ್ತಿ ಕೇಂದ್ರಗಳಾಗಿವೆ. ಇಂತಹ ಸಂಸ್ಥೆಗಳನ್ನು ಯಾವುದೇ ನಿರ್ದಿಷ್ಟ ರಾಜಕೀಯ ಅಥವಾ ಸೈದ್ಧಾಂತಿಕ ಹಿನ್ನೆಲೆಯುಳ್ಳ ಸಂಸ್ಥೆಗಳಿಗೆ ವಹಿಸಿಕೊಡುವುದರಿಂದ ಮಿಲಿಟರಿ ತರಬೇತಿಯ



ಸ್ವರೂಪವೇ ಬದಲಾಗುವ ಅಪಾಯವಿದೆ. ಇದು ಭಾರತೀಯ ಸೇನೆಯ ಜಾತ್ಯತೀತ ಮತ್ತು ರಾಜಕೀಯೇತರ ಸ್ವರೂಪದ ಮೇಲೆ ವ್ಯತಿರಿಕ್ತ ಪರಿಣಾಮ ಬೀರಲಿದೆ ಎಂದು ರಾಹುಲ್ ಗಾಂಧಿ ಪ್ರತಿಪಾದಿಸಿದರು.

ಈ ಸಂದರ್ಭದಲ್ಲೇ ರಾಹುಲ್ ಗಾಂಧಿ ಸೈನಿಕ ಶಾಲೆಗಳ ಈ ಖಾಸಗೀಕರಣ/ಪಿಪಿಪಿ ಮಾದರಿಯನ್ನು ತಕ್ಷಣವೇ ಮರುಪರಿಶೀಲಿಸಬೇಕು, ಶಾಲಾ ಆಡಳಿತ ವ್ಯವಸ್ಥೆಯು ಸಂಪೂರ್ಣವಾಗಿ ರಕ್ಷಣಾ ಸಚಿವಾಲಯ ಹಾಗೂ ಸೈನಿಕ ಶಾಲಾ ಸೊಸೈಟಿಯ ನೇರ ಉಸ್ತುವಾರಿಯಲ್ಲೇ ಇರಬೇಕು ಎಂದು ಒತ್ತಾಯಿಸಿದರು. ಆದಾಗ್ಯೂ, ಸಶಸ್ತ್ರ ಪಡೆಗಳ ತರಬೇತಿ ವ್ಯವಸ್ಥೆಯಲ್ಲಿ ರಾಜಕೀಯ ಮತ್ತು ಸೈದ್ಧಾಂತಿಕ ಪ್ರಭಾವದ ಕುರಿತು ವಿಪಕ್ಷ ನಾಯಕರು ಎತ್ತಿರುವ ಈ ಪ್ರಶ್ನೆಯು ರಾಜಕೀಯ ಹಾಗೂ ರಕ್ಷಣಾ ವಲಯದಲ್ಲಿ ದೊಡ್ಡ ಮಟ್ಟದ ಚರ್ಚೆಗೆ ಗ್ರಾಸವಾಗಿದೆ.

ಈ ಹಿಂದೆ ರಿಪೋರ್ಟರ್ಸ್ ಕಲೆಕ್ಟಿವ್ ವರದಿ ಮಾಡಿದ ಪ್ರಕಾರ ಕೇಂದ್ರ ಸರ್ಕಾರವು ಸುಮಾರು ಶೇ.62 ರಷ್ಟು ಹೊಸ ಸೈನಿಕ ಶಾಲೆಗಳನ್ನು ಸಂಘ ಪರಿವಾರ ಮತ್ತು ಬಿಜೆಪಿ ನಾಯಕರಿಗೆ ಹಸ್ತಾಂತರಿಸಿದೆ. ಕೇಂದ್ರ ಸರ್ಕಾರದ ಪತ್ರಿಕಾ ಹೇಳಿಕೆ ಮತ್ತು ಆರ್‌ಟಿಐನಿಂದ ಪಡೆದ ಮಾಹಿತಿ ಕಳವಳಕಾರಿಯಾಗಿದೆ. ನಮ್ಮ ವಿಚಾರಣೆಯಿಂದ 40ರಷ್ಟು ಅಂದರೆ ಶೇ. 62ರಷ್ಟು ಸೈನಿಕ ಶಾಲೆಗಳನ್ನು ಆರ್‌ಎಸ್‌ಎಸ್, ಬಿಜೆಪಿ ನಾಯಕರಿಗೆ ಹಸ್ತಾಂತರಿಸಲಾಗಿದೆ ಎಂದು ತಿಳಿದು ಬಂದಿದೆ ಎಂದು ರಿಪೋರ್ಟರ್ಸ್ ಕಲೆಕ್ಟಿವ್ ವರದಿ ಹೇಳುತ್ತದೆ.

ಶೇ.62ರಷ್ಟು ಸೈನಿಕ ಶಾಲೆಗಳನ್ನು ರಾಷ್ಟ್ರೀಯ ಸ್ವಯಂ ಸೇವಕ (ಆರ್‌ಎಸ್‌ಎಸ್) ಮತ್ತು ಅದರ ಅಂಗ ಸಂಸ್ಥೆಗಳೊಂದಿಗೆ ನಂಟು ಹೊಂದಿರುವ ಶಾಲೆಗಳಿಗೆ ನೀಡಲಾಗಿದೆ.

ಜೊತೆಗೆ ಬಿಜೆಪಿ, ಅದರ ಮಿತ್ರಪಕ್ಷ, ಅದರ ಹಿತೈಷಿಗಳು, ಹಿಂದುತ್ವ ಸಂಘಟನೆಗಳು, ಇತರೆ ಹಿಂದೂ ಧಾರ್ಮಿಕ ಸಂಸ್ಥೆಗಳಿಗೆ ಹಸ್ತಾಂತರಿಸಲಾಗಿದೆ ಎಂದು ವರದಿ ಉಲ್ಲೇಖಿಸಿದೆ.

2021ರಲ್ಲಿ ಕೇಂದ್ರ ಸರ್ಕಾರವು ಭಾರತದಲ್ಲಿ ಸೈನಿಕ ಶಾಲೆಯನ್ನು ಖಾಸಗಿ ಸಂಸ್ಥೆಗಳು ನಿರ್ವಹಣೆ ಮಾಡುವ ಅವಕಾಶವನ್ನು ನೀಡಿದೆ. ಆ ವರ್ಷದ ಬಜೆಟ್‌ನಲ್ಲಿ ಕೇಂದ್ರ ಸರ್ಕಾರವು ದೇಶದಾದ್ಯಂತ ನೂರು ಹೊಸ ಸೈನಿಕ ಶಾಲೆಗಳನ್ನು ಆರಂಭಿಸುವ ಘೋಷಣೆ ಮಾಡಿದೆ. ಅದಾದ ಬಳಿಕ ಖಾಸಗೀಕರಣದ ನೆಪದಲ್ಲಿ ಆರ್‌ಎಸ್‌ಎಸ್ ಸಿದ್ಧಾಂತವನ್ನು ಹರಡುತ್ತಿದೆ.

## ಆ.09: ರಾಣಿ ಅಬ್ಬಕ್ಕ ತುಳು ಮ್ಯೂಸಿಯಂ ಮತ್ತು ಅಧ್ಯಯನ ಕೇಂದ್ರದಲ್ಲಿ ತುಳುನಾಡಿನ ಮರೆಯಾಗುತ್ತಿರುವ ಸಂಸ್ಕೃತಿ–ಸಂಪ್ರದಾಯದ ವಿಚಾರ ಸಂಕಿರಣ

**ಮುಂಬಯಿ, ಆ.05:** ರಾಣಿ ಅಬ್ಬಕ್ಕ ತುಳು ಮ್ಯೂಸಿಯಂ ಮತ್ತು ಅಧ್ಯಯನ ಕೇಂದ್ರ, ಸಂಚಯಗಿರಿ (ಬಿ.ಸಿ.ರೋಡ್) ಹಾಗೂ ಇಂಡಿಯಾ ಫೌಂಡೇಶನ್ ಫಾರ್ ದಿ ಆರ್ಟ್ಸ್ (ಇಎಫ್‌ಎ) ಸಹಯೋಗದಲ್ಲಿ ತುಳುನಾಡುನಲ್ಲಿ ಮರೆಯಾಗುತ್ತಿರುವ ಆಹಾರ ಸಂಸ್ಕೃತಿ ಎಂಬ ವಿಷಯದ ಕುರಿತು ವಿಶೇಷ ವಿಚಾರ ಸಂಕಿರಣವು ಆಗಸ್ಟ್ 09ರ (ಭಾನುವಾರ) ಬೆಳಗ್ಗೆ 9:30ರಿಂದ ಸಂಜೆ 5:30ರ ವರೆಗೆ ರಾಣಿ ಅಬ್ಬಕ್ಕ ತುಳು ಮ್ಯೂಸಿಯಂ ಮತ್ತು ಅಧ್ಯಯನ ಕೇಂದ್ರದಲ್ಲಿ ನಡೆಯಲಿದೆ. ಈ ಯೋಜನೆಗೆ ಟಾಟಾ ಟ್ರಸ್ಟ್ಸ್‌ನ ಸಹಯೋಗದಲ್ಲಿ ನಡೆಯಲಿದೆ ರಾಣಿ ಅಬ್ಬಕ್ಕ ತುಳು ಮ್ಯೂಸಿಯಂ ಮತ್ತು ಅಧ್ಯಯನ ಕೇಂದ್ರದ ಸಂಸ್ಥಾಪಕರು ಮತ್ತು ಮುಖ್ಯ ನವೀನ್ಯತಾ ಚಿಂತಕ ಪ್ರೊ| ಡಾ| ತುಕಾರಾಮ್ ಪೂಜಾರಿ ತಿಳಿಸಿದ್ದಾರೆ.

**ಆಹಾರ ಸಂಸ್ಕೃತಿಯ ಆಳವಾದ ಅಧ್ಯಯನ:**

ಆಹಾರವು ಪ್ರತಿಯೊಬ್ಬ ಜೀವಿಯ ಬದುಕಿನ ಅವಿಭಾಜ್ಯ ಅಂಗವಾಗಿದೆ. ಮಾನವ ವಿಕಾಸದ ಇತಿಹಾಸವನ್ನು ಅಧ್ಯಯನ ಮಾಡಿದ ವಿಜ್ಞಾನಿಗಳ ಪ್ರಕಾರ, ಆಹಾರದ ಅನ್ವೇಷಣೆಯೇ ಮಾನವನನ್ನು ಬೇಟೆಗಾರ ಜೀವನದಿಂದ ಕೃಷಿ ಆಧಾರಿತ ನೆಲೆಸಿದ ಸಮಾಜವಾಗಿ ರೂಪುಗೊಳ್ಳಲು ಕಾರಣವಾಯಿತು. ನಾಗರಿಕತೆಗಳ ಬೆಳವಣಿಗೆಯೊಂದಿಗೆ ಆಹಾರ ಉತ್ಪಾದನೆ, ವ್ಯಾಪಾರ ಮತ್ತು ವಿವಿಧ ಸಂಸ್ಕೃತಿಗಳ ನಡುವಿನ ಸಂಪರ್ಕ ಹೆಚ್ಚಾಗಿ, ವಿಭಿನ್ನ ಆಹಾರ ಪದ್ಧತಿಗಳ ವಿನಿಮಯಕ್ಕೂ ದಾರಿಯಾಯಿತು. ಭಾರತವು ವೈವಿಧ್ಯಮಯ ಆಹಾರ ಸಂಸ್ಕೃತಿಗಳ ನಾಡಾಗಿದ್ದು, ಪ್ರತಿಯೊಂದು ಪ್ರದೇಶವೂ ತನ್ನದೇ ಆದ ವಿಶಿಷ್ಟ ಪಾಕಪದ್ಧತಿಯನ್ನು ಹೊಂದಿದೆ. ಪಶ್ಚಿಮ ಘಟ್ಟಗಳು, ಅರಬ್ಬಿ ಸಮುದ್ರ, ಆರು ತಿಂಗಳ ಮಳೆಗಾಲ ಹಾಗೂ ಅನೇಕ ನದಿಗಳ ಆಶೀರ್ವಾದ ಪಡೆದ ತುಳುನಾಡಿನಲ್ಲಿ ವರ್ಷಕ್ಕೆ ಮೂರು ಬಾರಿ ಭತ್ತ ಬೆಳೆಯುವುದರಿಂದ ಅಕ್ಕಿಯೇ ಪ್ರಮುಖ ಆಹಾರವಾಗಿದೆ.

**ತುಳುನಾಡಿನ ಆಹಾರ ವೈವಿಧ್ಯ**

ಕಾಲಕ್ರಮೇಣ ಈ ಪ್ರದೇಶಕ್ಕೆ ವಲಸೆ ಬಂದ ವಿವಿಧ ಸಮುದಾಯಗಳು, ಪೋರ್ಚುಗೀಸರು, ಬ್ರಿಟಿಷರ ಪ್ರಭಾವ, ಭೂಸುಧಾರಣಾ ಕ್ರಮಗಳು ಹಾಗೂ ಆಧುನಿಕ ಬೇಕರಿಗಳು, ಹೋಟೆಲ್‌ಗಳು ಮತ್ತು ಪ್ಯಾಕೇಜ್ ಆಹಾರ ಸಂಸ್ಕೃತಿಯ




ಬೆಳವಣಿಗೆಯಿಂದ ತುಳುನಾಡಿನ ಸಾಂಪ್ರದಾಯಿಕ ಆಹಾರ ಪದ್ಧತಿಯಲ್ಲಿ ಮಹತ್ತರ ಬದಲಾವಣೆಗಳು ಕಂಡುಬಂದಿವೆ.

ತುಳು ತಿಂಗಳಾದ ಕರ್ಕಾಟಕ (ಆಟಿ) ಅವಧಿಯಲ್ಲಿ ಎದುರಾಗುತ್ತಿದ್ದ ಆಹಾರದ ಕೊರತೆಯನ್ನು ಎದುರಿಸಲು ಬೇಸಿಗೆಯಲ್ಲಿಯೇ ಹಣ್ಣು–ತರಕಾರಿಗಳನ್ನು ಸಂರಕ್ಷಿಸುವುದು, ಸ್ಥಳೀಯ ಸೊಪ್ಪು ಹಾಗೂ ಕಾಡು ಸಸ್ಯಗಳನ್ನು ಬಳಸಿಕೊಂಡು ಪೌಷ್ಟಿಕ ಆಹಾರ ತಯಾರಿಸುವ ವಿಶಿಷ್ಟ ಸಂಪ್ರದಾಯವನ್ನು ತುಳುವರು ಬೆಳೆಸಿಕೊಂಡಿದ್ದಾರೆ. ಈ ವಿಚಾರ ಸಂಕಿರಣವು ಕೇವಲ ಆಹಾರೋತ್ಸವವಲ್ಲ; ಆಹಾರದ ಇತಿಹಾಸ, ಪರಿಸರ, ಸಂಸ್ಕೃತಿ, ಸಾಂಪ್ರದಾಯಿಕ ಅಡುಗೆ ಪಾತ್ರೆಗಳು ಹಾಗೂ ಆರೋಗ್ಯದ ಜ್ಞಾನವನ್ನು ಸಮಗ್ರವಾಗಿ ಪರಿಚಯಿಸುವ ಪ್ರಯತ್ನವಾಗಿದೆ.

**ಸಂಶೋಧನಾ ಯೋಜನೆಯ ಭಾಗ**

ಈ ಕಾರ್ಯಕ್ರಮವು ಅರವಿಂದ್ ಕೆ. ಅವರ ಪರಿಕಲ್ಪನೆಯಡಿ, ಇಂಡಿಯಾ ಫೌಂಡೇಶನ್ ಫಾರ್ ದಿ ಆರ್ಟ್ಸ್ (ಇಎಫ್‌ಎ) ವತಿಯಿಂದ ಅನುಷ್ಠಾನಗೊಳ್ಳುತ್ತಿರುವ ಆರ್ಕೈವ್ಸ್ ಮತ್ತು ಮ್ಯೂಸಿಯಂಸ್ ಯೋಜನೆಯ ಭಾಗವಾಗಿದೆ. ರಾಣಿ ಅಬ್ಬಕ್ಕ ತುಳು ಮ್ಯೂಸಿಯಂನಲ್ಲಿ ಸಂರಕ್ಷಿಸಲಾಗಿರುವ ದೈನಂದಿನ ಬಳಕೆಯ ವಸ್ತುಗಳ ಮೂಲಕ ತುಳುವರ ಕೃಷಿ ಪದ್ಧತಿ, ಆಹಾರ ಸಂಸ್ಕೃತಿ ಹಾಗೂ ಸಾಂಪ್ರದಾಯಿಕ ಅಡುಗೆ ಪಾತ್ರೆಗಳ ಮಹತ್ವವನ್ನು ದಾಖಲಿಸುವ ಉದ್ದೇಶವನ್ನು ಈ ಯೋಜನೆ ಹೊಂದಿದೆ. ಕಳೆದ ಮೂರು ದಶಕಗಳಿಂದ ರಾಣಿ ಅಬ್ಬಕ್ಕ ತುಳು ಮ್ಯೂಸಿಯಂ ಮತ್ತು ಅಧ್ಯಯನ ಕೇಂದ್ರವು ತುಳುನಾಡಿನ ಇತಿಹಾಸ, ಸಂಸ್ಕೃತಿ ಮತ್ತು ಜೀವನಶೈಲಿಯನ್ನು ದೈನಂದಿನ ಬಳಕೆಯ ವಸ್ತುಗಳ ಮೂಲಕ ದಾಖಲಿಸಿ ಸಂರಕ್ಷಿಸುವ ಕಾರ್ಯವನ್ನು ನಿರಂತರವಾಗಿ ನಡೆಸುತ್ತಿದ್ದು, ಈ ಸಂಸ್ಥೆಯ ಸ್ಥಾಪಕರಾದ ಡಾ. ತುಕರಾಮ ಪೂಜಾರಿ ಅವರ ಕನಸಿನ ಕೂಸಾಗಿದೆ.

**ಉದ್ಘಾಟನಾ ಸಮಾರಂಭ**

ಬೆಳಿಗ್ಗೆ 09:30ಕ್ಕೆ ನಡೆಯುವ ಉದ್ಘಾಟನಾ ಸಮಾರಂಭದಲ್ಲಿ ಇಂಡಿಯಾ ಫೌಂಡೇಶನ್ ಫಾರ್ ದಿ ಆರ್ಟ್ಸ್‌ನ ಕಾರ್ಯನಿರ್ವಾಹಕ ನಿರ್ದೇಶಕಿ ಮೆನಕಾ ರೋಡ್ರಿಗಸ್ ಹಾಗೂ ರಾಣಿ ಅಬ್ಬಕ್ಕ ತುಳು ಮ್ಯೂಸಿಯಂ ಮತ್ತು ಅಧ್ಯಯನ ಕೇಂದ್ರದ ಸಂಸ್ಥಾಪಕ ಡಾ| ತುಕರಾಮ ಪೂಜಾರಿ ಉಪಸ್ಥಿತರಿದ್ದು ಉದ್ಘಾಟನಾ ಕಾರ್ಯಕ್ರಮ ನೆರವೇರಿಸಲಿದ್ದಾರೆ.

ಅಂದು ಬೆಳಿಗ್ಗೆ 10 ಗಂಟೆಗೆ ಮಂಗಳೂರು ವಿಶ್ವವಿದ್ಯಾನಿಲಯದ ಕನ್ನಡ ಅಧ್ಯಯನ ಸಂಸ್ಥೆಯ ನಿವೃತ್ತ ಪ್ರಾಧ್ಯಾಪಕ ಪ್ರೊ| ಬಿ.ಶಿವರಾಮ ಶೆಟ್ಟಿ ಅವರು ಮುಖ್ಯ ಉಪನ್ಯಾಸ ನೀಡಲಿದ್ದಾರೆ.

**ಮೊದಲ ಅಧಿವೇಶನ ತುಳುವ ಸಮಾಜ ಮತ್ತು ಆಹಾರ ಸಂಸ್ಕೃತಿ**

ಬೆಳಿಗ್ಗೆ 11 ಗಂಟೆಗೆ ನಡೆಯುವ ಮೊದಲ ಅಧಿವೇಶನದಲ್ಲಿ ತುಳುನಾಡಿನ ಆಹಾರ ಸಂಸ್ಕೃತಿಯ ವೈಶಿಷ್ಟ್ಯ, ಸ್ಥಳೀಯ ಆಹಾರ ಸಂಗ್ರಹಣೆ, ಕೃಷಿ ಹಾಗೂ ಸಂರಕ್ಷಣಾ ಪದ್ಧತಿಗಳ ಕುರಿತು ಚರ್ಚೆ ನಡೆಯಲಿದೆ.

ಈ ಅಧಿವೇಶನದಲ್ಲಿ ಕಾಸರಗೋಡು ಗಡಿನಾಡಿನ ಲೇಖಕಿ ಹಾಗೂ ಸಂಶೋಧಕಿ ರಾಜಶ್ರೀ ಟಿ.ರೈ ಪೆರ್ಲ ಅವರು ತುಳುವರ ಆಹಾರ ಸಂಪ್ರದಾಯದ ಕುರಿತು ಮಾತನಾಡಲಿದ್ದು, ಯೂಟ್ಯೂಬ್‌ನಲ್ಲಿ ಜನಪ್ರಿಯ ಅಡುಗೆ ವಾಹಿನಿ ನಡೆಸುತ್ತಿರುವ ಆಹಾರ ತಜ್ಞ ಸುದರ್ಶನ ಭಟ್ ಬೇಡ್ರಾಡಿ ಅವರು ಸಾಂಪ್ರದಾಯಿಕ ಅಡುಗೆ ವಿಧಾನಗಳು ಹಾಗೂ ಪ್ರಾದೇಶಿಕ ಪಾಕವೈವಿಧ್ಯವನ್ನು ಪರಿಚಯಿಸಲಿದ್ದಾರೆ.

**ಎರಡನೇ ಅಧಿವೇಶನ ತುಳುವ ಸಂಸ್ಕೃತಿಯಲ್ಲಿ ಅಡುಗೆ ಪಾತ್ರೆಗಳ ಮಹತ್ವ**

ಮಧ್ಯಾಹ್ನ 02 ಗಂಟೆಗೆ ನಡೆಯುವ ಎರಡನೇ ಅಧಿವೇಶನದಲ್ಲಿ ಮಣ್ಣಿನ ಪಾತ್ರೆಗಳು, ಲೋಹದ ಪಾತ್ರೆಗಳು, ಉಪ್ಪಿನಕಾಯಿ ಸಂಗ್ರಹಿಸಲು ಬಳಸುವ ಪಿಂಗಾಣಿ ಪಾತ್ರೆಗಳು ಸೇರಿದಂತೆ ತುಳುನಾಡಿನ ಸಾಂಪ್ರದಾಯಿಕ ಅಡುಗೆ ಪಾತ್ರೆಗಳ ಮಹತ್ವ ಹಾಗೂ ಅವುಗಳ ಸಾಂಸ್ಕೃತಿಕ ಹಿನ್ನೆಲೆಯ ಕುರಿತು ಚರ್ಚೆ ನಡೆಯಲಿದೆ.

ದೃಶ್ಯ ಕಲಾವಿದ, ಅಡುಗೆ ಪರಿಣಿತ ಹಾಗೂ ಪುರಾತನ ವಸ್ತುಗಳ ಸಂಗ್ರಾಹಕರಾದ ಪುರುಷೋತ್ತಮ ಅಡ್ವೆ ಅವರು ಈ ವಿಷಯದ ಕುರಿತು ಉಪನ್ಯಾಸ ನೀಡಲಿದ್ದಾರೆ.

**ಮೂರನೇ ಅಧಿವೇಶನ ಆಧುನಿಕ ಯುಗದಲ್ಲಿ ಆಹಾರ ಮತ್ತು ಆರೋಗ್ಯ**

ಮಧ್ಯಾಹ್ನ 3.30ಕ್ಕೆ ನಡೆಯುವ ಮೂರನೇ ಅಧಿವೇಶನದಲ್ಲಿ ಬದಲಾಗುತ್ತಿರುವ ಜೀವನಶೈಲಿಯಲ್ಲಿ ಆಹಾರ ಮತ್ತು ಆರೋಗ್ಯದ ಸಂಬಂಧ, ಸ್ಥಳೀಯ ಹಾಗೂ ಋತುಮಾನಕ್ಕೆ ಅನುಗುಣವಾದ ಆಹಾರದ ಪೌಷ್ಟಿಕತೆ ಮತ್ತು ಸಾಂಪ್ರದಾಯಿಕ ಆಹಾರ ಪದ್ಧತಿಯ ಆರೋಗ್ಯಕರ ಅಂಶಗಳ ಕುರಿತು ಚರ್ಚೆ ನಡೆಯಲಿದೆ. ಬೆಳ್ತಂಗಡಿ ಅಲ್ಲಿನ ಪ್ರಸನ್ನ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದ ಶಲ್ಯತಂತ್ರ ವಿಭಾಗದ ಪ್ರಾಧ್ಯಾಪಕ ಹಾಗೂ ಖ್ಯಾತ ಆಯುರ್ವೇದ ವೈದ್ಯ ಡಾ| ಸುಪ್ರೀತ್ ಜೆ.ಲೋಬೋ ಈ ಕುರಿತು ಉಪನ್ಯಾಸ ನೀಡಲಿದ್ದಾರೆ.

**ತುಳುವ ಸಂಸ್ಕೃತಿಯ ಅಮೂಲ್ಯ ಭಂಡಾರ**

ರಾಣಿ ಅಬ್ಬಕ್ಕ ಕಲಾ ಗ್ಯಾಲರಿ ಹಾಗೂ ತುಳು ಬದುಕು ವಸ್ತು ಸಂಗ್ರಹಾಲಯಕ್ಕಾಗಿ ಪ್ರಸಿದ್ಧವಾಗಿರುವ ರಾಣಿ ಅಬ್ಬಕ್ಕ ತುಳು ಮ್ಯೂಸಿಯಂ ಮತ್ತು ಅಧ್ಯಯನ ಕೇಂದ್ರವು ತುಳುವ ಸಂಸ್ಕೃತಿಗೆ ಸಂಬಂಧಿಸಿದ ದೇಶದ ಏಕೈಕ ಜನಾಂಗ ಶಾಸ್ತ್ರೀಯ ಸಂಗ್ರಹಾಲಯವಾಗಿದೆ. ಸ್ಥಾಪಕರಾದ ಡಾ| ತುಕರಾಮ ಪೂಜಾರಿ ಅವರ ವೈಯಕ್ತಿಕ ಸಂಗ್ರಹದಿಂದ ಆರಂಭವಾದ ಈ ಸಂಸ್ಥೆ ಇಂದು ತುಳುವರ ಇತಿಹಾಸ, ಸಂಸ್ಕೃತಿ ಮತ್ತು ಜೀವನಶೈಲಿಯನ್ನು ಪ್ರತಿಬಿಂಬಿಸುವ ಸಾವಿರಾರು ಅಪರೂಪದ ವಸ್ತುಗಳನ್ನು ಒಳಗೊಂಡ ಮಹತ್ವದ ಅಧ್ಯಯನ ಕೇಂದ್ರವಾಗಿ ಬೆಳೆದಿದೆ.

ಇಂಡಿಯಾ ಫೌಂಡೇಶನ್ ಫಾರ್ ದಿ ಆರ್ಟ್ಸ್ (ಇಎಫ್‌ಎ) ದೇಶವ್ಯಾಪಿ ಸ್ವತಂತ್ರ ಲಾಭರಹಿತ ಸಂಸ್ಥೆಯಾಗಿದ್ದು, ಕಲೆ, ಸಂಸ್ಕೃತಿ, ಸಂಶೋಧನೆ, ಶಿಕ್ಷಣ, ಆರ್ಕೈವ್ಸ್ ಹಾಗೂ ಮ್ಯೂಸಿಯಂ ಕ್ಷೇತ್ರಗಳಲ್ಲಿ ಅನೇಕ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದೆ. 1993ರಲ್ಲಿ ಸ್ಥಾಪನೆಯಾದ ಈ ಸಂಸ್ಥೆ ಭಾರತೀಯ ಭಾಷೆಗಳಲ್ಲಿನ ಸಂಶೋಧನೆ ಹಾಗೂ ಸಾಂಸ್ಕೃತಿಕ ದಾಖಲಾತಿಗಳಿಗೆ ವಿಶೇಷ ಉತ್ತೇಜನ ನೀಡುತ್ತಿದೆ.

ಅರವಿಂದ್ ಕೆ. ಅವರ ಪರಿಕಲ್ಪನೆಯ ಈ ಯೋಜನೆ, ಇಂಡಿಯಾ ಫೌಂಡೇಶನ್ ಫಾರ್ ದಿ ಆರ್ಟ್ಸ್ (ಇಎಫ್‌ಎ) ಹಾಗೂ ರಾಣಿ ಅಬ್ಬಕ್ಕ ತುಳು ಮ್ಯೂಸಿಯಂ ಮತ್ತು ಅಧ್ಯಯನ ಕೇಂದ್ರ ಸಹಯೋಗದಲ್ಲಿ, ಟಾಟಾ ಟ್ರಸ್ಟ್ ನ ಆಥಿಕ ಸಹಕಾರದೊಂದಿಗೆ ಅನುಷ್ಠಾನಗೊಳ್ಳುತ್ತಿರುವ ಮಹತ್ವದ ಸಾಂಸ್ಕೃತಿಕ ಉಪಕ್ರಮವಾಗಿದೆ ಎಂದು ರಾಣಿ ಅಬ್ಬಕ್ಕ ತುಳು ಮ್ಯೂಸಿಯಂ ಮತ್ತು ಅಧ್ಯಯನ ಕೇಂದ್ರದ ಕಾರ್ಯದರ್ಶಿ ಮತ್ತು ಮುಖ್ಯ ನವೀನ್ಯತಾ ನಾಯಕಿ ಡಾ| ಆಶಾಲತಾ ಸುವರ್ಣ ತಿಳಿಸಿದ್ದಾರೆ.

# ಪುಷ್ಪಗುಚ್ಛ, ಶಾಲು, ಪೇಟಗಳಿಗೆ ಬ್ರೇಕ್: ಸರಳತೆ ಹಾದಿ ಹಿಡಿದ ಸಚಿವ ವಿಜಯಾನಂದ ಕಾಶಪ್ಪನವರ್

**ಬೆಂಗಳೂರು, ಆ.5:** ರಾಜಕೀಯ ವಲಯದಲ್ಲಿ ಸಚಿವರು ಅಥವಾ ನಾಯಕರು ಅಧಿಕಾರಕ್ಕೇರಿದಾಗ ಬೃಹತ್ ಹಾರಗಳು, ಪೇಟಗಳು, ಶಾಲೆಗಳನ್ನು ನೀಡಿ ಸನ್ಮಾನಿಸುವುದು ಇಲ್ಲವೇ ಗೌರವಿಸುವುದು, ತಲ ತಲಾಂತರದಿಂದ ನಡೆದುಕೊಂಡು ಬಂದಿದೆ. ಆದರೆ ನೂತನ ಸಚಿವ ವಿಜಯಾನಂದ ಕಾಶಪ್ಪನವರ್ ಹೊಸ ಸಂಪ್ರದಾಯಕ್ಕೆ ನಾಂದಿ ಹಾಡಿದ್ದಾರೆ. ತಮ್ಮನ್ನು ಭೇಟಿಯಾಗಲು ಬರುವ ಸಾರ್ವಜನಿಕರು, ಕಾರ್ಯಕರ್ತರು ಅಭಿಮಾನಿಗಳು ಸೇರಿದಂತೆ ಯಾರೊಬ್ಬರೂ ತಮಗೆ ಶಾಲು, ಪೇಟ, ತರಬಾರದೆಂದು ಮನವಿ ಮಾಡಿದ್ದಾರೆ.

ಹಾರ ತುರಾಯಿ ಪೇಟ ಶಾಲು ತರುವುದಕ್ಕೆ ಅನಗತ್ಯವಾಗಿ ಬಂದು ವೆಚ್ಚ ಮಾಡುವ ಬದಲು ಸರಳವಾಗಿಯೇ ಕಚೇರಿ ಇಲ್ಲವೇ ನಿವಾಸಕ್ಕೆ ಬಂದು ಯಾವುದೇ ಸಂದರ್ಭದಲ್ಲಿ ಭೇಟಿಯಾಗಬಹುದು ಎಂದು ತಿಳಿಸಿದ್ದಾರೆ.

ಇಂದಿನ ರಾಜಕೀಯ ಮತ್ತು ಸಾಮಾಜಿಕ ವಾಸ್ತವಿಕತೆಯಲ್ಲಿ ಅತಿಶಯೋಕ್ತಿಯ ಸನ್ಮಾನಗಳು ಮತ್ತು ಅದ್ದೂರಿ ಸ್ವಾಗತಗಳು ಅನಗತ್ಯ ಖರ್ಚಿಗೆ ಕಾರಣವಾಗುವುದಲ್ಲದೆ, ಸಮಯದ ನಷ್ಟಕ್ಕೂ ದಾರಿ ಮಾಡಿಕೊಡುತ್ತವೆ. ಸಾರ್ವಜನಿಕರ ಹಣ ಅಥವಾ ಅಭಿಮಾನಿಗಳ ಕಷ್ಟಪಟ್ಟು ಸಂಪಾದಿಸಿದ ಹಣವನ್ನು ಇಂತಹ ತಾತ್ಕಾಲಿಕ ವಸ್ತುಗಳ ಮೇಲೆ ವ್ಯಯ ಮಾಡುವುದಕ್ಕಿಂತ, ಜನಪರ ಕೆಲಸಗಳಿಗೆ ಬಳಸುವುದು ಉತ್ತಮ



ಎಂಬ ಸಂದೇಶವನ್ನು ಈ ನಿರ್ಧಾರ ಸಾರುತ್ತದೆ.

ಹಿಂದೆ ಶಾಸಕರಾಗಿ ಕಾರ್ಯನಿರ್ವಹಿಸಿದ ಸಂದರ್ಭದಲ್ಲೂ ಅವರು ಸರಳ ಜೀವನಶೈಲಿಗೆ ಒತ್ತು ನೀಡಿದ್ದರು. ಸಾರ್ವಜನಿಕರು ಕಷ್ಟಪಟ್ಟು ತರುವ ದುಬಾರಿ ಉಡುಗೊರೆಗಳು ಅಥವಾ ಶಾಲು-ಪೇಟಗಳ ಬದಲು ಜನರ ಸಮಸ್ಯೆಗಳನ್ನು ಆಲಿಸುವುದೇ ತಮಗೆ ನಿಜವಾದ ಸನ್ಮಾನ ಎಂದು ಅವರು ಹಿಂದೆ ಹಲವು ವೇದಿಕೆಗಳಲ್ಲಿ ಅಭಿಪ್ರಾಯಪಟ್ಟಿದ್ದರು.

ಈ ವಿನೂತನ ನಿರ್ಧಾರವು ರಾಜಕೀಯ ವಲಯದಲ್ಲಿ ಪ್ರಶಂಸೆಗೆ ಪಾತ್ರವಾಗಿದ್ದು, ಜನಸಾಮಾನ್ಯರೊಂದಿಗೆ ನಾಯಕರು ಮತ್ತಷ್ಟು ಹತ್ತಿರವಾಗಲು ಇಂತಹ ಸರಳತೆಯ ಕ್ರಮಗಳು ಅತ್ಯಂತು ಅವಶ್ಯಕವಾಗಿವೆ ಎಂಬುದನ್ನು ಈ ಘಟನೆ ಮತ್ತೊಮ್ಮೆ ಸಾಬೀತುಪಡಿಸಿದೆ.




ಪ್ರಧಾನ ಸಿವಿಲ್ ನ್ಯಾಯಾಧೀಶೆ ಗಾಯತ್ರಿ ಮಾಲೂರು ಅವರ ರಸ್ತೆ ಉದ್ರಿಕ್ತ ಘಟನೆಯನ್ನು ಖಂಡಿಸಿ ಕನ್ನಡ ಒಕ್ಕೂಟ ಸದಸ್ಯರು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬುಧವಾರ ಪ್ರತಿಭಟನೆ ನಡೆಸಿದರು.

### ಒಟ್ಟು 5.54 ಕೋಟಿ ಮತದಾರರ ನೋಂದಣಿ: ಅನ್ಬುಕುಮಾರ್ ಮಾಹಿತಿ

# ಅಂತಿಮಹಂತ ತಲುಪಿದ ಎಸ್‌ಐಆರ್ ಪ್ರಕ್ರಿಯೆ, ಆ.8ರವರೆಗೆ ಡಿಜಿಟಲೈಸೇಶನ್ ಕಾರ್ಯ

**ಬೆಂಗಳೂರು, ಆ.5:** ರಾಜ್ಯದ ಮತದಾರರ ಪಟ್ಟಿಯ ಪರಿಷ್ಕರಣೆ ಕಾರ್ಯ ಅಂತಿಮ ಹಂತ ತಲುಪಿದ್ದು, ಜೂ.16, 2026ರ ವೇಳೆಗೆ ರಾಜ್ಯದಲ್ಲಿ 5 ಕೋಟಿ 54 ಲಕ್ಷದ 32 ಸಾವಿರದ 314 ಮತದಾರರು ನೋಂದಣಿಯಾಗಿದ್ದಾರೆ ಎಂದು ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ತಿಳಿಸಿದ್ದಾರೆ.

ಮನೆ-ಮನೆ ಸಮೀಕ್ಷೆ ಹಾಗೂ ದಾಖಲೆಗಳ ಡಿಜಿಟೈಸೇಶನ್ ಕಾರ್ಯ ಜೂನ್ 30ರಿಂದ ಆಗಸ್ಟ್ 8ರವರೆಗೆ ನಡೆಯುತ್ತಿದ್ದು, ಮುದ್ರಿಸಲಾದ ಎಲ್ಲ ಎಣಿಕೆ ನಮೂನೆಗಳನ್ನು ಬಿಎಲ್‌ಒಗಳಿಗೆ ವಿತರಿಸಲಾಗಿದೆ. ಇದುವರೆಗೆ 5,54,09,337 ನಮೂನೆಗಳು ಡಿಜಿಟೈಸೇಶನ್ ಆಗಿದ್ದು, ಇದು ಶೇ.99.96ರಷ್ಟು ಪ್ರಗತಿಯನ್ನು ದಾಖಲಿಸಿದೆ.

ಎಎಸ್‌ಡಿಡಿಒ ಪಟ್ಟಿಯಲ್ಲಿ 1.11 ಕೋಟಿ ಮತದಾರರು: ತಿದ್ದುಪಡಿಗೆ ಆಗಸ್ಟ್ 8ರವರೆಗೆ ಅವಕಾಶಒಟ್ಟು 1 ಕೋಟಿ 11 ಲಕ್ಷದ 4 ಸಾವಿರದ 705 ಮತದಾರರನ್ನು ಎಎಸ್‌ಡಿಡಿಒ ಪಟ್ಟಿಯಲ್ಲಿ ಗುರುತಿಸಲಾಗಿದ್ದು, ಇವರಲ್ಲಿ ಪತ್ತೆಯಾಗದವರು, ಶಾಶ್ವತವಾಗಿ ಸ್ಥಳಾಂತರಗೊಂಡವರು, ಮೃತಪಟ್ಟವರು ಹಾಗೂ ಈಗಾಗಲೇ ಬೇರೆ ಕಡೆಗಳಲ್ಲಿ ನೋಂದಾಯಿಸಿಕೊಂಡವರ ಮಾಹಿತಿ ಸೇರಿದೆ. ತಪ್ಪಾಗಿ ಎಎಸ್‌ಡಿಡಿಒ ಎಂದು ಗುರುತಿಸಲ್ಪಟ್ಟಿದ್ದರೆ ಸಂಬಂಧಿತ ಬಿಎಲ್‌ಒ ಅಥವಾ ಚುನಾವಣಾ ನೋಂದಣಿ ಅಧಿಕಾರಿಯನ್ನು ಸಂಪರ್ಕಿಸಿ ಆಗಸ್ಟ್ 8ರೊಳಗೆ ತಿದ್ದುಪಡಿ ಮಾಡಿಸಿಕೊಳ್ಳಬಹುದಾಗಿದೆ ಎಂದು ತಿಳಿಸಲಾಗಿದೆ.

ಅಲ್ಲದೆ, ಆನ್ಲೈನ್ ಮೂಲಕ 6.90 ಲಕ್ಷಕ್ಕೂ ಹೆಚ್ಚು ನಮೂನೆಗಳು ಸಲ್ಲಿಕೆಯಾಗಿದ್ದು, ಡಿಜಿಟೈಸೇಶನ್ಗೆ ಕೇವಲ 22,977 ನಮೂನೆಗಳು ಮಾತ್ರ ಬಾಕಿ ಉಳಿದಿವೆ.ಇನ್ನು ಅಕ್ಟೋಬರ್ 1, 2026ರ ವೇಳೆಗೆ 18 ವರ್ಷ ಪೂರೈಸುವ ಅರ್ಹ ನಾಗರಿಕರು ನಮೂನೆ-6 ಸಲ್ಲಿಸಿ



ಮತದಾರರ ಪಟ್ಟಿಗೆ ಹೆಸರು ಸೇರ್ಪಡೆ ಮಾಡಿಕೊಳ್ಳುವಂತೆ ಚುನಾವಣಾಧಿಕಾರಿ ಕಚೇರಿ ಮನವಿ ಮಾಡಿದೆ. ಹೊಸ ನೋಂದಣಿ, ಎನ್‌ಆರ್‌ಐ ನೋಂದಣಿ, ಹೆಸರು ಅಳಿಸುವಿಕೆ ಹಾಗೂ ವಿವರ ತಿದ್ದುಪಡಿಗೆ ಸಂಬಂಧಿಸಿದ ನಮೂನೆಗಳನ್ನು ಬಿಎಲ್‌ಒಗಳಿಂದ ಅಥವಾ ಆನ್‌ಲೈನ್ ಮೂಲಕ ಸಲ್ಲಿಸಬಹುದಾಗಿದೆ. ಜೂನ್ 16ರಿಂದ ಆಗಸ್ಟ್ 4ರವರೆಗೆ ಒಟ್ಟು 12,20,312 ಅರ್ಜಿಗಳು ಸ್ವೀಕರಿಸಲಾಗಿದ್ದು, ಇದರಲ್ಲಿ ಹೊಸ ಮತದಾರರ ನೋಂದಣಿಗೆ 3,72,201 ಅರ್ಜಿಗಳು ಹಾಗೂ ವಿವರ ತಿದ್ದುಪಡಿಗೆ 8,13,952 ಅರ್ಜಿಗಳು ಸೇರಿವೆ.

### ಸಂಪುಟದಲ್ಲಿ ಪ್ರಾತಿನಿಧ್ಯಕ್ಕೆ ಹಕ್ಕೊತ್ತಾಯ

# ಇಂದು ಫ್ರೀಡಂ ಪಾರ್ಕ್‌ನಲ್ಲಿ ಬ್ರಾಹ್ಮಣ ಸಮುದಾಯದ ಸಮಾವೇಶ



**ಬೆಂಗಳೂರು, ಆ.5:** ಸಚಿವ ಸಂಪುಟದಲ್ಲಿ ಬ್ರಾಹ್ಮಣ ಸಮುದಾಯಕ್ಕೆ ಪ್ರಾತಿನಿಧ್ಯಕ್ಕೆ ಕಲ್ಪಿಸಬೇಕೆಂದು ಒತ್ತಾಯಿಸಿ ಗುರುವಾರ (ಆ.6) ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಸಮುದಾಯದ ಮುಖಂಡರ ಬೃಹತ್ ಹಕ್ಕೊತ್ತಾಯ ಸಮಾವೇಶ ನಡೆಯಲಿದೆ. ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ಅಧ್ಯಕ್ಷ, ಅಸಗೋಡು ಜಯಸಿಂಹ ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ಯಲ್ಲಿ ಈ ವಿಷಯ ತಿಳಿಸಿದರು. ರಾಜ್ಯದ ಎಲ್ಲ ಜಿಲ್ಲೆಗಳ ಮುಖಂಡರು ಮತ್ತು ಪ್ರತಿನಿಧಿಗಳು ಭಾಗವಹಿಸಲಿದ್ದಾರೆ.

ಸರ್ವ ಜನಾಂಗದ ಹಿತವೇ ಸಮುದಾಯದ ಗುರಿಯಾಗಿದೆ. ನಮಗೆ ಆಗಿರುವ ಅನ್ಯಾಯ ಸರಿಪಡಿಸುವಂತೆ ಪಕ್ಷದ ಹೈಕಮಾಂಡ್ ಗಮನ ಸೆಳೆಯಲಾಗುವುದು. ಈಗಾಗಲೇ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರಿಗೆ ಮನವಿ ಸಲ್ಲಿಸಲಾಗಿದೆ. ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲ ಅವರಿಗೂ ಮನವಿ ಸಲ್ಲಿಸಲಾಗುವುದು. ಸಮುದಾಯ 70ರ ದಶಕದಿಂದಲೂ ಕಾಂಗ್ರೆಸ್ ಪಕ್ಷಕ್ಕೆ ಅಖಂಡ ಬೆಂಬಲವಾಗಿ ನಿಂತಿದೆ. ಸ್ವಾತಂತ್ರ್ಯ ಸಂಗ್ರಾಮ ಮತ್ತು ಕರ್ನಾಟಕದ ಏಕೀಕರಣಕ್ಕೂ ಸಮುದಾಯದ ಕೊಡುಗೆ ದೊಡ್ಡದಿದೆ.

ಈ ಎಲ್ಲ ಅಂಶಗಳನ್ನು ಪರಿಗಣಿಸಿ ಹಿರಿಯ ಶಾಸಕರಾದ ಆರ್.ವಿ. ದೇಶಪಾಂಡೆ , ದಿನೇಶ್ ಗುಂಡೂರಾವ್ ಇಬ್ಬರಲ್ಲಿ ಒಬ್ಬರಿಗಾದರೂ ಸ್ಥಾನ ಕಲ್ಪಿಸಬೇಕು. ಇದು ಯಾರ ಪರ-ವಿರೋಧದ ಸಮಾವೇಶವಲ್ಲ, ಶಕ್ತಿಪ್ರದರ್ಶನವಲ್ಲ. ತಡವಾದರೂ ನ್ಯಾಯ ಸಿಗಲಿದೆ ಎಂಬ ನಂಬಿಕೆಯಿಂದ ಮಾಡಲಾಗುತ್ತಿದೆ ಎಂದು ಜಯಸಿಂಹ ಸ್ಪಷ್ಟಪಡಿಸಿದರು.

# ಮಹಿಳೆಯರಿಗಾಗಿ ಸರ್ಕಾರದಿಂದ ಋತುತಾರೆ ಹೊಸ ಯೋಜನೆ ಜಾರಿ



**ಬೆಂಗಳೂರು, ಆ.5:** ಮಹಿಳೆಯರಿಗಾಗಿ ರಾಜ್ಯ ಕಾಂಗ್ರೆಸ್ ಸರ್ಕಾರ ಮತ್ತೊಂದು ಹೊಸ ಯೋಜನೆ ಜಾರಿ ಮಾಡಿದೆ. ಪ್ರಮುಖವಾಗಿ ಮಹಿಳೆಯರ ಆರೋಗ್ಯದ ಬಗ್ಗೆ ಕಾಳಜಿ ವಹಿಸುವ ನಿಟ್ಟಿನಲ್ಲಿ ಆರೋಗ್ಯ ಸಚಿವ ಯು.ಟಿ. ಖಾದರ್ ನೇತೃತ್ವದಲ್ಲಿ ಆರೋಗ್ಯ ಇಲಾಖೆಯಿಂದ 'ಋತುತಾರೆ' ಎಂಬ ಮಹತ್ವದ ಜೋಜನೆ ಜಾರಿಯಾಗಿದೆ. ವಿಧಾನಸೌಧದಲ್ಲಿ ಆರೋಗ್ಯ ಸಚಿವ ಯು.ಟಿ. ಖಾದರ್, ನಟಿ ರಮ್ಯಾ ಜಂಟಿ ಸುದ್ದಿಗೋಷ್ಠಿ ನಡೆಸಿ ಈ ಮಾಹಿತಿ ನೀಡಿದರು. ಮಹಿಳೆಯರಿಗಾಗಿ ಋತುತಾರೆ ಎಂಬ ಹೊಸ ಯೋಜನೆ ಜಾರಿಗೊಳಿಸುತ್ತಿದ್ದೇವೆ. ಮಹಿಳಾ ತಜ್ಞೆ ಜ್ಯೋತ್ಸ್ನಾ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗಿದೆ ಎಂದರು. ತಜ್ಞರು ಹಾಗೂ ನಟಿಯರು ಅನೇಕ ಸಲಹೆಗಳನ್ನು ನೀಡಿದ್ದಾರೆ.

ಮಹಿಳೆಯರು ಮಾನಸಿಕ ಒತ್ತಡ, ಹಲವು ಸಮಸ್ಯೆಗಳನ್ನು ಅನುಭವಿಸು ತ್ತಿದ್ದಾರೆ. ಮಹಿಳೆಯರ ಆರೋಗ್ಯದ ಬಗ್ಗೆ ಈ ಸಮಿತಿ ಯೋಜನೆಗಳನ್ನು ರೂಪಿಸುತ್ತದೆ. ನಟಿ ರಮ್ಯಾ ಈ ಕಾರ್ಯಕ್ರಮದ ಬ್ರ್ಯಾಂಡ್ ಅಂಬಾಸಿಡರ್ ಎಂದು ತಿಳಿಸಿದರು.

# ಕರ್ನಾಟಕದಲ್ಲಿ ಸರ್ವಪುರುಷರ ಸಚಿವ ಸಂಪುಟ ರಾಜಕೀಯ ಆಯ್ಕೆ: ಮಹಿಳಾ ಗುಂಪುಗಳ ಟೀಕೆ

**ಬೆಂಗಳೂರು, ಆಗಸ್ಟ್ 5:** ಕರ್ನಾಟಕ ಸರ್ಕಾರವು ಮಹಿಳೆಯರನ್ನು ಅಧಿಕಾರದಿಂದ ಹೊರಗಿಡಲು "ರಾಜಕೀಯ ಆಯ್ಕೆ" ಮಾಡಿದೆ ಎಂದು ಮಹಿಳಾ ಸಂಘಟನೆಗಳು ಬುಧವಾರ ಆರೋಪಿಸಿವೆ. ಸರ್ವ ಪುರುಷರ ಸಚಿವ ಸಂಪುಟವು ರಾಷ್ಟ್ರೀಯವಾಗಿ ಮಹಿಳಾ ಪ್ರಾತಿನಿಧ್ಯವನ್ನು ಪ್ರತಿಪಾದಿಸುವ ನೈತಿಕ ಅಧಿಕಾರವನ್ನು ಕಾಂಗ್ರೆಸ್‌ನಿಂದ ಕಸಿದುಕೊಂಡಿದೆ ಎಂದು ಹೇಳಿದೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಬರೆದ ಮುಕ್ತ ಪತ್ರದಲ್ಲಿ, ಮಹಿಳಾ ಸಂಘಟನೆಗಳು, ಸ್ತ್ರೀವಾದಿಗಳು ಮತ್ತು ನಾಗರಿಕ ಸಮಾಜ ಗುಂಪುಗಳ ಜಾಲವಾದ ನಾವೇದ್ದು ನಿಲ್ಲದಿದ್ದಾರೆ, ಹೊಸದಾಗಿ ವಿಸ್ತರಿಸಲಾದ ಸಚಿವ ಸಂಪುಟದಲ್ಲಿ ಮಹಿಳೆಯರ ಸಂಪೂರ್ಣ ಅನುಪಸ್ಥಿತಿಯನ್ನು ಖಂಡಿಸಿ, ಇದನ್ನು "ಪ್ರಜಾಪ್ರಭುತ್ವದ ಕೊರತೆ" ಮತ್ತು "ಪಿತೃಪ್ರಭುತ್ವದ ಅಧಿಕಾರ"ದ ವ್ಯಾಯಾಮ ಎಂದು ವಿವರಿಸಿದ್ದಾರೆ.

ಹೊರಗಿಡುವಿಕೆಂಯು ಮೇಲ್ವಿಚಾರಣೆಯಲ್ಲ, ಆದರೆ ಉದ್ದೇಶ ಪೂರ್ವಕ ರಾಜಕೀಯ ನಿರ್ಧಾರವಾಗಿದ್ದು, "ರಾಜ್ಯ ಅಧಿಕಾರದ ಚಲಾವಣೆಗೆ ಬಂದಾಗ ಮಹಿಳೆಯರು ಮತ್ತು ಮಹಿಳಾ ನಾಯಕತ್ವವು ನಿರ್ವಿವಾದವಾಗಿ ಉಳಿದಿದೆ ಎಂಬ ಸ್ಪಷ್ಟ ಸಂದೇಶವನ್ನು ಕಳುಹಿಸಿದೆ" ಎಂದು ಸಾಮೂಹಿಕ ಹೇಳಿಕೆ ನೀಡಿದೆ.

ಕರ್ನಾಟಕದ ಮತದಾರರಲ್ಲಿ ಸುಮಾರು ಅರ್ಧದಷ್ಟು ಮಹಿಳೆಯರು ಇದ್ದಾರೆ ಎಂದು ಸಂಘಟನೆಗಳು ಗಮನಿಸಿವೆ ಮತ್ತು 2023 ರ ವಿಧಾನಸಭಾ ಚುನಾವಣೆಯಲ್ಲಿ ಮಹಿಳಾ ಮತದಾರರು ಪುರುಷರಿಗಿಂತ ಹೆಚ್ಚಿನ ಸಂಖ್ಯೆಯಲ್ಲಿದ್ದ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗಮನಾರ್ಹ ಚುನಾವಣಾ ಲಾಭವನ್ನು ಗಳಿಸಿದೆ ಎಂದು ಹೇಳಿಕೊಂಡಿದೆ.

ಇಷ್ಟೆಲ್ಲಾ ಇದ್ದರೂ, ಸರ್ಕಾರ ಒಬ್ಬ ಮಹಿಳೆಗೂ ಸಚಿವೆಯ ಜವಾಬ್ದಾರಿಯನ್ನು ವಹಿಸಿಕೊಡುವಲ್ಲಿ ವಿಫಲವಾಗಿದೆ ಎಂದು ಅವರು ಹೇಳಿದರು.

ಈ ನಿರ್ಧಾರವನ್ನು ಕರ್ನಾಟಕಕ್ಕೆ "ಆಳವಾದ ಅಪಚಾರ" ಎಂದು ಕರೆದ ಸಹಿದಾರರು, ಸಂಸತ್ತಿನಲ್ಲಿ ಮಹಿಳಾ ಮೀಸಲಾತಿ ಕಾಯ್ದೆಗೆ ಬೆಂಬಲ ಮತ್ತು ಮಹಿಳೆಯರಿಗೆ ಶೇಕಡಾ 33 ರಷ್ಟು ಪ್ರಾತಿನಿಧ್ಯವನ್ನು ಒದಗಿಸುವ ಅದರ ಸಾಂಸ್ಥಿಕ ಪ್ರತಿಜ್ಞೆ ಸೇರಿದಂತೆ ಮಹಿಳಾ ಸಬಲೀಕರಣಕ್ಕೆ ಕಾಂಗ್ರೆಸ್ನ ಪುನರಾವರ್ತಿತ ಸಾರ್ವಜನಿಕ ಬದ್ಧತೆಗೆ ಇದು ತೀವ್ರವಾಗಿ ವಿರುದ್ಧವಾಗಿದೆ ಎಂದು ಹೇಳಿದರು. ಅರ್ಹ ಮಹಿಳೆಯರನ್ನು ಮಂತ್ರಿ ಮಂಡಳಿಗೆ ತಕ್ಷಣ ಸೇರಿಸಿಕೊಳ್ಳುವಂತೆ ಸರ್ಕಾರವನ್ನು ಒತ್ತಾಯಿಸುತ್ತಾ, ಎಲ್ಲರನ್ನೂ ಒಳಗೊಳ್ಳುವ ರಾಜಕೀಯಕ್ಕೆ ಬದ್ಧತೆಯನ್ನು ಪ್ರದರ್ಶಿಸಿದ ಸಮರ್ಥ ಮಹಿಳಾ ನಾಯಕಿಯರಿಗೆ ಕಾಂಗ್ರೆಸ್ನಲ್ಲಿ ಕೊರತೆಯಿಲ್ಲ ಎಂದು ಸಂಘಟನೆಗಳು ತಿಳಿಸಿವೆ.

ಪ್ರಸ್ತುತ ಸಚಿವ ಸಂಪುಟದ ಸಂಯೋಜನೆಯು ರಾಜ್ಯಾದ್ಯಂತ ಮಹಿಳೆಯರಿಗೆ ಗೊಂದಲದ ಸಂದೇಶವನ್ನು ರವಾನಿಸಿದೆ ಎಂದು ಎಚ್ಚರಿಸಿದ ಸಹಿದಾರರು, ರಾಜಕೀಯ ಅಧಿಕಾರದಲ್ಲಿ ಮಹಿಳೆಯರ ಸಮಾನ ಭಾಗವಹಿಸುವಿಕೆಯನ್ನು ದಾನವಾಗಿ ಪರಿಗಣಿಸದೆ ಸಾಂವಿಧಾನಿಕ ಬಾಧ್ಯತೆಯಾಗಿ ಪರಿಗಣಿಸುವವರೆಗೆ ಸರ್ಕಾರವನ್ನು ಹೊಣೆಗಾರರನ್ನಾಗಿ ಮಾಡುವುದಾಗಿ ಹೇಳಿದರು.

### ಅಗತ್ಯ ದಾಖಲೆಗಳ ಪರಿಶೀಲನೆ: ಬೆಂ.ದಕ್ಷಿಣ ಅಪರ ಜಿಲ್ಲಾ ಚುನಾವಣಾಧಿಕಾರಿ ರಮೇಶ್ ಮಾಹಿತಿ

# ಅಸಹಜ ವಿವರಗಳಿಗೆ ಸಂಬಂಧಿಸಿದಂತೆ ಮತದಾರರಿಗೆ ನೋಟಿಸ್

**ಬೆಂಗಳೂರು, ಆ.5:** ಗಣತಿ ನಮೂನೆಗಳ ಗಣಕೀಕರಣದ ವೇಳೆ ದಾಖಲಾಗಿರುವ ಅಸಹಜ ವಿವರಗಳಿಗೆ ಸಂಬಂಧಿಸಿದಂತೆ ಮತದಾರರಿಗೆ ನೋಟಿಸ್ ನೀಡಿ, ಅಗತ್ಯ ದಾಖಲೆಗಳನ್ನು ಪರಿಶೀಲಿಸಲಾಗುವುದು ಎಂದು ಬೆಂಗಳೂರು ದಕ್ಷಿಣ ಅಪರ ಜಿಲ್ಲಾ ಚುನಾವಣಾಧಿಕಾರಿ ಕೆ.ಎನ್.ರಮೇಶ್ ತಿಳಿಸಿದ್ದಾರೆ.

ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಸಹಿ ಮಾಡಿದ ಗಣತಿ ನಮೂನೆಗಳ ಡಿಜಿಟಲೀಕರಣ ಕಾರ್ಯ ಆರಂಭವಾಗಿದ್ದು, ಮತದಾರರ ನೋಂದಣಾಧಿಕಾರಿಗಳ ಹಂತದಲ್ಲಿ ಪರಿಶೀಲನೆ ನಡೆಯುತ್ತಿದೆ ಎಂದರು.ತಂದೆ-ಮಕ್ಕಳು, ತಾತ-ಮೊಮಕ್ಕಳ ನಡುವಿನ ವಯಸ್ಸಿನ ಅಂತರ ತೀರಾ ಕಡಿಮೆ ಇರುವಂತಹ ಅಸಹಜ ವಿವರಗಳು ಕಂಡುಬಂದಲ್ಲಿ ಮತದಾರರಿಗೆ ನೋಟಿಸ್ ನೀಡಲಾಗುತ್ತದೆ. ಸಂಬಂಧಿತ ಮತದಾರರು ಅಗತ್ಯ ದಾಖಲೆಗಳನ್ನು ಸಲ್ಲಿಸಿ ವಿವರಗಳನ್ನು ದೃಢಪಡಿಸಿದ ಬಳಿಕವೇ ಅಂತಹ ಹೆಸರುಗಳನ್ನು ಮತದಾರರ ಪಟ್ಟಿಯಲ್ಲಿ ಉಳಿಸಿಕೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದರು.

**ಮನೆಗಳಿಗೆ ಸ್ಟಿಕರ್**

ಗೈರುಹಾಜರಿ, ಸ್ಥಳಾಂತರಗೊಂಡ, ಮೃತಪಟ್ಟ ಹಾಗೂ ನಕಲಿ ಮತದಾರರ ಪರಿಶೀಲನೆ ಪೂರ್ಣಗೊಂಡಿರುವ ಮನೆಗಳಿಗೆ ಗಳು ಭೇಟಿ ನೀಡಿ, ಪರಿಶೀಲನೆ ನಡೆದಿರುವುದನ್ನು ದೃಢಪಡಿಸುವ ಸ್ಟಿಕರ್‌ಗಳನ್ನು ಕಡ್ಡಾಯವಾಗಿ ಅಂಟಿಸಲಿದ್ದಾರೆ.

**ಹೆಸರು ಸೇರ್ಪಡೆಗೆ ನಮೂನೆ-6:**

ಕರಡು ಮತದಾರರ ಪಟ್ಟಿಯಲ್ಲಿ ಹೆಸರು ಇಲ್ಲದ ಅಥವಾ ಅರ್ಹರಾಗಿದ್ದರೂ ಹೆಸರು



ಬಿಟ್ಟುಹೋಗಿರುವ ಮತದಾರರು ಅಗತ್ಯ ದಾಖಲೆಗಳೊಂದಿಗೆ ನಮೂನೆ-6 ಅರ್ಜಿ ಸಲ್ಲಿಸಿ ಹೊಸದಾಗಿ ಹೆಸರು ಸೇರ್ಪಡೆ ಮಾಡಿಕೊಳ್ಳಲು ಅವಕಾಶವಿದೆ ಎಂದು ತಿಳಿಸಿದರು.

**ಹೆಚ್ಚುವರಿ ಸಿಬ್ಬಂದಿ ನಿಯೋಜನೆ:**

ಒಬ್ಬ ಅಧಿಕಾರಿ ದಿನಕ್ಕೆ ಗರಿಷ್ಠ 150 ಗಣತಿ ನಮೂನೆಗಳನ್ನು ಪರಿಶೀಲಿಸಿ ದೃಢೀಕರಿಸಬಹುದಾಗಿದೆ. ಪರಿಶೀಲನಾ ಕಾರ್ಯವನ್ನು ತ್ವರಿತವಾಗಿ ಪೂರ್ಣಗೊಳಿಸಲು ಹೆಚ್ಚುವರಿ ಸಿಬ್ಬಂದಿ ನಿಯೋಜನೆಗೆ ಮುಖ್ಯ ಚುನಾವಣಾಧಿಕಾರಿಗಳಿಗೆ ಪತ್ರ ಬರೆಯಲಾಗಿದ್ದು, ಅನುಮೋದನೆ ದೊರೆತ ಬಳಿಕ ಹೆಚ್ಚುವರಿ ಅಧಿಕಾರಿಗಳನ್ನು ಕಾರ್ಯಕ್ಕೆ ನಿಯೋಜಿಸಲಾಗುವುದು ಎಂದು ಕೆ.ಎನ್. ರಮೇಶ್ ಹೇಳಿದರು.

ಸಭೆಯಲ್ಲಿ ಅಪರ ಆಯುಕ್ತ ರಾಚಪ್ಪ, ಚುನಾವಣಾ ತಹಸೀಲ್ದಾರ್ ರಶ್ಮಿ, ಮತದಾರರ ನೋಂದಣಾಧಿಕಾರಿಗಳು ಹಾಗೂ ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ಕೆಪಿಎಸ್‌ಸಿ ಮಾಜಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್, 29 ಅಭ್ಯರ್ಥಿಗಳಿಗೆ ಸಿಐಡಿಯಿಂದ ವಿಚಾರಣೆಗೆ ಬುಲಾವ್ ಸಾಧ್ಯತೆ

**ಬೆಂಗಳೂರು, ಆ.5:** ಪಶುವೈದ್ಯಾಧಿಕಾರಿ ನೇಮಕಾತಿ ಪ್ರಕರಣಕ್ಕೆ ಸಂಬಂಧಿಸಿದಂತೆ ದೂರುದಾರರ ವಿಚಾರಣೆ ಪೂರ್ಣಗೊಂಡಿದ್ದು, ಕೆಪಿಎಸ್‌ಸಿ ಮಾಜಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಸೇರಿದಂತೆ ಅಕ್ರಮವಾಗಿ ಆಯ್ಕೆಯಾಗಿದ್ದಾರೆ ಎನ್ನಲಾದ 29 ಮಂದಿ ಅಭ್ಯರ್ಥಿಗಳಿಗೆ ಶೀಘ್ರವೇ ನೋಟಿಸ್ ಜಾರಿಗೊಳಿಸಲು ಸಿಐಡಿ ಅಧಿಕಾರಿಗಳು ಸಜ್ಜಾಗಿದ್ದಾರೆ. ಶೀಘ್ರದಲ್ಲೇ ಬುಲಾವ್ ನೀಡಿ ವಿಚಾರಣೆ ನಡೆಸುವ ಸಾಧ್ಯತೆಯಿದೆ.

ಹಾಸನ ಮೂಲದ ದೂರುದಾರ ಮಂಜುನಾಥ್ ಅವರನ್ನು ಸಿಐಡಿ ಕಚೇರಿಯಲ್ಲಿ ವಿಚಾರಣೆ ನಡೆಸಿದ ತನಿಖಾಧಿಕಾರಿಗಳು ಅವರ ಹೇಳಿಕೆ ದಾಖಲಿಸಿಕೊಂಡಿದ್ದಾರೆ. ಈ ವೇಳೆ ಮಂಜುನಾಥ್ ಅವರು ಮಧ್ಯವರ್ತಿಗಳು ಹಾಗೂ ಅಭ್ಯರ್ಥಿಗಳ ನಡುವಿನ ಧ್ವನಿಮುದ್ರಿಕೆ ಸೇರಿದಂತೆ ಹಲವು ಪ್ರಮುಖ ದಾಖಲೆಗಳನ್ನು ತನಿಖಾ ತಂಡಕ್ಕೆ ಒದಗಿಸಿದ್ದಾರೆ.

ಪಶುವೈದ್ಯಾಧಿಕಾರಿ ಹುದ್ದೆ ಪಡೆದಿರುವ 29 ಮಂದಿ ಅಭ್ಯರ್ಥಿಗಳ ಪೈಕಿ ಹಲವರ ಮೇಲೆ ಗಂಭೀರ ಅನುಮಾನಗಳಿವೆ. ಪರೀಕ್ಷೆ ನಡೆಯುವ ಹಿಂದಿನ ದಿನ ಈ ಅಭ್ಯರ್ಥಿಗಳು ತಮ ಮೊಬೈಲ್ ಫೋನ್‌ಗಳನ್ನು ಸ್ವಿಚ್ ಆಫ್ ಮಾಡಿಕೊಂಡಿರುವುದು ತನಿಖೆಯಿಂದ ಬೆಳಕಿಗೆ ಬಂದಿದೆ. ಹೀಗಾಗಿ, ಆ ನಿರ್ಣಾಯಕ ದಿನದಂದು ಇವರು ಎಲ್ಲಿದ್ದರು? ಯಾರನ್ನು ಭೇಟಿಯಾಗಿದ್ದರು ಎಂಬ ಬಗ್ಗೆ ಸಿಐಡಿ ಮಾಹಿತಿ ಕಲೆಹಾಕಿದೆ.

ಮಾಜಿ ಅಧ್ಯಕ್ಷರಿಗೆ ಕುತ್ತು

ಕೆಪಿಎಸ್‌ಸಿ ಕಚೇರಿ ಮೇಲೆ ನಡೆಸಲಾದ ದಾಳಿಯ ವೇಳೆ



ವಶಪಡಿಸಿಕೊಳ್ಳಲಾದ ಒಎಂಆರ್ ಶೀಟ್‌ಗಳ ಪರಿಶೀಲನೆ ಈಗ ಅಂತಿಮ ಹಂತದಲ್ಲಿದೆ. ಈ ವರದಿ ಹಾಗೂ ಸಾಕ್ಷ್ಯಾಧಾರಗಳ ಆಧಾರದ ಮೇಲೆ ಮುಂದಿನ ಎರಡುಮೂರು ದಿನಗಳಲ್ಲಿ ಕೆಪಿಎಸ್‌ಸಿ ಮಾಜಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಅವರಿಗೆ ನೋಟಿಸ್ ನೀಡಿ ವಿಚಾರಣೆಗೆ ಕರೆಯಲು ನಿರ್ಧರಿಸಲಾಗಿದೆ.

**ಪ್ರಕರಣದ ಹಿನ್ನೆಲೆ:** ಹಾಸನ ಜಿಲ್ಲೆಯ ಚನ್ನರಾಯ ಪಟ್ಟಣ ತಾಲ್ಲೂಕಿನ ಮಂಜುನಾಥ್ ಅವರು, ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿಯಲ್ಲಿ ದೊಡ್ಡ ಮಟ್ಟದ ಅವ್ಯವಹಾರ ಹಾಗೂ ಭ್ರಷ್ಟಾಚಾರ ನಡೆದಿದೆ ಎಂದು ಆರೋಪಿಸಿದ್ದರು. ಈ ಸಂಬಂಧ ಕೆಪಿಎಸ್‌ಸಿ ಅಧ್ಯಕ್ಷರು, ಸದಸ್ಯರು ಹಾಗೂ ಅಕ್ರಮವಾಗಿ ಹುದ್ದೆ ಗಿಟ್ಟಿಸಿಕೊಂಡಿರುವ 29 ಅಭ್ಯರ್ಥಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ವಿಧಾನಸೌಧ ಪೊಲೀಸ್ ಠಾಣೆಗೆ ದೂರು ನೀಡಿದ್ದರು.

ಈ ಎಫ್‌ಐಆರ್ ಆಧರಿಸಿ ತನಿಖೆ ಕೈಗೆತ್ತಿಕೊಂಡಿರುವ ಸಿಐಡಿ ಅಧಿಕಾರಿಗಳು, ಮೇಲಟ್ಟದ ಪ್ರಭಾವಿಗಳು ಹಾಗೂ ಅಕ್ರಮದಲ್ಲಿ ಭಾಗಿಯಾದವರ ಪಾತ್ರದ ಬಗ್ಗೆ ತನಿಖೆಯನ್ನು ಚುರುಕುಗೊಳಿಸಿದ್ದು, ಮುಂಬರುವ ದಿನಗಳಲ್ಲಿ ಮತ್ತಷ್ಟು ಸ್ಫೋಟಕ ಮಾಹಿತಿ ಹೊರಬರುವ ನಿರೀಕ್ಷೆಯಿದೆ.

### ಭಿನ್ನಾಭಿಪ್ರಾಯಗಳಿದ್ದರೆ ನಾಯಕತ್ವದೊಂದಿಗೆ ಚರ್ಚಿಸಿ: ಅಸಮಾಧಾನಿತರಿಗೆ ಎನ್.ಎಸ್.ಭೋಜರಾಜು ಮನವಿ

# ವ್ಯಕ್ತಿಗಿಂತ ಸಂಘಟನೆ ಸಿದ್ಧಾಂತಗಳೇ ಕಾಂಗ್ರೆಸ್ ಪಕ್ಷದ ಅಸ್ತಿತ್ವಕ್ಕೆ ಕಾರಣ

**ಬೆಂಗಳೂರು, ಆ.5:** ವ್ಯಕ್ತಿಗಿಂತ ಸಂಘಟನೆ ಹಾಗೂ ವೈಯಕ್ತಿಕ ಮಹತ್ವಾಕಾಂಕ್ಷೆಗಿಂತ ಸಿದ್ಧಾಂತಗಳಿಗೆ ಆದ್ಯತೆ ನೀಡಿರುವುದೇ ಶತಮಾನಕ್ಕೂ ಹೆಚ್ಚು ಕಾಲದಿಂದ ಕಾಂಗ್ರೆಸ್ ಪಕ್ಷ ಅಸ್ತಿತ್ವ ಉಳಿಸಿಕೊಂಡಿರುವುದೇ ಕಾರಣ. ಹೀಗಾಗಿ ಪಕ್ಷದ ನಿಜವಾದ ಶಕ್ತಿ ಕೇವಲ ಚುನಾವಣೆಗಳಲ್ಲಿನ ಗೆಲುವುಗಳಲ್ಲ, ಅದು ನಮ್ಮ ಸಾಮೂಹಿಕ ಶಿಸ್ತು, ಮೌಲ್ಯಗಳ ಮೇಲಿನ ಅಚಲ ಬದ್ಧತೆಯಲ್ಲಿದೆ ಎಂದು ಮಾಜಿ ಸಚಿವ ಎನ್. ಎಸ್.ಭೋಸರಾಜು ಹೇಳಿದ್ದಾರೆ.

ಈ ಸಂಬಂಧ ಬುಧವಾರ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಎಲ್ಲ ಸಹೋದ್ಯೋಗಿ ಶಾಸಕರಿಗೆ ನನ್ನ ಮನವಿ ಏನೆಂದರೆ, ಸಂಪುಟಕ್ಕೆ ಸಂಬಂಧಿಸಿದ ಯಾವುದೇ ಭಿನ್ನಾಭಿಪ್ರಾಯಗಳಿದ್ದರೂ, ಸಿಎಂ ಹಾಗೂ ನಾಯಕತ್ವದೊಂದಿಗೆ ಚರ್ಚಿಸಬೇಕು.

ಮಾಧ್ಯಮಗಳ ಮೂಲಕ ನಡೆಯುವ ಚರ್ಚೆಗಳು ಸಮಸ್ಯೆಗಳನ್ನು ಪರಿಹರಿಸುವುದಿಲ್ಲ. ಬದಲಾಗಿ ಪಕ್ಷದ ಶ್ರೇಷ್ಠ ಶಕ್ತಿಯಾಗಿರುವ ಶಿಸ್ತಿಗೆ ಧಕ್ಕೆಯನ್ನು ಉಂಟುಮಾಡುತ್ತವೆ ಎಂದು ಎಚ್ಚರಿಸಿದ್ದಾರೆ.

ನನ್ನ ಸಾರ್ವಜನಿಕ ಜೀವನದ ಪಯಣ ಕಲಿಸಿದ ಮಹತ್ತರ ಪಾಠವೆಂದರೆ, ಕಾಂಗ್ರೆಸ್ ಸದಾ



ಪ್ರಾಮಾಣಿಕತೆ, ತಾಳ್ಮೆ ಮತ್ತು ಪಕ್ಷದ ಮೇಲಿನ ಅಚಲ ಬದ್ಧತೆಯನ್ನು ಗೌರವಿಸುತ್ತದೆ. ಜವಾಬ್ದಾರಿಗಳು ಎಂದಿಗೂ ಗುರಿಯಲ್ಲ, ಅವು ದೀರ್ಘಕಾಲದ ನಿಷ್ಠಾವಂತ ಸೇವೆಗೆ ಪಕ್ಷವು ವ್ಯಕ್ತಿಯ ಮೇಲೆ ಇರಿಸುವ ವಿಶ್ವಾಸದ ಪ್ರತೀಕ ಎಂದು ತಿಳಿಸಿದ್ದಾರೆ.

ನಾವೆಲ್ಲರೂ ನಾಯಕತ್ವದ ವಿವೇಕ ಮತ್ತು ದೂರದೃಷ್ಟಿಯ ಮೇಲೆ ವಿಶ್ವಾಸವಿಟ್ಟು, ಪರಸ್ಪರ ಗೌರವ, ಸಂಯಮ ಮತ್ತು ಸಂಘಟನಾ ಶಿಸ್ತಿನೊಂದಿಗೆ ಒಗ್ಗಟ್ಟಾಗಿ ಕಾರ್ಯ ನಿರ್ವಹಿಸೋಣ. ಸಾಮೂಹಿಕ ಹೊಣೆಗಾರಿಕೆ ಯಾವುದೇ ವೈಯಕ್ತಿಕ ಆಸೆ-ಆಕಾಂಕ್ಷೆಗಳಿಗಿಂತ ದೊಡ್ಡದು. ಕಾಂಗ್ರೆಸ್ ಅನ್ನು ಇನ್ನಷ್ಟು ಬಲಿಷ್ಠಗೊಳಿಸುತ್ತಾ, ನಮ್ಮ ಸಂವಿಧಾನದ ಆದರ್ಶಗಳನ್ನು ಎತ್ತಿಹಿಡಿದು, ರಾಜ್ಯದ ಜನತೆ ಮತ್ತು ದೇಶದ ಸೇವೆಗೆ ಅಚಲ ಬದ್ಧತೆಯೊಂದಿಗೆ ಮುನ್ನಡೆಯೋಣ ಎಂದು ಅವರು ಸಲಹೆ ನೀಡಿದ್ದಾರೆ.

# ಅನಧಿಕೃತ ಬೈಕ್ ಟ್ಯಾಕ್ಸಿಗಳ ವಿರುದ್ಧ ಕಾರ್ಯಾಚರಣೆ: ಸಾರಿಗೆ ಇಲಾಖೆಯಿಂದ ನೂರಾರು ದ್ವಿಚಕ್ರ ವಾಹನಗಳ ಜಪ್ತಿ

**ಬೆಂಗಳೂರು, ಆ.5:** ಬೈಕ್ ಟ್ಯಾಕ್ಸಿ ಸೇವೆಗಳ ವಿರುದ್ಧ ಸಾರಿಗೆ ಇಲಾಖೆ ಇಂದು ಬೆಂಗಳೂರಿನಾದ್ಯಂತ ವ್ಯಾಪಕ ಕಾರ್ಯಾಚರಣೆ ನಡೆಸಿ, ನೂರಾರು ದ್ವಿಚಕ್ರ ವಾಹನಗಳನ್ನು ವಶಪಡಿಸಿಕೊಂಡಿದೆ. ಆಟೋ ಚಾಲಕರ ಸಂಘಟನೆಗಳು ನೀಡಿದ್ದ ದೂರು ಹಾಗೂ ಎಚ್ಚರಿಕೆಯನ್ನು ಗಂಭೀರವಾಗಿ ಪರಿಗಣಿಸಿ ಈ ಕಾರ್ಯಾಚರಣೆ ಕೈಗೊಳ್ಳಲಾಗಿದೆ.



ಅನಧಿಕೃತವಾಗಿ ಬೈಕ್ ಟ್ಯಾಕ್ಸಿ ಸೇವೆಗಳು ನಡೆಯುತ್ತಿರುವುದರಿಂದ ಆಟೋ ಚಾಲಕರ ಜೀವನೋಪಾಯಕ್ಕೆ ಹೊಡೆತ ಬಿದ್ದಿದೆ ಎಂಬ ಆರೋಪವನ್ನು ಆಟೋಚಾಲಕರ ಸಂಘಟನೆಗಳು ಹಲವು ವರ್ಷಗಳಿಂದ ಮಾಡುತ್ತಿವೆ. ಇತ್ತೀಚೆಗೆ ಈ ಸಂಬಂಧ ಸಾರಿಗೆ ಇಲಾಖೆಯ ಕಚೇರಿಗಳಿಗೆ ಮುತ್ತಿಗೆ ಹಾಕುವುದಾಗಿ ಎಚ್ಚರಿಕೆ ನೀಡಿದ್ದ ಸಂಘಟನೆಗಳೊಂದಿಗೆ ನಡೆದ ಮಾತುಕತೆಯಲ್ಲಿ ಅಧಿಕಾರಿಗಳು ಬೈಕ್ ಟ್ಯಾಕ್ಸಿ ವಿರುದ್ಧ ಕ್ರಮ ಕೈಗೊಳ್ಳುವ ಭರವಸೆ ನೀಡಲಾಗಿತ್ತು.

ಅದರಂತೆ ಇಂದು ಬೆಳಗ್ಗೆ 7.30ರಿಂದಲೇ ಸಾರಿಗೆ ಇಲಾಖೆ ಅಧಿಕಾರಿಗಳು ಹಾಗೂ ಆಟೋ ಚಾಲಕರು ಬೆಂಗಳೂರಿನ ವಿವಿಧ ಪ್ರದೇಶಗಳಲ್ಲಿ ಕಾರ್ಯಾಚರಣೆ ನಡೆಸಿದರು. ಹಲವು ಸ್ಥಳಗಳಲ್ಲಿ ಆಟೋ ಚಾಲಕರು ಗುಂಪುಗಳಾಗಿ ನಿಂತು ಸಂಶಯಾಸ್ಪದ ದ್ವಿಚಕ್ರ ವಾಹನಗಳನ್ನು ತಡೆದು ಹಿಂಬದಿ ಸವಾರರನ್ನು ಪ್ರಶ್ನಿಸಿದ ಪರಿಣಾಮ ಕೆಲವೆಡೆ ಮಾತಿನ ಚಕಮಕಿ ಮತ್ತು ವಾಗ್ವಾದವೂ ನಡೆಯಿತು.

ಆಟೋಚಾಲಕರ ಸಂಘದ ಅಧ್ಯಕ್ಷ ನಾರಾಯಣಸ್ವಾಮಿ ಮಾತನಾಡಿ, ಮುಂದಿನ ಎರಡು ತಿಂಗಳವರೆಗೆ ಬೈಕ್ ಟ್ಯಾಕ್ಸಿಗಳ ವಿರುದ್ಧ ಕಾರ್ಯಾಚರಣೆ ಮುಂದುವರಿಯಲಿದೆ ಎಂದು ಸಾರಿಗೆ ಇಲಾಖೆ ಭರವಸೆ ನೀಡಿದೆ ಎಂದು ತಿಳಿಸಿದರು.

2016ರಿಂದಲೇ ಬೈಕ್‌ಟ್ಯಾಕ್ಸಿ ಸೇವೆಗಳ ವಿರುದ್ಧ ಹೋರಾಟ ನಡೆಸಲಾಗುತ್ತಿದೆ. ಆರಂಭದಲ್ಲಿ ಸರ್ಕಾರ ಎಲೆಕ್ಟ್ರಿಕ್ ಬೈಕ್‌ಗಳನ್ನು ಮಾತ್ರ ಟ್ಯಾಕ್ಸಿ ಸೇವೆಗೆ ಬಳಸಲು ಅನುಮತಿ ನೀಡಿತ್ತು. ಆದರೆ ನಂತರ ಆ ಅನುಮತಿಯನ್ನು ರದ್ದುಪಡಿಸಲಾಗಿದೆ. ಹೈಕೋರ್ಟ್ ಬೈಕ್ ಟ್ಯಾಕ್ಸಿಗೆ ಅನುಮತಿ ನೀಡಿಲ್ಲ. ಈ ಕುರಿತು ಸುಪ್ರೀಂ ಕೋರ್ಟ್‌ನಲ್ಲಿ ಮೇಲನವಿ ವಿಚಾರಣೆ ನಡೆಯುತ್ತಿರುವುದನ್ನು ನೆಪ ಮಾಡಿಕೊಂಡು ಕೆಲವು ಅಗ್ರಿಗೇಟರ್ ಸಂಸ್ಥೆಗಳು ಮತ್ತೆ ಬೈಕ್ ಟ್ಯಾಕ್ಸಿ ಸೇವೆ ಆರಂಭಿಸಿವೆ. ಇದು ಸಂಪೂರ್ಣ ಕಾನೂನುಬಾಹಿರ ಎಂದು ನಾರಾಯಣಸ್ವಾಮಿ ಆರೋಪಿಸಿದರು.

ಗ್ರಾಹಕರು ಕೇವಲ 30-40 ಉಳಿಸುವ ಉದ್ದೇಶದಿಂದ ತಮ ಸುರಕ್ಷತೆಯನ್ನು ಕಡೆಗಣಿಸಬಾರದು. ಇತ್ತೀಚೆಗೆ ಬೈಕ್ ಟ್ಯಾಕ್ಸಿಯಲ್ಲಿ ಪ್ರಯಾಣಿಸುತ್ತಿದ್ದ ಮಹಿಳೆಯೊಬ್ಬರು ಅಪಘಾತಕ್ಕೀಡಾಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಅವರ ಚಿಕಿತ್ಸೆಗೆ ಲಕ್ಷಾಂತರ ರೂಪಾಯಿ ವೆಚ್ಚವಾಗಿದ್ದರೂ ಯಾವುದೇ ಅಗ್ರಿಗೇಟರ್ ಸಂಸ್ಥೆ ಅಥವಾ ಸರ್ಕಾರ ನೆರವಿಗೆ ಬಂದಿಲ್ಲ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಸಾರಿಗೆ ಇಲಾಖೆ ಅಧಿಕಾರಿಗಳು ಮಾತನಾಡಿ, ಖಾಸಗಿ ಬಳಕೆಗೆ ನೋಂದಾಯಿಸಲಾದ ದ್ವಿಚಕ್ರ ವಾಹನಗಳನ್ನು ಬಾಡಿಗೆ ಸೇವೆಗೆ ಬಳಸುವುದು ಮೋಟಾರು ವಾಹನ ಕಾಯ್ದೆಯ ಉಲ್ಲಂಘನೆಯಾಗಿದೆ. ಅಂತಹ ವಾಹನಗಳನ್ನು ವಶಪಡಿಸಿ ಕೊಳ್ಳಲಾಗುವುದು. ನಿಯಮ ಉಲ್ಲಂಘಿಸಿದವರ ವಿರುದ್ಧ 10 ಸಾವಿರದಿಂದ 15 ಸಾವಿರದವರೆಗೆ ದಂಡ ವಿಧಿಸುವುದರ ಜೊತೆಗೆ ವಾಹನದ ನೋಂದಣಿ ಪ್ರಮಾಣಪತ್ರ (ಆರ್‌ಸಿ) ಮತ್ತು ಚಾಲನಾ ಪರವಾನಗಿಯು (ಡಿಎಲ್) ರದ್ದುಪಡಿಸಲಾಗುವುದು ಎಂದು ಎಚ್ಚರಿಸಿದರು.ಇನ್ನೊಂದೆಡೆ, ಬೈಕ್ ಟ್ಯಾಕ್ಸಿ ಚಾಲಕರು ಸಾರಿಗೆ ಇಲಾಖೆಯ ಕ್ರಮಕ್ಕೆ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸೇವೆ ಕಾನೂನುಬಾಹಿರ ಎಂಬ ಮಾಹಿತಿ ನಮಗೆ ಇರಲಿಲ್ಲ. ಅಗ್ರಿಗೇಟರ್ ಸಂಸ್ಥೆಗಳು ನ್ಯಾಯಾಲಯದಲ್ಲಿ ತಮ ಪರ ಆದೇಶವಿದೆ ಎಂದು ಹೇಳಿ ಸೇವೆ ನಡೆಸಲು ಒತ್ತಾಯಿಸುತ್ತಿವೆ. ಈಗ ಸಾರಿಗೆ ಇಲಾಖೆ ಪ್ರಕರಣ ದಾಖಲಿಸುತ್ತಿದೆ.

ಆಟೋಚಾಲಕರು ಹಾಗೂ ಅಗ್ರಿಗೇಟರ್ ಸಂಸ್ಥೆಗಳ ನಡುವಿನ ಸಂಘರ್ಷದಲ್ಲಿ ನಾವು ಸಿಲುಕಿ ಸಂಕಷ್ಟ ಅನುಭವಿಸುತ್ತಿದ್ದೇವೆ. ಸಂಕಷ್ಟದ ಸಂದರ್ಭದಲ್ಲಿ ಅಗ್ರಿಗೇಟರ್ ಸಂಸ್ಥೆಗಳು ನಮ್ಮ ನೆರವಿಗೆ ಬರುತ್ತಿಲ್ಲ ಎಂದು ಬೈಕ್ ಟ್ಯಾಕ್ಸಿಚಾಲಕರು ಅಸಮಾಧಾನ ವ್ಯಕ್ತಪಡಿಸಿದರು.



ದಾವಣಗೆರೆ ಜಿಲ್ಲೆಯಲ್ಲಿ ದಲಿತರ ಮೇಲಿನ ದೌರ್ಜನ್ಯ ಖಂಡಿಸಿ ಭೀಮ ಸಂಘಟನೆಗಳ ಮಹಾ ಒಕ್ಕೂಟದ ಸದಸ್ಯರು ಬುಧವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಿದರು.

# ಸಚಿವ ಸ್ಥಾನ ಸಿಗದ ನೋವಿದೆ, ಹತಾಶನಾಗಿಲ್ಲ: ಬಿ.ಆರ್.ಪಾಟೀಲ್ ಸ್ಪಷ್ಟನೆ

**ಕಲಬುರಗಿ, ಆ. 5:** ಸಚಿವ ಸಂಪುಟ ವಿಸ್ತರಣೆಯಲ್ಲಿ ಸಚಿವ ಸ್ಥಾನ ಸಿಗದಿರುವುದಕ್ಕೆ ನೋವಾಗಿದೆ. ಆದರೆ ನಾನು ಹತಾಶನಾಗಿಲ್ಲ ಎಂದು ಜಿಲ್ಲೆಯ ಆಳಂದ ಕ್ಷೇತ್ರದ ಶಾಸಕ ಬಿ.ಆರ್.ಪಾಟೀಲ್ ಹೇಳಿದರು.

ಸಚಿವ ಸ್ಥಾನ ಸಿಗದ ಹಿನ್ನೆಲೆಯಲ್ಲಿ ಕಾರ್ಯಕರ್ತರು ಮತ್ತು ಬೆಂಬಲಿಗರು ವ್ಯಕ್ತಪಡಿಸಿರುವ ಬೇಸರಕ್ಕೆ ಕೃತಜ್ಞತೆ ಸಲ್ಲಿಸಿದರು. ಮಹಾತ್ಮ ಗಾಂಧಿ, ರಾಮ ಮನೋಹರ ಲೋಹಿಯಾ, ಜಯಪ್ರಕಾಶ್ ನಾರಾಯಣ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ತತ್ವ–ಸಿದ್ಧಾಂತಗಳಲ್ಲಿ ನಂಬಿಕೆ ಇಟ್ಟು ಕಳೆದ 50 ವರ್ಷಗಳಿಂದ ರಾಜಕೀಯ ಮತ್ತು ಸಮಾಜಮುಖಿ ಹೋರಾಟ ನಡೆಸಿದ್ದೇನೆ. ನಾಲ್ಕು ಬಾರಿ ಶಾಸಕರಾಗಿ, ಒಂದು ಬಾರಿ ವಿಧಾನ ಪರಿಷತ್ ಸದಸ್ಯರಾಗಿ ಹಾಗೂ ಉಪಸಭಾಪತಿ ಯಾಗಿ ಸೇವೆ ಸಲ್ಲಿಸಿದ್ದು, ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರಾಗಿಯೂ ಕಾರ್ಯನಿರ್ವಹಿಸಿರುವ ಅನುಭವ ನನಗಿದೆ. ಇಷ್ಟೆಲ್ಲ ಅರ್ಹತೆ ನನಗಿದ್ದರೂ ತಮ್ಮನ್ನು ಸಂಪುಟದಿಂದ ಹೊರಗಿಟ್ಟಿರುವುದು ಸರಿಯೇ? ಎಂಬುದು ಜನರ ವಿವೇಚನೆಗೆ ಬಿಡುತ್ತೇನೆ ಎಂದು ಬಿ.ಆರ್.ಪಾಟೀಲ್ ಹೇಳಿದರು.

ಸಚುವ ಸ್ಥಾನ ದೊರೆಯದಿರುವ ಕುರಿತು ಕಾರ್ಯಕರ್ತರಿಗೆ ಬಹಿರಂಗ ಪತ್ರ ಬರೆದಿರುವ ಪಾಟೀಲರು, ಸಾಮಾಜಿಕ ನ್ಯಾಯದ ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಕಾಪಾಡುವ ಬದ್ಧತೆ ಮತ್ತು ಹೋರಾಟ ಹಾಗೂ ಮತೀಯ ಮತ್ತು ವಿಭಜಕ ಶಕ್ತಿಗಳ ವಿರುದ್ಧ ಅತ್ಯಂತ ಕಾಳಜಿಯಿಂದ ತೊಡಗಿಸಿಕೊಂಡು ರಾಜ್ಯವಷ್ಟೇ ಅಲ್ಲದೇ ರಾಷ್ಟದಲ್ಲೂ ಕಾಂಗ್ರೆಸ್ ಪಕ್ಷಕ್ಕೆ ಪೂರಕವಾಗಿ ಶ್ರಮಿಸಿದ್ದಕ್ಕೆ ಸಂಪುಟದಿಂದ ಹೊರಗಿಟ್ಟಿರುವುದು ನನಗೆ ಸಿಕ್ಕ ಪ್ರತಿಫಲವೇ?' ಎಂದು ಪ್ರಶ್ನಿಸಿದ್ದಾರೆ.

ಅಭಿಮಾನಿಗಳು ಮತ್ತು ಬೆಂಬಲಿಗರಂತೆ ನನಗೂ ನೋವಾಗಿದೆ. ಹತಾಶನಾಗಿಲ್ಲ. ಪ್ರಜಾಪ್ರಭುತ್ವ ಉಳಿವಿಗಾಗಿ ಹಾಗೂ ಸಮಾಜದಲ್ಲಿ



ಸಮಾನತೆ ತರಲು ರಾಜಕಾರಣ–ಸಮಾಜಕಾರಣ ಮಾಡುತ್ತಾ 50 ವರ್ಷಗಳ ರಾಜಕೀಯ ಮಾಡಿದ್ದು, ಈ ಅವಧಿಯಲ್ಲಿ ಅನೇಕ ಸಲ ಜೈಲು ಸೇರಿದ್ದೇನೆ. ಮೂಢನಂಬಿಕೆ, ಕಂದಾಚಾರ, ಅವೈಜ್ಞಾನಿಕ ಚಿಂತನೆ, ಬಡತನ, ನಿರುದ್ಯೋಗ, ಜಾತಿ ನಿರ್ಮೂಲನೆಗಳ ವಿರುದ್ಧ ಹೋರಾಟ, ಮಹಿಳಾ ಸಮಾನತೆ ಮತ್ತು ಸಮ ಸಮಾಜ ಕಟ್ಟಲು ಪ್ರಯತ್ನ ಪಟ್ಟಿದ್ದೇನೆ ಎಂದಿದ್ದಾರೆ.

ಹಿಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನನ್ನನ್ನು ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷನನ್ನಾಗಿ ನೇಮಕ ಮಾಡಿದ ಕೆಲವೇ ದಿನಗಳಲ್ಲಿ ಗ್ರಾಮ ಮತ್ತು ವಾರ್ಡ್, ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದ ಯೋಜನೆಗಳ ಪ್ರಸ್ತಾವನೆ ಪಡೆದು 35 ವರ್ಷಗಳಿಂದ ಆಗದೇ ಇರುವ ಪ್ರಕ್ರಿಯೆಗೆ ಚಾಲನೆ ನೀಡಿ ವರದಿ ಸಲ್ಲಿಸಿದ್ದೇನೆ. ಜೊತೆಗೆ ವಿಕೇಂದ್ರೀಕರಣ ವ್ಯವಸ್ಥೆಯನ್ನು ಗಟ್ಟಿಗೊಳಿಸಲು ಪ್ರಯತ್ನ ಪಟ್ಟಿದ್ದೇನೆ ಎಂದು ತಿಳಿಸಿದ್ದಾರೆ.

ಮತೀಯ ಮತ್ತು ವಿಭಜಕ ಶಕ್ತಿಗಳ ವಿರುದ್ಧ ಅತ್ಯಂತ ಕಾಳಜಿಯಿಂದ ತೊಡಗಿಸಿಕೊಂಡು ರಾಜ್ಯವಷ್ಟೇ ಅಲ್ಲದೇ ರಾಷ್ಟದಲ್ಲೂ ಕಾಂಗ್ರೆಸ್ ಪಕ್ಷಕ್ಕೆ ಪೂರಕವಾಗಿ ಶ್ರಮಿಸಿದ್ದಕ್ಕೆ ಸಂಪುಟದಿಂದ ಹೊರಗಿಟ್ಟಿರುವುದು ನನಗೆ ಸಿಕ್ಕ ಪ್ರತಿಫಲವೇ? ಇದು ಸರಿಯೋ ತಪ್ಪೋ ಎನ್ನುವುದು ಜನರ ವಿವೇಚನೆಗೆ ಸೇರಿದ್ದು ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

# 4 ಶಾಸಕರು, 4 ಎಂಎಲ್‌ಸಿಗೆ ಒಲಿಯದ ಸಚಿವ ಸ್ಥಾನ : ಕಾರ್ಯಕರ್ತರ ಅಸಮಾಧಾನ

**ರಾಯಚೂರು, ಆ. 5:** ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ರಾಜ್ಯ ಸಚಿವ ಸಂಪುಟ ವಿಸ್ತರಣೆಯಲ್ಲಿ ರಾಯಚೂರು ಜಿಲ್ಲೆಗೆ ಸಚಿವ ಸ್ಥಾನ ದೊರೆಯದೇ, ಬೇರೆ ಜಿಲ್ಲೆಯವರನ್ನು ಉಸ್ತುವಾರಿ ಸಚಿವರನ್ನಾಗಿ ಮಾಡಿರುವ ಹಿನ್ನೆಲೆಯಲ್ಲಿ ಜಿಲ್ಲೆಯ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಹಾಗೂ ಸಾರ್ವಜನಿಕ ರಲ್ಲಿ ತೀವ್ರ ಅಸಮಾಧಾನ ವ್ಯಕ್ತವಾಗಿದೆ.

ಜಾತಿ ಸಮೀಕರಣ, ಪ್ರಾದೇಶಿಕ ಸಮಾನತೆ ಹಾಗೂ ಸಾಮಾಜಿಕ ನ್ಯಾಯದ ಅಂಶಗಳನ್ನು ಕಡೆಗಣಿಸಿ ಜಿಲ್ಲೆಗೆ ಅನ್ಯಾಯ ಮಾಡಲಾಗಿದೆ ಎಂಬ ಆರೋಪಗಳು ಕೇಳಿಬಂದಿವೆ.

ಸಿದ್ದರಾಮಯ್ಯ ನೇತೃತ್ವದ ಹಿಂದಿನ ಸಂಪುಟದಲ್ಲಿ ಕೊನೆಯ ಗಳಿಗೆಯಲ್ಲಿ ರಾಹುಲ್ ಗಾಂಧಿ ಅವರ ಆದೇಶದ ಮೇರೆಗೆ ವಿಧಾನ ಪರಿಷತ್ ಸದಸ್ಯ ಎನ್.ಎಸ್.ಬೋಸರಾಜು ಅವರಿಗೆ ಸಚಿವ ಸ್ಥಾನ ನೀಡಲಾಗಿತ್ತು. ಹೊಸ ಸಂಪುಟದ ಮೊದಲ ಪಟ್ಟಿಯಲ್ಲಿ ಜಿಲ್ಲೆಗೆ ಅವಕಾಶ ದೊರೆಯದಿದ್ದರೂ, ಎರಡನೇ ಹಂತದಲ್ಲಿ ಸಿಂಧನೂರು ಶಾಸಕ ಹಂಪನಗೌಡ ಬಾದರ್ಲಿ ಅಥವಾ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಆಪ್ತರೆಂದು ಗುರುತಿಸಲ್ಪ ಡುವ ವಿಧಾನ ಪರಿಷತ್ ಸದಸ್ಯ ಎ.ವಸಂತಕುಮಾರ್ ಅವರಿಗೆ ಅವಕಾಶ ಸಿಗಬಹುದು ಎಂಬ ನಿರೀಕ್ಷೆ



ಇತ್ತು. ಆದರೆ ಅಂತಿಮವಾಗಿ ಜಿಲ್ಲೆಯ ಯಾರೊಬ್ಬರಿಗೂ ಸಚಿವ ಸ್ಥಾನ ದೊರೆಯದಿರುವುದು ನಿರಾಸೆಗೆ ಕಾರಣವಾಗಿದೆ.

ಜಿಲ್ಲೆಯ ಏಳು ವಿಧಾನಸಭಾ ಕ್ಷೇತ್ರಗಳ ಪೈಕಿ ರಾಯಚೂರು ಗ್ರಾಮೀಣ, ಮಾನ್ವಿ, ಸಿಂಧನೂರು ಹಾಗೂ ಮಸ್ಕಿ ಕ್ಷೇತ್ರಗಳಿಂದ ನಾಲ್ವರು ಕಾಂಗ್ರೆಸ್ ಶಾಸಕರು ಆಯ್ಕೆಯಾಗಿದ್ದಾರೆ. ಜೊತೆಗೆ ನಾಲ್ವರು ವಿಧಾನ ಪರಿಷತ್ ಸದಸ್ಯರಿದ್ದರೂ ಜಿಲ್ಲೆಯ ಯಾವುದೇ ಚುನಾಯಿತ ಪ್ರತಿನಿಧಿಗೆ ಸಚಿವ ಸ್ಥಾನ ನೀಡದಿರುವುದು ಅಸಮಾಧಾನಕ್ಕೆ ಕಾರಣವಾಗಿದೆ.

ಎನ್.ಎಸ್. ಬೋಸರಾಜು ಅವರಿಗೆ ಮತ್ತೊಮ್ಮೆ ಅವಕಾಶ ನೀಡದಿದ್ದರೆ, ಹಿರಿಯ ಶಾಸಕ ಹಂಪನಗೌಡ ಬಾದರ್ಲಿ, ಶಾಸಕ ಹಂಪಯ್ಯ ನಾಯಕ ಸಾಹುಕಾರ್, ಬಸನಗೌಡ ದದ್ದಲ್, ಬಸನಗೌಡ ತುರ್ವಿಹಾಳ ಅಥವಾ ವಿಧಾನ ಪರಿಷತ್ ಸದಸ್ಯ ಎ. ವಸಂತಕುಮಾರ್ ಅವರಂತಹ ನಾಯಕರಿಗೆ ಅವಕಾಶ ನೀಡಬಹುದಾಗಿತ್ತು ಎಂಬ ಅಭಿಪ್ರಾಯಗಳು ವ್ಯಕ್ತವಾಗಿವೆ.

ಕಲ್ಯಾಣ ಕರ್ನಾಟಕ ಭಾಗದ ರಾಯಚೂರು ಜಿಲ್ಲೆಗೆ ಬಿಜೆಪಿ ಹಾಗೂ ಕಾಂಗ್ರೆಸ್ ಸರ್ಕಾರಗಳ ಅವಧಿಯಲ್ಲಿಯೂ ಸಮರ್ಪಕ ಸಚಿವ ಪ್ರಾತಿನಿಧ್ಯ ದೊರೆಯುತ್ತಿಲ್ಲ ಎಂಬ ಟೀಕೆಗಳು ಕೇಳಿಬಂದಿವೆ. 2023ರಲ್ಲಿ ಎನ್.ಎಸ್. ಬೋಸರಾಜು ಅವರಿಗೆ ಸಚಿವ ಸ್ಥಾನ ನೀಡಲಾಗಿದ್ದರೂ ಜಿಲ್ಲಾ ಉಸ್ತುವಾರಿ ಹೊಣೆ ಕಲಬುರಗಿ ಜಿಲ್ಲೆಯ ಸಚಿವರಿಗೆ ನೀಡಲಾಗಿತ್ತು. ಈಗಲೂ ಜಿಲ್ಲೆಗೆ ಯಾವುದೇ ಪ್ರಾತಿನಿಧ್ಯ ನೀಡದಿರುವುದನ್ನು ಸಾಮಾಜಿಕ ಜಾಲತಾಣಗಳಲ್ಲಿ ಪ್ರಶ್ನಿಸಲಾಗುತ್ತಿದೆ.

ಕೆಪಿಸಿಸಿ ಹಿಂದುಳಿದ ವರ್ಗಗಳ ಹಿರಿಯ ಉಪಾಧ್ಯಕ್ಷ ತಲಕಾಯ ಮಾರೆಪ್ಪ ಅವರು ಪ್ರತಿಕ್ರಿಯಿಸಿ, ಕಾಂಗ್ರೆಸ್ ಪಕ್ಷವನ್ನು ಜಿಲ್ಲೆಯಲ್ಲಿ ಬಲಪಡಿಸಿದ ಹಿರಿಯ ದಲಿತ ನಾಯಕ ಎ. ವಸಂತಕುಮಾರ್ ಹಾಗೂ ಲಿಂಗಾಯತ ಸಮುದಾಯದ ಪ್ರಭಾವಿ ನಾಯಕ ಹಂಪನಗೌಡ ಬಾದರ್ಲಿ ಅವರು ಸಚಿವ ಸ್ಥಾನದ ಪ್ರಬಲ ಆಕಾಂಕ್ಷಿಗಳಾಗಿದ್ದರು. ಕೊನೆಯ ಕ್ಷಣದವರೆಗೂ ಅವರ ಹೆಸರುಗಳು ಚರ್ಚೆಯಲ್ಲಿದ್ದರೂ ಅಂತಿಮ ಪಟ್ಟಿಯಲ್ಲಿ ಕೈಬಿಡಲಾಗಿದೆ. ಇದರಿಂದ ಅವರ ಬೆಂಬಲಿಗರು ಹಾಗೂ ಪಕ್ಷದ ಕಾರ್ಯಕರ್ತರಲ್ಲಿ ತೀವ್ರ ಅಸಮಾಧಾನ ಉಂಟಾಗಿದೆ ಎಂದು ಹೇಳಿದರು.

ಇಬ್ಬರೂ ನಾಯಕರು ಪಕ್ಷದ ಪರವಾಗಿ ವಿವಿಧ ರಾಜ್ಯಗಳ ಚುನಾವಣೆಯಲ್ಲಿ ವೀಕ್ಷಕರಾಗಿ ಕಾರ್ಯನಿರ್ವಹಿಸಿ ಸಂಘಟನಾ ಸಾಮರ್ಥ್ಯ ತೋರಿದ್ದಾರೆ. ಇಂತಹ ನಾಯಕ ರನ್ನು ಸಚಿವ ಸಂಪುಟದಿಂದ ಹೊರಗಿಡ ಬಾರದಾಗಿತ್ತು. ಭವಿಷ್ಯದ ಚುನಾವಣೆಗಳ ಮೇಲೆ ಇದರ ಪರಿಣಾಮ ಬೀಳುವ ಸಾಧ್ಯತೆ ಇದ್ದು, ಅವರಿಗೆ ಸಂಪುಟ ದರ್ಜೆಯ ಸ್ಥಾನಮಾನ ನೀಡುವ ಬಗ್ಗೆ ಪಕ್ಷದ ಹೈಕಮಾಂಡ್ ಪರಿಗಣಿಸಬೇಕು ಎಂದು ಒತ್ತಾಯಿಸಿದರು.

# ರಾಯಚೂರು: ಪಾದಚಾರಿ ರಸ್ತೆ ನುಂಗಿದ ವ್ಯಾಪಾರಿಗಳು–ಜೀವಭಯದಲ್ಲೇ ಜನರ ಓಡಾಟ

**ರಾಯಚೂರು, ಆ. 5:** ಜನರ ಸುರಕ್ಷಿತ ಸಂಚಾರಕ್ಕೆ ನಿರ್ಮಿಸಲಾದ ಪಾದಚಾರಿ ಮಾರ್ಗಗಳು ಒತ್ತುವರಿ ದಾರರ ಪಾಲಾಗಿವೆ. ನಗರದ ಪ್ರಮುಖ ರಸ್ತೆಗಳಲ್ಲಿ ಪಾದಚಾರಿ ಮಾರ್ಗಗಳನ್ನು ನಿರ್ಮಿಸಿದ್ದರೂ, ವ್ಯಾಪಾರ ಚಟುವಟಿಕೆ, ವಾಹನ ನಿಲುಗಡೆ ತಾಣಗಳಾಗಿ ಮಾರ್ಪಟ್ಟಿವೆ. ಪಾದಚಾರಿಗಳು ರಸ್ತೆ ಮೇಲೆಯೇ ನಡೆಯುವ ಅನಿವಾರ್ಯ ಪರಿಸ್ಥಿತಿ ನಿರ್ಮಾಣ ವಾಗಿದೆ. ಇದರಿಂದ ಅಪಘಾತದ ಭೀತಿ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ.



ನಗರದ ಗೋಶಾಲ ರಸ್ತೆ, ಚಂದ್ರಮೌಳೇಶ್ವರ ರಸ್ತೆ, ಗಂಜ್ ರಸ್ತೆ, ಬಸವೇಶ್ವರ ರಸ್ತೆ, ಸ್ಟೇಷನ್ ರಸ್ತೆ, ಪಟೇಲ್ ರಸ್ತೆ, ಸೂಪರ್ ಮಾರ್ಕೆಟ್ ಪ್ರದೇಶ ಹಾಗೂ ಕೇಂದ್ರ ಬಸ್ ನಿಲ್ದಾಣದ ಸುತ್ತಮುತ್ತ ಪಾದಚಾರಿ ಮಾರ್ಗಗಳು ಅತಿಕ್ರಮಣಕ್ಕೆ ಒಳಗಾಗಿವೆ. ಬಹುತೇಕ ಪಾದಚಾರಿ ಮಾರ್ಗಗಳಲ್ಲಿ ಮೊಬೈಲ್, ಬಟ್ಟೆ ಹಾಗೂ ಚಪ್ಪಲಿ ಅಂಗಡಿಗಳ ವಸ್ತುಗಳನ್ನು ಇಡಲಾಗಿದೆ. ಕೆಲವು ಹೋಟೆಲ್‌ಗಳು ಟೇಬಲ್, ಕುರ್ಚಿ ಹಾಗೂ ಇತರ ಸಾಮಗ್ರಿಗಳನ್ನು ಇರಿಸಿ ವ್ಯಾಪಾರ ವಿಸ್ತರಿಸಿಕೊಂಡಿವೆ.

ತಳ್ಳುಗಾಡಿ ವ್ಯಾಪಾರಿಗಳು, ತರಕಾರಿ ಮತ್ತು ಹಣ್ಣು ಮಾರಾಟಗಾರರು ಸಹ ಪಾದಚಾರಿ ಮಾರ್ಗಗಳನ್ನೇ ವ್ಯಾಪಾರದ ಸ್ಥಳವನ್ನಾಗಿ ಮಾಡಿ ಕೊಂಡಿದ್ದಾರೆ. ಇದರ ಜೊತೆಗೆ ಆಟೊ ಹಾಗೂ ದ್ವಿಚಕ್ರ ವಾಹನ ನಿಲುಗಡೆ, ಅಂಗಡಿಗಳ ಸರಕುಗಳ ರಾಶಿ ಮತ್ತು ಇತರೆ ವಾಣಿಜ್ಯ ಚಟುವಟಿಕೆಗಳಿಗೆ ಪಾದಚಾರಿ ಮಾರ್ಗಗಳು ಬಲಿಯಾಗಿವೆ.

ಈ ಪರಿಸ್ಥಿತಿಯಿಂದ ವೃದ್ಧರು, ಮಹಿಳೆಯರು, ಮಕ್ಕಳು ಹಾಗೂ ಅಂಗವಿಕಲರು ಹೆಚ್ಚು ಸಂಕಷ್ಟ ಅನುಭವಿಸುತ್ತಿದ್ದಾರೆ. ಪಾದಚಾರಿ ಮಾರ್ಗಗಳು ಲಭ್ಯವಿಲ್ಲದ ಕಾರಣ ಅವರು ವಾಹನಗಳ ನಡುವೆ ರಸ್ತೆಯಲ್ಲೇ ನಡೆದು ಹೋಗಬೇಕು.

ಸಂಚಾರ ದಟ್ಟಣೆ ಇರುವ ಸಮಯದಲ್ಲಿ ಈ ಸಮಸ್ಯೆ ಮತ್ತಷ್ಟು ಗಂಭೀರ ಸ್ವರೂಪ ಪಡೆದು, ಅಪಘಾತ ಸಂಭವಿಸುವ ಸಾಧ್ಯತೆ ಹೆಚ್ಚುತ್ತಿದೆ. ಶಾಲಾ ವಿದ್ಯಾರ್ಥಿಗಳು ಹಾಗೂ ಉದ್ಯೋಗಕ್ಕೆ ತೆರಳುವ ನಾಗರಿಕರು ಪ್ರತಿದಿನ ಜೀವದ ಹಂಗು ತೊರೆದು ರಸ್ತೆ ದಾಟುವ ಪರಿಸ್ಥಿತಿ ಎದುರಿಸುತ್ತಿದ್ದಾರೆ.

ಮಹಾನಗರ ಪಾಲಿಕೆ, ಪೊಲೀಸ್ ಇಲಾಖೆ ಕೆಲವೊಮ್ಮೆ ಒತ್ತುವರಿ ತೆರವು ಕಾರ್ಯಾಚರಣೆ ನಡೆಸಿದರೂ, ಕೆಲವೇ ದಿನಗಳಲ್ಲಿ ಮತ್ತೆ ಹಿಂದಿನ ಸ್ಥಿತಿ ಮರುಕಳಿಸುತ್ತಿದೆ. ಶಾಶ್ವತ ಪರಿಹಾರಕ್ಕೆ ಅಗತ್ಯವಾದ ಕಟ್ಟುನಿಟ್ಟಿನ ಕ್ರಮ ಮತ್ತು ನಿರಂತರ ಮೇಲ್ವಿಚಾರಣೆಯ ಕೊರತೆ ಸ್ಪಷ್ಟವಾಗಿ ಗೋಚರಿಸುತ್ತಿದೆ.

ನಗರದ ಸೌಂದರ್ಯ, ಸುಗಮ ಸಂಚಾರ ಹಾಗೂ ಪಾದಚಾರಿಗಳ ಸುರಕ್ಷತೆ ಕಾಪಾಡಬೇಕಾದರೆ ಪಾದಚಾರಿ ಮಾರ್ಗಗಳನ್ನು ಸಂಪೂರ್ಣವಾಗಿ ಒತ್ತುವರಿಯಿಂದ ಮುಕ್ತಗೊಳಿಸಬೇಕು. ಸಂಬಂಧಿತ ಅಧಿಕಾರಿಗಳು ನಿಯಮಿತ ವಾಗಿ ಪರಿಶೀಲನೆ ನಡೆಸಿ, ಒತ್ತುವರಿ ತಡೆಗಟ್ಟಲು ಶಾಶ್ವತ ವ್ಯವಸ್ಥೆ ರೂಪಿಸಿದಾಗ ಮಾತ್ರ ಸಾರ್ವಜನಿಕರಿಗೆ ಸುರಕ್ಷಿತವಾಗಿ ಸಂಚರಿಸುವ ಹಕ್ಕು ದೊರೆಯಲಿದೆ. ಇಲ್ಲದಿದ್ದರೆ ಅಭಿವೃದ್ಧಿಯತ್ತ ಸಾಗುತ್ತಿರುವ ನಗರದಲ್ಲಿ ಪಾದಚಾರಿಗಳ ಸಂಕಷ್ಟ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ ಎಂದು ಸ್ಥಳೀಯ ನಿವಾಸಿ ಪವನ್ ಕುಮಾರ ಹೇಳುತ್ತಾರೆ.

ಜುಬಿನ್ ಮೊಹಾಪಾತ್ರ, ಮಹಾನಗರ ಪಾಲಿಕೆ ಆಯುಕ್ತಸದ್ಯ ಎಸ್‌ಐಆರ್ ಪ್ರಕ್ರಿಯೆ ನಡೆಯುತ್ತಿದ್ದು, ಪಾಲಿಕೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಈ ಕಾರ್ಯದಲ್ಲಿ ತೊಡಗಿದ್ದಾರೆ. ಎಸ್‌ಐಆರ್ ಪ್ರಕ್ರಿಯೆ ಪೂರ್ಣಗೊಂಡ ಬಳಿಕ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಪರಿಸ್ಥಿತಿ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು.

ಬೆಂಗಳೂರಿನಲ್ಲಿ ಇತ್ತೀಚೆಗೆ ವಿವಿಧ ಬಡಾವಣೆಗಳು ಮತ್ತು ಮಾರುಕಟ್ಟೆ ಪ್ರದೇಶಗಳಲ್ಲಿ ಪಾದಚಾರಿ ರಸ್ತೆಗಳನ್ನು ತೆರವುಗೊಳಿಸಿ ಪಾದಚಾರಿಗಳಿಗೆ ಮುಕ್ತಗೊಳಿಸಲಾಗಿದೆ. ಹೈಕೋರ್ಟ್ ಕೂಡ ಪಾದಚಾರಿ ರಸ್ತೆಗಳು ಪಾದಚಾರಿಗಳಿಗೆ ಸೀಮಿತ ಎಂದು ಹೇಳಿದೆ. ಈ ಆದೇಶ ರಾಯಚೂರು ನಗರಕ್ಕೆ ಅನ್ವಯಿಸುವುದಿಲ್ಲವೇ? ರಾಯಚೂರು ಮಹಾನಗರ ಪಾಲಿಕೆಗೆ ಪದಚಾರಿ ರಸ್ತೆಗಳನ್ನು ಮುಕ್ತಗೊಳಿಸುವ ಆಸಕ್ತಿಯಿಲ್ಲವೇ? ಒಟ್ಟಾರೆ ರಾಯಚೂರು ಪಾದಚಾರಿಗಳು ಮಾತ್ರ ನಿತ್ಯ ಆತಂಕದೊಂದಿಗೆ ರಸ್ತೆಗಳಲ್ಲಿ ವಾಹನಗಳೊಂದಿಗೆ ಸಂಚರಿಸುವಂತಾಗಿದೆ. ಯಾವಾಗ ಯಾರ ಜೀವ ತೆಗೆಯುತ್ತವೋ ಗೊತ್ತಿಲ್ಲ ಎಂದು ಸಾರ್ವಜನಿಕರು ಅಳಲು ತೋಡಿಕೊಂಡಿದ್ದಾರೆ.

# ಸಂಗೀತ ಕ್ಷೇತ್ರಕ್ಕೆ ಆಕಾಶವಾಣಿ ಕೊಡುಗೆ ಅಪಾರ: ಡಾ.ಸದಾನಂದ ಪೆರ್ಲ



ಕಲಬುರಗಿ ನಗರದ ಬಿದ್ದಾಪುರ ಕಾಲೋನಿಯ ಅಂಬಾ ಭವಾನಿ ದೇವವಸ್ಥಾನ ಆವರಣದಲ್ಲಿ ಹಮ್ಮಿಕೊಂಡಿದ್ದ ಪಂಚಾಕ್ಷರಿ ಗವಾಯಿಗಳ 82ನೇ ಮತ್ತು ಪಂಡಿತ ಪುಟ್ಟರಜ ಗವಾಯಿಗಳ 16ನೇ ಪಣ್ಯಸ್ಮರಣೋತ್ಸವದಂಗವಾಗಿ ಸಂಗೀತ ಸಂಜೆ ಮತ್ತು ಸಾಧಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಗಾನಲೋಕದ ಗಂಧರ್ವ ಸಿರಿ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು. ಆಕಾಶವಾಣಿ ನಿವೃತ್ತ ಕಾರ್ಯನಿರ್ವಾಹಕ ಡಾ.ಸದಾನಂದ ಪೆರ್ಲ ಮತ್ತಿತರರಿದ್ದರು.

**ಕಲಬುರಗಿ, ಆ. 5:** ಆಕಾಶ ವಾಣಿಯು ಶಾಸ್ತ್ರೀಯ ಜಾನಪದ ಹಾಗೂ ಸುಗಮ ಸಂಗೀತ ಕ್ಷೇತ್ರದ ಬೆಳವಣಿಗೆಗೆ ಅಪಾರ ಕೊಡುಗೆ ನೀಡಿದೆ. ಸಂಗೀತ ಪರಂಪರೆ ಉಳಿಸಿ, ಕಲಾವಿದರನ್ನು ಬೆಳೆಸುವ ದಿಸೆಯಲ್ಲಿ ಆಕಾಶವಾನಿ ಕಾರಣವಾಗಿದೆ ಎಂದು ಆಕಾಶವಾಣಿ ನಿವೃತ್ತ ಅಧಿಕಾರಿ ಡಾ.ಸದಾನಂದ ಪೆರ್ಲ ಹೇಳಿದರು.

ನಗರದ ಬಿದ್ದಾಪುರ ಕಾಲನಿ ಅಂಬಾ ಭವಾನಿ ದೇವಸ್ಥಾನ ಆವರಣದಲ್ಲಿ ಹಮ್ಮಿಕೊಂಡಿದ್ದ ಪೂಜ್ಯ ಪಂಚಾರಿ ಗವಾಯಿಗಳ 82ನೇ ಮತ್ತು ಪಂಡಿತ ಪುಟ್ಟರಾಜ ಗವಾಯಿಗಳ 16ನೇ ಪುಣ್ಯ ಸ್ಮರಣೋತ್ಸವ, ಸಂಗೀತ ಸಂಜೆ ಹಾಗೂ ಆಕಾಶವಾಣಿಯ ಜಿ.ಬಿ ಮಂಗಳಗಟ್ಟಿ ಸ್ಮರಣಾರ್ಥ ಐವರು ಸಂಗೀತ ಸಾಧಕರಿಗೆ 'ಗಾನಲೋಕದ ಗಂಧರ್ವ ಸಿರಿ' ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾಯನಾಡಿದರು.

ಹಿಂದುಸ್ತಾನಿ, ಜಾನಪದ, ಸುಗಮ ಸಂಗೀತ ರಂಗದಲ್ಲಿ ನೂರಾರು ಕಲಾವಿದರನ್ನು ಹೊಂದಿದ್ದು, ಎಲ್ಲ ಕಲಾವಿದರು ಕೀಳರಿಮೆ ಬಿಟ್ಟು ಅವಕಾಶಗಳನ್ನು ಬಳಸಿ ಸಾಧನೆ ಮಾಡಲು ಪರಿಶ್ರಮ ಪಡಬೇಕು. ದಿ.ಜಿ.ಬಿ.ಮಂಗಳಗಟ್ಟಿ ಅವರು ಆಕಾಶವಾಣಿಯಲ್ಲಿ ಅಧಿಕಾರಿಯಾಗಿ 40 ವರ್ಷ ಸೇವೆ ಸಲ್ಲಿಸಿ, ಸಂಗೀತ ಕಲಾವಿದರಿಗೆ ಅಪಾರ ಪ್ರೋತ್ಸಾಹ ನೀಡಿ ಬೆಳಸಿದ್ದಾರೆ. ಅವರ ಹೆಸರಿನ ಪ್ರಶಸ್ತಿ ಪ್ರತಿವರ್ಷ ನೀಡುವಂತಾಗಲಿ ಎಂದು ಅಭಿಪ್ರಾಯಪಟ್ಟರು.

ಹೂಗಾರ ಸಮಾಜದ ಮುಖಂಡ ಸೂರ್ಯಕಾಂತ ಫುಲಾರಿ ಅಧ್ಯತೆ ವಹಿಸಿದ್ದರು. ಕಲ್ಮೇಶ್ವರ ಸಂಗೀತ ಸಾಹಿತ್ಯ ಸಂಘದ ಅಧ್ಯಕ್ಷ ಅಂಬರೀಶ ಹೂಗಾರ, ಪತ್ರಕರ್ತ ಡಿ.ಎಂ.ಪಾಟೀಲ್, ರುದ್ರಪ್ಪ ನರಗುಂದ, ಬಸಯ್ಯ ನಂದಿಕೋಲು, ಚಂದ್ರಕಾಂತ ಹೂಗಾರ ತ್ತರಗಿ, ಜಯಧೃತ ಶೃಂಗೇರಿ, ಅಶೋಕ ಹೂಗಾರ, ಭೀಮಾಶಂಕರ ಮುಗಳಿ, ರೇವಣಸಿದ್ದಪ್ಪ ಹೂಗಾರ, ಇಂದಿರಾ, ಲಕ್ಷ್ಮೀಪುತ್ರ ಪದಕಿ, ವಿಜಯಕುಮಾರ ಸಾಲಿಮಠ ಇತರರಿದ್ದರು.

ಹಿಂದುಸ್ತಾನಿ ಸಂಗೀತ ಕಲಾವಿದರಾದ ರೇವಯ್ಯ ಸ್ವಾಮಿ ವಸ್ತ್ರದಮಠ, ರಮೇಶ ಕುಲಕರ್ಣಿ, ಶಿವಲಿಂಗಯ್ಯ ಸ್ವಾಮಿ ಚಿಣಮಗೇರಿ, ಜಾನಪದ ಸಂಗೀತ ಕಲಾವಿದರಾದ ಬಾಬುರಾವ ಕೋಬಾಳ, ಹನುಮಂತ ಸಿ. ಅವರಿಗೆ ಗಾನಲೋಕದ ಗಂಧರ್ವ ಸಿರಿ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಶಿವಕುಮಾರ ಶಾಸ್ತ್ರೀಗಳು, ವಿಶ್ವನಾಥಮಠ ಧುತ್ತರಗಾಂವ್ ನಿರೂಪಣೆ ಮಾಡಿದರು. ಪ್ರೇರಣಾ ನರಗುಂದ ಪ್ರಾರ್ಥಿಸಿದರು. ಆಕಾಶವಾಣಿಯ ಕಲಾವಿದರಿಂದ ಸಂಗೀತ ಸಂಜೆ ಕಾರ್ಯಕ್ರಮ ನೆರವೇರಿತು.

# ಮೈದುಂಬಿದ ಗಗನಚುಕ್ಕಿ ಜಲಪಾತ: ಹೆಚ್ಚಿದ ಪ್ರವಾಸಿಗರ ಸಂಖ್ಯೆ



**ಮಂಡ್ಯ, ಆ.5:** ಜಿಲ್ಲೆಯ ಶಿವನಸಮುದ್ರ (ಬ್ಲಫ್) ಸಮೀಪದ ವಿಶ್ವಪ್ರಸಿದ್ಧ ಗಗನಚುಕ್ಕಿ ಜಲಪಾತವು ಮೈದುಂಬಿ ಹರಿಯುತ್ತಿದ್ದು, ಜಲ ವೈಭವದ ರಮಣೀಯ ದೃಶ್ಯವನ್ನು ಕಣ್ತುಂಬಿಕೊಳ್ಳಲು ಪ್ರವಾಸಿಗರ ದಂಡು ಹರಿದು ಬರುತ್ತಿದೆ. ಕೇರಳದಲ್ಲಿ ವ್ಯಾಪಕ ಮಳೆಯಾಗುತ್ತಿರುವುದರಿಂದ ಈಗಾಗಲೇ ಕಬಿನಿ ಜಲಾಶಯ ಭರ್ತಿಯಾಗಿ ನದಿಗೆ 30 ಸಾವಿರ ಕ್ಯುಸೆಕ್ ನೀರು ಬಿಡಲಾಗುತ್ತಿದೆ. ಇದರಿಂದಾಗಿ ಕಳೆದ ಐದಾರು ದಿನಗಳಿಂದ ಗಗನಚುಕ್ಕಿ ಜಲಪಾತ ಮೈದುಂಬಿಕೊಂಡು ಧುಮ್ಮಿಕ್ಕುತ್ತಿದೆ.

ಈ ಬಾರಿಯ ಮಳೆಗಾಲದಲ್ಲಿ ಮೊದಲ ಬಾರಿಗೆ ಜೀವಕಳೆ ಪಡೆದಿದೆ. ಇದನ್ನು ಕಣ್ತುಂಬಿಕೊಳ್ಳಲು ಬೆಂಗಳೂರು, ಮೈಸೂರು, ಚಾಮರಾಜನಗರ ಸೇರಿದಂತೆ ವಿವಿಧೆಡೆಯಿಂದ ಪ್ರವಾಸಿಗರ ದಂಡೇ ಜಲಪಾತದತ್ತ ಹರಿದು ಬರುತ್ತಿದೆ. 300 ಅಡಿಗಳ ಎತ್ತರದಿಂದ ಧುಮ್ಮಿಕ್ಕುವ ಗಗನಚುಕ್ಕಿ ಜಲಪಾತ ಹಾಗೂ 226 ಅಡಿಗಳಿಂದ ಭೋರ್ಗರೆಯುವ ಕೊಳ್ಳೇಗಾಲದ ಭರಚುಕ್ಕಿ ಜಲಪಾತಗಳು ಪ್ರವಾಸಿಗರನ್ನು ಆಕರ್ಷಿಸುತ್ತಿವೆ.

ಈ ಎರಡೂ ಜಲಧಾರೆಗಳು ಮಂಡ್ಯ ಹಾಗೂ ಚಾಮರಾಜನಗರ ಜಿಲ್ಲೆಯ ಗಡಿಯಂಚಿನಲ್ಲೇ ಇವೆ. ಕಳೆದ ವರ್ಷ ಉತ್ತಮ ಮಳೆಯಾದ ಕಾರಣ ಜೂನ್ 15ರಿಂದಲೇ ಗಗನಚುಕ್ಕಿ ಜಲಪಾತ ಮೈದುಂಬಿ ಧುಮ್ಮಿಕ್ಕಿತ್ತು.

ಸೆಪ್ಟೆಂಬರ್ 13 ಮತ್ತು 14ರಂದು 'ಗಗನಚುಕ್ಕಿ ಜಲಪಾತೋತ್ಸವ' ವೈಭವದಿಂದ ನಡೆದಿತ್ತು. ಆದರೆ, ಪ್ರಸ್ತುತ ವರ್ಷ ಹಿಂಗಾರು ಮತ್ತು ಮುಂಗಾರು ಕೈಕೊಟ್ಟ ಕಾರಣ ಜೂನ್ ಮತ್ತು ಜುಲೈ ತಿಂಗಳಲ್ಲಿ ನೀರಿಲ್ಲದೆ ಜಲಪಾತ ಬತ್ತಿ ಹೋಗಿತ್ತು.

# ಗುಂಡಿಗಳ ನಗರವಾಗಿ ಬದಲಾದ ಬೀದರ್ ರಸ್ತೆ ದುರವಸ್ಥೆಗೆ ಜನರ ಆಕ್ರೋಶ



**ಬೀದರ್, ಆ. 5:** ನಗರದಲ್ಲಿ ರಸ್ತೆಗಳ ದುಸ್ಥಿತಿ ಇದೀಗ ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ. ಸ್ವಲ್ಪ ಮಳೆ ಬಂದರೆ ಸಾಕು, ನಗರದ ಹಲವು ರಸ್ತೆಗಳು ಕೆರೆಯಂತಾಗುತ್ತವೆ. ರಸ್ತೆ ಎಲ್ಲಿದೆ, ಗುಂಡಿ ಎಲ್ಲಿದೆ ಎಂಬುದೇ ತಿಳಿಯದ ಪರಿಸ್ಥಿತಿ ನಿರ್ಮಾಣವಾಗಿದೆ. ಗುಂಡಿಗಳ ನಡುವೆ ಜೀವ ಕೈಯಲ್ಲಿ ಹಿಡಿದು ವಾಹನ ಚಲಾಯಿಸುವಂತಾಗಿದೆ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಇದು ಬೀದರ್ ನಗರದ ರಸ್ತೆ ಸ್ಥಿತಿ..! ಮಳೆ ನೀರಿನಲ್ಲಿ ಮುಳುಗಿರುವ ರಸ್ತೆಗಳು.. ಅಲ್ಲಲ್ಲಿ ಬೃಹತ್ ಗುಂಡಿಗಳು.. ಗುಂಡಿಗಳ ನಡುವೆ ಸಾಗುತ್ತಿರುವ ವಾಹನಗಳು.. ಈ ದೃಶ್ಯಗಳು ಇದೀಗ ಬೀದರ್ ನಗರದ ಅವ್ಯವಸ್ಥೆಗೆ ಹಿಡಿದ ಕೈಗನ್ನಡಿಯಾಗಿವೆ. ನಗರದ ಗುಂಪಾ, ಮೈಲೂರ್ ಹಾಗೂ ಚಿದ್ರಿ ಸೇರಿದಂತೆ ಹಲವು ಪ್ರದೇಶಗಳಲ್ಲಿ ರಸ್ತೆಗಳ ಮೇಲೆ ಗುಂಡಿಗಳ ದರ್ಬಾರ್ ನಡೆಯುತ್ತಿದೆ. ಮಳೆ ಬಂದಾಗ ಗುಂಡಿಗಳಲ್ಲಿ ನೀರು ತುಂಬಿಕೊಂಡು ರಸ್ತೆ ಎಲ್ಲಿದೆ ಎಂಬುದೇ ಕಾಣದಂತಾಗುತ್ತಿದೆ.

ಇನ್ನು ನಗರದ ಹೃದಯಭಾಗದಲ್ಲಿರುವ ಡಾ. ಚನ್ನಬಸವ ಪಟ್ಟದ್ದೇವರ ರಂಗಮಂದಿರದಿಂದ ಹೊಸ ಬಸ್ ನಿಲ್ದಾಣಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯ ಸ್ಥಿತಿಯೂ ಇದಕ್ಕಿಂತ ಭಿನ್ನವಾಗಿಲ್ಲ. ಪ್ರತಿದಿನ ಸಾವಿರಾರು ಪ್ರಯಾಣಿಕರು ಸಂಚರಿಸುವ ಪ್ರಮುಖ ರಸ್ತೆಯಲ್ಲೇ ವಾಹನ ಸವಾರರು ನರಕಯಾತನೆ ಅನುಭವಿಸುವಂತಾಗಿದೆ. ದ್ವಿಚಕ್ರ ವಾಹನ ಸವಾರರು ಗುಂಡಿಗಳಿಗೆ ಬಿದ್ದು ಅಪಾಯ ಎದುರಿಸುವ ಆತಂಕವೂ ಹೆಚ್ಚಾಗಿದೆ.

# ರಸ್ತೆ ಕಾಮಗಾರಿ ವೇಳೆ ಪತ್ತೆಯಾಯಿತು ರಾಷ್ಟ್ರಕೂಟರ ಕಾಲದ ಅಪರೂಪದ ವಿಗ್ರಹ



**ಕಲಬುರಗಿ, ಆ. 5:** ಜಿಲ್ಲೆಯ ಹೊಳಕುಂದಾ ಗ್ರಾಮದಲ್ಲಿ ರಸ್ತೆ ಕಾಮಗಾರಿ ನಡೆಸುವಾಗ, ರಾಷ್ಟ್ರಕೂಟರ ಕಾಲದ್ದೆಂದು ಹೇಳಲಾದ ಅಪರೂಪದ ಸೂರ್ಯ ನಾರಾಯಣ ದೇವರ ಶಿಲಾ ಮೂರ್ತಿಯೊಂದು ಪತ್ತೆಯಾಗಿದೆ.

ಜಿಲ್ಲೆಯ ಕಮಲಾಪುರ ತಾಲೂಕಿನ ಹೊಳಕುಂದಾ ಗ್ರಾಮದ ರುಕ್ಮಿಣಿ –ವಿಠಲ ದೇವಸ್ಥಾನದ ಆವರಣದಲ್ಲಿನ ಸಿಸಿ ರಸ್ತೆ ಕಾಮಗಾರಿ ನಡೆಸಲಾಗುತ್ತಿತ್ತು. ಈ ವೇಳೆ ನೆಲ ಅಗಿಯುವಾಗ ಐತಿಹಾಸಿಕ ಹಾಗೂ ಪುರಾತನವಾದ ಸೂರ್ಯನಾರಾಯಣ ದೇವರ ಶಿಲಾ ಮೂರ್ತಿಯೊಂದು ಪತ್ತೆಯಾಗಿದೆ. ಈ ಪತ್ತೆಯಾಗಿರುವ ಸೂರ್ಯನಾರಾಯಣ ದೇವರ ವಿಗ್ರಹವು 2.1 ಅಡಿ ಎತ್ತರವಿದ್ದು, ಅತ್ಯಂತ ಆಕರ್ಷಕವಾದ ಕಪ್ಪು ಶಿಲೆಯಲ್ಲಿ ಕೆತ್ತಲ್ಪಟ್ಟಿದೆ. ಮೂರ್ತಿಯ ಎರಡೂ ಕೈಗಳಲ್ಲಿ ಕಮಲದ ಹೂವುಗಳಿರುವುದು ಇದರ ವಿಶೇಷತೆಯಾಗಿದೆ.

ಐತಿಹಾಸಿಕ ಸಂಶೋಧಕರ ಪ್ರಾಥಮಿಕ ಅಭಿಪ್ರಾಯ ಹಾಗೂ ಪರಿಶೀಲನೆಯ ಪ್ರಕಾರ, ಈ ಸೂರ್ಯನಾರಾಯಣ ವಿಗ್ರಹವು ಕಲ್ಯಾಣ ಕರ್ನಾಟಕ ಭಾಗವನ್ನು ಆಳಿದ ರಾಷ್ಟ್ರಕೂಟರ ಕಾಲದ ಅತ್ಯಪೂರ್ವ ಶಿಲ್ಪಕಲೆ ಎನ್ನಲಾಗಿದೆ. ದೇವಸ್ಥಾನದ ಆವರಣದಲ್ಲೇ ಈ ಪುರಾತನ ಮೂರ್ತಿ ಸಿಕ್ಕಿರುವುದರಿಂದ ಹೊಳಕುಂದಾ ಗ್ರಾಮದ ಜನರಲ್ಲಿ ತೀವ್ರ ಕೌತುಕ ಹಾಗೂ ಭಕ್ತಿಭಾವ ಮೂಡಿದ್ದು, ಈ ಐತಿಹಾಸಿಕ ಮೂರ್ತಿಯನ್ನು ವೀಕ್ಷಿಸಲು ನೂರಾರು ಜನರು ತಂಡೋಪತಂಡವಾಗಿ ಸ್ಥಳಕ್ಕೆ ಭೇಟಿ ನೀಡುತ್ತಿದ್ದಾರೆ.

# ಚಿನ್ನ ಇಲ್ಲದೇ ಬದುಕಬಹುದು ಆದರೆ ಅನ್ನವಿಲ್ಲದೇ ಬದುಕಲಾಗದು: ರಂಭಾಪುರಿ ಜಗದ್ಗುರುಗಳು

**ರಾಣೆಬೆನ್ನೂರು–ಆ–5:** ಈಶ ನಿರ್ಮಿತವಾದ ಈ ಪ್ರಪಂಚದಲ್ಲಿ ಇರುವುದೆಲ್ಲವೂ ಅಮೂಲ್ಯ ಸಂಪತ್ತು. ದೇಹ ಮನ ಬುದ್ಧಿ ಕೈ ಕಾಲು ಇವುಗಳೆಲ್ಲವೂ ನಿಜವಾದ ಸಂಪತ್ತು. ಚಿನ್ನವಿಲ್ಲದೇ ಬದುಕಬಹುದು. ಆದರೆ ಅನ್ನವಿಲ್ಲದೇ ಬದುಕಲಾಗದೆಂದು ಬಾಳೆಹೊನ್ನೂರು ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಬದುಕು ಶ್ರೀಮಂತಗೊಳ್ಳಬೇಕು. ಹಣ ಚಿನ್ನ ಬೆಳ್ಳಿ ವಸ್ತು ಒಡವೆಗಳಿಂದ ಬದುಕು ಕಟ್ಟಿಕೊಳ್ಳುವುದು ಒಳಿತಲ್ಲ. ಮೌಲ್ಯಾಧಾರಿತ ಸದ್ಗುಣವಂತನ ಬದುಕು ಆದರ್ಶವಾಗುತ್ತದೆ. ಋಷಿ ಮುನಿಗಳು ಆಚಾರ್ಯ ಶ್ರೇಷ್ಠರು ಭೌತಿಕ ಬದುಕಿಗಾಗಿ ಹಂಬಲಿಸದೇ ಆಧ್ಯಾತ್ಮ ಲೋಕದಲ್ಲಿ ಆನಂದದಿಂದ ಬಾಳಿ ಇನ್ನಿತರರಿಗೆ ದಾರಿ ದೀಪವಾದರು. ಮನುಷ್ಯನಿಗೆ ಏನೆಲ್ಲ ಸಂಪತ್ತು ಸಂಪನ್ಮೂಲ ಸೌಲಭ್ಯಗಳಿದ್ದರೂ ನಮ್ಮ ಬದುಕು ಹರ್ಷದಾಯಕವಾಗಿಲ್ಲ. ಸತ್ಯ ಶುದ್ಧ ಕಾಯಕದಿಂದ ಬದುಕು ಬಲಗೊಳ್ಳುತ್ತದೆ. ಸತ್ಕಾರ್ಯಗಳಿಂದ ಮನುಷ್ಯನ ಅಂತರಂಗ ಪರಿಶುದ್ಧವಾಗುತ್ತದೆ ಎಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ರೇಣುಕಾಗಸ್ತ್ಯ ಸಂವಾದ ಗ್ರಂಥದಲ್ಲಿ ಬೋಧಿಸಿದ್ದಾರೆ ಎಂದರು.

ಸಮಾರಂಭ ಉದ್ಘಾಟಿಸಿದ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಸಂತೋಷ ಪಾಟೀಲ ಮಾತನಾಡಿ ಬದುಕಿನಲ್ಲಿ ಸುಖ ಶಾಂತಿ ಪ್ರಾಪ್ತಿಯಾದರೆ ಅದಕ್ಕಿಂತ ನೆಮ್ಮದಿ ಇನ್ನೊಂದಿಲ್ಲ. ಕಷ್ಟಪಟ್ಟು ಉನ್ನತ ಸ್ಥಾನಕ್ಕೆ ಬಂದವನು ಜೀವನದಲ್ಲಿ ಎಂದೂ ಸೋಲುವುದಿಲ್ಲ. ನ್ಯಾಯ ನೀತಿ ಧರ್ಮಗಳೆಂಬ ರಾಜ



ಮಾರ್ಗದಲ್ಲಿ ನಡೆದರೆ ಯಾರಿಗೂ ತಲೆ ಬಾಗಿಸುವ ಪ್ರಮೇಯ ಬರದು. ಜೀವನ ನಿಂತ ನೀರಾಗಬಾರದು. ನಿರಂತರ ಹರಿಯುವ ಜೀವ ಗಂಗಾಜಲವಾಗಬೇಕು. ಜೀವನದಲ್ಲಿ ಏನೇ ಸವಾಲುಗಳು ಬಂದರೂ ಅದನ್ನು ಸಮರ್ಥವಾಗಿ ಎದುರಿಸುವ ಆತ್ಮ ಬಲ ಧರ್ಮಾಚರಣೆಯಿಂದ ಪ್ರಾಪ್ತವಾಗುವು ದೆಂದರು.

ನೇತೃತ್ವ ವಹಿಸಿದ ಆವರಗೊಳ್ಳ ಪುರವರ್ಗ ಹಿರೇಮಠದ ಓಂಕಾರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಭವ ಬಂಧನದಿಂದ ಮುಕ್ತನಾಗಲು ಗುರು ಕಾರುಣ್ಯ ಅವಶ್ಯಕ. ಕತ್ತಲೆ ಕಳೆಯಲು ಸೂರ್ಯ ಬೇಕು. ಅಜ್ಞಾನ ಕಳೆಯಲು ಗುರು ಬೇಕು. ಗುರುವಿನಿಂದಲೇ ಎಲ್ಲ ಆಧ್ಯಾತ್ಮ ಸಂಪತ್ತು ಪ್ರಾಪ್ತವಾಗುತ್ತದೆ. ವೀರಶೈವ ಧರ್ಮದಲ್ಲಿ ಗುರುವಿಗೆ ಪ್ರಥಮ ಸ್ಥಾನ ಕಲ್ಪಿಸಿರುವುದನ್ನು ಯಾರೂ ಮರೆಯಲಾಗದೆಂದರು. ಈ ಸಮಾರಂಭದಲ್ಲಿ ಮಳಲಿ ಸಂಸ್ಥಾನ ಮಠದ ಡಾ. ನಾಗಭೂಷಣ ಶಿವಾಚಾರ್ಯರು, ಹಂಪಸಾಗರ ನವಿಲು ಹಿರೇಮಠದ ಶಿವಲಿಂಗ ರುದ್ರಮುನಿ ಶಿವಾಚಾರ್ಯರು, ಲಿಂಗದಹಳ್ಳಿ ಹಿರೇಮಠದ ವೀರಭದ್ರ ಶಿವಾಚಾರ್ಯರು, ಪುಣ್ಯಕೋಟಿ ಮಠದ ಜಗದೀಶ್ವರ ಸ್ವಾಮಿಗಳು ಉಪಸ್ಥಿತರಿದ್ದರು.

ಹರಿಹರದ ಎನ್.ಈ. ಸುರೇಶ ಪ್ರಾಸ್ತಾವಿಕವಾಗಿ ಮಾತನಾಡಿದರು. ಕೊಡಿಯಾಲ ಹೊಸಪೇಟೆ ಜುಂಜಪ್ಪ ಹೆಗ್ಗಪ್ಪನವರ, ಹೆಗ್ಗಪ್ಪನವರ ಚಂದ್ರಶೇಖರ, ರಾಜು, ಸೋಮಣ್ಣ, ಅನಿಲ್, ಮಲ್ಲಜ್ಜ, ಮಂಜುನಾಥ, ಅಣ್ಣಪ್ಪ ಪೂಜಾರ್, ಸಂಜೀವಪ್ಪನವರು, ನಾಗರಾಜ್ ಚಕ್ರಸಾಲಿ ಮೊದಲ್ಗೊಂಡು ಹಲವಾರು ಗಣ್ಯರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು.

ಪರಮೇಶ್ವರಪ್ಪ ಕತ್ತಿಗೆ ಸಂಗಡಿಗರು ಸಂಗೀತ ಸೇವೆ ಸಲ್ಲಿಸಿದರು. ಕೊಂಡಜ್ಜಿ ಪಂಚಾಕ್ಷರಿ ಸ್ವಾಗತಿಸಿದರು. ವಿ.ಬಿ.ಕೊಟ್ರೇಶ ಮತ್ತು ಶ್ರೀಮತಿ ಶಾಂತಕುಮಾರಿ ನಿರೂಪಿಸಿದರು.

ಇದೇ ಸಂದರ್ಭದಲ್ಲಿ ಹರಿಹರದ ಕ್ರೀಡಾಪಟು ಕುಮಾರಿ ಸೃಷ್ಟಿ ಯೋಗ ಪ್ರದರ್ಶನ ಮಾಡಿದರು. ಸಂಕರ್ಷಣ ನೃತ್ಯಾಲಯದ ಮಕ್ಕಳಿಂದ ಭರತ ನಾಟ್ಯ ಜರುಗಿತು. ಶ್ರೀಮತಿ ಗೌರಮ್ಮ ಚಿಕ್ಕಪ್ಪ ಹೆಗ್ಗಪ್ಪನವರ ಪರಿವಾರದವರಿಂದ ದಾಸೋಹ ಸೇವೆ ನಡೆಯಿತು. ಬೆಳಿಗ್ಗೆ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಪೂಜೆ ನೆರವೇರಿಸಿ ಭಕ್ತಾದಿಗಳಿಗೆ ಶುಭ ಹಾರೈಸಿದರು.

# ಅರ್ಥಪೂರ್ಣ ಸ್ವಾತಂತ್ರ್ಯ ದಿನಾಚರಣೆ: ಸಮಗ್ರ ಸಿದ್ಧತೆ ಮಾಡಿಕೊಳ್ಳಲು ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಸೂಚನೆ



**ಕಲಬುರಗಿ, ಆ. 5:** ಆಗಸ್ಟ್ 15 ರಂದು ಸ್ವಾತಂತ್ರ್ಯ ದಿನಾಚರಣೆಯನ್ನು ಜಿಲ್ಲೆಯಲ್ಲಿ ಅತ್ಯಂತ ವಿಜೃಂಭಣೆ, ಅರ್ಥಪೂರ್ಣ ಹಾಗೂ ಶಿಸ್ತಿನಿಂದ ಆಚರಿಸಲು ಜಿಲ್ಲಾಡಳಿತ ಸಮಗ್ರ ಪೂರ್ವಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಇಕ್ರಂ ಶರೀಫ್ ಅವರು ಅಧಿಕಾರಿಗಳಿಗೆ ಸೂಚಿಸಿದರು

ಜಿಲ್ಲಾಧಿಕಾರಿ ಸಭಾಂಗಣದಲ್ಲಿ 80ನೇ ಸ್ವಾತಂತ್ರೋತ್ಸವ ದಿನಾಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಿವಿಧ ಸಂಸ್ಕೃತಿಯ ಕಾರ್ಯಕ್ರಮಗಳ ಸಿದ್ಧತೆಗಳ ಕುರಿತು ಪ್ರಮುಖ ತೀರ್ಮಾನಗಳನ್ನು ತೆಗೆದುಕೊಳ್ಳಲಾಯಿತು.

ನಗರದ ಡಿ.ಆರ್. ಮೈದಾನದಲ್ಲಿ ಪ್ರಮುಖಕಾರ್ಯಕ್ರಮಗಳು ಹಾಗೂ ಧ್ವಜಾರೋಹಣ ಜರುಗಲಿದ್ದು, ಮಳೆ ಬಂದರೂ ತೊಂದರೆಯಾಗದಂತೆ ಜರ್ಮನ್ ಟೆಂಟ್ ಹಾಗೂ ಶಾಮಿಯಾನ ವ್ಯವಸ್ಥೆಮಾಡಲಾಗುತ್ತಿದೆ. ಮೈದಾನ ಸಮತಟ್ಟುಗೊಳಿಸುವಿಕೆ ಮತ್ತು ವೇದಿಕೆ ನಿರ್ಮಾಣದ ಜವಾಬ್ದಾರಿಯನ್ನು ಲೋಕೋಪಯೋಗಿ ಇಲಾಖೆ ಹಾಗೂ ಮಹಾನಗರ ಪಾಲಿಕೆಗೆ ವಹಿಸಲಾಯಿತು. ಸುರಕ್ಷತೆಯ ದೃಷ್ಟಿಯಿಂದ ಅಗ್ನಿಶಾಮಕ ವಾಹನ, ಆಂಬ್ಯುಲೆನ್ಸ್ ಮತ್ತು ವೈದ್ಯಕೀಯ ತಂಡಗಳು ಸಜ್ಜಾಗಿರಲ್ಲಿ ಎಂದು ಹೇಳಿದರು.

ಆಗಸ್ಟ್ 15ರಂದು ಬೆಳಿಗ್ಗೆ 7:30ಕ್ಕೆ ಪ್ರತಿಯೊಂದು ಸರ್ಕಾರಿ ಕಚೇರಿಯಲ್ಲಿ ಕಡ್ಡಾಯವಾಗಿ ಧ್ವಜಾರೋಹಣ ನೆರವೇರಿಸಬೇಕು. ಎಲ್ಲಾ ಇಲಾಖೆ ಸಿಬ್ಬಂದಿ 8:15ರ ಒಳಗಾಗಿ ಡಿ.ಆರ್ ಪರೇಡ್ ಮೈದಾನಕ್ಕೆ ತಲುಪಬೇಕು. ಕರ್ತವ್ಯ ಲೋಪವೆಸಗುವ ಅಥವಾ ಗೈರುಹಾಜರಾಗುವ ಅಧಿಕಾರಿ–ಸಿಬ್ಬಂದಿ ವಿರುದ್ಧ ಕಟ್ಟುನಿಟ್ಟಿನ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದರು.

ಈ ಬಾರಿಯ ವಿಶೇಷ ಆಕರ್ಷಣೆಯಾಗಿ ಶಾಲಾ–ಕಾಲೇಜು ವಿದ್ಯಾರ್ಥಿಗಳು ಹಾಗೂಸ್ಥಳೀಯ ಕಲಾವಿದರಿಗಾಗಿ ಮುಕ್ತ ಆಡಿಷನ್‌ಆಯೋಜಿಸಿ. ಆಸಕ್ತರು 3–4 ದಿನಗಳಲ್ಲಿ ಕನ್ನಡಮತ್ತು ಸಂಸ್ಕೃತಿ ಇಲಾಖೆ, ಡಿಡಿಪಿಐ ಅಥವಾ ಡಿಡಿಪಿಯು ಕಚೇರಿಯಲ್ಲಿ ನೋಂದಾಯಿಸಿಕೊಳ್ಳಬೇಕು. ಆಗಸ್ಟ್ 5 ಅಥವಾ 6 ರಂದು ನಡೆಯುವ ಆಡಿಷನ್‌ನಲ್ಲಿ ಆಯ್ಕೆಯಾದ ತಂಡಗಳಿಗೆ ಪ್ರಮುಖ ವೇದಿಕೆಯಲ್ಲಿ ಪ್ರದರ್ಶನ ನೀಡಲು ಅವಕಾಶ ಸಿಗಲಿದೆ ಎಂದು ಹೇಳಿದರು.

ಪೊಲೀಸ್, ಅರಣ್ಯ, ಗೃಹರಕ್ಷಕ ದಳ, ಎನ್.ಸಿ.ಸಿ ತಂಡಗಳಿಂದ ಪಥಸಂಚಲನ. ನಗರದ ಪ್ರಮುಖ ವೃತ್ತಗಳ ಲ್ಲಿನ ಪ್ರತಿಮೆಗಳಿಗೆ ಡಾ. ಬಿ.ಆರ್ ಅಂಬೇಡ್ಕರ್, ಮಹಾತ್ಮ ಸರ್ದಾರ್ ವಲ್ಲಭಭಾಯಿ ಪಟೇಲ್, ಮಹಾತ್ಮ ಗಾಂಧಿ ,ಬಾಬು ಜಗಜೀವನ್ ರಾಂ, ಹಾಗೂ ಇತರ ಪ್ರತಿಮೆಗಳಿಗೆ ವಿಧಾನಸೌಧದ ಆವರಣದ ಲ್ಲಿರುವ ಸುತ್ತಮುತ್ತ ಸರ್ಕಾರಿ ಕಚೇರಿಗಳು ಹಾಗೂ ವಾಣಿಜ್ಯ ಸಂಕೀರ್ಣಗಳಿಗೆ ಆಕರ್ಷಕ ದೀಪಾಲಂಕಾರ ಮಾಡಬೇಕು ಎಂದು ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಸ್ವಾತಂತ್ರ್ಯೋತ್ಸವ ದಿನಾಚರಣೆಯ ಅಂಗವಾಗಿ ಸಂಜೆ 5 ಗಂಟೆಗೆ ಡಾ.ಎಸ್.ಎಂ ಪಂಡಿತ್ ರಂಗಮಂದಿರದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ ಏರ್ಪಡಿಸಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕರಿಗೆ ಸೂಚಿಸಲಾಯಿತು.



ಮೈಸೂರು ಮಹಾನಗರ ಪಾಲಿಕೆ (ಎಂಸಿಸಿ) ಬುಧವಾರ ಸ್ವಲ್ಪ ಸಮಯದ ವಿರಾಮದ ನಂತರ, ಆಪರೇಷನ್ ಫುಟ್‌ಪಾತ್ ಅನ್ನು ಪುನರಾರಂಭಿಸಿ, ಮೈಸೂರಿನಲ್ಲಿ ಅತಿಕ್ರಮಣಗಳನ್ನು ತೆರವುಗೊಳಿಸಿತು. ಕೆ.ಆರ್. ವೃತ್ತದಿಂದ ಸಯ್ಯಾಜಿ ರಾವ್ ರಸ್ತೆಯವರೆಗೆ ಪಾದಚಾರಿಗಳ ಸಂಚಾರಕ್ಕೆ ಅಡ್ಡಿಯಾಗಿದ್ದ ಅಡೆತಡೆಗಳನ್ನು ಎಂಸಿಸಿಯ ಅಧಿಕಾರಿ ಸಿಬ್ಬಂದಿ ತೆರವುಗೊಳಿಸಿದರು.

### ಸಂಪುಟ ವಿಸ್ತರಣೆ: ಕೈ ಹೈಕಮಾಂಡ್ ನಡೆ ಸರಿಯಾಗಿದೆ

# ತನ್ವೀರ್‌ಸೇಠ್, ಗಾಯತ್ರಿ ಶಾಂತಗೌಡರಿಗೆ ಸ್ಥಾನ ತಪ್ಪಿಸಿದ್ದು ಸರಿಯಲ್ಲ: ವಿಶ್ವನಾಥ್



**ಮೈಸೂರು, ಆ.5:** ಈ ಬಾರಿ ಸಚಿವ ಸಂಪುಟ ವಿಸ್ತರಣೆ ವಿಚಾರವಾಗಿ ಕಾಂಗ್ರೆಸ್ ಹೈಕಮಾಂಡ್ ಸೂಕ್ತವಾಗಿ ನಡೆದುಕೊಂಡಿದೆ ಎಂದು ಮಾಜಿ ವಿಧಾನ ಪರಿಷತ್ ಸದಸ್ಯ ಹೆಚ್.ವಿಶ್ವನಾಥ್ ಅಭಿಪ್ರಾಯಪಟ್ಟಿದ್ದಾರೆ.

ನಗರದಲ್ಲಿ ಸುದ್ದಿಗೋಷ್ಠಿ ನಡೆಸಿದ ಎಚ್.ವಿಶ್ವನಾಥ್, ಸಂಪುಟ ವಿಸ್ತರಣೆ ಸರಿಯಾಗಿ ಆಗಿದೆ. ಆದರೆ ಶಾಸಕ ತನ್ವೀರ್ ಸೇಠ್ ಹಾಗೂ ಗಾಯತ್ರಿ ಶಾಂತೇಗೌಡರಿಗೆ ಸಚಿವ ಸ್ಥಾನ ತಪ್ಪಿಸಿದ್ದು ಸರಿಯಲ್ಲ ಎಂದು ಹೇಳಿದರು. ತನ್ವೀರ್ ಸೇಠ್ ಸಚಿವರಾದರೆ ತಮ್ಮ ಪುತ್ರನಿಗೆ ಮೈಸೂರು ಜಿಲ್ಲೆಯ ಉಸ್ತುವಾರಿ ಕೈತಪ್ಪುತ್ತದೆ ಎಂಬ ಕಾರಣಕ್ಕಾಗಿ ಸಿದ್ದರಾಮಯ್ಯ ಅವರಿಗೆ ಸಚಿವ ಸ್ಥಾನ ಸಿಗದಂತೆ ಮಾಡಿದ್ದಾರೆ. ಇನ್ನು ಕುರುಬ ಸಮುದಾಯದ ಗಾಯತ್ರಿ ಶಾಂತೇಗೌಡರಿಗೆ ಕಡೆ ಗಳಿಗೆಯಲ್ಲಿ ಸಚಿವ ಸ್ಥಾನ ಸಿಗದಂತೆ ಮಾಡಿ ಅವಮಾನ ಮಾಡಿದ್ದಾರೆ. ಮಹಿಳಾ ಕೋಟಾದಲ್ಲಿ ಗಾಯತ್ರಿ ಶಾಂತೇಗೌಡರಿಗೆ ಸಚಿವ ಸ್ಥಾನ ಸಿಗುವಂತೆ ಮಾಡಬೇಕು ಎಂದು ಒತ್ತಾಯಿಸಿದರು.

ಮಹಿಳಾ ಕೋಟಾದಲ್ಲಿ ಉಮಾಶ್ರೀ ಅವರಿಗೆ ಸಚಿವ ಸ್ಥಾನ ನೀಡುವಂತೆ ಶಿಫಾರಸು ಮಾಡಲಾಗಿತ್ತು. ಆದರೆ ಸಿದ್ದರಾಮಯ್ಯ ಸಿಎಂ ಆದಾಗಲೆಲ್ಲ ಉಮಾಶ್ರೀ ಸಚಿವರಾಗಿದ್ದಾರೆ. ಈ ಬಾರಿ ಗಾಯತ್ರಿ ಶಾಂತೇಗೌಡರನ್ನು ಪರಿಗಣಿಸಬೇಕಿತ್ತು.ಇನ್ನು, ಸಭಾಪತಿ ಬಸವರಾಜ್ ಹೊರಟ್ಟಿ ರಾಜೀನಾಮೆ ವಿಚಾರವಾಗಿ ಮಾತನಾಡಿದ ವಿಶ್ವನಾಥ್, ವಿಧಾನ ಪರಿಷತ್ ಸಭಾಪತಿ ಸ್ಥಾನಕ್ಕೆ ಬಸವರಾಜ ಹೊರಟ್ಟಿ ರಾಜೀನಾಮೆ ನೀಡಬೇಕು. ಸತತವಾಗಿ 8 ಬಾರಿ ವಿಧಾನ ಪರಿಷತ್ತಿಗೆ ಆಯ್ಕೆಯಾಗಿದ್ದಾರೆ, ಅವರಿಗೆ ಅನುಭವ ಇದೆ. ಈಗ ವಿಧಾನ ಪರಿಷತ್‌ನಲ್ಲಿ ಬಿಜೆಪಿ ಬಹುಮತ ಕಳೆದುಕೊಂಡಿದೆ. ಕಾಂಗ್ರೆಸ್‌ಗೆ ಬಹುಮತ ಇದೆ. ಆದ್ದರಿಂದ ಕಾಂಗ್ರೆಸ್, ಸಭಾಪತಿ ಆಯ್ಕೆ ಮಾಡುತ್ತದೆ. ಕೂಡಲೇ ಹೊರಟ್ಟಿ ರಾಜೀನಾಮೆ ನೀಡುವುದು

# ಬಂದ್‌ನಿಂದ ಹಿಂದೆ ಸರಿಯಲ್ಲ, ಸಿಎಂ ಮನವಿಗೆ ಮಣಿಯಲ್ಲ: ವಾಟಾಳ್ ನಾಗರಾಜ್



**ಬೆಳಗಾವಿ, ಆ.5:** ತಮಿಳುನಾಡಿಗೆ ಕಾವೇರಿ ನದಿ ನೀರು ಬಿಡುಗಡೆ ಮಾಡುವುದನ್ನು ವಿರೋಧಿಸಿ ಹಾಗೂ ಬೆಳಗಾವಿ ಪಾಲಿಕೆಯಲ್ಲಿ ನಾಡಿನ ಪರ ನಿರ್ಣಯ ಅಂಗೀಕರಿಸಲು ವಿಳಂಬ ಮಾಡುತ್ತಿರುವುದನ್ನು ಖಂಡಿಸಿ, ಆಗಸ್ಟ್ 13ರಂದು ಬೆಳಗ್ಗೆಯಿಂದ ಸಂಜೆಯವರೆಗೆ ಕರ್ನಾಟಕ ಬಂದ್‌ಗೆ ಕರೆ ನೀಡಿದ್ದೇವೆ ಎಂದು ಕನ್ನಡ ಹೋರಾಟಗಾರ ವಾಟಾಳ್ ನಾಗರಾಜ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಳೆ ಕೊರತೆಯಿಂದಾಗಿ ರಾಜ್ಯ ಸಂಕಷ್ಟದಲ್ಲಿದೆ. ಬಂದ್ ಕರೆಯನ್ನು ಹಿಂದಕ್ಕೆ ತೆಗೆದುಕೊಳ್ಳುವಂತೆ ಮುಖ್ಯಮಂತ್ರಿ ಡಿ. ಕೆ.ಶಿವಕುಮಾರ್ ಮಾಡಿದ ಮನವಿಗೆ ಮಣಿಯುವುದಿಲ್ಲ, ಅಂದು ಇಡೀ ಕರ್ನಾಟಕ ಬಂದ್ ಮಾಡುತ್ತೇವೆ' ಎಂದರು.

ಗಡಿಭಾಗದಲ್ಲಿ ಕನ್ನಡದ ಅಸ್ಮಿತೆ ಎತ್ತಿ ಹಿಡಿಯುವ ಉದ್ದೇಶದಿಂದ ಮಹಾನಗರ ಪಾಲಿಕೆಯು ತನ್ನ ಬದ್ಧತೆ ಪ್ರದರ್ಶಿಸಬೇಕಿದೆ. ರಾಜ್ಯದ ಪರ ನಿರ್ಣಯವನ್ನು ಅಂಗೀಕರಿಸಲು ವಿಫಲವಾದರೆ, ಪಾಲಿಕೆಯನ್ನು ಸೂಪರ್‌ಸೀಡ್ ಮಾಡಬೇಕು. ಕರ್ನಾಟಕದಲ್ಲಿ ಮಹಾರಾಷ್ಟ್ರ ಏಕೀಕರಣ ಸಮಿತಿ ನಿಷೇಧಿಸಬೇಕು ಎಂದು ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಬಳಿ ಒತ್ತಾಯಿಸುತ್ತೇವೆ ಎಂದು ತಿಳಿಸಿದರು.

ರಾಜ್ಯದ ಸಂಸದರು ಕರ್ನಾಟಕದ ಹಿತಾಸಕ್ತಿ ಕಾಪಾಡುವಲ್ಲಿ ವಿಫಲವಾಗಿದ್ದಾರೆ. ಮಹದಾಯಿ, ಕಳಸಾ–ಬಂಡೂರಿ, ಕಾವೇರಿ ಮತ್ತು ಕೃಷ್ಣಾ ನದಿಗಳ ನೀರು ಹಂಚಿಕೆ ವಿಚಾರವಾಗಿ ಅವರು ಧ್ವನಿ ಎತ್ತುತ್ತಿಲ್ಲ. ಈ ವಿಷಯವಾಗಿ ಅವರು ಕೇಂದ್ರದ ಗಮನಸೆಳೆಯಬೇಕು ಎಂದು ಆಗ್ರಹಿಸಿದರು. ಹೊರನಾಡ ಕನ್ನಡಿಗರ ಕ್ಷೇಮಾಭಿವೃದ್ಧಿಗಾಗಿ ಬಜೆಟ್‌ನಲ್ಲಿ 500 ಕೋಟಿ ರೂ. ಮೀಸಲಿಡಬೇಕು ಎಂದು ಒತ್ತಾಯಿಸಿದರು.

ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುವ ಅಧಿವೇಶನಗಳಲ್ಲಿ ಉತ್ತರ ಕರ್ನಾಟಕದ ಬಗ್ಗೆ ಚರ್ಚೆ ಆಗುತ್ತಿಲ್ಲ. ಇದರಿಂದಾಗಿ ಸೌಧ ಕಟ್ಟಿದ ಉದ್ದೇಶವೇ ಮರೆಯಾಗುತ್ತಿದ್ದು, ಮುಂಬರುವ ಅಧಿವೇಶನದಲ್ಲಿ ಉತ್ತರ ಕರ್ನಾಟಕಕ್ಕೆ ಸರ್ಕಾರ ಏನು ಕೊಡುಗೆ ನೀಡಿದೆ ಎಂದು ಶ್ವೇತಪತ್ರ ಹೊರಡಿಸಬೇಕು ಎಂದು ಆಗ್ರಹಿಸಿದರು. ಜಿಲ್ಲಾ ಕನ್ನಡ ಸಂಘಟನೆಗಳ ಕ್ರಿಯಾ ಸಮಿತಿ ಅಧ್ಯಕ್ಷ ಅಶೋಕ ಚಂದರಗಿ ಇತರರಿದ್ದರು.

### ಚಿಕ್ಕಬಳ್ಳಾಪುರ ಜಿಲ್ಲೆಯ 8 ತಾಲೂಕುಗಳಿಗೂ ಆವರಿಸಿದ ಬರ

# ಸಮರ ಸಜ್ಜಿನಂತೆ ಪರಿಹಾರ ಕಾರ್ಯ ಕೈಗೊಳ್ಳುವಂತೆ ಉಸ್ತುವಾರಿ ಸಚಿವ ಬೈರತಿ ಸುರೇಶ್ ಸೂಚನೆ



**ಚಿಕ್ಕಬಳ್ಳಾಪುರ, ಆ.5:** ಚಿಕ್ಕಬಳ್ಳಾಪುರ ಜಿಲ್ಲೆಯ ಎಂಟೂ ತಾಲೂಕುಗಳಲ್ಲಿ ತೀವ್ರ ಬರ ಆವರಿಸಿದ್ದು, ಸಮರೋಪಾದಿಯಲ್ಲಿ ಪರಿಹಾರ ಕಾರ್ಯಗಳನ್ನು ಕೈಗೊಳ್ಳುವಂತೆ ಜಿಲ್ಲಾ ಉಸ್ತುವಾರಿ ಸಚಿವರೂ ಆಗಿರುವ ಸಾರಿಗೆ ಸಚಿವ ಬೈರತಿ ಸುರೇಶ್ ಜಿಲ್ಲೆಯ ಅಧಿಕಾರಿಗಳಿಗೆ ಕಟ್ಟು ನಿಟ್ಟಿನ ಸೂಚನೆ ನೀಡಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬುಧವಾರ ಜಿಲ್ಲಾ ಪ್ರಕೃತಿ ವಿಕೋಪ ಮತ್ತು ಬರ ಪರಿಸ್ಥಿತಿಯ ಬಗ್ಗೆ ಪ್ರಗತಿ ಪರಿಶೀಲನೆ ನಡೆಸಿದರು.

ಎಂಟೂ ತಾಲೂಕುಗಳಲ್ಲಿ ತೀವ್ರ ಮಳೆ ಕೊರತೆ –ಬಾಗೇಪಲ್ಲಿ, ಗುಡಿಬಂಡೆ, ಚಿಕ್ಕಬಳ್ಳಾಪುರ, ಗೌರಿಬಿದನೂರು, ಶಿಡ್ಲಘಟ್ಟ ಸೇರಿದಂತೆ ಜಿಲ್ಲೆಯ ಎಂಟೂ ತಾಲೂಕುಗಳಲ್ಲಿ ಗಂಭೀರ ಬರ ಪರಿಸ್ಥಿತಿ ಇದೆ. ಕಳೆದ ಮಾರ್ಚ್ ನಿಂದ ಇಲ್ಲಿವರೆಗೆ 86 ಮಿಲಿಮೀಟರ್ ಮಳೆ ಬರಬೇಕಿತ್ತು. ಆದರೆ, ಈ ತಾಲೂಕುಗಳಲ್ಲಿ ಕೇವಲ ಶೇಕಡ 4.5 ರಷ್ಟು ಮಳೆಯಾಗುವುದು ಆತಂಕದ ವಿಷಯವಾಗಿದೆ ಎಂದು ತಿಳಿಸಿದರು.ಈ ಹಿನ್ನೆಲೆಯಲ್ಲಿ ಜನ, ಜಾನುವಾರುಗಳಿಗೆ ಆದ್ಯತೆಯಲ್ಲಿ ಕುಡಿಯುವ ನೀರು ಹಾಗೂ ಮೇವು ಪೂರೈಸುವಂತೆ ಸೂಚಿಸಲಾಗಿದೆ ಎಂದು ಹೇಳಿದರು.

ಕುಡಿಯುವ ನೀರು ಪೂರೈಕೆಗೆ ಆದ್ಯತೆ –ಇದುವರೆಗೆ 1.25 ಲಕ್ಷ ರೈತರಿಗೆ ಬೆಳೆ ವಿಮೆಗೆ ನೋಂದಣಿ ಮಾಡಲಾಗಿದೆ. ಯಾವುದೇ ಗ್ರಾಮದಲ್ಲಿ ಕುಡಿಯುವ ನೀರು ಪೂರೈಕೆಯಲ್ಲಿ ಕೊರತೆ ಆಗಬಾರದು. ಅಗತ್ಯ ಬಿದ್ದರೆ ಖಾಸಗಿ ಟ್ಯಾಂಕರ್ ಮೂಲಕ ನೀರು ಪೂರೈಸಲು ಅಧಿಕಾರಿಗಳಿಗೆ ಆದೇಶ ನೀಡಿರುವುದಾಗಿ ಸಚಿವರು ತಿಳಿಸಿದರು.ಪ್ರತಿ ತಾಲೂಕಿಗೆ ಕುಡಿಯುವ ನೀರಿಗಾಗಿ ತಲಾ ಒಂದು ಕೋಟಿ ರೂಪಾಯಿ ಮೀಸಲಿಡಲಾಗಿದ್ದು, ಈ ಹಣ ಬಳಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ಬಿತ್ತನೆಯಲ್ಲಿ ಭಾರೀ ಕುಸಿತ ಸಾಮಾನ್ಯವಾಗಿ ಈ ವೇಳೆಗೆ 1.26 ಲಕ್ಷ ಹೆಕ್ಟೇರ್ ನಲ್ಲಿ ಬಿತ್ತನೆ ಆಗಬೇಕಿತ್ತು. ಆದರೆ, ಮಳೆ ಇಲ್ಲದ ಕಾರಣ ಕೇವಲ 5650 ಹೆಕ್ಟೇರ್ ನಲ್ಲಿ ಬಿತ್ತನೆ ಮಾಡಲಾಗಿದೆ ಎಂದು ಅವರು ಅಂಕಿಅಂಶ ನೀಡಿದರು.

ಬರ ಘೋಷಣೆಗೆ ಸರ್ಕಾರಕ್ಕೆ ವರದಿ ಈ ಹಿನ್ನೆಲೆಯಲ್ಲಿ ಈ ತಾಲೂಕುಗಳನ್ನು ಮಳೆ ಕೊರತೆ ಪ್ರದೇಶಗಳೆಂದು ಪರಿಗಣಿಸಲಾಗಿದೆ. ಈ ಬಗ್ಗೆ ವಿಸ್ತೃತ ವರದಿ ನೀಡುವಂತೆ ಜಿಲ್ಲಾಡಳಿತಕ್ಕೆ ಸೂಚನೆ ನೀಡಲಾಗಿದೆ. ಈ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿ, ಬರ ಪೀಡಿತ ಪ್ರದೇಶಗಳೆಂದು ಘೋಷಣೆ ಮಾಡುವ ಬಗ್ಗೆ ನಿರ್ಧರಿಸಲಾಗುತ್ತದೆ ಎಂದು ಹೇಳಿದರು.ರೈತರ ಪಂಪ್ ಸೆಟ್ ಗಳಿಗೆ ಹಗಲಿನ ವೇಳೆ ನಾಲ್ಕು ಗಂಟೆ ಮತ್ತು ರಾತ್ರಿ ವೇಳೆ ಮೂರು ಗಂಟೆ ವಿದ್ಯುತ್ ಪೂರೈಸುವಂತೆ ಸಚಿವರು ಕಟ್ಟಪ್ಪಣೆ ಮಾಡಿದರು.

### ಭರದಿಂದ ಸಾಗಿದೆ ಲೋಯರ್ ಟರ್ಮಿನಲ್ ಪಾಯಿಂಟ್ ನಿರ್ಮಾಣ ಕಾರ್ಯ

# ಕೊನೆಗೂ ಸಿಕ್ಕಿತು ನಂದಿಬೆಟ್ಟ ರೋಪ್‌ವೇ ಕಾಮಗಾರಿಗೆ ಚಾಲನೆ



**ಚಿಕ್ಕಬಳ್ಳಾಪುರ, ಆ.5:** ನಟ ಶಂಕರ್‌ನಾಗ್ ಅವರ ಕನಸು, ರಾಜಧಾನಿ ಬೆಂಗಳೂರಿಗರ ನೆಚ್ಚಿನ ವಾರಾಂತ್ಯದ ತಾಣ ನಂದಿಬೆಟ್ಟಕ್ಕೆ ರೋಪ್‌ವೇ (ಕೇಬಲ್ ಕಾರ್) ಅಳವಡಿಸುವ ಯೋಜನೆಗೆ ಕೊನೆಗೂ ಚಾಲನೆ ಸಿಕ್ಕಿದೆ.

ಕಾಮಗಾರಿ ಪ್ರಗತಿಯಲ್ಲಿದೆ. ಯೋಜನೆ ಘೋಷಣೆಯಾಗಿ ನಾಲ್ಕು ವರ್ಷಗಳ ಬಳಿಕ ಬೆಟ್ಟದ ಕೆಳಭಾಗದಲ್ಲಿ ಲೋಯರ್ ಟರ್ಮಿನಲ್ ಪಾಯಿಂಟ್ ನಿರ್ಮಾಣ ಕಾರ್ಯ ಭರದಿಂದ ಸಾಗಿದೆ. ಬೆಟ್ಟದ ಮೇಲ್ಭಾಗದಲ್ಲಿ ಅಪ್ಪರ್ ಟರ್ಮಿನಲ್ ಪಾಯಿಂಟ್ ನಿರ್ಮಿಸಲು ಅಗತ್ಯವಿರುವ 5 ಎಕರೆ ಜಮೀನಿಗೆ ಕೇಂದ್ರ ಅರಣ್ಯ, ಪರಿಸರ ಮತ್ತು ಹವಾಮಾನ ಬದಲಾವಣೆ ಸಚಿವಾಲಯದಿಂದ ಇನ್ನೂ ಅಂತಿಮ ಒಪ್ಪಿಗೆ ಸಿಗಬೇಕಿದೆ.

ಈ ಕುರಿತು ಮಾಹಿತಿ ನೀಡಿರುವ ಪ್ರವಾಸೋದ್ಯಮ ಇಲಾಖೆಯ ಹಿರಿಯ ಅಧಿಕಾರಿ, ನಂದಿಬೆಟ್ಟದ ತಪ್ಪಲಿನಲ್ಲಿರುವ ಕಣಿವೆ ಬಸವೇಶ್ವರ ಸ್ವಾಮಿ ದೇವಾಲಯದ ಸಮೀಪದ ಮಡಕು ಹೊಸಹಳ್ಳಿ ಗ್ರಾಮದಲ್ಲಿ ಒಟ್ಟು 7 ಎಕರೆ ಜಮೀನನ್ನು 2025ರಲ್ಲಿ ಡೈನಾಮಿಕ್ಸ್ ರೋಪ್ ವೇ ಪ್ರೈವೇಟ್ ಲಿಮಿಟೆಡ್ ಸಂಸ್ಥೆಗೆ ಹಸ್ತಾಂತರಿಸಲಾಗಿತ್ತು.

ಪ್ರಸ್ತುತ ಕೇಬಲ್ ಕಾರ್ ಕಾರ್ಯಾಚರಣೆಗಾಗಿ ಲೋಯರ್ ಟರ್ಮಿನಲ್ ಪಾಯಿಂಟ್ ಬೇಸ್ ಸ್ಟೇಷನ್ ನಿರ್ಮಿಸಲಾಗುತ್ತಿದ್ದು, ಸುಮಾರು ಶೇ.20ರಷ್ಟು ಕಾಮಗಾರಿ ಪೂರ್ಣಗೊಂಡಿದೆ ಎಂದು ತಿಳಿಸಿದ್ದಾರೆ.

ಟರ್ಮಿನಲ್ ಕಟ್ಟಡದ ಕಾಮಗಾರಿ 2ನೇ ಮಹಡಿಯವರೆಗೆ ಪೂರ್ಣಗೊಂಡಿದ್ದು, ಉಳಿದ ಎರಡು ಉಪಯುಕ್ತ ಕಟ್ಟಡಗಳ ಛಾವಣಿ ಕಾಂಕ್ರೀಟ್ ಕಾರ್ಯ ಹಾಗೂ ಫುಡ್‌ಕೋರ್ಟ್ ಕಟ್ಟಡದ ಅಡಿಪಾಯ ಕಾರ್ಯ ಮುಗಿದಿದೆ. ಮಣ್ಣಿನ ಪರೀಕ್ಷೆ, ರಚನಾತ್ಮಕ ವಿನ್ಯಾಸ ಮತ್ತು ರೇಖಾಚಿತ್ರಗಳ ಸಂಪೂರ್ಣ ಪರಿಶೀಲನೆಯನ್ನು ಧಾರವಾಡದ ಐಐಟಿ ಸಂಸ್ಥೆಯ ಆರ್ ಆಂಡ್ ಇ ವಿಭಾಗ 3 ತಿಂಗಳು ಕಟ್ಟುನಿಟ್ಟಾಗಿ ನಡೆಸಿದ ನಂತರವೇ ಭೂಮಿಯನ್ನು ಕಂಪನಿಗೆ ನೀಡಲಾಗಿದೆ. ಜೊತೆಗೆ ಪ್ರವಾಸೋದ್ಯಮ ಇಲಾಖೆಯ ಸ್ವತಂತ್ರ ಎಂಜಿನಿಯರ್ ಹಾಗೂ ಭದ್ರತಾ ಎಂಜಿನಿಯರ್‌ಗಳು ಪರಿಶೀಲಿಸಿ ಹಸಿರು ನಿಶಾನೆ ತೋರಿಸಿದ್ದಾರೆ.

# ಜೆಎಸ್‌ಡಬ್ಲ್ಯ್ಯೂ ಫೌಂಡೇಶನ್‌ನಿಂದ ಸಮರ್ಥ ಭಾರತಕ್ಕೆ ಮಹತ್ವದ ಹೆಜ್ಜೆ




**ಬಳ್ಳಾರಿ, ಆ.05:** ಕೌಶಲ್ಯ ಅಭಿವೃದ್ಧಿ ಮತ್ತು ಸುಸ್ಥಿರ ಜೀವನೋಪಾಯದ ಅವಕಾಶಗಳ ಮೂಲಕ ಯುವಕರನ್ನು ಸಬಲೀಕರಣಗೊಳಿಸುವ ತನ್ನ ಬದ್ಧತೆಯನ್ನು ಬಲಪಡಿಸುತ್ತಾ, JSW ಫೌಂಡೇಶನ್, ಸ್ಕಿಲ್ ಸ್ಪಾರ್ಕ್ ಇನಿಶಿಯೇಟಿವ್ ಅಡಿಯಲ್ಲಿ ಪದವಿ ಪ್ರಮಾಣಪತ್ರ ವಿತರಣೆ ಮತ್ತು ಹೊಸ ತಂಡದ ಉದ್ಘಾಟನೆಯನ್ನು ಮಂಗಳವಾರ ತೋರಣಗಲ್ಲು ಓಪಿಜೆ ಕೇಂದ್ರದಲ್ಲಿ ಆಯೋಜಿಸಲಾಗಿತ್ತು

ಇಂದಿನ ಸಭೆಯನ್ನುದ್ದೇಶಿಸಿ ಮಾತನಾಡಿದ ಶ್ರೀ ಪೆದ್ದಣ್ಣ ಬೀದಲ ದಕ್ಷಿಣ ವಲಯ ಮುಖ್ಯಸ್ಥರು ಎಖಫ ಫೌಂಡೇಶನ್‌ನಲ್ಲಿ, ಕೌಶಲ್ಯ ಅಭಿವೃದ್ಧಿಯು ಜೀವನವನ್ನು ಪರಿವರ್ತಿಸಲು ಮತ್ತು ಸುಸ್ಥಿರ ಜೀವನೋಪಾಯದ ಅವಕಾಶಗಳನ್ನು ಸೃಷ್ಟಿಸಲು ಪ್ರಬಲ ಸಾಧನವಾಗಿದೆ ಎಂದು ತಿಳಿಸಿದರು. JSW ಫೌಂಡೇಶನ್ನ ವಿವಿಧ ಕೌಶಲ್ಯ ಅಭಿವೃದ್ಧಿ ಚಟುವಟಿಕೆಗಳ ಮೂಲಕ, ಗ್ರಾಮೀಣ ಯುವಕರನ್ನು ಅವರ ಉದ್ಯೋಗ ಸಾಮರ್ಥ್ಯವನ್ನು ಹೆಚ್ಚಿಸುವ ಮತ್ತು ವಿಕಸಿಸುತ್ತಿರುವ ಉದ್ಯೋಗ ಮಾರುಕಟ್ಟೆಗೆ ಸಿದ್ಧಪಡಿಸುವ ಉದ್ಯಮ–ಸಂಬಂಧಿತ ಕೌಶಲ್ಯಗಳೊಂದಿಗೆ ಸಜ್ಜುಗೊಳಿಸಲು ಬದ್ಧರಾಗಿದ್ದೇವೆ ಎಂಬುದನ್ನು ತಿಳಿಸಿದರು. ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ, ತಾಂತ್ರಿಕ ಕೌಶಲ್ಯಗಳು, ನಿರಂತರ ಕಲಿಕೆ ಮತ್ತು ಹೊಂದಿಕೊಳ್ಳುವಿಕೆ ದೀರ್ಘಾವಧಿಯ ಯಶಸ್ಸಿಗೆ ಅತ್ಯಗತ್ಯ

ಸಭೆಯನ್ನುದ್ದೇಶಿಸಿ ಮಾತನಾಡಿದ ಶ್ರೀ ಭಾರತಿ ಪಳನಿಸಾಮಿ ಮುಖ್ಯಸ್ಥರು ಎಖಫ ಫೌಂಡೇಶನ್ ವಿಜಾಯಾನಗರ ರವರು ಮಾತನಾಡುತ್ತ ಉದ್ಯೋಗ ಸಾಮರ್ಥ್ಯವನ್ನು ಹೆಚ್ಚಿಸುವಲ್ಲಿ ಮತ್ತು ಸುಸ್ಥಿರ ಜೀವನೋಪಾಯದ ಅವಕಾಶಗಳನ್ನು ಸೃಷ್ಟಿಸುವಲ್ಲಿ ಕೌಶಲ್ಯ ಅಭಿವೃದ್ಧಿಯ ಮಹತ್ವವನ್ನು ಎತ್ತಿ ತೋರಿಸಿದರು. ತರಬೇತಿಯ ಉದ್ದಕ್ಕೂ ಒದಗಿಸಲಾದ ಜ್ಞಾನ, ಪ್ರಾಯೋಗಿಕ ಮಾನ್ಯತೆ ಮತ್ತು ಮಾರ್ಗದರ್ಶನವನ್ನು ಉತ್ತಮವಾಗಿ ಬಳಸಿಕೊಳ್ಳಬೇಕು ಎಂದು ಬಯಸಿದರು.

ಈ ಕಾರ್ಯಕ್ರಮದ ಸಮಯದಲ್ಲಿ ಗಳಿಸಿದ ಕೌಶಲ್ಯ ಮತ್ತು ಮೌಲ್ಯಗಳು ಅವರ ಉದ್ಯೋಗಾವಕಾಶವನ್ನು ಹೆಚ್ಚಿಸುವುದಲ್ಲದೆ, ಆತ್ಮವಿಶ್ವಾಸ, ಯಶಸ್ವಿ ಮತ್ತು ಸ್ವಾವಲಂಬಿ ವೃತ್ತಿಜೀವನವನ್ನು ನಿರ್ಮಿಸಲು ಅವರನ್ನು ಸಬಲಗೊಳಿಸುತ್ತದೆ ಎಂದು ಅವರು ಒತ್ತಿ ಹೇಳಿದರು.

ಕೌಶಲ್ಯ ಅಭಿವೃದ್ಧಿ ಮತ್ತು ಸುಸ್ಥಿರ ಜೀವನೋಪಾಯದ ಅವಕಾಶಗಳ ಮೂಲಕ ಯುವಕರನ್ನು ಸಬಲೀಕರಣಗೊಳಿಸುವ ತನ್ನ ಬದ್ಧತೆಯನ್ನು ಬಲಪಡಿಸುವ ಸಲುವಾಗಿ, ಈ ಕಾರ್ಯಕ್ರಮವು 45 ದಿನಗಳ ಮೇಕ್ ಇಂಡಿಯಾ ಕೆಪೇಬಲ್ ತರಬೇತಿ ಕಾರ್ಯಕ್ರಮದ ಯಶಸ್ವಿ ಪೂರ್ಣಗೊಳಿಸುವಿಕೆಯನ್ನು ಆಚರಿಸಿದ್ದಲ್ಲದೆ, ಹೊಸ ತರಬೇತಿ ಭಾಗಾರ್ಥಿಗಳನ್ನು ಸ್ವಾಗತಿಸುವ ಕಾರ್ಯಕ್ರಮವನ್ನು ಆಯೋಜಿಸಿತ್ತು. ಇದು ಉದ್ಯಮ–ಆಧಾರಿತ ಕೌಶಲ್ಯ ಅಭಿವೃದ್ಧಿಯ ಮೂಲಕ ಮಹತ್ವಾಕಾಂಕ್ಷಿ ಯುವಕರಿಗೆ ಸುಸ್ಥಿರ ಜೀವನೋಪಾಯದ ಅವಕಾಶಗಳನ್ನು ಸೃಷ್ಟಿಸುವ ಜೆಎಸ್ಡಬ್ಲ್ಯೂ ಫೌಂಡೇಶನ್ನ ನಿರಂತರ ಬದ್ಧತೆಯನ್ನು ಪುನರುಚ್ಚರಿಸಿತು.

45 ದಿನಗಳ ಕಾರ್ಯಕ್ರಮವು ಯುವತಿಯರಿಗೆ ಮೊಬೈಲ್ ಅಸೆಂಬ್ಲಿ, ವಿವಿಧ ಕಾರ್ಯಾಚರಣೆಗಳು ಮತ್ತು ಕೃತಕ ಬುದ್ಧಿಮತ್ತೆ ಉದ್ಯಮ–ಸಂಬಂಧಿತ ಕೌಶಲ್ಯಗಳನ್ನು ಹೊಂದಿದ್ದು, ಅವರ ಉದ್ಯೋಗಾವಕಾಶ ಮತ್ತು ವೃತ್ತಿ ನಿರೀಕ್ಷೆಗಳನ್ನು ಹೆಚ್ಚಿಸುತ್ತದೆ. ತರಬೇತಿಯ ಸಮಯದಲ್ಲಿ, ಭಾಗವಹಿಸುವವರು ಮೊಬೈಲ್ ಅಸೆಂಬ್ಲಿಯಲ್ಲಿ ಪ್ರಾಯೋಗಿಕ ಅನುಭವವನ್ನು ಪಡೆದರು, ಉದ್ಯಮ ಉತ್ಪಾದನಾ ಮಾನದಂಡಗಳಿಗೆ ಅನುಗುಣವಾಗಿ ಘಟಕ ಗುರುತಿಸುವಿಕೆ, ಪಿಸಿಬಿ ಫಿಟ್ಟಿಂಗ್, ಡಿಸ್ಪ್ಲೇ ಸ್ಥಾಪನೆ, ಬ್ಯಾಟರಿ ಏಕೀಕರಣ, ಗುಣಮಟ್ಟದ ಪರೀಕ್ಷೆ ಮತ್ತು ದೋಷನಿವಾರಣೆ ಸೇರಿದಂತೆ ಸ್ಮಾರ್ಟ್ಫೋನ್ ಜೋಡಣೆಯ ಸಂಪೂರ್ಣ ಪ್ರಕ್ರಿಯೆ ಯನ್ನು ಕಲಿತಿರುತ್ತಾರೆ. ತರಬೇತಿ ಮಾದರಿಯೂ ಗ್ರಾಹಕ ಸೇವೆ, ಮಾರಾಟ ತಂತ್ರಗಳು, ದೃಶ್ಯ ವ್ಯಾಪಾರೀ ಕರಣ, ಬಿಲ್ಲಿಂಗ್ ಕಾರ್ಯಾಚರಣೆಗಳು, ದಾಸ್ತಾನು ನಿರ್ವಹಣೆ, ಸಂವಹನ ಕೌಶಲ್ಯಗಳು ಮತ್ತು ಕೆಲಸದ ಸ್ಥಳದ ಶಿಷ್ಟಾಚಾರ, ಸಂಘಟಿತ ಚಿಲ್ಲರೆ ವಲಯದಲ್ಲಿ ವೃತ್ತಿಜೀವನಕ್ಕೆ ಅಭ್ಯರ್ಥಿಗಳನ್ನು ಸಿದ್ಧಪಡಿಸುವುದು ಮುಂತಾದವುಗಳ ಮೇಲೆ ಕೇಂದ್ರೀಕರಿಸಲ್ಪಟ್ಟಿತ್ತು. ಇದರ ಜೊತೆಗೆ, ಭಾಗವಹಿಸುವವರು ಐಖ ಪ್ರಮಾಣೀಕರಣ ಕಾರ್ಯಕ್ರಮವನ್ನು ಪೂರ್ಣಗೊಳಿಸಿರುವರು, ಅವರ ತಾಂತ್ರಿಕ ತರಬೇತಿಯ ಜೊತೆಗೆ ಭವಿಷ್ಯಕ್ಕೆ ಸಿದ್ಧವಾಗಿರುವ ಕೌಶಲ್ಯಗಳನ್ನು ನಿರ್ಮಿಸಲು ಉದಯೋನ್ಮುಖ ಐಖ ಪರಿಕಲ್ಪನೆಗಳು ಮತ್ತು ಡಿಜಿಟಲ್ ಪರಿಕರಗಳಿಗೆ ಅವರನ್ನು ಪರಿಚಯಿಸಿದರು.

ಒಟ್ಟು 35 ವಿದ್ಯಾರ್ಥಿಗಳು ಕಾರ್ಯಕ್ರಮವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದು ಮತ್ತು ಪದವಿ ಪ್ರಮಾಣಪತ್ರಗಳನ್ನು ಇಂದು ಪಡೆದಿರುವರು.

ಅವರಲ್ಲಿ, 14 ಅಭ್ಯರ್ಥಿಗಳು ಈ ಕಾರ್ಯಕ್ರಮದ ಸಮಯದಲ್ಲಿ ಉದ್ಯೋಗವನ್ನು ಪಡೆದರು ಮತ್ತು ಅವರಿಗೆ ನೇಮಕ ಪತ್ರ ವಿತರಿಸಲಾಯಿತು. ಆಯ್ಕೆಯಾದ ಅಭ್ಯರ್ಥಿಗಳು ಬೆಂಗಳೂರು, ಹೊಸಪೇಟೆ ಮತ್ತು ಬಳ್ಳಾರಿಯಲ್ಲಿರುವ ಫಾಕ್ಸ್‌ಕಾನ್, ಬ್ಯಾಂಕ್ ಆಫ್ ಬರೋಡಾ, ಮಹೀಂದ್ರಾ ಶೋರೂಮ್, ಅಲ್ಟ್ರಾ ಪ್ರೈವೇಟ್ ಲಿಮಿಟೆಡ್, ಲೈಫ್‌ಸ್ಟೈಲ್ ರಿಟೇಲ್ ಮಾರ್ಕೆಟ್ ಮತ್ತು ಮೋರ್ ಸೇರಿದಂತೆ ಪ್ರತಿಷ್ಠಿತ ಸಂಸ್ಥೆಗಳಿಗೆ ಸರಾಸರಿ ರೂ.14,000 ಮಾಸಿಕ ವೇತನದೊಂದಿಗೆ ಸೇರಲಿದ್ದಾರೆ.

# ಕಬಿನಿ ಜಲಾಶಯದ ಒಳಹರಿವು ಹೆಚ್ಚಳ: ನದಿ ಪಾತ್ರದ ಜನರಿಗೆ ಎಚ್ಚರಿಕೆ



**ಎಚ್.ಡಿ.ಕೋಟೆ, ಆ.5:** ಕೇರಳದ ವಯನಾಡ್ ಜಿಲ್ಲೆ ಸೇರಿದಂತೆ ನಾಗರಹೊಳೆ ರಾಷ್ಟ್ರೀಯ ಉದ್ಯಾನ ವನದ ಅರಣ್ಯ ಪ್ರದೇಶದಲ್ಲಿ ವರುಣನ ಆರ್ಭಟ ಮುಂದುವರಿದಿದ್ದು, ಕಬಿನಿ ಜಲಾಶಯಕ್ಕೆ ನೀರಿನ ಒಳ ಹರಿವಿನ ಪ್ರಮಾಣದಲ್ಲೂ ಹೆಚ್ಚಳವಾಗಿದೆ.

ಕಳೆದ ಐದಾರು ದಿನಗಳಿಂದ ಕೇರಳದಲ್ಲಿ ಬೀಳುತ್ತಿರುವ ಮಳೆಗೆ ಕಬಿನಿ ಹಿನ್ನೀರಿನ ಪ್ರದೇಶದಲ್ಲಿ ಜನರು ಮಳೆ ಹಾನಿಗೆ ಒಳಗಾದರೆ, ಕಬಿನಿ ಜಲಾಶಯದ ನದಿ ಪಾತ್ರದ ಜನರು ಪ್ರವಾಹದ ಭೀತಿ ಎದುರಿಸುತ್ತಿದ್ದಾರೆ.

ದಿನದಿಂದ ದಿನಕ್ಕೆ ಜಲಾಶಯಕ್ಕೆ ಒಳಹರಿವಿನ ಪ್ರಮಾಣ ಹೆಚ್ಚಾಗುತ್ತಿದ್ದು, ಮಂಗಳವಾರ ಸಂಜೆಗೆ 27 ಸಾವಿರ ಕ್ಯೂಸೆಕ್‌ಗೂ ಹೆಚ್ಚು ನೀರು ಹರಿದು ಬರುತ್ತಿದೆ. ಅಣೆಕಟ್ಟು ಭದ್ರತಾ ದೃಷ್ಟಿಯಿಂದ ಜಲಾಶಯದಲ್ಲಿ ಸರಾಸರಿ ಪ್ರಮಾಣ ಕಾಯ್ದುಕೊಂಡು ಬಂದಷ್ಟು ನೀರನ್ನು ನದಿಗೆ ಬಿಡಲಾಗಿದೆ. ಈಗಾಗಲೇ ಜಲಾಶಯದ ಮುಂಭಾಗದ ಸೇತುವೆ ಮೂರನೇ ದಿನವೂ ಮುಳುಗಡೆಯಾಗಿ ಗ್ರಾಮ ಸಂಪರ್ಕ ಕಳೆದುಕೊಂಡಿದೆ. ಇದರಿಂದ ಹತ್ತಾರು ಗ್ರಾಮಗಳಿಗೆ ವಾಹನ ಸಂಚಾರ ಪರ್ಯಾಯ ಮಾರ್ಗವಾಗಿ ಚರಿಸುವಂತಾಗಿದೆ.ಕೇರಳದಲ್ಲಿ ಜೋರು ಮಳೆ ಆಗುತ್ತಿದ್ದು, ವಯನಾಡ್ ಜಿಲ್ಲೆ ಸೇರಿದಂತೆ ಇತರೆಡೆ ರೆಡ್ ಅಲರ್ಟ್ ಘೋಷಣೆ ಮಾಡಲಾಗಿದೆ. ಮುಂದಿನ ಇಪ್ಪತ್ತನಾಲ್ಕು ಗಂಟೆಗಳಲ್ಲಿ ಕಬಿನಿ ಜಲಾಶಯಕ್ಕೆ ಭಾರಿ ಪ್ರಮಾಣದಲ್ಲಿ ನೀರು ಹರಿದು ಬರುವ ನಿರೀಕ್ಷೆ ಇದೆ ಎಂದು ನೀರಾವರಿ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

# 105 ಅಡಿ ತಲುಪಿದ ಕೆಆರ್‌ಎಸ್ ಜಲಾಶಯ ಮಟ್ಟ: ಕೃಷಿ ಚಟುವಟಿಕೆ ಬಗ್ಗೆ ಮೂಡಿದ ನಿರೀಕ್ಷೆ



**ಮಂಡ್ಯ, ಆ.5:** ಕಾವೇರಿ ಜಲಾನಯನ ಪ್ರದೇಶದಲ್ಲಿ ಮಳೆ ಚುರುಕುಗೊಂಡಿರುವ ಹಿನ್ನೆಲೆಯಲ್ಲಿ ಸಕ್ಕರೆ ನಾಡು ಮಂಡ್ಯದ ರೈತರಲ್ಲಿ ಕೃಷಿ ಚಟುವಟಿಕೆಗಳ ಬಗ್ಗೆ ಹೊಸ ನಿರೀಕ್ಷೆ ಮೂಡಿದೆ. ಕೆಆರ್‌ಎಸ್ ಜಲಾಶಯದ ನೀರಿನ ಮಟ್ಟ ಈಗ 105 ಅಡಿಗೆ ಏರಿಕೆಯಾಗಿದ್ದು, ಮುಂಗಾರು ಬೆಳೆಗೆ ಕೂಡಲೇ ನಾಲೆಗಳಿಗೆ ನೀರು ಹರಿಸಬೇಕೆಂದು ಮಂಡ್ಯ ಜಿಲ್ಲೆಯ ರೈತರು ಸರ್ಕಾರವನ್ನು ಆಗ್ರಹಿಸುತ್ತಿದ್ದಾರೆ.

ಕೆಆರ್‌ಎಸ್ ಜಲಾಶಯದ ನೀರಿನ ಮಟ್ಟ 81 ಅಡಿಗೆ ಕುಸಿದಿದ್ದಾಗ, ರಾಜ್ಯ ಸರ್ಕಾರ ಮಂಡ್ಯ ಜಿಲ್ಲೆಯ ರೈತರಿಗೆ ಕಠಿಣ ಸೂಚನೆ ನೀಡಿತ್ತು. ಯಾವುದೇ ಹೊಸ ಬೆಳೆ ಬಿತ್ತನೆ ಮಾಡಬೇಡಿ, ಕುಡಿಯುವ ನೀರಿಗೆ ಆದ್ಯತೆ ನೀಡಬೇಕಾಗಿದೆ ಎಂದು ರೈತರನ್ನು ಕೈ ಕಟ್ಟಿ ಹಾಕಿತ್ತು. ಆದರೆ ಈಗ ಜಲಾನಯನ ಪ್ರದೇಶ ಹಾಗೂ ಕೊಡಗಿನಲ್ಲಿ ಉತ್ತಮ ಮಳೆಯಾಗುತ್ತಿದೆ. ಕೆಆರ್‌ಎಸ್ ಜಲಾಶಯಕ್ಕೆ ಭಾರಿ ಪ್ರಮಾಣದ ನೀರು ಹರಿದು ಬರುತ್ತಿದೆ. ಇದರ ಪರಿಣಾಮ ಡ್ಯಾಂ ನೀರಿನ ಮಟ್ಟ ಭರಪೂರ 105 ಅಡಿ ತಲುಪಿದೆ.

ನೀರಿನ ಮಟ್ಟ ಏರಿಕೆಯಾಗುತ್ತಿದ್ದಂತೆ ಮಂಡ್ಯ ಜಿಲ್ಲೆಯ ರೈತರು ಕೃಷಿ ಚಟುವಟಿಕೆಗಳಿಗೆ ಸಿದ್ಧತೆ ನಡೆಸುತ್ತಿದ್ದಾರೆ. ಮುಂಗಾರು ಹಂಗಾಮಿನ ಬೆಳೆಗಳಿಗೆ ಅನುಕೂಲವಾಗುವಂತೆ ನಾಲೆಗಳಿಗೆ ನೀರು ಹರಿಸುವ ಬಗ್ಗೆ ಸರ್ಕಾರ ಶೀಘ್ರ ಅಧಿಕೃತ ಘೋಷಣೆ ಮಾಡಬೇಕು ಎಂದು ರೈತರು ಆಗ್ರಹಿಸಿದ್ದಾರೆ.

ಬಿತ್ತನೆಗೆ ಇದು ಸೂಕ್ತ ಸಮಯವಾಗಿದ್ದು, ನೀರು ಹರಿಸುವಲ್ಲಿ ವಿಳಂಬವಾದರೆ ಬೆಳೆ ನಷ್ಟವಾಗುವ ಆತಂಕ ರೈತರನ್ನು ಕಾಡುತ್ತಿದೆ.

# ಬಸ್‌ನಲ್ಲೇ ಮಹಿಳೆಗೆ ಹೃದಯಾಘಾತ: ಚಾಲಕನ ಸಮಯಪ್ರಜ್ಞೆ



**ತುಮಕೂರು, ಆ.5:** ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ ಮಹಿಳೆಗೆ ಏಕಾಏಕಿ ಹೃದಯಾಘಾತ ಸಂಭವಿಸಿದ್ದು, ಸಮಯಪ್ರಜ್ಞೆ ಮೆರೆದ ಚಾಲಕ ಹಾಗೂ ಸಿಬ್ಬಂದಿ ಬಸ್‌ನ ಸಮೀಪದ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಗೆ ತಿರುಗಿಸಿ ಪ್ರಯಾಣಿಕನ ಜೀವ ಉಳಿಸಲು ಪ್ರಯತ್ನಿಸಿದ್ದಾರೆ. ತುಮಕೂರಿನಿಂದ ಮಧುಗಿರಿಗೆ ತೆರಳುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ ಮಹಿಳೆಗೆ ಮಾರ್ಗ ಮಧ್ಯೆ ಏಕಾಏಕಿ ಹೃದಯಾಘಾತ ಸಂಭವಿಸಿದೆ. ಈ ವೇಳೆ ಮಹಿಳೆಯ ಆರೋಗ್ಯ ಗಂಭೀರವಾಗಿರುವುದನ್ನು ತಿಳಿದ ಬಸ್ ಚಾಲಕ ಸಮಯಪ್ರಜ್ಞೆ ಮೆರೆದು, ನಿಗದಿತ ಮಾರ್ಗವನ್ನು ಮುಂದುವರಿಸದೆ ತಕ್ಷಣವೇ ತುಮಕೂರು–ಮಧುಗಿರಿ ರಸ್ತೆಯಲ್ಲಿರುವ ಆಸ್ಪತ್ರೆಗೆ ಬಸ್ ಅನ್ನು ತಿರುಗಿಸಿದ್ದಾರೆ.

ಸಮೀಪದ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯ ಮುಖ್ಯದ್ವಾರದವರೆಗೂ ಬಸ್ ಕೊಂಡೊಯ್ದ ಚಾಲಕ, ಯಾವುದೇ ವಿಳಂಬವಾಗದಂತೆ ಮಹಿಳೆಯನ್ನು ಇತರ ಪ್ರಯಾಣಿಕರ ಸಹಾಯದೊಂದಿಗೆ ಆಸ್ಪತ್ರೆಗೆ ದಾಖಲಿಸುವಲ್ಲಿ ನೆರವಾದರು. ತುರ್ತು ಚಿಕಿತ್ಸೆಗೆ ಒಳಪಡಿಸಿದ ಪರಿಣಾಮ ಮಹಿಳೆಗೆ ಸಮಯಕ್ಕೆ ಸರಿಯಾಗಿ ವೈದ್ಯಕೀಯ ನೆರವು ದೊರೆಯಿತು. ಆಸ್ಪತ್ರೆಗೆ ತಲುಪಿದ ಬಳಿಕ ವೈದ್ಯಕೀಯ ಸಿಬ್ಬಂದಿ ತಕ್ಷಣ ಪ್ರಯಾಣಿಕನಿಗೆ ಚಿಕಿತ್ಸೆ ನೀಡಲು ಮುಂದಾಗಿದ್ದಾರೆ. ಚಾಲಕ ಮತ್ತು ನಿರ್ವಾಹಕರ ಸಮಯಪ್ರಜ್ಞೆ ಹಾಗೂ ಮಾನವೀಯ ನಡೆಗೆ ಪ್ರಯಾಣಿಕರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ತುರ್ತು ಪರಿಸ್ಥಿತಿಯಲ್ಲಿ ಚಾಲಕ ಬಸ್‌ನ ಮಾರ್ಗ ಬದಲಿಸಿ ಆಸ್ಪತ್ರೆಗೆ ಕರೆದೊಯ್ದಿರುವುದು ಪ್ರಯಾಣಿಕರ ಸುರಕ್ಷತೆಗೆ ನೀಡಿದ ಆದ್ಯತೆಯನ್ನು ತೋರಿಸಿದೆ. ಈ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ.

# ಮಾರ್ಕ್ ಜುಕರ್‌ಬರ್ಗ್ ಕ್ಷಮೆ



**ನವದೆಹಲಿ, ಆ.5:** ಪ್ರಧಾನಿ ನರೇಂದ್ರ ಮೋದಿ ಅವರ ಫೇಸ್ಬುಕ್ ವಿಡಿಯೋವನ್ನು ತಾತ್ಕಾಲಿಕವಾಗಿ ತೆಗೆದುಹಾಕಿದ್ದಕ್ಕೆ (ಡಿಲೀಟ್) ಸಂಬಂಧಿಸಿದಂತೆ ಮೆಟಾ ಸಿಇಒ ಮಾರ್ಕ್ ಜುಕರ್‌ಬರ್ಗ್ ಕೊನೆಗೂ ಕ್ಷಮೆಯಾಚಿಸಿದ್ದಾರೆ. ಜುಕರ್‌ಬರ್ಗ್ ಕ್ಷಮೆಯಾಚಿಸಲು ಸಂಸದೀಯ ಸ್ಥಾಯಿ ಸಮಿತಿ 3 ದಿನಗಳ ಕಾಲಾವಕಾಶ ನೀಡಿತ್ತು. ಒಂದು ವೇಳೆ ಕ್ಷಮೆ ಕೇಳದಿದ್ದರೆ ಕಂಪನಿಯು ಕಾನೂನು ಕ್ರಮಗಳನ್ನು ಎದುರಿಸಬೇಕಾಗುತ್ತದೆ ಎಂದು ಸಮಿತಿ ಎಚ್ಚರಿಸಿತ್ತು.

ಪ್ರಧಾನಿ ಮೋದಿ ಅವರು ಮೊದಲು ಇನ್ಸ್ಟಾಗ್ರಾಮ್ ಮತ್ತು ನಂತರ ಫೇಸ್‌ಬುಕ್‌ನಲ್ಲಿ ಹಂಚಿಕೊಂಡಿದ್ದ ಸೆಲ್ಫಿ ವಿಡಿಯೋ ಸುಮಾರು 5 ಗಂಟೆಗಳ ಕಾಲ ಫೇಸ್‌ಬುಕ್‌ನಿಂದ ಕಣ್ಮರೆಯಾಗಿತ್ತು. ಈ ವಿಡಿಯೋದಲ್ಲಿ, ವಿದ್ಯಾರ್ಥಿಗಳು ಮತ್ತು ಯುವಜನರನ್ನು ಉದ್ದೇಶಿಸಿ ಮೋದಿ ಮಾತನಾಡಿದ್ದರು. ಪರೀಕ್ಷಾ ಪ್ರಶ್ನೆಪತ್ರಿಕೆ ಸೋರಿಕೆ ತಡೆಯುವ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳ ಕುರಿತು ವಿವರಿಸಿದ್ದರು.

ನಂತರ ವಿಡಿಯೋವನ್ನು ಮರುಸ್ಥಾಪಿಸಿದ ಮೆಟಾ, ಇದು ತಾಂತ್ರಿಕ ಅಥವಾ ಆಲ್ಗರಿದಮ್ ದೋಷದಿಂದ ಆಗಿರುವ ತಪ್ಪು ಎಂದು ಹೇಳಿತ್ತು. ಲೋಪಕ್ಕಾಗಿ ಕ್ಷಮೆಯಾಚಿಸಿತ್ತು. ಆದರೆ, ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯವು ಈ ಸ್ಪಷ್ಟನೆಯನ್ನು ತಿರಸ್ಕರಿಸಿದ್ದು, ತಾಂತ್ರಿಕ ದೋಷವೇ ಆಗಿದ್ದರೂ ಮೆಟಾ ತನ್ನ ವ್ಯವಸ್ಥೆಯನ್ನು ಬಲಪಡಿಸಿಕೊಳ್ಳಬೇಕು ಎಂದು ಹೇಳಿದೆ.

ಮಾಹಿತಿ ಮತ್ತು ತಂತ್ರಜ್ಞಾನ ಇಲಾಖೆಯ ಸಂಸದೀಯ ಸ್ಥಾಯಿ ಸಮಿತಿಯ ಅಧ್ಯಕ್ಷ, ಬಿಜೆಪಿ ಸಂಸದ ನಿಶಿಕಾಂತ್ ದುಬೆ, ಪ್ರಧಾನಿಯವರ ಪೋಸ್ಟ್ ಅನ್ನೇ ಮೆಟಾ ಡಿಲೀಟ್ ಮಾಡಿದೆ. ಮೆಟಾ ಹೀಗೆ ಮಾಡುತ್ತಿರುವುದು ಇದೇ ಮೊದಲೇನಲ್ಲ. ಪ್ರಧಾನಿ ನರೇಂದ್ರ ಮೋದಿ ಅವರ ವಿಡಿಯೋ ತೆಗೆದುಹಾಕಿದ್ದಕ್ಕಾಗಿ ಮಾರ್ಕ್ ಜುಕರ್‌ಬರ್ಗ್ ವೈಯಕ್ತಿಕವಾಗಿ ಕ್ಷಮೆಯಾಚಿಸಬೇಕು ಎಂದು ಒತ್ತಾಯಿಸಿದ್ದರು. ಇದೀಗ ಜುಕರ್‌ಬರ್ಗ್ ಕ್ಷಮೆಯಾಚಿಸಿರು ವುದಾಗಿ ವರದಿಯಾಗಿದೆ. ಅಂದಹಾಗೆ, ತಮ್ಮಿಷ್ಟದಂತೆ ಪ್ರತಿಪಕ್ಷಗಳ ಧ್ವನಿ ಅಡಗಿಸಲು ಇದೇ ಮೆಟಾ ಸಂಸ್ಥೆಯನ್ನು ಬಿಜೆಪಿ ಅಸ್ತ್ರವಾಗಿ ಬಳಸಿಕೊಳ್ಳುತ್ತಿದೆ ಎಂಬುದು ಗೊತ್ತಿಲ್ಲದ ವಿಚಾರವೇನೂ ಅಲ್ಲ. ತಮ್ಮ ವಿರೋಧಿಗಳ ಪೋಸ್ಟ್‌ಗಳನ್ನು ನಿಷೇಧಿಸುವ, ಡಿಲೀಟ್ ಮಾಡುವ ಅಥವಾ ನಿರ್ಬಂಧಿಸುವ ಕೃತ್ಯವನ್ನು ಕೇಂದ್ರ ಸರ್ಕಾರ ನಿರಂತರವಾಗಿ ಮಾಡಿದೆ. ಇದೀಗ, ತಾಂತ್ರಿಕ ದೋಷದ ಕಾರಣವೂ ಅಥವಾ ಮತ್ತಾವುದೋ ಕಾರಣಕ್ಕಾಗಿ ಮೋದಿ ಅವರ ಪೋಸ್ಟ್ ಡಿಲೀಟ್ ಆಗಿದ್ದಕ್ಕೆ ಇದೇ ಬಿಜೆಪಿ ಮತ್ತು ಕೇಂದ್ರ ಸರ್ಕಾರಗಳು ಮೆಟಾ ವಿರುದ್ಧ ಸೆಟೆದು ನಿಂತಿವೆ. ಜುಕರ್‌ಬರ್ಗ್ ಕ್ಷಮೆ ಕೇಳಬೇಕೆಂದು ಒತ್ತಾಯಿಸುತ್ತಿವೆ ಎಂಬ ಟೀಕೆಗಳು ಸಾಮಾಜಿಕ ಜಾಲತಾಣದಲ್ಲಿ ವ್ಯಕ್ತವಾಗುತ್ತಿವೆ.

# ಹಾರ್ಮುಜ್ ಜಲಸಂಧಿ ಶೀಘ್ರ ಮುಕ್ತ: ಟ್ರಂಪ್ ಹೇಳಿಕೆ ಅಲ್ಲಗಳೆದ ಇರಾನ್

**ವಾಷಿಂಗ್ಟನ್, ಆ.5:** ಆಯಕಟ್ಟಿನ ಮಹತ್ವದ ಹಾರ್ಮುಜ್ ಜಲಸಂಧಿಯನ್ನು ಪುನಃ ತೆರೆಯುವ ಒಪ್ಪಂದವನ್ನು ಕೆಲವೇ ದಿನಗಳಲ್ಲಿ ಘೋಷಿಸಬಹುದು ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ, ಆದರೆ ಒಪ್ಪಂದವು ಸನ್ನಿಹಿತವಾಗಿದೆ ಎಂಬ ಸಲಹೆಗಳನ್ನು ಇರಾನ್ ರಾಜ್ಯ ಮಾಧ್ಯಮ ಮತ್ತು ಅಧಿಕಾರಿಗಳು ತಿರಸ್ಕರಿಸಿದ್ದಾರೆ, ಒಮಾನ್ ಜೊತೆ ನಡೆಯುತ್ತಿರುವ ಮಾತುಕತೆಗಳು ಪ್ರಮುಖ ಹಡಗು ಮಾರ್ಗವನ್ನು ಪುನಃ ತೆರೆಯುವುದಕ್ಕೆ ಸಂಬಂಧಿಸಿಲ್ಲ ಎಂದು ಒತ್ತಾಯಿಸಿದ್ದಾರೆ.

ಮಂಗಳವಾರ ಫಾಕ್ಸ್ ನ್ಯೂಸ್ ಜೊತೆ ಮಾತನಾಡಿದ ಟ್ರಂಪ್, ಮಾತುಕತೆಗಳ ಬಗ್ಗೆ ಆಶಾವಾದ ವ್ಯಕ್ತಪಡಿಸಿದರು, ಹಾರ್ಮುಜ್ ಜಲಸಂಧಿಯ ಕುರಿತು ಘೋಷಣೆ "ಇಂದು ಅಥವಾ ನಾಳೆ" ಬರಬಹುದು ಎಂದು ಹೇಳಿದರು.

"ಸಾಕಷ್ಟು ಪ್ರಗತಿ ಸಾಧಿಸಲಾಗಿದೆ. ಮತ್ತು ಅವರು ನನಗೆ ಕರೆ ಮಾಡಿ ದಯವಿಟ್ಟು ಮಾತನಾಡೋಣ ಎಂದು ಹೇಳಿದರು. ಅವರು ಮಾತನಾಡಲು ಬಯಸುತ್ತಾರೆ" ಎಂದು ಟ್ರಂಪ್ ಯುಎಸ್ ಜಲಮಾರ್ಗದ ಕುರಿತು ಮಧ್ಯಂತರ ಒಪ್ಪಂದವನ್ನು ಘೋಷಿಸಲು ಪ್ರಯತ್ನಿಸುತ್ತಿದೆ ಎಂಬ ವರದಿಗಳಿಗೆ ಪ್ರತಿಕ್ರಿಯೆಯಾಗಿ ಹೇಳಿದರು.

ಜಂಟಿಯನ್ನು "ಶೀಘ್ರದಲ್ಲೇ" ಮತ್ತೆ ತೆರೆಯಲಾಗುವುದು ಅಥವಾ ಅವರು (ಇರಾನ್) ತುಂಬಾ ಹಾನಿಗೊಳಗಾಗಲಿದ್ದಾರೆ ಎಂದು ಅವರು ಇರಾನ್ಗೆ ಎಚ್ಚರಿಕೆ ನೀಡಿದರು.

ಆದಾಗ್ಯೂ, ಟೆಹ್ರಾನ್ ಆ ಹಕ್ಕುಗಳನ್ನು ತ್ವರಿತವಾಗಿ ತಳ್ಳಿಹಾಕಿದರು. ಇರಾನ್ ಮತ್ತು ಓಮನ್ ನಡುವಿನ ಯಾವುದೇ ಭವಿಷ್ಯದ ಒಪ್ಪಂದವು ಕಾರ್ಯತಂತ್ರದ ಜಲಮಾರ್ಗದ ಮೇಲೆ ನಿಯಂತ್ರಣವನ್ನು ಹಂಚಿಕೊಳ್ಳುತ್ತದೆ, ಇದು "ಜಲಸಂಧಿಯ ತಕ್ಷಣದ ಪುನಃ ತೆರೆಯುವಿಕೆಗೆ ಯಾವುದೇ ಸಂಬಂಧವನ್ನು ಹೊಂದಿಲ್ಲ" ಎಂದು ಇರಾನ್ನ ರಾಜ್ಯ ಪ್ರಸಾರಕ ಖಖಖಃ ಬುಧವಾರ ವರದಿ ಮಾಡಿದೆ.

"ಯುನೈಟೆಡ್ ಸ್ಟೇಟ್ಸ್ ತನ್ನ ಉಲ್ಲಂಘನೆಯನ್ನು ಮುಂದುವರಿಸಿದರೆ, ಇರಾನ್ ಮತ್ತು ಓಮನ್ ಒಪ್ಪಂದಕ್ಕೆ ಬಂದರೂ ಸಹ ಹಾರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯಲಾಗುವುದಿಲ್ಲ" ಎಂದು ಖಖಖಃ ಹೆಸರಿಸದ ಮೂಲವನ್ನು ಉಲ್ಲೇಖಿಸಿದೆ.

ಇರಾನ್ನ ರಾಷ್ಟ್ರೀಯ ಭದ್ರತೆ ಮತ್ತು ವಿದೇಶಾಂಗ ನೀತಿ ಆಯೋಗದ ವಕ್ತಾರ ಹಸನ್ ಫಶ್ಘಾವಿ ಕೂಡ ಟ್ರಂಪ್ ಅವರ ಮೌಲ್ಯಮಾಪನವನ್ನು ತಿರಸ್ಕರಿಸಿದರು. ರಾಜ್ಯ-ಸಂಬಂಧಿತ ಮಿಜಾನ್ ಸುದ್ದಿ ಸಂಸ್ಥೆಗೆ ಮಾತನಾಡಿದ ಅವರು, ಹಾರ್ಮುಜ್ ಜಲಸಂಧಿಯು "ಯಾವುದೇ ಸಂದರ್ಭಗಳಲ್ಲಿ" ಯುದ್ಧಪೂರ್ವ ಸ್ಥಿತಿಗೆ ಮರಳುವುದಿಲ್ಲ ಎಂದು ಹೇಳಿದರು.

"ಒತ್ತಡ ಮತ್ತು ಬೆದರಿಕೆಗಳ ಮೂಲಕ ಯುನೈಟೆಡ್ ಸ್ಟೇಟ್ಸ್ ಹೇರಲು ಪ್ರಯತ್ನಿಸಿದ ದಕ್ಷಿಣ ಕಾರಿಡಾರ್ ಅನ್ನು ನಾವು ಸ್ವೀಕರಿಸುವುದಿಲ್ಲ" ಎಂದು ಫಶ್ಘಾವಿ ಹೇಳಿದರು, ಟೆಹ್ರಾನ್ ಮತ್ತು ಮಸ್ಕತ್ ನಡುವಿನ ಮಾತುಕತೆಗಳು ದ್ವಿಪಕ್ಷೀಯವಾಗಿವೆ ಮತ್ತು ಯುನೈಟೆಡ್ ಸ್ಟೇಟ್ಸೊಂದಿಗೆ "ಯಾವುದೇ ಸಂಬಂಧವನ್ನು" ಹೊಂದಿಲ್ಲ ಎಂದು ಹೇಳಿದರು.

ಇರಾನ್ನ ವಿದೇಶಾಂಗ ಸಚಿವಾಲಯವು ಒಮಾನ್ ಜೊತೆ ಮಾತುಕತೆಗಳು ಮುಂದುವರೆದಿವೆ ಎಂದು ದೃಢಪಡಿಸಿದೆ, ಎರಡೂ ದೇಶಗಳ ಸಾರ್ವಭೌಮ ಹಕ್ಕುಗಳು ಮತ್ತು ರಾಷ್ಟ್ರೀಯ ಭದ್ರತಾ ಹಿತಾಸಕ್ತಿಗಳನ್ನು ರಕ್ಷಿಸುವಾಗ ಸುರಕ್ಷಿತ ಒಳಬರುವ ಮತ್ತು ಹೊರಹೋಗುವ ಹಡಗು ಮಾರ್ಗಗಳನ್ನು ಸ್ಥಾಪಿಸುವತ್ತ ಚರ್ಚೆಗಳು ಕೇಂದ್ರೀಕೃತವಾಗಿವೆ.

ವಿಶ್ವದ ಕಚ್ಚಾತೈಲದ ಐದನೇ ಒಂದು ಭಾಗದಷ್ಟು ಸಾಮಾನ್ಯವಾಗಿ ಹಾದುಹೋಗುವ ಹಾರ್ಮುಜ್ ಜಲಸಂಧಿಯು, ಈ ವರ್ಷದ ಆರಂಭದಲ್ಲಿ ಯುನೈಟೆಡ್ ಸ್ಟೇಟ್ಸ್ ಮತ್ತು ಇಸ್ರೇಲ್ ಜೊತೆಗಿನ ಯುದ್ಧದ ನಂತರ ಇರಾನ್ ವಾಣಿಜ್ಯ ಸಂಚಾರವನ್ನು ನಿರ್ಬಂಧಿಸಿದಾಗಿನಿಂದ ಪರಿಣಾಮಕಾರಿಯಾಗಿ ಮುಚ್ಚಲ್ಪಟ್ಟಿದೆ.

ವಾಷಿಂಗ್ಟನ್ ಮತ್ತು ಟೆಹ್ರಾನ್ ನಡುವಿನ ಜೂನ್ ಕದನ ವಿರಾಮ ಒಪ್ಪಂದದ ಕುಸಿತಕ್ಕೆ ಮುಚ್ಚುವಿಕೆಯು ಪ್ರಮುಖ ಕಾರಣವಾಯಿತು. ವಿಶಾಲವಾದ ಇತ್ಯರ್ಥಕ್ಕಾಗಿ ಮಾತುಕತೆ ನಡೆಸುವಾಗ ಎರಡೂ ಕಡೆಯವರು ಹೋರಾಟವನ್ನು ವಿರಾಮಗೊಳಿಸಲು ಒಪ್ಪಿಕೊಂಡಿದ್ದರೂ, ಜಲಸಂಧಿಯ ಸುತ್ತಲಿನ ಹೊಸ ಘರ್ಷಣೆಗಳು ಯುಎಸ್ ಮಿಲಿಟರಿ ದಾಳಿಗಳು, ಇರಾನಿನ ಪ್ರತೀಕಾರ ಮತ್ತು ವಿಸ್ತೃತ ಪ್ರಾದೇಶಿಕ ಸಂಘರ್ಷಕ್ಕೆ ಕಾರಣವಾಯಿತು.

ಈ ಬಿಕ್ಕಟ್ಟು ಜಾಗತಿಕ ಇಂಧನ ಮಾರುಕಟ್ಟೆಗಳ ಮೇಲೆ ಪರಿಣಾಮ ಬೀರುತ್ತಲೇ ಇದೆ. ಹಿಂದಿನ ನಷ್ಟಗಳ ನಂತರ ಬುಧವಾರ ತೈಲ ಬೆಲೆಗಳು ಏರಿದವು, ಇದು ಹಡಗು ಮಾರ್ಗದ ಭವಿಷ್ಯದ ಬಗ್ಗೆ ಅನಿಶ್ಚಿತತೆಯನ್ನು ಪ್ರತಿಬಿಂಬಿಸುತ್ತದೆ. ಬ್ರೆಂಟ್ ಕಚ್ಚಾತೈಲ ದರ ಬ್ಯಾರಲ್‌ಗೆ 1.3% ರಷ್ಟು ಏರಿಕೆಯಾಗಿ ಸುಮಾರು 80 ಡಾಲರ್‌ಗೆ ತಲುಪಿದರೆ, ಯುಎಸ್ ಮಾನದಂಡ ವೆಸ್ಟ್ ಟೆಕ್ಸಾಸ್ ಇಂಟರ್ಮೀಡಿಯೇಟ್ ಬ್ಯಾರಲ್‌ಗೆ 0.6% ರಷ್ಟು ಏರಿಕೆಯಾಗಿ $76 ಕ್ಕೆ ತಲುಪಿದೆ.

ಇದಲ್ಲದೆ, ಇರಾನ್ನೊಂದಿಗಿನ ಸಂಘರ್ಷದ ಸಮಯದಲ್ಲಿ ಪ್ರಮುಖ ಕ್ಷಿಪಣಿ ರಕ್ಷಣಾ ಪ್ರತಿಬಂಧಕಗಳ ಯುಎಸ್ ಮಿಲಿಟರಿ ದಾಸ್ತಾನುಗಳು ಗಮನಾರ್ಹವಾಗಿ ಖಾಲಿಯಾಗಿವೆ, ಒಂದು ಪ್ರಮುಖ ವಾಯು ರಕ್ಷಣಾ ವ್ಯವಸ್ಥೆಗೆ ಸುಮಾರು 80% ಪ್ರತಿಬಂಧಕಗಳು ಈಗಾಗಲೇ ಖರ್ಚು ಮಾಡಲ್ಪಟ್ಟಿವೆ ಎಂದು ಸಿಎನ್‌ಎನ್ ಈ ವಿಷಯದ ಬಗ್ಗೆ ತಿಳಿದಿರುವ ಮೂಲಗಳನ್ನು ಉಲ್ಲೇಖಿಸಿದೆ.

# ಯೆಮನ್ ಕರಾವಳಿಯಲ್ಲಿ ಭಾರತೀಯ ಹಡಗಿನ ಮೇಲೆ ಕ್ಷಿಪಣಿ ದಾಳಿ: ಸಮುದ್ರದಲ್ಲಿ ಮುಳುಗಿದ ಹಡಗು, 13 ಭಾರತೀಯರು ಸೇರಿ 14 ಮಂದಿ ರಕ್ಷಣೆ



ಪೋರ್ಟ್ ಆಫ್ ಮೋಕಾ (ಯೆಮನ್): ಯೆಮನ್ ಕರಾವಳಿ ಸಮೀಪದ ಕೆಂಪು ಸಮುದ್ರದಲ್ಲಿ (ರೆಡ್ ಸೀ) ಭಾರತೀಯ ಧ್ವಜ ಹೊಂದಿದ್ದ ವಾಣಿಜ್ಯ ಹಡಗಿನ ಮೇಲೆ ನಡೆದ ಕ್ಷಿಪಣಿ ದಾಳಿಯ ಪರಿಣಾಮ ಹಡಗು ಸಮುದ್ರದಲ್ಲಿ ಮುಳುಗಿದ ಆತಂಕಕಾರಿ ಘಟನೆ ನಡೆದಿದೆ.

ಅದೃಷ್ಟವಶಾತ್, ಹಡಗಿನಲ್ಲಿದ್ದ 13 ಭಾರತೀಯರು ಸೇರಿದಂತೆ 14 ಮಂದಿ ಸಿಬ್ಬಂದಿಯನ್ನು ಯೆಮನ್ ಕರಾವಳಿ ರಕ್ಷಣಾ ಪಡೆ (ಕೋಸ್ಟ್ ಗಾರ್ಡ್) ಸುರಕ್ಷಿತವಾಗಿ ರಕ್ಷಿಸಿದ್ದು, ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ ಎಂದು ತಿಳಿದುಬಂದಿದೆ.

ಯೆಮನ್ ಸಮೀಪದ ಕೆಂಪು ಸಮುದ್ರದಲ್ಲಿ ಸಂಚರಿಸುತ್ತಿದ್ದ ಭಾರತೀಯ ಧ್ವಜದ ಎಂಎಸ್‌ವಿ ಫೈಜ್ ನೂರ್ ಒಲಿಯಾ ಎಂಬ ಯಾಂತ್ರೀಕೃತ ಹಡಗಿನ ಮೇಲೆ ಆಗಸ್ಟ್ 4ರಂದು ಕ್ಷಿಪಣಿ ದಾಳಿ ನಡೆದ ಪರಿಣಾಮ ಹಡಗು ಮುಳುಗಿದೆ.

ದಾಳಿಯ ಬಳಿಕ ತಕ್ಷಣ ಕಾರ್ಯಾಚರಣೆ ಆರಂಭಿಸಿದ ಯೆಮನ್ ಕರಾವಳಿ ರಕ್ಷಣಾ ಪಡೆ, ಹಡಗಿನಲ್ಲಿದ್ದ ಎಲ್ಲಾ 14 ಸಿಬ್ಬಂದಿಯನ್ನು ಸುರಕ್ಷಿತವಾಗಿ ರಕ್ಷಿಸಿ ಮೊಖಾ ಬಂದರಿಗೆ ಕರೆತಂದಿದೆ. ರಕ್ಷಣಾ ಕಾರ್ಯಾಚರಣೆ ಯಶಸ್ವಿಯಾಗಿ ನಡೆದಿದ್ದು, ಯಾರಿಗೂ ಗಾಯಗಳಾಗಿಲ್ಲ ಅಥವಾ ಪ್ರಾಣಹಾನಿ ಸಂಭವಿಸಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಈ ನಡುವೆ ಭಾರತದ ವಿದೇಶಾಂಗ ಸಚಿವಾಲಯ ಈ ದಾಳಿಯನ್ನು ತೀವ್ರವಾಗಿ ಖಂಡಿಸಿದೆ.

ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಅವರು ಈ ಕುರಿತು ಪ್ರತಿಕ್ರಿಯಿಸಿ, ಹಡಗಿನಲ್ಲಿ ಇದ್ದ 13 ಭಾರತೀಯ ಪ್ರಜೆಗಳನ್ನೂ ಸುರಕ್ಷಿತವಾಗಿ ರಕ್ಷಿಸಲಾಗಿದೆ ಎಂದು ದೃಢಪಡಿಸಿದ್ದಾರೆ.

ಇದೇ ವೇಳೆ ರಕ್ಷಣಾ ಕಾರ್ಯಾಚರಣೆಯಲ್ಲಿ ನೆರವಾದ ಯೆಮನ್ ಅಧಿಕಾರಿಗಳಿಗೆ ಭಾರತ ಸರ್ಕಾರ ಕೃತಜ್ಞತೆ ಸಲ್ಲಿಸಿದೆ. ಜೊತೆಗೆ, ಸೌದಿ ಅರೇಬಿಯಾದ ರಿಯಾದ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿ ಪರಿಸ್ಥಿತಿಯನ್ನು ನಿರಂತರವಾಗಿ ಗಮನಿಸುತ್ತಿದ್ದು, ಯೆಮನ್ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದ್ದು ಸಿಬ್ಬಂದಿಯ ಸುರಕ್ಷತೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುತ್ತಿದೆ ಎಂದು ತಿಳಿಸಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಕೆಂಪು ಸಮುದ್ರ ಮತ್ತು ಅದರ ಸುತ್ತಮುತ್ತಲಿನ ಸಮುದ್ರ ಮಾರ್ಗಗಳಲ್ಲಿ ವಾಣಿಜ್ಯ ಹಡಗುಗಳ ಮೇಲೆ ಹೆಚ್ಚುತ್ತಿರುವ ದಾಳಿಗಳ ಬಗ್ಗೆ ಭಾರತ ತೀವ್ರ ಕಳವಳ ವ್ಯಕ್ತಪಡಿಸಿದೆ.

ಅಂತಾರಾಷ್ಟ್ರೀಯ ಸಮುದ್ರ ಮಾರ್ಗಗಳಲ್ಲಿ ಸಾಗುವ ವಾಣಿಜ್ಯ ಹಡಗುಗಳನ್ನು ಗುರಿಯಾಗಿಸುವ ಇಂತಹ ದಾಳಿಗಳು ತಕ್ಷಣ ನಿಲ್ಲಬೇಕು ಎಂದು ಭಾರತ ಒತ್ತಾಯಿಸಿದೆ. ಅಲ್ಲದೆ, ಅಂತರರಾಷ್ಟ್ರೀಯ ಕಾನೂನುಗಳ ಅನುಸಾರ ಮುಕ್ತ ಮತ್ತು ಅಡೆತಡೆರಹಿತ ಸಮುದ್ರ ಸಂಚಾರ ಹಾಗೂ ವ್ಯಾಪಾರವನ್ನು ಶೀಘ್ರವೇ ಪುನಃಸ್ಥಾಪಿಸುವ ಅಗತ್ಯವಿದೆ ಎಂದು ವಿದೇಶಾಂಗ ಸಚಿವಾಲಯ ಹೇಳಿದೆ.

ಇನ್ನೊಂದೆಡೆ, ಕೇಂದ್ರ ಬಂದರು, ಹಡಗು ಸಾಗಣೆ ಮತ್ತು ಜಲಮಾರ್ಗಗಳ ಸಚಿವ ಸರ್ಬಾನಂದ ಸೋನೋವಾಲ್ ಕೂಡ ಈ ದಾಳಿಯನ್ನು ತೀವ್ರವಾಗಿ ಖಂಡಿಸಿದ್ದಾರೆ. ಭಾರತೀಯ ನಾವಿಕರ ಸುರಕ್ಷತೆಯೇ ಸರ್ಕಾರದ ಅತ್ಯುನ್ನತ ಆದ್ಯತೆಯಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, "ರಕ್ಷಣೆಯಿಲ್ಲದ ಭಾರತೀಯ ಧ್ವಜದ ಯಾಂತ್ರೀಕೃತ ಹಡಗಿನ ಮೇಲೆ ನಡೆದ ಈ ಪ್ರಚೋದನಾರಹಿತ ದಾಳಿಯನ್ನು ಭಾರತ ತೀವ್ರವಾಗಿ ಖಂಡಿಸುತ್ತದೆ. ಹಡಗಿನಲ್ಲಿದ್ದ ಎಲ್ಲಾ 14 ಸಿಬ್ಬಂದಿ, ಅವರಲ್ಲಿ 13 ಭಾರತೀಯರು ಸೇರಿ, ಯೆಮನ್ ಕರಾವಳಿ ರಕ್ಷಣಾ ಪಡೆಯಿಂದ ಸುರಕ್ಷಿತವಾಗಿ ರಕ್ಷಿಸಲ್ಪಟ್ಟಿರುವುದು ಸಮಾಧಾನದ ಸಂಗತಿ" ಎಂದು ತಿಳಿಸಿದ್ದಾರೆ.

ಇದರ ಜೊತೆಗೆ, ಸಮುದ್ರ ಪ್ರದೇಶದಲ್ಲಿ ಕಾರ್ಯನಿರ್ವಹಿಸುತ್ತಿರುವ ಭಾರತೀಯ ನಾವಿಕರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಅಗತ್ಯ ಕ್ರಮಗಳನ್ನು ತಕ್ಷಣ ಕೈಗೊಳ್ಳುವಂತೆ ಡೈರೆಕ್ಟರ್ ಜನರಲ್ ಮೆರಿಟೈಮ್ ಅಡ್ಮಿನಿಸ್ಟ್ರೇಷನ್ (ಆಉಒಂ) ಅಧಿಕಾರಿಗಳಿಗೆ ಸೂಚನೆ ನೀಡಿರುವುದಾಗಿ ಸೋನೋವಾಲ್ ಹೇಳಿದ್ದಾರೆ. ರಕ್ಷಿಸಲ್ಪಟ್ಟ ಸಿಬ್ಬಂದಿಗೆ ಅಗತ್ಯವಿರುವ ಎಲ್ಲಾ ನೆರವು ಮತ್ತು ಸಹಾಯವನ್ನು ಸರ್ಕಾರ ಒದಗಿಸಲಿದೆ ಎಂದೂ ಅವರು ಭರವಸೆ ನೀಡಿದ್ದಾರೆ.

ಈ ಘಟನೆ ಮತ್ತೊಮ್ಮೆ ಕೆಂಪು ಸಮುದ್ರದಲ್ಲಿ ಉಲ್ಬಣಿಸುತ್ತಿರುವ ಭದ್ರತಾ ಪರಿಸ್ಥಿತಿಯನ್ನು ಬೆಳಕಿಗೆ ತಂದಿದ್ದು, ಜಾಗತಿಕ ವಾಣಿಜ್ಯ ಹಡಗುಗಳ ಸುರಕ್ಷತೆ ಕುರಿತು ಅಂತರರಾಷ್ಟ್ರೀಯ ಮಟ್ಟದಲ್ಲಿ ಹೊಸ ಆತಂಕಕ್ಕೆ ಕಾರಣವಾಗಿದೆ. ಭಾರತದ ವಾಣಿಜ್ಯ ಹಡಗಿನ ಮೇಲೆ ನಡೆದ ಈ ದಾಳಿ, ಸಮುದ್ರ ಮಾರ್ಗಗಳಲ್ಲಿ ಹೆಚ್ಚುತ್ತಿರುವ ಅಪಾಯದ ಗಂಭೀರತೆಯನ್ನು ಮತ್ತೊಮ್ಮೆ ಸಾಬೀತುಪಡಿಸಿದೆ.

# ಟ್ರಂಪ್‌ಗೆ ಆಘಾತ; ಗಾಲ್ಫ್ ಮೈದಾನದಲ್ಲಿ ಶಸ್ತ್ರಸಜ್ಜಿತ ವ್ಯಕ್ತಿ ಬಂಧನ, ಹತ್ಯೆಗೆ ಸಂಚು




ವಾಷಿಂಗ್ಟನ್, ಆ.5: ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಲಾಸ್ ಏಂಜಲೀಸ್ ಪ್ರವಾಸಕ್ಕೆ ಕೇವಲ ಎರಡು ದಿನಗಳು ಬಾಕಿ ಇರುವಾಗಲೇ, ಅವರ ಗಾಲ್ಫ್ ಮೈದಾನದಲ್ಲಿ ಶಸ್ತ್ರಸಜ್ಜಿತ ವ್ಯಕ್ತಿಯೊಬ್ಬನನ್ನು ಭದ್ರತಾ ಅಧಿಕಾರಿಗಳು ಬಂಧಿಸಿದ್ದು, ಈ ಘಟನೆ ಭಾರೀ ಆತಂಕಕ್ಕೆ ಕಾರಣವಾಗಿದೆ.

ಈ ಘಟನೆ ಟ್ರಂಪ್ ವಿರುದ್ಧ ಮತ್ತೊಂದು ಹತ್ಯೆಯ ಸಂಚು ಇರಬಹುದೇ ಎಂಬ ಅನುಮಾನಗಳನ್ನು ಹುಟ್ಟುಹಾಕಿದ್ದು, ಈ ಪ್ರಕರಣದ ಕುರಿತು ತನಿಖೆ ಮುಂದುವರಿದಿದೆ. ಸ್ಥಳೀಯ ಶೆರಿಫ್ ಕಚೇರಿ ನೀಡಿರುವ ಮಾಹಿತಿಯ ಪ್ರಕಾರ, ಕ್ಯಾಲಿಫೋರ್ನಿಯಾದ ಡೌನಿ ನಿವಾಸಿಯಾಗಿರುವ 38 ವರ್ಷದ ವ್ಯಕ್ತಿಯನ್ನು ಗಾಲ್ಫ್ ಮೈದಾನದ ಒಳಭಾಗದಲ್ಲಿ ಸರಳ ಉಡುಪಿನ ಫೆಡರಲ್ ಭದ್ರತಾ ಅಧಿಕಾರಿಗಳು ಅನುಮಾನಾಸ್ಪದವಾಗಿ ಓಡಾಡುತ್ತಿದ್ದ ವೇಳೆ ವಶಕ್ಕೆ ಪಡೆದಿದ್ದಾರೆಂದು ತಿಳಿದುಬಂದಿದೆ.

ಪ್ರಾಥಮಿಕ ತನಿಖೆಯಲ್ಲಿ, ಆತ ಗಾಲ್ಫ್ ಮೈದಾನದ ವಿವಿಧ ಭಾಗಗಳಲ್ಲಿ ಸಂಚರಿಸುತ್ತಾ ಛಾಯಾಚಿತ್ರಗಳು ಮತ್ತು ವಿಡಿಯೊಗಳನ್ನು ಸೆರೆಹಿಡಿಯುತ್ತಿದ್ದನು. ಅಲ್ಲದೆ, ಭದ್ರತಾ ವ್ಯವಸ್ಥೆ ಮತ್ತು ಭದ್ರತಾ ಯೋಜನೆಗಳ ಬಗ್ಗೆ ನಿಗಾ ವಹಿಸುತ್ತಿರುವಂತೆ ಕಂಡುಬಂದಿತ್ತು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಅವನ ಅನುಮಾನಾಸ್ಪದ ಚಟುವಟಿಕೆ ಗಮನಕ್ಕೆ ಬಂದ ತಕ್ಷಣ ಭದ್ರತಾ ಅಧಿಕಾರಿಗಳು ಮಧ್ಯಪ್ರವೇಶಿಸಿ ಆತನನ್ನು ಬಂಧಿಸಿದ್ದಾರೆ. ಟ್ರಂಪ್ ಮಂಗಳವಾರ ಗಾಲ್ಫ್ ಮೈದಾನಕ್ಕೆ ಭೇಟಿ ನೀಡುವ ಮುನ್ನವೇ ಈ ಕ್ರಮ ಕೈಗೊಳ್ಳಲಾಗಿದೆ. ಆದರೆ, ಬಂಧಿತ ವ್ಯಕ್ತಿಯ ಗುರುತನ್ನು ಅಧಿಕಾರಿಗಳು ಇನ್ನೂ ಬಹಿರಂಗಪಡಿಸಿಲ್ಲ. ಆತನ ಗುರಿ ಟ್ರಂಪ್ ಅವರೇ ಆಗಿದ್ದರೇ ಅಥವಾ ಬೇರೆ ಉದ್ದೇಶ ಹೊಂದಿದ್ದನೇ ಎಂಬುದರ ಕುರಿತು ಯಾವುದೇ ಅಧಿಕೃತ ಮಾಹಿತಿ ನೀಡಲಾಗಿಲ್ಲ. ಗಾಲ್ಫ್ ಮೈದಾನದಲ್ಲಿ ಆತ ಸೆರೆಹಿಡಿದಿದ್ದ ಚಿತ್ರಗಳು, ವಿಡಿಯೊಗಳು ಮತ್ತು ಇತರ ಚಟುವಟಿಕೆಗಳ ಬಗ್ಗೆ ತನಿಖೆ ನಡೆಯುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಬಂಧಿತನ ಬಳಿ ಪತ್ತೆಯಾದ ಶಸ್ತ್ರಾಸ್ತ್ರದ ವಿವರಗಳನ್ನೂ ಇನ್ನೂ ಬಹಿರಂಗಪಡಿಸಲಾಗಿಲ್ಲ. ಆತನ ವಿರುದ್ಧ ಯಾವ ಆರೋಪಗಳನ್ನು ಹೊರಿಸಲಾಗುವುದು ಎಂಬುದರ ಬಗ್ಗೆಯೂ ಅಧಿಕಾರಿಗಳು ಮಾಹಿತಿ ನೀಡಿಲ್ಲ.

ಇತ್ತೀಚಿನ ತಿಂಗಳುಗಳಲ್ಲಿ ಟ್ರಂಪ್ ವಿರುದ್ಧ ಹಲವು ಬೆದರಿಕೆಗಳು ಹಾಗೂ ಹತ್ಯೆ ಯತ್ನಗಳ ಆರೋಪಗಳು ಕೇಳಿಬಂದಿರುವ ಹಿನ್ನೆಲೆಯಲ್ಲಿ, ಅವರ ಸಾರ್ವಜನಿಕ ಕಾರ್ಯಕ್ರಮಗಳು ಮತ್ತು ಪ್ರವಾಸಗಳ ವೇಳೆ ಅಮೆರಿಕದ ಕಾನೂನು ಜಾರಿ ಸಂಸ್ಥೆಗಳು ಅತ್ಯಂತ ಕಟ್ಟುನಿಟ್ಟಿನ ಭದ್ರತಾ ಕ್ರಮಗಳನ್ನು ಅನುಸರಿಸುತ್ತಿವೆ.

ಈ ಘಟನೆ ಕೂಡ ಟ್ರಂಪ್ ಅವರ ಭದ್ರತೆ ಕುರಿತ ಆತಂಕವನ್ನು ಮತ್ತಷ್ಟು ಹೆಚ್ಚಿಸಿದ್ದು, ಪ್ರಕರಣದ ಕುರಿತು ಫೆಡರಲ್ ಅಧಿಕಾರಿಗಳು ಎಲ್ಲಾ ಆಯಾಮಗಳಿಂದ ತನಿಖೆ ನಡೆಸುತ್ತಿದ್ದಾರೆ.

# ಕಾಮನ್‌ವೆಲ್ತ್ ಕ್ರೀಡಾಕೂಟದಲ್ಲಿ ಪದಕ ಗೆದ್ದಿರುವ ಸಾಧಕರ ಸಾಧನೆ ಪ್ರೇರಣಾದಾಯಕ



**ಪ್ಯಾರಾ ಅಥ್ಲೀಟ್ ಕನ್ನಡತಿ ಶಿಲ್ಪಾ ಗೌರವಿಸಿದ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ**

**ತರಬೇತುದಾರ ಸತ್ಯನಾರಾಯಣ, ಪುಷ್ಪಾ ಅವರಿಗೂ ಸನ್ಮಾನ**

**ನವದೆಹಲಿ, ಆ.5:** ಪ್ರಸಕ್ತ 2026ರ ಕಾಮನ್ವೆಲ್ತ್ ಕ್ರೀಡಾಕೂಟದ ಮಹಿಳೆಯರ ಶಾರ್ಟ್‌ಫುಟ್-57 ವಿಭಾಗದಲ್ಲಿ ಕಂಚಿನ ಪದಕ ಗೆದ್ದ ಭಾರತದ ಪ್ಯಾರಾ ಅಥ್ಲೀಟ್, ಹೆಮ್ಮೆಯ ಕನ್ನಡತಿ ಶಿಲ್ಪಾ ಕೆ.ಶೈಲಾ ಅವರನ್ನು ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರೆ ಎಚ್.ಡಿ. ಕುಮಾರಸ್ವಾಮಿ ನವದೆಹಲಿಯ ತಮ್ಮ ನಿವಾಸದಲ್ಲಿ ಬುಧವಾರ ಸತ್ಕರಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಶಿಲ್ಪಾ ಅವರ ಹಿನ್ನೆಲೆ, ಅವರ ಈವರೆಗಿನ ಸಾಧನೆ ಹಾಗೂ ಅವರ ತಂದೆ-ತಾಯಿ ಇನ್ನಿತರ ಅಂಶಗಳ ಬಗ್ಗೆ ಮಾಹಿತಿ ಪಡೆದುಕೊಂಡ ಅವರು, ಕಾಮನ್ವೆಲ್ತ್ ಕ್ರೀಡಾಕೂಟದಲ್ಲಿ ಕಂಚಿನ ಪದಕ ಗೆದ್ದಿರುವ ನಿಮ ಸಾಧನೆ ಪ್ರೇರಣಾದಾಯಕ, ಐತಿಹಾಸಿಕ. ನೀವು ನನ್ನ ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಕೆ.ಆರ್.ನಗರ ತಾಲೂಕಿನವರು. ಯುವ ತಲೆಮಾರಿಗೆ ನೀವು ಮಾದರಿ ಆಗಿದ್ದೀರಿ ಎಂದು ಪ್ರಶಂಸಿದರು.

ಇದೇ ಸಂದರ್ಭದಲ್ಲಿ ಶಿಲ್ಪಾ ಅವರ ತರಬೇತುದಾರರಾದ ಸತ್ಯನಾರಾಯಣ ಹಾಗೂ ಪುಷ್ಪಾ ನಿರಂಜನ್ ಪ್ರಸಾದ್ ಅವರನ್ನು ಸಚಿವರು ಸತ್ಕರಿಸಿದರು. ಕೆ.ಆರ್.ನಗರ ತಾಲ್ಲೂಕಿನ ಕಂಚುಗಾರಕೊಪ್ಪಲು ಗ್ರಾಮದ ಸಾಮಾನ್ಯ ರೈತ ಕುಟುಂಬದ ಕುಡಿಯಾದ ಶಿಲ್ಪಾ ಅವರು ತಮ ನಾಲ್ಕನೇ ವಯಸ್ಸಿನಲ್ಲಿದ್ದಾಗಲೇ ಭೀಕರ ಅಪಘಾತದಲ್ಲಿ ಎಡಗಾಲು ಕಳೆದುಕೊಂಡು ಅಂಗವೈಕಲ್ಯಕ್ಕೆ ತುತ್ತಾಗಿದ್ದರು. ಆ ನೋವು ಮತ್ತು ಅಂಗವೈಕಲ್ಯವನ್ನು ದಿಟ್ಟತನದಿಂದ ಮೆಟ್ಟಿ ನಿಂತ ಅವರು, ತಮ ದೃಢ ಸಂಕಲ್ಪದೊಂದಿಗೆ ಇಡೀ ರಾಷ್ಟ್ರವೇ ಹೆಮೆಪಡುವ ಸಾಧನೆ ಮಾಡಿದ್ದಾರೆ ಎಂದು ಸಚಿವರು ಶ್ಲಾಘಿಸಿದರು.

ಶಿಲ್ಪಾ ಅವರ ಸಾಧನೆಯನ್ನು ಕಂಡು ನಾನು ಬಹಳ ಸಂತೋಷಪಟ್ಟಿದ್ದೇನೆ. ಗ್ರಾಮೀಣ ಪ್ರದೇಶದ ಹೆಣ್ಣುಮಗಳು, ಅದರಲ್ಲಿಯೂ ವಿಕಲಚೇತನ ಹೆಣ್ಣುಮಗಳು ಇಂಥ ಅನನ್ಯ ಸಾಧನೆ ಮಾಡಿರುವುದು ಸಮಾಜಕ್ಕೆ ಮತ್ತು ಯುವಜನತೆಗೆ ದಾರಿದೀಪ ಎನ್ನುವುದು ನನ್ನ ಅಭಿಪ್ರಾಯ. ಸದೃಢ ಇಚ್ಛಾಶಕ್ತಿ ಇದ್ದರೆ ಮಾತ್ರ ಯಾವುದೇ ಸಾಧನೆ ಕಷ್ಟವಲ್ಲ ಎಂಬುದನ್ನು ಅವರು ಸಾಭೀತುಪಡಿಸಿದ್ದಾರೆ ಎಂದು ಕುಮಾರಸ್ವಾಮಿ ಮೆಚ್ಚುಗೆ ಸೂಚಿಸಿದ್ದಾರೆ.

# ಮಾಧ್ಯಮಗಳ ಧ್ವನಿ ಅಡಗಿಸಲು ಮುಂದಾದ ಪಾಕ್: ಅನುಮತಿ ಇಲ್ಲದೆ ವರದಿಗಾರಿಕೆಗೆ ನಿಷೇಧ, ವಿದೇಶಿ ಮಾಧ್ಯಮಗಳಿಗೂ ನಿರ್ಬಂಧ

**ಇಸ್ಲಾಮಾಬಾದ್, ಆ.5:** ಪಾಕಿಸ್ತಾನ ಸರ್ಕಾರವು ಅಂತರರಾಷ್ಟ್ರೀಯ ಪತ್ರಕರ್ತರು ಮತ್ತು ವಿದೇಶಿ ಮಾಧ್ಯಮ ಸಂಸ್ಥೆಗಳ ಮೇಲೆ ಅತ್ಯಂತ ಕಟ್ಟುನಿಟ್ಟಾದ ನಿಯಮಗಳನ್ನು ಹೇರಿದ್ದು, ದೇಶದಲ್ಲಿ ದೊಡ್ಡ ಮಟ್ಟದ ಮಾಧ್ಯಮ ಸೆನ್ಸಾರ್‌ಶಿಪ್ ಜಾರಿಗೆ ತಂದಿದೆ.

ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿ (ಪಿಒಕೆ) ಪ್ರತಿಭಟನೆಗಳ ಮೇಲೆ ಸರ್ಕಾರ ಮತ್ತು ಸೇನೆ ನಡೆಸಿದ ದಮನ ಕ್ರಮಕ್ಕೆ ಅಂತರರಾಷ್ಟ್ರೀಯ ಮಟ್ಟದಲ್ಲಿ ತೀವ್ರ ಟೀಕೆ ವ್ಯಕ್ತವಾಗುತ್ತಿರುವ ಬೆನ್ನಲ್ಲೇ, ಪಾಕಿಸ್ತಾನ ಸರ್ಕಾರ ವಿದೇಶಿ ಮಾಧ್ಯಮಗಳ ಚಟುವಟಿಕೆಗಳ ಮೇಲೆ ಕಠಿಣ ನಿಯಮಗಳನ್ನು ಜಾರಿಗೊಳಿಸಿದೆ.

ಪಾಕಿಸ್ತಾನ ಮಾಹಿತಿ ಮತ್ತು ಪ್ರಸಾರ ಸಚಿವಾಲಯವು ಹೊಸದಾಗಿ ಬಿಡುಗಡೆ ಮಾಡಿರುವ 'ಫಾರಿನ್ ಮೀಡಿಯಾ ಫೆಸಿಲಿಟೇಶನ್ ಗೈಡ್‌ಲೈನ್ಸ್, 2026' ಅನ್ವಯ, ಇನ್ನು ಮುಂದೆ ವಿದೇಶಿ ಪತ್ರಕರ್ತರು ಸರ್ಕಾರದ ಪೂರ್ವಾನುಮತಿ ಇಲ್ಲದೆ ಪ್ರಮುಖ ನಗರಗಳಿಂದ ಹೊರಗೆ ಪ್ರಯಾಣಿಸುವಂತಿಲ್ಲ.

ಇಸ್ಲಾಮಾಬಾದ್, ಲಾಹೋರ್ ಮತ್ತು ಕರಾಚಿ ನಗರಗಳನ್ನು ಹೊರತುಪಡಿಸಿ ದೇಶದ ಬೇರೆ ಯಾವುದೇ ಪ್ರದೇಶದಲ್ಲಿ ವರದಿ ಮಾಡಲು ವಿದೇಶಿ ಪತ್ರಕರ್ತರು ಸರ್ಕಾರದಿಂದ ಪೂರ್ವಾನುಮತಿ (ಎನ್‌ಒಸಿ) ಪಡೆಯುವುದು ಕಡ್ಡಾಯಗೊಳಿಸಲಾಗಿದೆ.

ಮಾನ್ಯತೆ ಪಡೆದಿರುವ ವಿದೇಶಿ ಪತ್ರಕರ್ತರು ಅಧಿಕೃತ ವರದಿಗಾರಿಕೆ, ಚಿತ್ರೀಕರಣ ಅಥವಾ ಯಾವುದೇ ವೃತ್ತಿಪರ ಕಾರ್ಯಕ್ಕಾಗಿ ಮೂರು ಪ್ರಮುಖ ನಗರಗಳ ಹೊರಗೆ ತೆರಳಬೇಕಾದರೆ ಸಚಿವಾಲಯದ ಇಪಿ ವಿಂಗ್‌ನಿಂದ ಮುಂಚಿತವಾಗಿ ಎನ್‌ಒಸಿ ಪಡೆಯಬೇಕಾಗಿದೆ.

ಈ ಹೊಸ ಮಾರ್ಗಸೂಚಿಗಳು ವಿದೇಶಿ ಮಾಧ್ಯಮಗಳ ಕಾರ್ಯಾಚರಣೆಗೆ ಹಲವು ಕಠಿಣ ನಿಯಮಗಳನ್ನು ವಿಧಿಸಿವೆ. ಪಾಕಿಸ್ತಾನದ ಯಾವುದೇ ಪ್ರಾಂತ್ಯ, ಗಡಿ ಪ್ರದೇಶ ಅಥವಾ ಸೂಕ್ಷ್ಮ ಪ್ರದೇಶಗಳಲ್ಲಿ ವರದಿ ಮಾಡಲು ಸರ್ಕಾರದ ಅನುಮತಿ ಇಲ್ಲದೆ ಅವಕಾಶ ಇರುವುದಿಲ್ಲ. ಆದರೆ, ವೈಯಕ್ತಿಕ ಪ್ರವಾಸದ ಉದ್ದೇಶದಿಂದ ಅಬೊಟ್ಟಾಬಾದ್ ಮತ್ತು ಮುರ್ರಿ ಬೆಟ್ಟದ ಪ್ರದೇಶಗಳಿಗೆ ತೆರಳಲು ಮಾತ್ರ ಸೀಮಿತ ವಿನಾಯಿತಿ ನೀಡಲಾಗಿದ್ದು, ಅದಕ್ಕೂ ಕನಿಷ್ಠ ಮೂರು ದಿನಗಳ ಮುಂಚಿತವಾಗಿ ಮಾಹಿತಿ ನೀಡಿ ಅನುಮತಿ ಪಡೆಯಬೇಕು ಎಂದು ಸೂಚಿಸಲಾಗಿದೆ.

ಈ ನಿಯಮಗಳು ಕೇವಲ ವಿದೇಶಿ ಪತ್ರಕರ್ತರಿಗೆ ಮಾತ್ರ ಸೀಮಿತವಾಗಿಲ್ಲ. ಮುದ್ರಣ, ದೂರದರ್ಶನ, ಡಿಜಿಟಲ್ ಮಾಧ್ಯಮ, ಆನ್‌ಲೈನ್ ಸುದ್ದಿ ವೇದಿಕೆಗಳು ಹಾಗೂ ಸಾಮಾಜಿಕ ಜಾಲತಾಣಗಳಿಗೆ ಕೆಲಸ ಮಾಡುವ ಎಲ್ಲ ವಿದೇಶಿ ಮಾಧ್ಯಮ ಸಿಬ್ಬಂದಿ, ಮಾಧ್ಯಮ ಸಂಸ್ಥೆಗಳ ಮಾಲೀಕರು, ಸ್ವತಂತ್ರ ಪತ್ರಕರ್ತರು (ಫ್ರೀಲಾನ್ಸರ್‌ಗಳು), ಸ್ಥಳೀಯ ಸಹಾಯಕರು



(ಫಿಕ್ಸರ್‌ಗಳು), ನಿರ್ಮಾಣ ತಂಡಗಳು ಮತ್ತು ಇತರೆ ಸಹಾಯಕ ಸಿಬ್ಬಂದಿಗೂ ಅನ್ವಯವಾಗಲಿವೆ.

ಇದರ ಜೊತೆಗೆ, ವಿದೇಶಿ ಮಾಧ್ಯಮಗಳಿಗೆ ಸಂಬಂಧಿಸಿದ ಎಲ್ಲ ಸಿಬ್ಬಂದಿ ಮಾಹಿತಿ ಸಚಿವಾಲಯದ ಇಪಿ ವಿಂಗ್ ಡಿಜಿಟಲ್ ಪೋರ್ಟಲ್‌ನಲ್ಲಿ ಕಡ್ಡಾಯವಾಗಿ ನೋಂದಣಿ ಮಾಡಿಸಿಕೊಳ್ಳಬೇಕು. ವಿದೇಶಿ ಮಾಧ್ಯಮಗಳಿಗೆ ಕೆಲಸ ಮಾಡುವ ಪಾಕಿಸ್ತಾನಿ ನಾಗರಿಕರು, ಅವರು ಪಾಕಿಸ್ತಾನದಲ್ಲಿರಲಿ ಅಥವಾ ವಿದೇಶದಲ್ಲಿರಲಿ, ತಮ್ಮ ಸಮೀಪದ ಪಾಕಿಸ್ತಾನ ರಾಯಭಾರ ಕಚೇರಿ, ಹೈಕಮಿಷನ್ ಅಥವಾ ಕಾನ್ಸುಲೇಟ್‌ನಲ್ಲಿ ನೋಂದಾಯಿಸಿ ಕೊಳ್ಳಬೇಕಾಗಿದೆ.

ಹೊಸ ನೀತಿಯಡಿ ಎರಡು ಹಂತದ ಮಾನ್ಯತಾ ವ್ಯವಸ್ಥೆಯನ್ನು ಪರಿಚಯಿಸಲಾಗಿದೆ. ಪಾಕಿಸ್ತಾನದಲ್ಲಿ ನಿರಂತರವಾಗಿ ಕಾರ್ಯನಿರ್ವಹಿಸುವ ವಿದೇಶಿ ಪತ್ರಕರ್ತರಿಗೆ ವಾರ್ಷಿಕ ಶಾಶ್ವತ ಮಾನ್ಯತೆ ನೀಡಲಾಗುತ್ತದೆ. ಇನ್ನು ಅಲ್ಪಾವಧಿಗೆ ಬರುವ ಪತ್ರಕರ್ತರಿಗೆ ಗರಿಷ್ಠ ಮೂರು ತಿಂಗಳ ಅವಧಿಯ ತಾತ್ಕಾಲಿಕ ಮಾನ್ಯತೆ ನೀಡಲಾಗುತ್ತದೆ. ನೋಂದಣಿ ಗುರುತಿನ ಚೀಟಿ ಸಾಮಾನ್ಯವಾಗಿ ಏಳು ಕೆಲಸದ ದಿನಗಳಲ್ಲಿ ಸಿಗಲಿದ್ದು, ಸಂಪೂರ್ಣ ಹಿನ್ನೆಲೆ ಪರಿಶೀಲನೆಯ ಬಳಿಕ ಅಧಿಕೃತ ಮಾನ್ಯತಾ ಚೀಟಿ ಪಡೆಯಲು ನಾಲ್ಕರಿಂದ ಆರು ವಾರಗಳು ಬೇಕಾಗಬಹುದು ಎಂದು ತಿಳಿಸಲಾಗಿದೆ. ಮಾನ್ಯತೆ ಪಡೆದ ಪತ್ರಕರ್ತರಿಗೆ ಇಪಿ ವಿಂಗ್ ಪ್ರೆಸ್ ಅಕ್ರಿಡಿಟೇಶನ್ ಕಾರ್ಡ್ ನೀಡಲಾಗುತ್ತದೆ. ಈ ಕಾರ್ಡ್ ಮೂಲಕವೇ ಸರ್ಕಾರಿ ಕಚೇರಿಗಳು, ಪತ್ರಿಕಾಗೋಷ್ಠಿಗಳು ಹಾಗೂ ಅಧಿಕೃತ ಕಾರ್ಯಕ್ರಮಗಳಿಗೆ ಪ್ರವೇಶ ದೊರೆಯಲಿದೆ.

ಆದರೆ, ಈ ಹೊಸ ನಿಯಮಗಳ ಕುರಿತು ಪತ್ರಿಕಾ ಸ್ವಾತಂತ್ರ್ಯದ ಪರ ಹೋರಾಡುವ ಸಂಘಟನೆಗಳು ಮತ್ತು ರಾಜಕೀಯ ವಿಶ್ಲೇಷಕರು ತೀವ್ರ ಆತಂಕ ವ್ಯಕ್ತಪಡಿಸಿದ್ದಾರೆ.

ಪಿಒಕೆಯಲ್ಲಿ ನಡೆದ ಪ್ರತಿಭಟನೆಗಳ ವಿರುದ್ಧ ಸರ್ಕಾರ ಕೈಗೊಂಡ ದಮನ ಕ್ರಮವನ್ನು ಅಂತರರಾಷ್ಟ್ರೀಯ ಮಾಧ್ಯಮಗಳು ಬಹಿರಂಗಪಡಿಸಿದ ತಕ್ಷಣವೇ ಈ ನಿಯಮಗಳನ್ನು ಜಾರಿಗೊಳಿಸಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ ಎಂದು ಹೇಳಿದ್ದಾರೆ.

ವಿಶೇಷವಾಗಿ ಪಾಕಿಸ್ತಾನ ಆಕ್ರಮಿತ ಕಾಶ್ಮೀರ, ಬಲೂಚಿಸ್ತಾನ ಮತ್ತು ಖೈಬರ್ ಪಖ್ತುನ್ಖ್ವಾ ಸೇರಿದಂತೆ ಸೂಕ್ಷ್ಮ ಪ್ರದೇಶಗಳಲ್ಲಿ ಸ್ವತಂತ್ರ ವರದಿಗಾರಿಕೆಯನ್ನು ತಡೆಯುವ ಉದ್ದೇಶದಿಂದಲೇ ಎನ್‌ಒಸಿ ವ್ಯವಸ್ಥೆಯನ್ನು ಕಡ್ಡಾಯಗೊಳಿಸಲಾಗಿದೆ ಎಂಬ ಆರೋಪಗಳು ಕೇಳಿಬಂದಿವೆ. ಇನ್ನೊಂದೆಡೆ, ಪಾಕಿಸ್ತಾನ ಸರ್ಕಾರ ಮಾತ್ರ ಈ ಹೊಸ ನೀತಿಯು ವಿದೇಶಿ ಮಾಧ್ಯಮಗಳ ನೋಂದಣಿ ಪ್ರಕ್ರಿಯೆಯನ್ನು ಸುಗಮಗೊಳಿಸುವುದು ಹಾಗೂ ಅಂತರರಾಷ್ಟ್ರೀಯ ಸುದ್ದಿ ಸಂಸ್ಥೆಗಳಿಗಾಗಿ ಏಕೀಕೃತ ವ್ಯವಸ್ಥೆಯನ್ನು ರೂಪಿಸುವ ಉದ್ದೇಶ ಹೊಂದಿದೆ ಎಂದು ಸಮರ್ಥಿಸಿಕೊಂಡಿದೆ. ಆದರೆ, ಸರ್ಕಾರದ ಈ ವಾದವನ್ನು ಪತ್ರಿಕಾ ಹೋರಾಟಗಾರರು ಪ್ರಶ್ನಿಸುತ್ತಿದ್ದು, ಇದು ಮಾಹಿತಿ ಹರಿವಿನ ಮೇಲೆ ಮತ್ತಷ್ಟು ನಿಯಂತ್ರಣ ಸಾಧಿಸುವ ಪ್ರಯತ್ನ ಎಂದು ಟೀಕಿಸುತ್ತಿದ್ದಾರೆ.